ಸಂಪುಟ: 05 ಸಂಚಿಕೆ: 197 ಪುಟಗಳು: 08 ಮಂಗಳವಾರ 30 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com




ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಏಕೀಕೃತ ಭೂಸ್ವಾಧೀನ ವ್ಯವಸ್ಥೆ ಜಾರಿ: ಕೃಷ್ಣ ಬೈರೇಗೌಡ

• ಉದಯವಾಹಿನಿ, ಕೊಪ್ಪಳ

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ದಕ್ಷತೆ ಮತ್ತು ನ್ಯಾಯ ಒದಗಿಸುವುದಕ್ಕಾಗಿ 'ಏಕೀಕೃತ ಭೂಸ್ವಾಧೀನ ವ್ಯವಸ್ಥೆ'ಗೆ (ಯುಎಲ್‌ಎಂಎಸ್) ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಸೋಮವಾರ ಚಾಲನೆ ನೀಡಿದರು. ಕಂದಾಯ ಇಲಾಖೆಯ ಭೂಮಿ ತಂತ್ರಾಂಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇ-ಸ್ವತ್ತು, ನಗರಾಭಿವೃದ್ಧಿ ಇಲಾಖೆಯ ಇ- ಆಸ್ತಿ ತಂತ್ರಾಂಶ, ಯುಎಲ್‌ಎಂಎಸ್ ಇ-ಖಾತಾ, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಕಾವೇರಿ 2.0 ತಂತ್ರಾಂಶ ಮತ್ತು ಕೆಜಿಐಎಸ್ ನಂತಹ ಎಲ್ಲಾ ತಂತ್ರಾಂಶಗಳನ್ನು ಒಳಗೊಂಡ ವ್ಯವಸ್ಥೆಯಾಗಿದೆ.

ಬಳಿಕ ಸುದ್ದಿಗಾರರ ಜತೆ ಮಾತನಾಡಿದ ಸಚಿವ ಕೃಷ್ಣಬೈರೇಗೌಡ, 'ಈ ವ್ಯವಸ್ಥೆಯು ನೈಜ ದತ್ತಾಂಶವನ್ನು ಒದಗಿಸುತ್ತದೆ. ಅಲ್ಲದೇ, ಆರ್ಥಿಕ ಇಲಾಖೆಯ ಖಜಾನೆ-2 ತಂತ್ರಾಂಶದೊಂದಿಗೆ ಜೋಡಣೆ ಮಾಡಲಾಗಿದೆ. ಸಮಗ್ರ ಭೂಸ್ವಾಧೀನ ವ್ಯವಸ್ಥೆಯು ರಾಜ್ಯದಾದ್ಯಂತ ಭೂಸ್ವಾಧೀನ ಪ್ರಕ್ರಿಯೆಯನ್ನು ಸಮನ್ವಯಗೊಳಿಸುತ್ತದೆ. ಅಲ್ಲದೇ, ಈಗ ಕೈಗೊಳ್ಳಲಾಗುತ್ತಿರುವ ಭೂಸ್ವಾಧೀನ ಪ್ರಕ್ರಿಯೆ ಮತ್ತು ಹಿಂದೆ ನಡೆಸಿದ ಭೂಸ್ವಾಧೀನ ಪ್ರಕರಣಗಳಲ್ಲಿನ ಮೊಕದ್ದಮೆಗಳನ್ನು ಗುರುತಿಸುವ ಸಮಗ್ರ ಡಿಜಿಟಲ್ ವೇದಿಕೆಯೂ ಇದಾಗಿದೆ' ಎಂದರು.

## ಹಕ್ಕು ಪಡೆದೇ ಸಭೆಗೆ ಬರುತ್ತೇವೆ: ಕಸಾಪ ಅಧ್ಯಕ್ಷರಿಗೆ ಸವಾಲು

• ಉದಯವಾಹಿನಿ, ಬೆಂಗಳೂರು

'ಕಾನೂನಾತ್ಮಕವಾಗಿ ಅಮಾನತು ಆದೇಶ ರದ್ದುಪಡಿಸಿಕೊಂಡು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲ್ಲೂಕು ಕಲ್ಲಹಳ್ಳಿಯಲ್ಲಿ ಅ.5ರಂದು ನಡೆಯಲಿರುವ ಕನ್ನಡ ಸಾಹಿತ್ಯ ಪರಿಷತ್ತಿನ ವಾರ್ಷಿಕ ಸರ್ವ ಸದಸ್ಯರ ಸಭೆಗೆ ಭಾಗವಹಿಸುತ್ತೇವೆ. ಈ ವೇಳೆಯ ಅಹಿತಕರ ಘಟನೆಗಳಿಗೆ ಕಸಾಪ ಅಧ್ಯಕ್ಷರೇ ಹೊಣೆಗಾರರಾಗಲಿದ್ದಾರೆ' ಎಂದು ಕನ್ನಡ ನಾಡು ನುಡಿ ಜಾಗೃತಿ ಸಮಿತಿ ಸಂಚಾಲಕರಾದ ಡಾ.ವಸುಂಧರಾ ಭೂಪತಿ ಹಾಗೂ ಜಾಣಗೆರೆ ವೆಂಕಟರಾಮಯ್ಯ ತಿಳಿಸಿದ್ದಾರೆ. 'ನಮ್ಮ ಸದಸ್ಯತ್ವನ್ನು ಅಮಾನತುಪಡಿಸಲಾಗಿದ್ದು, ಸಭೆಗೆ ಬಂದರೆ ಕತ್ತು ಹಿಡಿದು ದಬ್ಬುತ್ತೇವೆ ಎಂದು ಬಾಗಲಕೋಟೆ ಕಸಾಪ ಅಧ್ಯಕ್ಷ ಶಿವಾನಂದ ಶೆಲ್ಲಿಕೇರಿ ಬೆದರಿಕೆಯೊಡ್ಡಿರುವುದು ಖಂಡನೀಯ. ಈ ಮಾತುಗಳನ್ನು ಹೇಳುವಾಗ ಕಸಾಪ ಅಧ್ಯಕ್ಷ ಮಹೇಶ್ ಜೋಷಿ ಪಕ್ಕದಲ್ಲೇ ಇದ್ದು ಸುಮ್ಮನಿರುವ ಮೂಲಕ ಅನುಮೋದಿಸಿದ್ದಾರೆ' ಎಂದು ಟೀಕಿಸಿದ್ದಾರೆ.

## ಸಮೀಕ್ಷೆಗೆ ಉತ್ತರ ನೀಡುವುದು ಕಡ್ಡಾಯವಲ್ಲ: ಮಹಾ ಸಭಾ

• ಉದಯವಾಹಿನಿ, ಬೆಂಗಳೂರು

'ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಬ್ರಾಹ್ಮಣ ಸಮುದಾಯದವರು ಜಾತಿ/ ಧರ್ಮವನ್ನು ಮಾತ್ರ ಉಲ್ಲೇಖಿಸಬಹುದು. ಇತರೆ 59 ಪ್ರಶ್ನೆಗಳಿಗೆ ಉತ್ತರಿಸುವುದು ಅವರವರ ವಿವೇಚನೆಗೆ ಬಿಟ್ಟಿದ್ದು' ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾ ಸಭಾ ತಿಳಿಸಿದೆ.

'ಸಮೀಕ್ಷೆಯಲ್ಲಿನ ಅವೈಜ್ಞಾನಿಕ ಅಂಶ ಹಾಗೂ ನ್ಯೂನತೆ ಪ್ರಶ್ನಿಸಿ ಮಹಾಸಭಾ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಆಧರಿಸಿ ಮಧ್ಯಂತರ ಆದೇಶ ನೀಡಲಾಗಿದೆ. ಸಮೀಕ್ಷೆಯಲ್ಲಿ ಸ್ವ ಇಚ್ಛೆಯಿಂದ ಭಾಗವಹಿಸಬಹುದು. ಸಮೀಕ್ಷೆ ವೇಳೆ ಮಾಹಿತಿ ನೀಡುವುದು ಕಡ್ಡಾಯವಲ್ಲ ಎಂದು ಹೈಕೋರ್ಟ್ ತಿಳಿಸಿದೆ' ಎಂದು ಮಹಾಸಭಾ ಅಧ್ಯಕ್ಷ ಎಸ್ ರಘುನಾಥ್ ಹೇಳಿದ್ದಾರೆ.

'ಹೈಕೋರ್ಟ್ ಸೂಚನೆಯ ಹಿನ್ನೆಲೆಯಲ್ಲಿ ಸಮೀಕ್ಷೆಯು ಸಂಪೂರ್ಣವಾಗಿ ಸ್ವಯಂಪ್ರೇರಿತ. ಯಾವುದೇ ವ್ಯಕ್ತಿಯನ್ನು ಸಮೀಕ್ಷೆಯಲ್ಲಿ ಭಾಗವಹಿಸಲು ಒತ್ತಾಯಿಸಲಾಗುವುದಿಲ್ಲ ಎನ್ನುವ ಕುರಿತು ಹಿಂದುಳಿದ ವರ್ಗದ ಆಯೋಗವು ಸಾರ್ವಜನಿಕ ಪ್ರಕಟಣೆ ಹೊರಡಿಸಬೇಕಾಗಿದೆ' ಎಂದು ತಿಳಿಸಿದ್ದಾರೆ.

## ಜಾತಿವಾರು ಸಮೀಕ್ಷೆ ಬಹಿಷ್ಕಾರ: ಕೋರ್ಟ್ ಆದೇಶಕ್ಕೆ ವಿರುದ್ಧ

• ಉದಯವಾಹಿನಿ, ಬೆಂಗಳೂರು

ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ನಡೆಸುವ ಸಮೀಕ್ಷೆಯಲ್ಲಿ ಪಾಲ್ಗೊಳ್ಳಬಾರದು ಎಂದು ಕರೆ ನೀಡುವುದು ನ್ಯಾಯಾಲಯದ ಆದೇಶಕ್ಕೆ ವಿರುದ್ಧವಾದುದು ಎಂದು ಆಯೋಗದ ಅಧ್ಯಕ್ಷ ಮಧುಸೂದನ್ ಆರ್.ನಾಯ್ ತಿಳಿಸಿದ್ದಾರೆ.

ಮಾಹಿತಿಯನ್ನು ನೀಡುವ ಬಗ್ಗೆ ಆಯೋಗ ಒತ್ತಾಯ ಮಾಡುತ್ತಿಲ್ಲ' ಎಂದು ಅವರು ಸ್ಪಷ್ಟಪಡಿಸಿದ್ದಾರೆ. 'ನ್ಯಾಯಾಲಯದ ಆದೇಶವನ್ನು ಉಲ್ಲೇಖಿಸಿರುವ ಕೆಲವು ಜನಪ್ರತಿನಿಧಿಗಳು, ತಾವು ಈ ಸಮೀಕ್ಷೆಯಲ್ಲಿ ಭಾಗವಹಿಸುವುದಿಲ್ಲ ಹಾಗೂ ಸಾರ್ವಜನಿಕರೂ ಸಹ ಭಾಗವಹಿಸಬಾರದು ಎಂದು ಹೇಳಿಕೆ ನೀಡಿರುವುದು ಮಾಧ್ಯಮಗಳಲ್ಲಿ ವರದಿಯಾಗಿದೆ. ಈ ಹೇಳಿಕೆಗಳು ಸಮೀಕ್ಷೆಯಲ್ಲಿ ಜನರು ಭಾಗವಹಿಸದಂತೆ ಪ್ರಚೋದಿಸುತ್ತಿವೆ. ಸಾರ್ವಜನಿಕ ಹಿತಕ್ಕಾಗಿ ಕೈಗೊಳ್ಳಲಾದ ಸಮೀಕ್ಷೆಯ ಉದ್ದೇಶಕ್ಕೆ ವಿರುದ್ಧವಾಗಿವೆ.

ಯಾವುದೇ ಬಲವಂತವಿಲ್ಲದೆ ಸ್ವಇಚ್ಛೆಯಿಂದ ಜನರು ಭಾಗವಹಿಸುತ್ತಿರುವ ಸಂದರ್ಭದಲ್ಲಿ ಅದನ್ನು ತಡೆಯುವ ಹೇಳಿಕೆಗಳು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧ' ಎಂದು ಹೇಳಿದ್ದಾರೆ.

### ನ್ಯಾಯಾಲಯದಿಂದ ಜಾಮೀನು ಪಡೆದು ತಲೆಮರೆಸಿಕೊಂಡಿದ್ದ ಆರೋಪಿಯ ಪ್ರಕರಣ ದಾಖಲು


# 9.93 ಕೋಟಿ ಮಾದಕ ವಸ್ತು ಜಪ್ತಿ

# 7 ಜನರ ಬಂಧನ

1 ಮಹದೇವಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾದಕ ಪದಾರ್ಥಗಳನ್ನ ಮಾರಾಟ

2 ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೂವರು ಡ್ರಗ್‌ಪೆಡ್ಲರ್ ಬಗ್ಗೆ ವಿವರವಾದ ಮಾಹಿತಿ ಪಡೆದು ದಾಳಿ

3 ದೆಹಲಿಯಲ್ಲಿ ವಾಸವಿರುವ ವಿದೇಶಿ ಪ್ರಜೆಗಳಿಂದ ಡ್ರಗ್ಸ್‌ಗಳನ್ನು ಖರೀದಿಸಿ ಬೆಂಗಳೂರಿನ ಪರಿಚಯಸ್ಥ ಗಿರಾಕಿಗಳಿಗೆ ಮಾರಾಟ






• ಉದಯವಾಹಿನಿ, ಬೆಂಗಳೂರು

ಇಬ್ಬರು ವಿದೇಶಿ ಪ್ರಜೆಗಳ ಸಹಿತ 7 ಜನ ಆರೋಪಿಗಳನ್ನ ಬಂಧಿಸಿರುವ ಬೆಂಗಳೂರು ಪೊಲೀಸರು ಬರೋಬ್ಬರಿ 9.93 ಕೋಟಿ ರೂ ಮೌಲ್ಯದ ವಿವಿಧ ಮಾದಕ ಪದಾರ್ಥಗಳನ್ನ ಜಪ್ತಿ ಮಾಡಿದ್ದಾರೆ. ಒಟ್ಟು 3 ಕೆ.ಜಿ 858 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 41 ಗ್ರಾಂ ಎಕ್ಸ್‌ಟಸಿ ಪಿಲ್ಸ್, 1 ಕೆ.ಜಿ 82 ಗ್ರಾಂ ಹೈಡ್ರೋಗಾಂಜಾ, 6 ಕೆ.ಜಿ ಗಾಂಜಾ, ಕೃತ್ಯಕ್ಕೆ ಬಳಸಲಾಗಿದ್ದ 1 ಕಾರು ಮತ್ತು 1 ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಹದೇವಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾದಕ ಪದಾರ್ಥಗಳನ್ನ ಮಾರಾಟ ಮಾಡುತ್ತಿದ್ದ ಸಾಫ್ಟ್‌ವೇರ್ ಉದ್ಯೋಗಿಯನ್ನ ಸಿಸಿಬಿ ಪೊಲೀಸರು ಬಂಧಿಸಿದ್ದಾರೆ. ಕೆವಿನ್ ರೋಜರ್ ಬಂಧಿತ ಆರೋಪಿಯಾಗಿದ್ದು, ಮೋಜಿನ ಜೀವನ ನಡೆಸಲು , ಅಧಿಕ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕೇರಳದಿಂದ ಕಡಿಮೆ ಬೆಲೆಗೆ ಹೈಡ್ರೋಗಾಂಜಾ ತಂದು ಬೆಂಗಳೂರಿನಲ್ಲಿ ಪರಿಚಯದ ಗಿರಾಕಿಗಳಿಗೆ ಮಾರಾಟ ಮಾಡುತ್ತಿದ್ದ. ಆತನಿಂದ 500 ಗ್ರಾಂ ಹೈಡ್ರೋಗಾಂಜಾ ಮತ್ತು ಕೃತ್ಯಕ್ಕೆ ಬಳಸಲಾಗುತ್ತಿದ್ದ ಒಂದು ಕಾರು, ಒಂದು ಬೈಕ್, ಒಂದು ಮೊಬೈಲ್ ಫೋನ್ ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಾದಕ ಪದಾರ್ಥಗಳ ಮಾರಾಟದಲ್ಲಿ ತೊಡಗಿದ್ದ ಡೆಂಟಲ್ ಕಾಲೇಜು ವಿದ್ಯಾರ್ಥಿಯನ್ನ ಆಡುಗೋಡಿ ಪೊಲೀಸರು ಬಂಧಿಸಿದ್ದಾರೆ. ರಂಜಿತ್ ಆ್ಯಂಟೋನಿ ಬಂಧಿತ ಆರೋಪಿ. ಮೋಜಿನ ಜೀವನ ನಡೆಸಲು ಹಾಗೂ ಅಧಿಕ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಕಡಿಮೆ ಬೆಲೆಗೆ ಹೈಡ್ರೋಗಾಂಜಾ ತಂದು ಪರಿಚಯದ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದ. ಆರೋಪಿಯಿಂದ 300 ಗ್ರಾಂ ಹೈಡ್ರೋಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ವಿದೇಶಿ ಅಂಚೆ ಮೂಲಕ ಬಂದ ಪಾರ್ಸಲ್:** ವಿದೇಶಿ ಅಂಚೆ ಕಚೇರಿಗೆ ಪಾರ್ಸಲ್ ಮೂಲಕ ಬಂದಿದ್ದ 1 ಕೋಟಿ ರೂ. ಮೌಲ್ಯದ ಮಾದಕ ಪದಾರ್ಥಗಳನ್ನ ಕೆ.ಜಿ.ನಗರ ಠಾಣೆ ಪೊಲೀಸರು ವಶಪಡಿಸಿಕೊಂಡಿದ್ದಾರೆ. 1 ಕೆ.ಜಿ 22 ಗ್ರಾಂ ಹೈಡ್ರೋ ಗಾಂಜಾ ಹಾಗೂ ಇನ್ನಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಪಾರ್ಸಲ್ ಅನ್ನು ಬುಕ್ ಮಾಡಿದ್ದ ಆರೋಪಿಯ ವಿರುದ್ಧ ಕೆ.ಜಿ. ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಡ್ರಗ್ ಪೆಡ್ಲಿಂಗ್‌ನಲ್ಲಿ ತೊಡಗಿದ್ದ ಇಬ್ಬರು ವಿದೇಶಿ ಪ್ರಜೆಗಳನ್ನ ಹೆಬ್ಬಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ನೈಜೀರಿಯಾ ಮೂಲದ ಎನ್‌ಗ್ವು ಕಿಂಗ್‌ಸ್ಲೆ ಹಾಗೂ ಥಾಮಸ್ ನವೀದ್ ಚಿಮೆ ಬಂಧಿತ ಆರೋಪಿಗಳು. ದೆಹಲಿಯಲ್ಲಿ ನೆಲೆಸಿರುವ ಇತರ ವಿದೇಶಿ ಪ್ರಜೆಗಳಿಂದ ಮಾದಕ ಪದಾರ್ಥಗಳನ್ನ ಖರೀದಿಸಿ ತರುತ್ತಿದ್ದ ಆರೋಪಿಗಳು ಬೆಂಗಳೂರಿನಲ್ಲಿ ಮಾರಾಟ ಮಾಡುತ್ತಿದ್ದರು. ಆರೋಪಿಗಳ ಪೈಕಿ ಓರ್ವ ಆನ್‌ಲೈನ್ ವಂಚನೆ ಕೃತ್ಯದಲ್ಲಿ ತೊಡಗಿಸಿಕೊಂಡಿದ್ದು, ಗುಜರಾತ್‌ನ ಸೈಬರ್ ಕ್ರೈಮ್ ಪೊಲೀಸ್ ಠಾಣೆಯಲ್ಲಿ 2 ಪ್ರಕರಣಗಳು ದಾಖಲಾಗಿದ್ದವು. ನ್ಯಾಯಾಲಯದಿಂದ ಜಾಮೀನು ಪಡೆದು ತಲೆಮರೆಸಿಕೊಂಡಿದ್ದ ಆರೋಪಿ ಕಳೆದ 2 ತಿಂಗಳ ಹಿಂದೆ ಬೆಂಗಳೂರಿಗೆ ಬಂದು ಡ್ರಗ್ ಪೆಡ್ಲಿಂಗ್‌ನಲ್ಲಿ ತೊಡಗಿಕೊಂಡಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

**ಮೂವರು ಬಂಧನ:** ಆಡುಗೋಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮೂವರು ಡ್ರಗ್ ಪೆಡ್ಲರ್ ಗಳ ಬಗ್ಗೆ ವಿವರವಾದ ಮಾಹಿತಿ ಪಡೆದು ದಾಳಿ ಮಾಡಿ, ಅವರನ್ನು ಬಂಧಿಸಿ 6 ಲಕ್ಷ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಲಾಗಿದೆ. ಕೆಜಿ ನಗರ ಠಾಣಾ ವ್ಯಾಪ್ತಿಯಲ್ಲಿ ವಿದೇಶಿ ಅಂಚೆ ಕಚೇರಿಗೆ ವಿದೇಶಿ ಮೂಲದಿಂದ ನಿಷೇಧಿತ ಮಾದಕ ವಸ್ತು ಪಾರ್ಸಲ್ ಮಾಹಿತಿಯನ್ನು ಸಂಗ್ರಹಿಸಿ ದಾಳಿ ಮಾಡಿ 1 ಕೋಟಿ ಮೌಲ್ಯದ 1 ಕೆ.ಜಿ 22 ಗ್ರಾಂ ಹೈಡ್ರೋ ಗಾಂಜಾ ಇನ್ನಿತರ ಡ್ರಗ್ಸ್ ಜಪ್ತಿ ಮಾಡಲಾಗಿದೆ. ಆರೋಪಿಯಿಂದ ಜಪ್ತಿ ಮಾಡೊದ ಪಾರ್ಸಲ್‌ನ್ನು ಬುಕ್ ಮಾಡಿದ್ದ ಆರೋಪಿಯ ವಿರುದ್ಧ ಕೆ.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಂಡು, ಪ್ರಕರಣವನ್ನು ಮುಂದಿನ ತನಿಖೆಗಾಗಿ ಸಿಸಿಬಿಗೆ ವಹಿಸಲಾಗಿದೆ.




ವಿದೇಶದಿಂದ ಅಂಚೆ ಮೂಲಕ ಪಾರ್ಸಲ್ ಬಂದಿದ್ದ ಡ್ರಗ್ಸ್ ವಶ

**ವಿದೇಶಿ ಪೆಡ್ಲರ್ ಗಳು ಸೆರೆ**

ಹೆಬ್ಬಗೋಡಿಯ ಬಳಿ ಖಚಿತ ಮಾಹಿತಿ ಆಧರಿಸಿ ಇಬ್ಬರು ವಿದೇಶಿ ಪ್ರಜೆಗಳು ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿದ್ದ ಇಬ್ಬರು ವಿದೇಶಿ ಪ್ರಜೆಗಳನ್ನು ಬಂಧಿಸಲಾಗಿದೆ. ಬಂಧಿತರು ಅಧಿಕ ಹಣ ಸಂಪಾದನೆ ಮಾಡಲು ಕಡಿಮೆ ಬೆಲೆಗೆ ಎಂಡಿಎಂಎ ಕ್ರಿಸ್ಟೆಲ್, ಎಕ್ಸ್‌ಟಸಿ ಪಿಲ್ಸ್‌ಗಳನ್ನು ಖರೀಧಿಸಿ, ಅದನ್ನು ಪರಿಚಯಸ್ಥ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾಗಿ ತಪ್ಪೊಪ್ಪಿಕೊಂಡಿರುತ್ತಾರೆ. ಬಂಧಿತ ಆರೋಪಿಗಳ ಪೈಕಿ ಓರ್ವನು 2019ರಲ್ಲಿ ಮೆಡಿಕಲ್ ವೀಸಾ ಪಡೆದು ಭಾರತಕ್ಕೆ ಬಂದಿದ್ದು, ಈತನು ದೆಹಲಿಯಲ್ಲಿ ವಾಸವಿರುವ ವಿದೇಶಿ ಪ್ರಜೆಗಳಿಂದ ಡ್ರಗ್ಸ್‌ಗಳನ್ನು ಖರೀದಿಸಿ, ಬೆಂಗಳೂರಿನ ಪರಿಚಯಸ್ಥ ಗಿರಾಕಿಗಳಿಗೆ ಮಾರಾಟ ಮಾಡುತ್ತಿದ್ದನು.

ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಡ್ರಗ್ಸ್ ಮಾರಾಟ

**ಡೆಂಟಲ್ ವಿದ್ಯಾರ್ಥಿ ಸೆರೆ**

ಆಡುಗೋಡಿಯ ಬಳಿ ದಾಳಿ ಮಾಡಿ ಓರ್ವ ಡ್ರಗ್‌ಪೆಡ್ಲರ್ ನನ್ನು ಬಂಧಿಸಲಾಗಿದೆ ಡೆಂಟಲ್ ಕಾಲೇಜಿನ ವಿದ್ಯಾರ್ಥಿಯಾಗಿದ್ದ ಆತ ಮೋಜಿನ ಜೀವನಕ್ಕೆ ಅಧಿಕ ಹಣ ಸಂಪಾದನೆ ಮಾಡಲು ಕಡಿಮೆ ಬೆಲೆಗೆ ಹೈಡ್ರೋಗಾಂಜಾವನ್ನು ಖರೀದಿಸಿ ಅದನ್ನು ಪರಿಚಯದ ಗಿರಾಕಿಗಳಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದನ್ನು ತಪ್ಪೊಪ್ಪಿಕೊಂಡಿರುತ್ತಾನೆ. ಆತನಿಂದ 32 ಲಕ್ಷ ಮೌಲ್ಯದ 300 ಗ್ರಾಂ ಹೈಡ್ರೋಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

**ಜಾಮೀನು ಪಡೆದಿದ್ದ**

ಈತನ ವಿರುದ್ಧ 2022ರಲ್ಲಿ ಎನ್‌ಸಿಬಿ ಘಟಕದಲ್ಲಿ ಎನ್‌ಡಿಪಿಎಸ್ ಪ್ರಕರಣ ದಾಖಲಾಗಿದ್ದು, ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದನು. ಮತ್ತೊಬ್ಬ ಆರೋಪಿಯು 2019 ರಲ್ಲಿ ಸ್ಟೂಡೆಂಟ್ ವೀಸಾ ಪಡೆದು ಭಾರತಕ್ಕೆ ಬಂದಿದ್ದು, ಆನ್‌ಲೈನ್‌ನಲ್ಲಿ ಸಾರ್ವಜನಿಕರಿಗೆ ಮೋಸ ಮಾಡುವ ಕೃತ್ಯದಲ್ಲಿ ತೊಡಗಿಕೊಂಡಿದ್ದನು. ಗುಜರಾತ್ ರಾಜ್ಯದ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ 2 ಪ್ರಕರಣಗಳು ದಾಖಲಾಗಿದ್ದು, ನಂತರ ನ್ಯಾಯಾಲದಿಂದ ಜಾಮೀನು ಪಡೆದುಕೊಂಡು ದೆಹಲಿಯಲ್ಲಿ ತಲೆಮರೆಸಿಕೊಂಡಿದ್ದು, ಈತನು ಕಳೆದ 2 ತಿಂಗಳ ಹಿಂದೆ ಬೆಂಗಳೂರಿಗೆ ಬಂದು ಡ್ರಗ್‌ಪೆಡ್ಲಿಂಗ್‌ನಲ್ಲಿ ತೊಡಗಿಕೊಂಡಿದ್ದನು. ವಶದಲ್ಲಿದ್ದ 7,80 ಲಕ್ಷ ಮೌಲ್ಯದ 3 ಕೆ.ಜಿ 858 ಗ್ರಾಂ ಎಂಡಿಎಂಎ ಕ್ರಿಸ್ಟೆಲ್, 41 ಗ್ರಾಂ 82 ಎಕ್ಸ್‌ಟಸಿ ಪಿಲ್ಸ್‌ಗಳು ಹಾಗೂ ಕೃತ್ಯಕ್ಕೆ ಬಳಸಲಾಗುತ್ತಿದ್ದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

# ಕುರುಬರನ್ನು ಎಸ್‌ಟಿಗೆ ಸೇರಿಸಬಹುದು!

• ಉದಯವಾಹಿನಿ ಬೆಂಗಳೂರು

ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ಕುರುಬ ಸಮುದಾಯವನ್ನು ಎಸ್‌ಟಿಗೆ ಸೇರಿಸಬಹುದು ಎಂದು ವರದಿ ಬಂದಿದೆ. ಕುರುಬರು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದಿದ್ದಾರೆ ಎಂದು ವರದಿ ಹೇಳಿದೆ. ಕುರುಬ ಸಮುದಾಯ ಇರುವ 25 ಜಿಲ್ಲೆಗಳಲ್ಲಿ ಬುಡಕಟ್ಟು ಲಕ್ಷಣಗಳು ಕಂಡುಬಂದಿವೆ.

ಲೋಕೋರು ಸಮಿತಿ ಮಾನದಂಡಗಳ ಪ್ರಕಾರ ಸಮುದಾಯವು ಎಸ್‌ಟಿಗೆ ಸೇರ್ಪಡೆ ಆಗಲು ಅರ್ಹತೆ ಹೊಂದಿದೆ ಎನ್ನಲಾಗಿದೆ.

ಕುರುಬ ಸಮುದಾಯದವನ್ನು ಎಸ್‌ಟಿಗೆ ಸೇರಿಸಬಹುದು ಎಂದು ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ನಿರ್ದೇಶಕರು ರಾಜ್ಯ ಸರ್ಕಾರಕ್ಕೆ ವರದಿ ನೀಡಿದ್ದಾರೆ. ರಾಜ್ಯದಲ್ಲಿ ಕುರುಬ ಸಮುದಾಯವನ್ನು ಎಸ್‌ಟಿ ಸೇರ್ಪಡೆ ಮಾಡಬೇಕು ಎಂಬ ಚರ್ಚೆಗಳು ನಡೆಯುತ್ತಿರುವ ಸಂದರ್ಭದಲ್ಲಿ ಈ ವರದಿ ಬಂದಿರುವುದು ಮಹತ್ವ ಪಡೆದುಕೊಂಡಿದೆ.

ರಾಜ್ಯದಲ್ಲಿ ಕುರುಬ, ಕುರುಬನ್, ಧನಗರ್ ಹೆಸರಲ್ಲಿ ಗುರುತಿಸಿಕೊಂಡಿದೆ. ಕುರುಬ ಸಮುದಾಯ ಕುಲಕಸುಬು ಆಧರಿಸಿ ಜೀವನ ರೂಪಿಸಿಕೊಂಡಿದ್ದಾರೆ. ತಮ್ಮದೇ ಆದ ಸಂಸ್ಕೃತಿ, ಕಲೆ, ನೃತ್ಯ ನ್ಯಾಯ ಪಂಚಾಯತಿ ರೂಢಿ ಸಂಪ್ರದಾಯಗಳನ್ನ ಆಚರಿಸಿಕೊಂಡು ಬಂದಿದೆ. ರಾಜ್ಯದಲ್ಲಿ ಹಲವು ಕಡೆ ಪ್ರತ್ಯೇಕವಾಗಿ ವಾಸ ಮಾಡುತ್ತಿದ್ದಾರೆ. ಸಾಮಾಜಿಕವಾಗಿ ಶೈಕ್ಷಣಿಕವಾಗಿ ಹಿಂದುಳಿದಿರುವುದು ಕಂಡು ಬಂದಿದೆ ಎಂದು ಉಲ್ಲೇಖಿಸಲಾಗಿದೆ. ಕೇಂದ್ರ ಸರ್ಕಾರದ ಲೋಕೋರು ಸಮಿತಿ ಐದು ಮಾನದಂಡಗಳು ಹಾಗೂ ಬುಡಕಟ್ಟು ಲಕ್ಷಣಗಳು ಹೊಂದಿದೆ. ರಾಜ್ಯದಲ್ಲಿ ವಾಸ ಮಾಡ್ತಿರುವ 25 ಜಿಲ್ಲೆಗಳಲ್ಲಿ ಈ ಲಕ್ಷಣಗಳಿರುವ ಕುರುಬರು ಇದ್ದಾರೆ. ಹೀಗಾಗಿ ಈ ಸಮುದಾಯವರನ್ನು ಪರಿಶಿಷ್ಟ ಜಾತಿಗೆ ಸೇರಿಸಲು ಅರ್ಹತೆ ಹೊಂದಿದೆ ಎಂದು ವರದಿ ಹೇಳಿದೆ.

**ಅಭಿಪ್ರಾಯದಲ್ಲಿ ಏನಿದೆ:** ಪ್ರಸ್ತುತ ಅಧ್ಯಯನದಲ್ಲಿ ತಿಳಿಸಿರುವಂತೆ ಕುರುಬರು ಕರ್ನಾಟಕ ರಾಜ್ಯದ ಎಲ್ಲಾ ಭಾಗಗಳಲ್ಲಿ ಕಂಡು ಬರುತ್ತಾರಾದರು, ಕರಾವಳಿ ಭಾಗದಲ್ಲಿ ಕಡಿಮೆ ಸಂಖ್ಯೆಯಲ್ಲಿದ್ದಾರೆ. ರಾಜ್ಯದಲ್ಲಿ ಇವರನ್ನು ಪ್ರಧಾನವಾಗಿ 'ಕುರುಬ' ಎಂಬ ಹೆಸರಿನಿಂದ ಕರೆಯಲಾಗುತ್ತದೆ. ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಇವರನ್ನು 'ಧನಗರ್' ಎಂಬ ಹೆಸರಿನಿಂದ ಕರೆಯಲಾಗುತ್ತದೆ.



**ಸಂಪುಟ ಸಭೆಯಲ್ಲಿ ಚರ್ಚೆ**

ಇದೀಗ ವರದಿ ಸ್ವೀಕರಿಸಿದ ಬಳಿಕ ಕ್ಯಾಬಿನೆಟ್ ಸಭೆಯಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ. ನಂತರ ಎಸ್‌ಟಿಗೆ ಸೇರಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲಿರುವ ರಾಜ್ಯ ಸರ್ಕಾರ ಮಾಡಲಿದೆ. ಮುಂದೆ ಎಸ್‌ಟಿಗೆ ಸೇರಿಸಬೇಕಾ ಬೇಡವಾ ಎಂಬುದನ್ನು ಕೇಂದ್ರ ಸರ್ಕಾರ ನಿರ್ಧರಿಸಿಲಿದೆ.

ಕುರುಬ ಸಮುದಾಯವು ತನ್ನ ಮೂಲಕ್ಕೆ ಸಂಬಂಧಿಸಿದಂತೆ ಪೌರಾಣಿಕ ಹಿನ್ನೆಲೆಯನ್ನು ಹೊಂದಿದ್ದು ತಮ್ಮದೇ ಆದ ಸಂಸ್ಕೃತಿ, ಕಲೆ, ನೃತ್ಯ, ನ್ಯಾಯ ಪಂಚಾಯಿತಿ, ಆಚಾರ-ವಿಚಾರಗಳು, ನಂಬಿಕೆ. ರೂಢಿ, ಸಂಪ್ರದಾಯ ಮತ್ತು ಆಚರಣೆ ಪದ್ಧತಿಗಳನ್ನು ಅನುಸರಿಸಿಕೊಂಡು ಬರುತ್ತಿದೆ. ಬಹಳ ಮುಖ್ಯವಾಗಿ ತಮ್ಮ ಕುಲಕಸುಬಿನ ಮೇಲೆ ಅವಲಂಬಿತವಾಗಿರುವ ಇವರು ಪ್ರತ್ಯೇಕವಾಗಿ ವಾಸಿಸುವುದರೊಂದಿಗೆ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವುದು ಈ ಅಧ್ಯಯನದಲ್ಲಿ ಕಂಡುಬಂದಿದೆ.

ಈ ಮೇಲಿನ ಎಲ್ಲಾ ಅಂಶಗಳ ಆಧಾರದ ಮೇಲೆ ಪ್ರಸ್ತುತ ಅಧ್ಯಯನಕ್ಕೆ ಒಳಪಟ್ಟ ರಾಜ್ಯದ 25 ಜಿಲ್ಲೆಗಳ ಕುರುಬ ಸಮುದಾಯ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕೇಂದ್ರ ಸರ್ಕಾರವು ಅನುಸರಿಸುತ್ತಿರುವ ಲೋಕೋರು ಸಮಿತಿಯವರ ಇವು ಐದು ಮಾನದಂಡಗಳ ಕುರುಬ ರಾಜ್ಯದ ಬುಡಕಟ್ಟು ಲಕ್ಷಣಗಳನ್ನು ಸಮುದಾಯವು ಒಳಗೊಂಡಿದೆ.

ಕುರುಬ ಅದರ ಪರ್ಯಾಯ ಪದಗಳಾದ ಧನಗರ್, ಗೊರೆಯ, ಕರ್ನಾಟಕ ಕುರಬ್, ಕುರುಬನ್, ಕುರುಂಬ, ಕುರುಬ್, ಕುರುಂಬನ್ ಎಂಬ ಪದಗಳಲ್ಲಿ ಧನಗರ್ ಮತ್ತು ಹಾಲುಮತ ಪದಗಳನ್ನು ಕುರುಬ ಪದಕ್ಕೆ ಪರ್ಯಾಯ ಪದವಾಗಿ ಪರಿಗಣಿಸಿ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರ್ಪಡೆ ಮಾಡಲು ಪರಿಗಣಿಸಬಹುದು ಹಾಗೂ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಅರ್ಹತೆಯನ್ನು ಹೊಂದಿದೆ ಎಂಬ ಅಭಿಪ್ರಾಯವನ್ನು ಸ್ಪಷ್ಟಪಡಿಸಲಾಗಿದೆ.

# ನಿಗಮ, ಮಂಡಳಿ: ಸರ್ಕಾರದಿಂದ ಪದೇ ಪದೇ ಎಡವಟ್ಟು!

● ಅಧ್ಯಕ್ಷರಾಗಿ ನೇಮಕವಾಗಿದ್ದವರಿಗೆ ಉಪಾಧ್ಯಕ್ಷ ಸ್ಥಾನ ● ತಾಂತ್ರಿಕ ತಪ್ಪಿನಿಂದಾಗಿ ಹೀಗಾಗಿದೆ ಎಂದು ಸರ್ಕಾರ ಬಳಿಕ ಸ್ಪಷ್ಟನೆ

• ಉದಯವಾಹಿನಿ ಬೆಂಗಳೂರು



ನಿಗಮ ಮಂಡಳಿ ನೇಮಕ ವಿಚಾರವಾಗಿ ರಾಜ್ಯ ಸರ್ಕಾರದಿಂದ ಎಡವಟ್ಟಿನ ಮೇಲೆ ಯಡವಟ್ಟು ನಡೆಯುತ್ತಿದೆ. ಕೆಲ ದಿನಗಳ ಹಿಂದೆ ರಾಜು ಕಾಗೆ ಅಧ್ಯಕ್ಷರಾಗಿದ್ದ ನಿಗಮಕ್ಕೆ ಮತ್ತೊಬ್ಬರ ಹೆಸರು ನಮೂದಾಗಿತ್ತು.

ತಾಂತ್ರಿಕ ತಪ್ಪಿನಿಂದಾಗಿ ಹೀಗಾಗಿದೆ ಎಂದು ಸರ್ಕಾರ ಬಳಿಕ ಸ್ಪಷ್ಟನೆ ನೀಡಿತ್ತು. ಆದರೆ ಇದೀಗ ಮತ್ತೊಮ್ಮೆ ಇಂತಹ ಎಡವಟ್ಟು ಮಾಡಿಕೊಂಡಿದೆ. ನಿಗಮ ಮಂಡಳಿಗಳಲ್ಲಿ ಅಧ್ಯಕ್ಷರಾಗಿ ನೇಮಕವಾಗಿದ್ದರಿಗೆ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಉಪಾಧ್ಯಕ್ಷರಾಗಿ ನೇಮಕ ಆದವರಿಗೆ ಅಧ್ಯಕ್ಷ ಸ್ಥಾನದ ಮರು ಹಂಚಿಕೆ ಮಾಡಲಾಗಿದೆ. ದಿಢೀರ್ ಆಗಿ ಸ್ಥಾನದಲ್ಲಿ ಆದ ಪಲ್ಲಟದಿಂದಾಗಿ ನೇಮಕಗೊಂಡವರು ಗೊಂದಲಕ್ಕೆ ಒಳಗಾಗಿದ್ದಾರೆ.

**ನಿಕೇತ್ ರಾಜ್ ಸ್ಥಾನ ಬದಲಾವಣೆ!:** ಬಿಎಂಟಿಸಿ ಅಧ್ಯಕ್ಷರಾಗಿ ನಿಕೇತ್ ರಾಜ್ ಮೌರ್ಯ ಅವರನ್ನು ನೇಮಕ ಮಾಡಲಾಗಿತ್ತು. ನಿಕೇತ್ ರಾಜ್ ಅಧಿಕಾರ ಸ್ವೀಕಾರ ಮಾಡಿ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ್ದರು. ಆದರೆ ಇದೀಗ ದಿಢೀರ್ ಬದಲಾವಣೆ ಆಗಿದೆ. ಬಿಎಂಟಿಸಿ ಅಧ್ಯಕ್ಷರಾಗಿ ವಿ ಎಸ್ ಆರಾಧ್ಯ ನೇಮಕ ಮಾಡಲಾಗಿದೆ. ಅಧ್ಯಕ್ಷರಾಗಿದ್ದ ನಿಕೇತ್ ರಾಜ್ ಮೌರ್ಯಗೆ ಬಿಎಂಟಿಸಿ ಉಪಾಧ್ಯಕ್ಷ ಸ್ಥಾನ ನೀಡಲಾಗಿದೆ. ಬಾಕಿ ಉಳಿದ 5 ನಿಗಮ ಮಂಡಳಿಗಳಿಗೂ ಅಧ್ಯಕ್ಷರ ನೇಮಕ ಮಾಡಲಾಗಿದೆ. ಸೈಯದ್ ಮೆಹಮೂದ್ ಚಿಸ್ತಿ- ಅಧ್ಯಕ್ಷರು- ಕರ್ನಾಟಕ ರಾಜ್ಯ ದ್ವಿದಳ ಧಾನ್ಯ ಅಭಿವೃದ್ಧಿ ಮಂಡಳಿ, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನೀಡಲಾಗಿದೆ. ಇನ್ನು ಶರಣಪ್ಪ ಸಲಾದ್ ಪುರ್ ಅವರನ್ನು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ. ಆಂಜನಪ್ಪ- ಅಧ್ಯಕ್ಷರು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ, ನೀಲಕಂಠರಾವ್ ಎಸ್ ಮೂಲಗೆ- ಅಧ್ಯಕ್ಷರು- ಕರ್ನಾಟಕ ರಾಜ್ಯ ಸಾಂಬಾರು ಅಭಿವೃದ್ಧಿ ಮಂಡಳಿ, ಅನಿಲ್ ಕುಮಾರ್ ಜಮಾದಾರ್- ಉಪಾಧ್ಯಕ್ಷ- ಜವಾಹರ ಬಾಲಭವನ ಸೊಸೈಟಿಗೆ ನೇಮಕ ಮಾಡಲಾಗಿದೆ.



ದಿಢೀರ್ ಸ್ಥಾನ ಬದಲಾವಣೆ



**ಗೊಂದಲಕ್ಕೆ ಒಳಗಾಗಿದ್ದ ಕಾಗೆ!**

ಶಾಸಕ ರಾಜು ಕಾಗೆ ಅವರಿಗೆ ವಾಯುವ್ಯ ಕರ್ನಾಟಕ ಸಾರಿಗೆ ನಿಗಮದ ಅಧ್ಯಕ್ಷ ಸ್ಥಾನ ನೀಡಲಾಗಿತ್ತು. ಆದರೆ ನಿಗಮ ಮಂಡಳಿ ಎಐಸಿಸಿ ಪಟ್ಟಿಯಲ್ಲಿ ರಾಜು ಕಾಗೆ ಬದಲಾಗಿ ಅರುಣ್ ಕುಮಾರ್ ಪಾಟೀಲ್ ಹೆಸರು ನಮೂದಾಗಿತ್ತು. ಇದರಿಂದ ಬೇಸರಗೊಂಡಿದ್ದ ಕಾಗೆ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಆಗಿದ್ದರು. ಬಳಿಕ ಇದನ್ನು ಬದಲಾವಣೆ ಮಾಡಲಾಯಿತು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಗಮದ ಅಧ್ಯಕ್ಷ ಸ್ಥಾನವನ್ನು ಅರುಣ್ ಕುಮಾರ್ ಪಾಟೀಲ್ ಅವರಿಗೆ ನೀಡಲಾಯಿತು.

## ಉದ್ಯೋಗಾಕಾಂಕ್ಷಿಗಳಿಗೆ ಸರ್ಕಾರದಿಂದ ಸಿಹಿ ಸುದ್ದಿ

• ಉದಯವಾಹಿನಿ ಬೆಂಗಳೂರು

ರಾಜ್ಯ ಸರ್ಕಾರದ ಎಲ್ಲಾ ನಾಗರಿಕ ಸೇವಾ ಹುದ್ದೆಗಳ ನೇಮಕಾತಿ ವಿಚಾರದಲ್ಲಿ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಮೂರು ವರ್ಷಗಳ ವಯೋಮಿತಿ ಸಡಿಲಿಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

ಹಲವಾರು ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳು ಸಲ್ಲಿಸಿದ ಮನವಿ ಪರಿಗಣಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅನುಮೋದನೆಯೊಂದಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇಂದು ಆದೇಶ ಪ್ರಕಟಿಸಿದೆ.

ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಅಥವಾ ಬ್ಯಾಕ್ ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿತ್ತು.

ಈ ದಿನದ ದರ | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,640/Gram24ct ₹10,670/Gram22ct | ಬೆಳ್ಳಿ: ₹150.00/Gram

# ಮೂವರನ್ನು ಅಪಹರಿಸಿ 1.1 ಕೋಟಿ ರೂ ದೋಚಿದ್ದ 8 ಮಂದಿ ಬಂಧನ

• ಉದಯವಾಹಿನಿ, ಬೆಂಗಳೂರು

ದಂಪತಿ ಮತ್ತು ಅವರ ಕಾರು ಚಾಲಕನನ್ನು ಅಪಹರಿಸಿ 1.1 ಕೋಟಿ ರೂಪಾಯಿ ನಗದು ದೋಚಿದ್ದ ಎಂಟು ಮಂದಿಯನ್ನು ಹುಳಿಮಾವು ಪೊಲೀಸರು ಬಂಧಿಸಿದ್ದಾರೆ. ಮೊನ್ನೆ ಸಂಜೆ ಅಕ್ಷಯ ಪಾರ್ಕ್ ಬಳಿ ಈ ಘಟನೆ ನಡೆದಿದೆ. ವಶಪಡಿಸಿಕೊಳ್ಳಲಾದ ನಗದು ಹಣ ಹವಾಲಾ ವ್ಯವಹಾರಕ್ಕೆ ಸಂಬಂಧಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದೆ.



ಉದಯವಾಹಿನಿ ಚಿತ್ರ

ಆರೋಪಿಗಳನ್ನು ನರಸಿಂಹ (34ವ), ಕಾರು ಚಾಲಕ ಜೀವನ್ (27ವ), ಜಿಮ್ ತರಬೇತುದಾರ ವೆಂಕಟ್ ರಾಜ್ (28ವ), ಕಿಶೋರ್ (30), ಆಟೋರಿಕ್ಷಾ ಚಾಲಕ ಚಂದ್ರ (32), ಭದ್ರತಾ ಸಿಬ್ಬಂದಿ ರವಿ ಕಿರಣ್ (33), ಕುಮಾರ್ ಎನ್ (36) ಮತ್ತು ನಮನ್ (18) ಎಂದು ಗುರುತಿಸಲಾಗಿದ್ದು, ಎಲ್ಲಾರೂ ಆಗ್ನೇಯ ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಿವಾಸಿಗಳಾಗಿದ್ದಾರೆ. ದೂರುದಾರ ಹೇಮಂತ್ (32ವ), ಕಾರು ಚಾಲಕ, ತುಮಕೂರಿನ ಅಡಿಕೆ ವ್ಯಾಪಾರಿ ಮೋಹನ್, ರಾಜಸ್ಥಾನ ಮೂಲದ ಅಕ್ಷಯ ಲೇಔಟ್ ನಿವಾಸಿಗಳಾದ ರಿಯಲ್ ಎಸ್ಟೇಟ್ ಬ್ರೋಕರ್ ಮೋಟಾ ರಾಮ್ ಅಲಿಯಾಸ್ ರಮೇಶ್ ಮತ್ತು ಅವರ ಪತ್ನಿ ಲಕ್ಷ್ಮಿದೇವಿ ಅವರಿಂದ ಹಣ ಸಂಗ್ರಹಿಸಲು ಕೇಳಿದ್ದರು ಎಂದು ಹೇಳಿದ್ದಾರೆ. ದಂಪತಿ ಎರಡು ಚೀಲಗಳಲ್ಲಿ 1.1 ಕೋಟಿ ರೂಪಾಯಿ ನಗದು ಇತ್ತು. ಪೊಲೀಸರ ಪ್ರಕಾರ, ಹೇಮಂತ್ ಮತ್ತು ದಂಪತಿ ಸಂಜೆ 6 ಗಂಟೆ ಸುಮಾರಿಗೆ ಅಕ್ಷಯ ಪಾರ್ಕ್‌ನಲ್ಲಿದ್ದರು.

**ಘಟನೆ ಹೇಗಾಯಿತು?:** ಆರೋಪಿಗಳ ವರ್ತನೆಯಲ್ಲಿ ಅನುಮಾನ ಬಂದು ನರಸಿಂಹ ಮತ್ತು ಜೀವನ್ ಕಾರಿನ ಬಳಿ ಬಂದು ಬಾಗಿಲು ತೆರೆಯಲು ಪ್ರಯತ್ನಿಸಿದರು. ಪೊಲೀಸರು ಎಂದು ಹೇಳಿಕೊಂಡು ಕಾರಿನಲ್ಲಿದ್ದವರ ವೀಡಿಯೊ ಚಿತ್ರೀಕರಿಸಿದರು. ದಂಪತಿ ಅವರನ್ನು ಪ್ರಶ್ನಿಸಿದಾಗ, ಇಬ್ಬರೂ ಅವರ ಮೇಲೆ ಹಲ್ಲೆ ನಡೆಸಿ ಅವರ ಬ್ಯಾಗ್‌ಗಳನ್ನು ಕಸಿದುಕೊಳ್ಳಲು ಪ್ರಯತ್ನಿಸಿದರು.

ದಂಪತಿ ತಮ್ಮ ಕಾರಿನಲ್ಲಿ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದರೂ, ಆರೋಪಿಗಳು ಅವರನ್ನು ಬೈಕ್‌ಗಳಲ್ಲಿ ಬೆನ್ನಟ್ಟಿ ನಿರ್ಜನ ಪ್ರದೇಶ ಬಳಿ ಕಾರಿಗೆ ಡಿಕ್ಕಿ ಹೊಡೆದರು. ಇತರ ನಾಲ್ವರು ಆರೋಪಿಗಳು ಸೇರಿಕೊಂಡರು. ದಂಪತಿ ಕಾರು ಚಾಲಕನನ್ನು ಒಂದು ಶೆಡ್‌ಗೆ ಕರೆದೊಯ್ಯಲಾಯಿತು. ಅಲ್ಲಿ ಆರೋಪಿಗಳು ಬ್ಯಾಗ್‌ಗಳಲ್ಲಿ ಅಪಾರ ಪ್ರಮಾಣದ ನಗದು ಇರುವುದನ್ನು ಗಮನಿಸಿದರು.

ನಂತರ, ಅವರು ದಂಪತಿ ಮೊಬೈಲ್ ಫೋನ್‌ಗಳನ್ನು ಕಸಿದುಕೊಂಡು, 50 ಲಕ್ಷ ರೂಪಾಯಿ ನೀಡಿದರೆ ಮಾತ್ರ ಅವರನ್ನು ಬಿಡುಗಡೆ ಮಾಡಲಾಗುವುದು ಎಂದು ಬೆದರಿಕೆ ಹಾಕಿದರು ಎಂದು ಪೊಲೀಸರು ತಿಳಿಸಿದ್ದಾರೆ.

## ನೆಲಮಂಗಲ ಟೋಲ್ ಬಳಿ ಕಂಟೇನರ್ ಪಲ್ಟಿ: 1 ಕಿ.ಮೀ ಟ್ರಾಫಿಕ್ ಜಾಮ್

• ಉದಯವಾಹಿನಿ, ಬೆಂಗಳೂರು

ಚಾಲಕನ ನಿಯಂತ್ರಣ ತಪ್ಪಿ ಕಂಟೇನರ್ ಪಲ್ಟಿಯಾದ ಘಟನೆ ನೆಲಮಂಗಲ ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ. ನೆಲಮಂಗಲ ಟೋಲ್ ಬಳಿ ತುಮಕೂರು ಕಡೆಯಿಂದ ಬೆಂಗಳೂರು ಕಡೆ ಬರುತ್ತಿದ್ದ ಕಂಟೇನರ್ ಲಾರಿ ರಸ್ತೆಗೆ ಅಡ್ಡಲಾಗಿ ಬಿದ್ದಿದೆ. ಪರಿಣಾಮ ರಸ್ತೆಯಲ್ಲಿ ಭಾರೀ ಟ್ರಾಫಿಕ್ ಜಾಮ್ ಉಂಟಾಗಿದೆ. 1 ಕಿ.ಮೀ ವರೆಗೆ ವಾಹನಗಳು ಸಾಲಾಗಿ ನಿಂತಿವೆ. ಲಾರಿಯನ್ನ ತೆರವು ಮಾಡಲು ಟೋಲ್ ಸಿಬ್ಬಂದಿ, ಸಂಚಾರಿ ಪೊಲೀಸರು ಹರಸಾಹಸ ಪಡುತ್ತಿದ್ದಾರೆ

## ಮಾದಾವರದಲ್ಲಿ ವಾಲಿದ 3 ಅಂತಸ್ಥಿನ ಕಟ್ಟಡ: ಸುತ್ತಮುತ್ತ ಜನರಿಗೆ ಢವಢವ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮನೆಗಳು ಕುಸಿಯುವ ಪ್ರಕರಣಗಳು ಪದೇ ಪದೇ ಸಾರ್ವಜನಿಕರನ್ನು ಭಯಭೀತವಾಗಿಸುತ್ತಿವೆ. ಈಗ ನೆಲಮಂಗಲ ಸಮೀಪದ ಮಾದಾವಾರದಲ್ಲಿ 3 ಅಂತಸ್ಥಿನ ಕಟ್ಟಡ ವಾಲಿ ಸಾರ್ವಜನಿಕರಲ್ಲಿ ಆತಂಕ ಮನೆ ಮಾಡಿದೆ. ಸುಮಾರು ಎರಡು ವರ್ಷಗಳ ಹಿಂದೆಯಷ್ಟೆ ನಿರ್ಮಾಣ ಮಾಡಿದ್ದ ಕಟ್ಟಡ ಏಕಾಏಕಿ ಸುಮಾರು ಅರ್ಧ ಅಡಿಗೂ ಹೆಚ್ಚು ವಾಲಿರುವುದರಿಂದ ಕಟ್ಟಡದಲ್ಲಿ ವಾಸವಿದ್ದ ಸುಮಾರು 6 ಕುಟುಂಬಗಳು ಆತಂಕಗೊಂಡು ಮನೆಯನ್ನು ಖಾಲಿ ಮಾಡಿದ್ದಾರೆ. ಇನ್ನೂ ಕಟ್ಟಡ ವಾಲಿರುವ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಮಾದನಾಯಕನಹಳ್ಳಿ ನಗರಸಭೆ ಅಧಿಕಾರಿಗಳು ಹಾಗೂ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮನೆಯಲ್ಲಿದ್ದ ಎಲ್ಲಾ ಬಾಡಿಗೆದಾರರನ್ನು ಸ್ಥಳಾಂತರ ಮಾಡಿ, ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಿದ್ದಾರೆ. ಇನ್ನೂ ಮನೆ ಮಾಲೀಕ ಶ್ರೀನಿವಾಸ್ ಮಾತನಾಡಿ, ನಾನೇ ಖುದ್ದು ಮನೆಯನ್ನು ಕಟ್ಟಿದ್ದೇನೆ ನಾನೊಬ್ಬ ಕಂಟ್ರ್ಯಾಕ್ಟರ್ ಆಗಿದ್ದು ನನ್ನ ಮನೆಯನ್ನು ನಾನು ಕಳಪೆಯಾಗಿ ಕಟ್ಟಲು ಸಾಧ್ಯವಾ? ಅತ್ಯಂತ ಬಲಿಷ್ಠವಾದ ಪಿಲ್ಲರ್‌ಗಳನ್ನ ಹಾಕಿ ಸುಮಾರು 80 ಲಕ್ಷ ಹಣ ಖರ್ಚು ಮಾಡಿ ಸಾಲ ಮಾಡಿ ಈ ಮನೆಯನ್ನು ನಿರ್ಮಾಣ ಮಾಡಿದ್ದು. ಘಟನೆಯಿಂದ ನಾನು ಕೂಡ ಭಯಭೀತನಾಗಿದ್ದು ಮನೆಯಲ್ಲಿರುವ ಕುಟುಂಬದವರಿಗೆ ಯಾವುದೇ ತೊಂದರೆ ಆಗದಂತೆ ಕ್ರಮ ವಹಿಸಿದ್ದೇನೆ ಎಂದಿದ್ದಾರೆ. ಇತ್ತ ಇಂಜಿನಿಯರ್ ನೀಡುವ ಮಾಹಿತಿ ಮೇರೆಗೆ ಮುಂದೆ ಯಾವ ಕ್ರಮ ವಸಿಸುವುದಾಗಿ ಮಾಲೀಕ ತಿಳಿಸಿದ್ದು ಸದ್ಯ ಮನೆಯಲ್ಲಿದ್ದವರು ಅಕ್ಕಪಕ್ಕದ ಮನೆಗಳಲ್ಲಿ ಆಶ್ರಯ ಪಡೆದಿದ್ದಾರೆ.

## ಒಸಿ, ಸಿಸಿ ವಿನಾಯಿತಿ: ಸಿಎಂ ನೇತೃತ್ವದಲ್ಲಿ ಮಹತ್ವದ ಸಭೆ

### ಕಾನೂನು ಚೌಕಟ್ಟಿನಲ್ಲಿ ಬಡವರಿಗೆ ವಿನಾಯಿತಿ ನೀಡುವ ನಿಟ್ಟಿನಲ್ಲಿ ಸರ್ಕಾರ ಚಿಂತನೆ ನಡೆಸುತ್ತಿದೆ

• ಉದಯವಾಹಿನಿ, ಬೆಂಗಳೂರು

ಒಸಿ, ಸಿಸಿ ವಿನಾಯಿತಿ ನೀಡುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಮಹತ್ವದ ಸಭೆ ನಡೆಯಿತು. ಸಭೆಯಲ್ಲಿ ಈ ನಿಟ್ಟಿನಲ್ಲಿ ನಿರ್ಧಾರ ಕೈಗೊಳ್ಳಲಾಗದೆ ಇದ್ದರೂ, ಕಾನೂನು ಅವಕಾಶಗಳ ಬಗ್ಗೆ ಪರಿಶೀಲನೆ ನಡೆಸಲಾಗಿದೆ. ಒಸಿ, ಸಿಸಿ ಕಡ್ಡಾಯಗೊಳಿಸಿರುವುದಕ್ಕೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್ ಆದೇಶ ಮಾಡಿತ್ತು. ಕೋರ್ಟ್ ಆದೇಶ ಪಾಲಿಸುವ ಜತೆಗೆ ಕಾನೂನು ಚೌಕಟ್ಟಿನಲ್ಲಿ ಬಡವರಿಗೆ ವಿನಾಯಿತಿ ನೀಡುವ ನಿಟ್ಟಿನಲ್ಲಿ ಸರ್ಕಾರ ಚಿಂತನೆ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆಯಿತು.

**ಸಭೆಯ ಹೈಲೈಟ್ಸ್ ಏನೇನು?:** ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರ ಗ್ರೇಟರ್ ಬೆಂಗಳೂರು ಸೇರಿದಂತೆ ರಾಜ್ಯ ವ್ಯಾಪ್ತಿಯಲ್ಲಿ ಸಿಸಿ ಮತ್ತು ಒಸಿ ಇಲ್ಲದೇ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸಮಸ್ಯೆ ಉಂಟಾಗಿರುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು.



ಸುಪ್ರೀಂಕೋರ್ಟ್‌ನ ಆದೇಶ ಭಾರತದ ಎಲ್ಲಾ ರಾಜ್ಯಗಳಿಗೂ ಅನ್ವಯವಾಗುತ್ತಿದ್ದೂ, ಎಲ್ಲಾ ರಾಜ್ಯಗಳೂ ಆದೇಶವನ್ನು ಅನುಷ್ಠಾನಗೊಳಿಸುತ್ತಿವೆಯೇ ಪರಿಶೀಲಿಸಲು ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು. ನಿಯಮ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಅನುಮತಿ ನೀಡುವ ಸಾಧ್ಯತೆ ಬಗ್ಗೆ ಚರ್ಚೆ ನಡೆಸಲಾಗಿ, ನಿರ್ಮಾಣಗೊಂಡಿರುವ ಕಟ್ಟಡಗಳನ್ನು ನೆಲಸಮಗೊಳಿಸಲು ಸಾಧ್ಯವಿಲ್ಲ.

ಸರ್ಕಾರದ ನಿರ್ಧಾರದಿಂದ ಜನರಿಗೆ ಅನುಕೂಲವಾಗಬೇಕು ಎಂದರು. ಸೂಕ್ತ ಅನುಮತಿಗಳಿಲ್ಲದೇ ಈಗಾಗಲೇ ಮನೆ ನಿರ್ಮಿಸಿ ವಾಸವಿದ್ದಾರೆ.

ಅಂತಹವರಿಗೆ ಒಂದು ಬಾರಿಗೆ ಅನ್ವಯವಾಗುವಂತೆ ನಿಯಮಿತಗೊಳಿಸಲು ಕಾನೂನಿನಲ್ಲಿ ಅವಕಾಶವಿರುವ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಸಲಾಗಿದೆ.

**ಅಡ್ವೋಕೇಟ್ ಜನರಲ್ ಮುಖ್ಯಮಂತ್ರಿಗಳ ಕಾನೂನು ಸಲಹೆ**

### ಅ. 8 ರಂದು ಮತ್ತೊಂದು ಸುತ್ತಿನ ಸಭೆ

ಸುಪ್ರೀಂಕೋರ್ಟ್ ಆದೇಶ ಅನುಷ್ಠಾನಗೊಳ್ಳುವ ಮುಂಚೆ ಸಲ್ಲಿಕೆಯಾಗಿರುವ ಮಾರ್ಚ್ 2025ರವರೆಗಿನ ಅರ್ಜಿಗಳನ್ನು ಪರಿಗಣಿಸಿ ಒಸಿ ಮತ್ತು ಸಿಸಿಯಿಂದ ವಿನಾಯ್ತಿಗೊಳಿಸಿ ವಿದ್ಯುತ್ ಮತ್ತು ನೀರಿನ ಸಂಪರ್ಕ ನೀಡುವ ಬಗ್ಗೆ ಕಾನೂನಿನ ಸಾಧ್ಯತೆಗಳ ಬಗ್ಗೆ ಕೂಲಂಕುಷವಾಗಿ ಚರ್ಚಿಸಲು ಅ. 8 ರಂದು ಸರ್ಕಾರದ ಮುಖ್ಯಕಾರ್ಯದರ್ಶಿಗಳು, ಸಂಬಂಧಪಟ್ಟ ಇಲಾಖಾ ಸಚಿವರು, ಸರ್ಕಾರದ ಅಡ್ವೋಕೇಟ್ ಜನರಲ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

## ಬೆಂಗಳೂರಿನಲ್ಲಿ ಅ.3ರಿಂದ ಜಾತಿಗಣತಿ ಸಮೀಕ್ಷೆ ಆರಂಭ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಅಕ್ಟೋಬರ್ 3ರಿಂದ ಜಾತಿಗಣತಿ ಸಮೀಕ್ಷೆ ಆರಂಭವಾಗಲಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ತಿಳಿಸಿದ್ದಾರೆ. ಈ ಕುರಿತು ಜೊತೆ ಮಾತನಾಡಿದ ಅವರು,



ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅಕ್ಟೋಬರ್ 3ರಿಂದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಲು ದಿನಾಂಕ ನಿಗದಿಪಡಿಸಲಾಗಿದೆ. ಸದ್ಯ ಸಮೀಕ್ಷಾ ಸಿಬ್ಬಂದಿಗೆ ತರಬೇತಿ ನೀಡಲಾಗುತ್ತಿದ್ದು, ಅ.3ರ ಒಳಗೆ ತರಬೇತಿ ಮುಕ್ತಾಯ ಆಗಲಿದೆ. ಅದಾದ ಬಳಿಕ ಸಮೀಕ್ಷೆ ಆರಂಭ ಆಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಮೊದಲು ಸಿಬ್ಬಂದಿ ಇಲ್ಲದ ಕಾರಣದಿಂದ ಬೆಂಗಳೂರಿನಲ್ಲಿ ಒಂದು ವಾರ ತಡವಾಗಿ ಜಾತಿಗಣತಿ ಸಮೀಕ್ಷೆ ಆರಂಭಿಸುವುದಾಗಿ ತಿಳಿಸಿದ್ದರು. ಅದರಂತೆ ಇದೀಗ ದಿನಾಂಕ ನಿಗದಿಪಡಿಸಿದ್ದಾರೆ. ಈಗಾಗಲೇ ಬೆಂಗಳೂರು ಹೊರತುಪಡಿಸಿ ರಾಜ್ಯದೆಲ್ಲೆಡೆ ಸೆ.22ರಿಂದ ಜಾತಿಗಣತಿ ಸಮೀಕ್ಷೆ ಆರಂಭವಾಗಿದ್ದು, ಅ.7ರಂದು ಕೊನೆಗೊಳ್ಳಲಿದೆ.

## ಅಪಾರ್ಟ್‌ಮೆಂಟ್‌ನಲ್ಲಿ ಅಕ್ರಮವಾಗಿ ನೆಲೆಸಿದ್ದ ಆರೋಪ; ಮೂವರು ವಿದೇಶಿಯರ ಬಂಧನ

• ಉದಯವಾಹಿನಿ, ಬೆಂಗಳೂರು

ದೇವನಹಳ್ಳಿಯ ಅಪಾರ್ಟ್‌ಮೆಂಟ್‌ನಲ್ಲಿ ಅಕ್ರಮವಾಗಿ ವಾಸಿಸುತ್ತಿದ್ದ ಆರೋಪದ ಮೇಲೆ ಬೆಂಗಳೂರು ಪೊಲೀಸರ ಕೇಂದ್ರ ಅಪರಾಧ ವಿಭಾಗದ (ಸಿಸಿಬಿ) ಮಾದಕ ದ್ರವ್ಯ ವಿಭಾಗವು ಮೂವರು ವಿದೇಶಿ ಪ್ರಜೆಗಳನ್ನು ಬಂಧಿಸಿದೆ ಎಂದು ತಿಳಿಸಿದೆ. ಮಾನ್ಯ ದಾಖಲೆಗಳಿಲ್ಲದೆ ದೇಶದಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ಮೂವರು ವಿದೇಶಿಯರ ಬಗ್ಗೆ ಸೆಪ್ಟೆಂಬರ್ 25 ರಂದು ವಿಶ್ವಾಸಾರ್ಹ ಮಾಹಿತಿ ಸಿಕ್ಕಿತು ಎಂದು ಪೊಲೀಸರು ತಿಳಿಸಿದ್ದಾರೆ. ಸುಳಿವು ದೊರೆತ ತಕ್ಷಣ ಪ್ರಕರಣ ದಾಖಲಿಸಿಕೊಂಡ ಸಿಸಿಬಿ ತಂಡ, ಸ್ಥಳಕ್ಕೆ ಧಾವಿಸಿ, ದಾಳಿ ನಡೆಸಿ ಮೂವರನ್ನು ಬಂಧಿಸಿತು.

ವಿಚಾರಣೆ ಸಮಯದಲ್ಲಿ, ಆರೋಪಿಗಳು 2024ರಲ್ಲಿ ಶ್ರೀಲಂಕಾದ ಜಾಫ್ನಾದಿಂದ ತಮಿಳುನಾಡಿನ ರಾಮೇಶ್ವರಂಗೆ ಪಾಸ್‌ಪೋರ್ಟ್ ಅಥವಾ ವೀಸಾ ಇಲ್ಲದೆ ದೋಣಿಯಲ್ಲಿ ಪ್ರಯಾಣಿಸಿ ಭಾರತಕ್ಕೆ ಅಕ್ರಮವಾಗಿ ಪ್ರವೇಶಿಸಿದ್ದರು ಎಂದು ಬಹಿರಂಗಪಡಿಸಿದರು. ನಂತರ ಮತ್ತೊಬ್ಬ ವಿದೇಶಿ ಪ್ರಜೆಯ ಸಹಾಯದಿಂದ ಅವರು ದೇವನಹಳ್ಳಿಯ ಅಪಾರ್ಟ್‌ಮೆಂಟ್‌ನಲ್ಲಿ ಆಶ್ರಯ ಪಡೆದಿದ್ದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸರು ಅವರ ಗುರುತನ್ನು ಬಹಿರಂಗಪಡಿಸಿಲ್ಲ. ಸಿಸಿಬಿ ಪೊಲೀಸ್ ಠಾಣೆಯಲ್ಲಿ ವಿದೇಶಿಯರ ಕಾಯ್ದೆಯಡಿ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅವರು ನಗರದಲ್ಲಿ ಯಾವ ಉದ್ದೇಶಕ್ಕಾಗಿ ತಂಗಿದ್ದರು ಎಂಬುದನ್ನು ಕಂಡುಹಿಡಿಯಲು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಲೇಖಕಿಯರ ಸಂಘ: ಅಧ್ಯಕ್ಷೆ ಕಾರ್ಯವೈಖರಿ ಬಗ್ಗೆ ಅಸಮಾಧಾನ; ನಾಲ್ವರು ರಾಜೀನಾಮೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಎಚ್.ಎಲ್.ಪುಷ್ಪ ಅವರ ಕಾರ್ಯವೈಖರಿ ಬಗ್ಗೆ ಅಸಮಾಧಾನ ಸ್ಫೋಟಗೊಂಡಿದ್ದು, ನಾಲ್ವರು ಪದಾಧಿಕಾರಿಗಳು ರಾಜೀನಾಮೆ ನೀಡಿದ್ದಾರೆ. ಪುಷ್ಪ ಅವರು ಲೆಕ್ಕಪತ್ರಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡಿಲ್ಲ, ಹಣಕಾಸಿನ ವ್ಯವಹಾರದಲ್ಲಿ ಪಾರದರ್ಶಕತೆ ಕಾಯ್ದುಕೊಂಡಿಲ್ಲ ಎಂದು ಆರೋಪಿಸಿ, ಸಂಘದ ಕಾರ್ಯದರ್ಶಿ ಭಾರತಿ ಹೆಗಡೆ, ಸಹ ಕಾರ್ಯದರ್ಶಿ ಸುಮಾ ಸತೀಶ್, ಉಪಾಧ್ಯಕ್ಷೆ ಜಯಲಕ್ಷ್ಮಿ ಪಾಟೀಲ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯೆ ಸರ್ವಮಂಗಳ ಅವರು ರಾಜೀನಾಮೆ ಸಲ್ಲಿಸಿದ್ದಾರೆ.

ಮಾರ್ಚ್ 22, 23 ರಂದು ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಸಭಾಭವನದಲ್ಲಿ ನಡೆದ ಕರ್ನಾಟಕ ಲೇಖಕಿಯರ ಸಮ್ಮೇಳನದ ಲೆಕ್ಕಪತ್ರಗಳ ಬಗ್ಗೆ, ಸಂಘದ ಅಧ್ಯಕ್ಷರಾದ ಪುಷ್ಪ ಅವರು ಸಮರ್ಪಕವಾದ ರೀತಿಯಲ್ಲಿ ವಿವರಣೆ ನೀಡುತ್ತಿಲ್ಲ.

ಅಧ್ಯಕ್ಷರಿಂದ ಲೆಕ್ಕಪತ್ರಗಳ ಅಸಮರ್ಪಕ ನಿರ್ವಹಣೆ, ಹಣಕಾಸಿನ ಅಶಿಸ್ತು, ಪಾರದರ್ಶಕತೆ ಇಲ್ಲದಿರುವಿಕೆ, ಸರ್ವಾಧಿಕಾರಿ ಧೋರಣೆಯಿಂದ ಬೇಸತ್ತು ರಾಜೀನಾಮೆ ನೀಡುತ್ತಿದ್ದೇವೆ. ಅಧ್ಯಕ್ಷರು ತೋರಿಸುತ್ತಿರುವ ಲೆಕ್ಕ ಪತ್ರಗಳಿಗೂ ನಮಗೂ ಯಾವುದೇ ಸಂಬಂಧ ಇಲ್ಲ' ಎಂದು ರಾಜೀನಾಮೆ ಪತ್ರದಲ್ಲಿ ನಾಲ್ವರು ತಿಳಿಸಿದ್ದಾರೆ. ಸಮ್ಮೇಳನದ ನಂತರ ದಾನಿಗಳು ಸಂಘಕ್ಕೆ ಒಂದಷ್ಟು ಹಣ ನೀಡಿದ್ದು, ಈ ಹಣವನ್ನು ಪ್ರಕಟಣೆಗಳಿಗೆ ಬಳಸಿಕೊಳ್ಳಲಾಗಿದೆ. ಹಣಕಾಸಿನ ವ್ಯವಹಾರ ಪಾರದರ್ಶಕವಾಗಿದ್ದು, ಸಮ್ಮೇಳನದ ಖರ್ಚು ವೆಚ್ಚಕ್ಕೆ ಸಂಬಂಧಿಸಿದಂತೆ ಲೆಕ್ಕಪರಿಶೋಧನೆ ಮಾಡಿಸಲಾಗಿದೆ ಎಂದು ಎಚ್.ಎಲ್. ಪುಷ್ಪ ಅವರು ತಿಳಿಸಿದರು.

## ಮೂರೇ ದಿನದಲ್ಲಿ 37 ದರೋಡೆ: 6 ಜನ ಅಪ್ರಾಪ್ತರ ಗ್ಯಾಂಗ್ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ನಗರದ ಹೊರವಲಯದಲ್ಲಿ ದರೋಡೆಕೋರರ ಹಾವಳಿ ಹೆಚ್ಚಾಗಿದ್ದು, ಮೂರೇ ಬರೋಬ್ಬರಿ 37 ದರೋಡೆ ಪ್ರಕರಣಗಳು ನಡೆದಿವೆ. ಪೊಲೀಸರು ರಾತ್ರಿ ಪೂರ್ತಿ ನಿದ್ರೆ ಬಿಟ್ಟು 6 ಜನ ಅಪ್ರಾಪ್ತರ ಗ್ಯಾಂಗ್‌ನ್ನು ಪೊಲೀಸರು ಬಂಧಿಸಿದ್ದಾರೆ.

ಮಾದನಾಯಕನಹಳ್ಳಿ, ದೊಡ್ಡಬಳ್ಳಾಪುರ ಸೂರ್ಯನಗರ, ನೆಲಮಂಗಲ ಹಾಗೂ ಬ್ಯಾಡರಹಳ್ಳಿ ಭಾಗದಲ್ಲಿ ದರೋಡೆ ಪ್ರಕರಣಗಳು ನಡೆದಿದ್ದವು. ಈ ಗ್ಯಾಂಗ್ ಹಣ ಕೊಟ್ರೆ ಸುಮ್ಮನಾಗುತ್ತಿತ್ತು. ಹಣ ಕೊಡದಿದ್ದರೆ ಚಾಕು ಹಾಕಿ ಪರಾರಿಯಾಗುತ್ತಿದ್ದರು.

ಈ ಅಪ್ರಾಪ್ತ ಆರೋಪಿಗಳು ರಾತ್ರಿ ಹೊತ್ತು ಮೂರು ಬೈಕ್‌ನಲ್ಲಿ ಸುತ್ತಾಡುತ್ತಿದ್ದರು. ಮೊದಲ ದಿನ ದೊಡ್ಡಬಳ್ಳಾಪುರ ಸುತ್ತಮುತ್ತ ದರೋಡೆ ಮಾಡಿ, ಎರಡನೇ ದಿನ ಮಾದನಾಯಕನಹಳ್ಳಿ, ನೆಲಮಂಗಲ ಭಾಗದಲ್ಲಿ ದರೋಡೆ ಮಾಡಿದ್ದರು. ಮೂರನೇ ದಿನ ಸೂರ್ಯನಗರ ಸುತ್ತಮುತ್ತ



ಉದಯವಾಹಿನಿ ಚಿತ್ರ

ದರೋಡೆ ಮಾಡಿದ್ದರು. ಹೀಗೆ ಬರೋಬ್ಬರಿ ಮೂರು ದಿನದಲ್ಲಿ 37 ಕಡೆ ಅಪ್ರಾಪ್ತರ ಗ್ಯಾಂಗ್ ದರೋಡೆ ಮಾಡಿತ್ತು. ಆರೋಪಿಗಳು ಬೈಕ್, ಕಾರು, ಲಾರಿಗಳನ್ನು ಅಡ್ಡ ಹಾಕಿ, ಚಾಕು ತೋರಿಸಿ ಮೊಬೈಲ್, ಹಣ ಕೊಡುವಂತೆ ಬೆದರಿಕೆ ಹಾಕುತ್ತಿದ್ದರು. ಮಾದನಾಯಕನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಈ ಗ್ಯಾಂಗ್ ಒಬ್ಬರಿಗೆ ಚಾಕು ಇರಿದಿತ್ತು.

ಸಿಸಿ ಟಿವಿ ಪರಿಶೀಲನೆ ವೇಳೆ ಒಂದೇ ತಂಡ ಈ ಕೃತ್ಯ ಎಸಗಿರುವುದು ಗೊತ್ತಾಗಿತ್ತು. ಇದೇ ಆಧಾರದ ಮೇಲೆ ಗ್ರಾಮಾಂತರ ಪೊಲೀಸರು ವಿಶೇಷ ತಂಡ ರಚಿಸಿದ್ದರು.

ರಾತ್ರಿಯಿಡೀ ಪೊಲೀಸರು ಗಸ್ತು ತಿರುಗುತ್ತಿದ್ದಿದ್ದರಿಂದ ಗ್ಯಾಂಗ್ ನಗರಕ್ಕೆ ಎಂಟ್ರಿ ಕೊಟ್ಟಿದ್ದರು. ತಪಾಸಣೆ ವೇಳೆ ಬ್ಯಾಡರಹಳ್ಳಿ ಪೊಲೀಸರಿಗೆ ಆರೋಪಿಗಳು ಸಿಕ್ಕಿಬಿದ್ದಿದ್ದಾರೆ. ಎಲ್ಲಾ ಆರೋಪಿಗಳನ್ನು ಗ್ರಾಮಾಂತರ ಠಾಣೆ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ. ಗ್ಯಾಂಗ್‌ನಿಂದ 9 ಮೊಬೈಲ್ ಫೋನ್ ವಶಕ್ಕೆ ಪಡೆಯಲಾಗಿದ್ದು, ಆರೋಪಿಗಳನ್ನು ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ. ವಿಚಾರಣೆ ವೇಳೆ ಓರ್ವನಿಗೆ ಅಪರಾಧದ ಹಿನ್ನೆಲೆ ಇರುವುದು ಗೊತ್ತಾಗಿದೆ.

## ಕಾಂಗ್ರೆಸ್ ಆಡಳಿತದಲ್ಲಿ ದುಪ್ಪಟ್ಟು ಕಮಿಷನ್ ದರ, ಕ್ಲಿಯರ್ ಆಗದ ಬಾಕಿಬಿಲ್!

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಆಡಳಿತದಲ್ಲಿ ಕಮಿಷನ್ ದರ ದುಪ್ಪಟ್ಟು ಆಗಿದ್ದು ಬಾಕಿಬಿಲ್ ಪಾವತಿಯಾಗಿಲ್ಲ ಎಂದು ರಾಜ್ಯ ಗುತ್ತಿಗೆದಾರರ ಸಂಘ ಆರೋಪಿಸಿದೆ. ಈ ಸಂಬಂಧ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದು, ರಾಜ್ಯಾದ್ಯಂತ ಗುತ್ತಿಗೆದಾರರ ಮೇಲೆ ಪರಿಣಾಮ ಬೀರುವ ಪಾವತಿಯಾಗದ ಬಾಕಿ ಬಿಲ್ ಹಾಗೂ ಬಗೆಹರಿಯದ ಸಮಸ್ಯೆಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದೆ. ಸರ್ಕಾರ ರೂ. 33,000 ಕೋಟಿ ಬಾಕಿ ಉಳಿಸಿಕೊಂಡಿದೆ ಎಂದು ಸಂಘ ಹೇಳಿದೆ. ನಿಮ್ಮ ಸರ್ಕಾರದಿಂದ ನಮಗೆ ಯಾವುದೇ ಪ್ರಯೋಜನವಾಗಿಲ್ಲ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಬಾಕಿ ಪಾವತಿ ಮತ್ತಿತರ ಸಮಸ್ಯೆ ಬಗೆಹರಿಸಲು ಕಳೆದ 2 ವರ್ಷಗಳಿಂದ ಅನೇಕ ಬಾರಿ ಸಭೆ ನಡೆಸಲಾಗಿದೆ. ಪ್ರತಿ ಬಾರಿಯೂ ನಮ್ಮನ್ನು ಸಮಾಧಾನಪಡಿಸಲಾಗುತ್ತದೆ. ಸಮಸ್ಯೆ ಪರಿಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗುತ್ತದೆ.

ನಿಮ್ಮ ಮೇಲಿನ ಗೌರವದಿಂದ ಮತ್ತು ಸಮಸ್ಯೆಗಳನ್ನು ಪರಿಹರಿಸಲಾಗುವುದು ಎಂಬ ನಂಬಿಕೆಯಿಂದ, ನಮ್ಮ ಗುತ್ತಿಗೆದಾರರು ತಾಳ್ಮೆಯಿಂದ ಇದ್ದರು. ಆದರೆ ಇದುವರೆಗೆ, ನಿಮ್ಮ ಸರ್ಕಾರದಿಂದ ನಮಗೆ ಯಾವುದೇ ಪ್ರಯೋಜನಗಳು ಆಗಿಲ್ಲ. ಹಿಂದಿನ ಸರ್ಕಾರಕ್ಕೆ ಹೋಲಿಸಿದರೆ ಕೆಲವು ಇಲಾಖೆಗಳಲ್ಲಿ ಕಮಿಷನ್ ದರ ದ್ವಿಗುಣಗೊಂಡಿದೆ ಎಂದು ಪತ್ರದಲ್ಲಿ ಹೇಳಲಾಗಿದೆ. ಗುತ್ತಿಗೆದಾರರ ಮೂಲಕ ಕಾಮಗಾರಿ ನಿರ್ವಹಿಸುವ 8 ಸರ್ಕಾರಿ ಇಲಾಖೆಗಳು ಬಾಕಿ ಇರುವ ಬಿಲ್‌ಗಳನ್ನು ಬಿಡುಗಡೆ ಮಾಡದಿರುವುದು ಸೇರಿದಂತೆ ಹಲವು ಆರೋಪಗಳನ್ನು ಸಂಘ ಮಾಡಿದೆ. ಸಂಬಂಧಪಟ್ಟ ಸಚಿವರು ಕಾರ್ಯದರ್ಶಿಗಳೊಂದಿಗೆ ಸಭೆ ನಡೆಸಿದರೂ ಯಾವುದೇ ಉಪಯೋಗ ಆಗಿಲ್ಲ ಎಂದು ಪತ್ರದಲ್ಲಿ ತಿಳಿಸಲಾಗಿದೆ. ಇಲಾಖೆಗಳು ಹಿರಿತನ ಪಾರದರ್ಶಕತೆಯ ಕಾನೂನುಗಳನ್ನು ನಿರ್ಲಕ್ಷಿಸಿ, ತಮ್ಮದೇ ಆದ ಸೂತ್ರವನ್ನು ರೂಪಿಸುತ್ತಿವೆ. ವಿಶೇಷ ಗುತ್ತಿಗೆಗಳ (ಎಒಸಿ) ಅಡಿಯಲ್ಲಿ ಮೂರು ತಿಂಗಳಿಗೊಮ್ಮೆ ಬಾಕಿ ಉಳಿದಿರುವ ಬಾಕಿ ಬಿಲ್‌ಗಳಲ್ಲಿ ಕೇವಲ ಶೇ. 15 ರಿಂದ 20 ರಷ್ಟನ್ನು ಮಾತ್ರ ಬಿಡುಗಡೆ ಮಾಡಲಾಗುತ್ತಿದೆ ಎಂದು ಪತ್ರದಲ್ಲಿ ಆರೋಪಿಸಲಾಗಿದೆ.

## ಅತ್ಯಾಚಾರ ಆರೋಪಿಗೆ ಜಾಮೀನು ನಿರಾಕರಿಸಿದ ಕರ್ನಾಟಕ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಅತ್ಯಾಚಾರ ಪ್ರಕರಣದ ಆರೋಪಿಗೆ ಜಾಮೀನು ನೀಡಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿದ್ದು, ಮಹಿಳೆಯರನ್ನು ಗೌರವಿಸುವ ಬಗ್ಗೆ ಮನುಸ್ಮೃತಿಯ ಶ್ಲೋಕ ಮತ್ತು ಮಹಾತ್ಮ ಗಾಂಧಿಯವರ ಹೇಳಿಕೆಯನ್ನು ಉಲ್ಲೇಖಿಸಿ ಮಹಿಳೆಯರ ಘನತೆಯನ್ನು ಕಾಪಾಡುವ ಅಗತ್ಯವನ್ನು ಒತ್ತಿಹೇಳಿದೆ. ಈ ಪ್ರಕರಣವು ಬಿಹಾರದ ಬಂಕಾದ 19 ವರ್ಷದ ಪರಿಶಿಷ್ಟ ಪಂಗಡದ ಯುವತಿಗೆ ಸಂಬಂಧಿಸಿದೆ.

ಸಂತ್ರಸ್ತೆಯ ಪೋಷಕರು ಕೇರಳದ ಏಲಕ್ಕಿ ಎಸ್ಟೇಟ್‌ನಲ್ಲಿ ಉದ್ಯೋಗದಲ್ಲಿದ್ದು, ಏಪ್ರಿಲ್ 2 ರಂದು, ಬೆಳಗಿನ ಜಾವ 1.30ರ ಸುಮಾರಿಗೆ ಬೆಂಗಳೂರಿನ ಕೆಆರ್ ಪುರಂ ರೈಲು ನಿಲ್ದಾಣಕ್ಕೆ ಕೇರಳದಿಂದ ಬಂದಿದ್ದಾರೆ. ಆಕೆಯ ಸೋದರಸಂಬಂಧಿ ಜೊತೆ ಊಟಕ್ಕೆಂದು ಮಹದೇವಪುರದ ಕಡೆಗೆ ಹೋಗುತ್ತಿದ್ದಾಗ, ನಿಲ್ದಾಣದ ಬಳಿ ಇಬ್ಬರು ವ್ಯಕ್ತಿಗಳು ಅವರನ್ನು ಅಡ್ಡಗಟ್ಟಿದ್ದಾರೆ ಎಂದು ಆರೋಪಿಸಲಾಗಿದೆ. ಪ್ರಾಸಿಕ್ಯೂಷನ್ ಪ್ರಕಾರ, ಆರೋಪಿಯೊಬ್ಬ ಸೋದರಸಂಬಂಧಿಯನ್ನು ತಡೆದಿದ್ದಾನೆ. ಆತನ ಸಹಚರ ಯುವತಿಯನ್ನು ಹತ್ತಿರದ ಸ್ಥಳಕ್ಕೆ ಎಳೆದೊಯ್ದು ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾನೆ. ಸಹಾಯಕ್ಕಾಗಿ ಆಕೆ ಕೂಗಿಕೊಂಡಾಗ ಮಧ್ಯಪ್ರವೇಶಿಸಿದ ಸ್ಥಳೀಯರು, ಆರೋಪಿಗಳನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಇವರಿಬ್ಬರ ವಿರುದ್ಧ ಭಾರತೀಯ ನ್ಯಾಯ



ಸಂಹಿತೆಯ ವಿವಿಧ ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇದರಲ್ಲಿ ಅತ್ಯಾಚಾರ ಮತ್ತು ಬೆದರಿಕೆ ಜೊತೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಯಡಿಯಲ್ಲಿಯೂ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಾಗಿದೆ. ವಿಚಾರಣೆಯ ಸಮಯದಲ್ಲಿ, ಅರ್ಜಿದಾರರನ್ನು ತಪ್ಪಾಗಿ ಪ್ರಕರಣದಲ್ಲಿ ಸಿಲುಕಿಸಲಾಗಿದೆ.

ಲೈಂಗಿಕ ದೌರ್ಜನ್ಯದಲ್ಲಿ ಅವರ ನೇರ ಪಾತ್ರವಿಲ್ಲ ಎಂದು ಆರೋಪಿಗಳಲ್ಲಿ ಒಬ್ಬನ ಪರ ವಕೀಲರು ವಾದಿಸಿದರು.

ಆದಾಗ್ಯೂ ಪ್ರಾಸಿಕ್ಯೂಷನ್, ಸೋದರಸಂಬಂಧಿಯನ್ನು ಬೆದರಿಸುವ ಮೂಲಕ ಮತ್ತು ಅವರು ಪ್ರತಿರೋಧಿಸದಂತೆ ತಡೆಯುವ ಮೂಲಕ ಅಪರಾಧ ನಡೆಯಲು ಕಾರಣರಾಗಿದ್ದಾರೆ ಎಂದು ವಾದಿಸಿತು.

ನಂತರ ಮನುಸ್ಮೃತಿಯ ಒಂದು ಶ್ಲೋಕವನ್ನು ಉಲ್ಲೇಖಿಸಿದ ಪೀಠವು, ಯತ್ರ ನಾರ್ಯಸ್ತು ಪೂಜ್ಯಂತೇ ರಮಂತೇ ತತ್ರ ದೇವತಾ, ಯತ್ರೈತಾಸ್ತು ನ ಪೂಜ್ಯಂತೇ ಸರ್ವಾಸ್ತತ್ರಫಲಾಃ ಕ್ರಿಯಾಃ' ಅಂದರೆ ಮಹಿಳೆಯರನ್ನು ಎಲ್ಲಿ ಗೌರವಿಸಲಾಗುತ್ತದೆಯೋ ಅಲ್ಲಿ ದೈವತ್ವವು ಇರುತ್ತದೆ, ಆದರೆ ಅವರನ್ನು ಎಲ್ಲಿ ಅವರನ್ನು ಅವಮಾನಿಸಲಾಗುತ್ತದೆಯೋ ಅಲ್ಲಿ ಎಲ್ಲಾ ಕಾರ್ಯಗಳು ಮೌಲ್ಯವನ್ನು ಕಳೆದುಕೊಳ್ಳುತ್ತವೆ' ಎಂದು ಅರ್ಥ ಎಂದಿತು. ನ್ಯಾಯಮೂರ್ತಿ ರಾಚಯ್ಯ ಕೂಡ ಮಹಾತ್ಮ ಗಾಂಧಿಯವರ ಮಾತುಗಳನ್ನು ನೆನಪಿಸಿಕೊಂಡರು: 'ಮಹಿಳೆ ಮಧ್ಯರಾತ್ರಿಯಿಡೀ ರಸ್ತೆಯಲ್ಲಿ ಮುಕ್ತವಾಗಿ ನಡೆಯಬಹುದಾದ ದಿನ, ಭಾರತ ಸ್ವಾತಂತ್ರ್ಯವನ್ನು ಸಾಧಿಸಿದೆ ಎಂದು ನಾವು ಹೇಳಬಹುದು'.

**ಸೆ.4 ರಂದು ಸಲ್ಲಿಸಿದ್ದ ಜಾಮೀನು ಅರ್ಜಿಯ ಕುರಿತು ತೀರ್ಪು ನೀಡಿದ ನ್ಯಾಯಮೂರ್ತಿ ಎಸ್. ರಾಚಯ್ಯ, ಘಟನೆಯ ಗಂಭೀರತೆ ಮತ್ತು ಸಂತ್ರಸ್ತೆ ಅನುಭವಿಸಿದ ಆಘಾತವನ್ನು ಎತ್ತಿ ತೋರಿಸಿದರು. 'ಮತ್ತೊಬ್ಬನೊಂದಿಗೆ ಸೇರಿ ಆರೋಪಿ ಮಾಡಿದ ಕೃತ್ಯವು, ಸಂತ್ರಸ್ತೆಯ ಜೀವನದಲ್ಲಿ ಒಂದು ಗಾಯವಾಗಿ ಉಳಿಯುತ್ತದೆ. ಆಕೆ ಅನುಭವಿಸಿದ ಯಾತನೆಯನ್ನು ನಿವಾರಿಸುವುದು ಆಕೆಗೆ ತುಂಬಾ ಕಷ್ಟಕರವಾಗಿರುತ್ತದೆ' ಎಂದರು.**

## ಬೆಂಗಳೂರು, ಕೇಂದ್ರ ನಗರ ಪಾಲಿಕೆಯಲ್ಲಿ ಸಾಮೂಹಿಕ ಸ್ವಚ್ಛತಾ ಕಾರ್ಯಕ್ಕೆ ವೇಗ

• ಉದಯವಾಹಿನಿ, ಬೆಂಗಳೂರು

ನಗರ ಪಾಲಿಕೆ ವ್ಯಾಪ್ತಿಯಲ್ಲಿ ನೈರ್ಮಲ್ಯವನ್ನು ಕಾಪಾಡಲು ಸಾಮೂಹಿಕ ಸ್ವಚ್ಛತಾ ಕಾರ್ಯಕ್ಕೆ ವೇಗ ನೀಡಬೇಕು ಎಂದು ಕೇಂದ್ರ ನಗರಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ಅವರು ಸೂಚಿಸಿದರು.

ನಿರಂತರ ಸ್ಥಳ ತಪಾಸಣೆಯ ಪರಿಣಾಮವಾಗಿ ಕೇಂದ್ರ ನಗರಪಾಲಿಕೆ ವ್ಯಾಪ್ತಿಯಲ್ಲಿ ಅಧಿಕಾರಿಗಳು ಘನ ತ್ಯಾಜ್ಯ ಸಮರ್ಪಕ ನಿರ್ವಹಣೆ, ತ್ಯಾಜ್ಯ ಸಾಗಾಟ, ಸಾಮೂಹಿಕ ಸ್ವಚ್ಛತಾ ಕಾರ್ಯಗಳು, ರಸ್ತೆ ಮತ್ತು ಪಾದಚಾರಿಗಳ ಮೇಲಿನ ಕಟ್ಟಡಗಳ ತ್ಯಾಜ್ಯ ತೆರವು, ತ್ಯಾಜ್ಯ ಹಾಟ್ ಸ್ಪಾಟ್ ಗಳ ತೆರವು, ಸೈಡ್ ಡ್ರೈನ್‌ಗಳ ಸ್ವಚ್ಛತೆ, ರಸ್ತೆ ಬದಿಗಳಲ್ಲಿನ ತ್ಯಾಜ್ಯ, ಅನುಪಯುಕ್ತ ವಸ್ತುಗಳ ತೆರವು ಕಾರ್ಯವನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದರು.

ಚಾಮರಾಜಪೇಟೆ ವಿಭಾಗದಿಂದ ವಾರ್ಡ್ 138 ವ್ಯಾಪ್ತಿಯ ಕೆ.ಆರ್. ಮಾರುಕಟ್ಟೆ ಸುತ್ತಮುತ್ತಲಿನ ಸ್ಥಳಗಳು, ಮೈಸೂರು ರಸ್ತೆಯಲ್ಲಿ ಭಾನುವಾರ ಸಾಮೂಹಿಕ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು. ಶಿವಾಜಿನಗರ ವಿಭಾಗದಿಂದ ರೆಸಿಡೆನ್ಸಿ ರಸ್ತೆ, ಎಂ.ಜಿ. ರಸ್ತೆ, ಹಾಗೂ ಸುತ್ತಮುತ್ತಲಿನ ರಸ್ತೆಗಳಲ್ಲಿ ಸಾಮೂಹಿಕ ಸ್ವಚ್ಛತೆ ನಡೆಸಲಾಗಿದೆ.

**ಪಾದಚಾರಿ ಮಾರ್ಗ ದುರಸ್ಥಿ:** ಎಂ.ಜಿ. ರಸ್ತೆ ಮತ್ತು ರೆಸಿಡೆನ್ಸಿ ರಸ್ತೆಗಳಲ್ಲಿ ಹಾಳಾಗಿದ್ದ ಪಾದಚಾರಿ ಮರ್ಗಗಳನ್ನು ದುರಸ್ತಿಗೊಳಿಸಿ ಪಾದಚಾರಿಗಳ ಸುಗಮ ಸಂಚಾರಕ್ಕೆ ಅನುವು ಮಾಡಲಾಗಿದೆ.



ಉದಯವಾಹಿನಿ ಚಿತ್ರ

### ಇಂದು ರಸ್ತೆ ಗುಂಡಿ ಮುಚ್ಚಿದ ಪ್ರದೇಶಗಳು

• ರಿಚ್ಮಂಡ್ ರಸ್ತೆ, ಸುರಂಜನ್ ದಾಸ್ ರಸ್ತೆ, ಓಲ್ಡ್ ಮದ್ರಾಸ್ ರಸ್ತೆ, ಕಾಮರಾಜ್ ರಸ್ತೆ, ಜನರಲ್ ಕೆ.ಎಸ್. ತಿಮ್ಮಯ್ಯ ರಸ್ತೆ, ವಿಕ್ಟೋರಿಯಾ ರಸ್ತೆ. ಅರಮನೆ ರಸ್ತೆ ವ್ಯಾಪ್ತಿಯಲ್ಲಿ ರಸ್ತೆ ಗುಂಡಿ ಮುಚ್ಚುವ ಮತ್ತು ಪ್ಯಾಚ್ ವರ್ಕ್ ಕಾಮಗಾರಿ ನಡೆಸಲಾಗಿದೆ ಎಂದು ಮಾಹಿತಿ ನೀಡಿದರು.

## ನಮ್ಮ ಮೆಟ್ರೋ ನೀಲಿ ಮಾರ್ಗದ ಪ್ರಯಾಣಿಕರಿಗೆ ಗುಡ್ ನ್ಯೂಸ್

### ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುವ ನೀಲಿ ಮಾರ್ಗದಲ್ಲಿ ಲಗೇಜ್ ರ‍್ಯಾಕ್ ಸೌಲಭ್ಯ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ವಿಮಾನ ನಿಲ್ದಾಣ ಮಾರ್ಗದಲ್ಲಿ ಸಂಚರಿಸುವ ಮೆಟ್ರೋ ರೈಲಿನಲ್ಲಿ ಲಗೇಜ್ ರ‍್ಯಾಕ್ ಸೌಲಭ್ಯ ಕಲ್ಪಿಸಲು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ಮುಂದಾಗಿದೆ.

ನಮ್ಮ ಮೆಟ್ರೋ ನೀಲಿ ಮಾರ್ಗವು ರೇಷ್ಮೆ ಮಂಡಳಿ–ಕೆ.ಆರ್.ಪುರ ಮೂಲಕ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಸಂಪರ್ಕಿಸುತ್ತದೆ. ಮುಂಬರುವ ದಿನಗಳಲ್ಲಿ ಈ ಮಾರ್ಗದಲ್ಲಿ ಸಂಚರಿಸುವ ರೈಲಿನಲ್ಲಿ ಲಗೇಜ್‌ಗಳಿಗಾಗಿ ಪ್ರತ್ಯೇಕ ರ‍್ಯಾಕ್ ಬರಲಿದೆ. ಪ್ರತಿ ಬೋಗಿಯ ಎರಡು ತುದಿಗಳಲ್ಲಿ ಈ ಲಗೇಜ್ ರ‍್ಯಾಕ್ ಇರಲಿದೆ. ಸದ್ಯ ಸಂಚರಿಸುತ್ತಿರುವ ರೈಲುಗಳಲ್ಲಿ ಲಗೇಜ್ ರ‍್ಯಾಕ್ ನಿರ್ಮಾಣ ಮಾಡಬೇಕೆಂದುಕೊಂಡಿರುವ ಸ್ಥಳದಲ್ಲಿ ಇಬ್ಬರು ಕಳಿತುಕೊಳ್ಳುವಷ್ಟು ಆಸನದ ವ್ಯವಸ್ಥೆ ಕಲ್ಪಿಸಲಾಗಿದೆ.

ವಿಮಾನ ಪ್ರಯಾಣಿಕರನ್ನು ಗಮನದಲ್ಲಿಟ್ಟುಕೊಂಡು ಈ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ವಿಮಾನ ಪ್ರಯಾಣಿಕರ ಲಗೇಜು ಹೆಚ್ಚಿರುವುದರಿಂದ ಪ್ರಯಾಣಿಕರಿಗೆ ತೊಂದರೆಯಾಗದ ರೀತಿಯಲ್ಲಿ ಕೊಂಡೊಯ್ಯುವುದಕ್ಕೆ ಅನುಕೂಲ ಮಾಡಿಕೊಡಬೇಕೆನ್ನುವ ಉದ್ದೇಶದಿಂದ ಪ್ರತ್ಯೇಕ ಲಗೇಜ್ ರ‍್ಯಾಕ್ ಕಲ್ಪಿಸಲಾಗುತ್ತಿದೆ.

**ಮೆಟ್ರೋ ಲಗೇಜ್ ನಿಯಮ:** ಈಗಿರುವ ಮೆಟ್ರೋ ರೈಲುಗಳಲ್ಲಿ ಲಗೇಜ್‌ಗಾಗಿ ಪ್ರತ್ಯೇಕ ವ್ಯವಸ್ಥೆ ಇಲ್ಲ. 60 ಸೆಂಟಿ ಮೀಟರ್ ಉದ್ದ, 45 ಸೆಂಟಿ ಮೀಟರ್ ಅಗಲ, 25 ಸೆಂಟಿ ಮೀಟರ್ ಎತ್ತರದ ಬ್ಯಾಗ್‌ಗಳಲ್ಲಿ ಗರಿಷ್ಠ 15 ಕೆ.ಜಿ. ತೂಕದ ವಸ್ತುಗಳನ್ನು ಉಚಿತವಾಗಿ ಒಯ್ಯಬಹುದು. ಒಬ್ಬರು ಇಂಥ ಒಂದು ಬ್ಯಾಗ್ ಮಾತ್ರ ಕೊಂಡೊಯ್ಯಬಹುದಾಗಿದ್ದು, ಅದಕ್ಕಿಂತ ಭಾರವಿರುವ ಮತ್ತು ಅಧಿಕ ಬ್ಯಾಗ್‌ಗಳಿದ್ದರೆ 30 ರೂ. ಶುಲ್ಕ ನೀಡಬೇಕು. ಶುಲ್ಕ ಪಾವತಿಸದವರಿಗೆ 250 ರೂ. ರವರೆಗೆ ದಂಡ ವಿಧಿಸಲು ಅವಕಾಶವಿದೆ.

**ನೀಲಿ ಮಾರ್ಗದ ಬಗ್ಗೆ:** ಕೇಂದ್ರ ರೇಷ್ಮೆ ಸಂಸ್ಥೆಯಿಂದ (ಸೆಂಟ್ರಲ್ ಸಿಲ್ಕ್ ಬೋರ್ಡ್) ಕೆ.ಆರ್.ಪುರದವರೆಗೆ (ಹಂತ 2 ಎ) ಮತ್ತು ಕೆ.ಆರ್.ಪುರದಿಂದ ವಿಮಾನ ನಿಲ್ದಾಣದವರೆಗೆ (ಹಂತ 2 ಬಿ) ಎರಡು ಹಂತದಲ್ಲಿ ಕಾಮಗಾರಿ ನಡೆಯುತ್ತಿದೆ. ಒಟ್ಟು 58.19 ಕಿ.ಮೀ. ಮಾರ್ಗದಲ್ಲಿ 29 ನಿಲ್ದಾಣಗಳಿವೆ.

### ಲಗೇಜ್‌ಗಾಗಿ ಲಾಕರ್ ಸೌಲಭ್ಯ

ಪ್ರಯಾಣಿಕರ ಅನುಕೂಲಕ್ಕಾಗಿ ನಮ್ಮ ಮೆಟ್ರೋ ಡಿಜಿಟಲ್ ಲಗೇಜ್ ಲಾಕರ್ ಸೌಲಭ್ಯ ಕಲ್ಪಿಸಿದೆ. ಸ್ಮಾರ್ಟ್ ಡಿಜಿಟಲ್ ಲಗೇಜ್ ಲಾಕರ್ ಸೌಲಭ್ಯವನ್ನು ಈಗ ಮೆಜೆಸ್ಟಿಕ್, ಚಿಕ್ಕಪೇಟೆ, ಬೆನ್ನಿಗಾನಹಳ್ಳಿ ಸೇರಿ 3 ನಿಲ್ದಾಣಗಳಲ್ಲಿ ಪ್ರಾಯೋಗಿಕವಾಗಿ ಕಲ್ಪಿಸಲಾಗಿದೆ. ಪ್ರಯಾಣಿಕರು ತಮ್ಮ ಲಗೇಜ್‌ಗಳನ್ನು ಇದರಲ್ಲಿಟ್ಟು ಮೆಟ್ರೋದಲ್ಲಿ ತಮ್ಮ ಸ್ಥಳಗಳಿಗೆ ಪ್ರಯಾಣಿಸಿ ಮತ್ತೆ ಹಿಂದುರುಗಿದಾಗ ಮರಳಿ ಪಡೆಯಬಹುದು. ಲಗೇಜ್‌ಗೆ 6 ಗಂಟೆಗಳಿಗೆ (ಮಧ್ಯಮ ಗಾತ್ರ) ಕೇವಲ 70 ರೂಪಾಯಿ ಮತ್ತು ದೊಡ್ಡ ಗಾತ್ರದ ಲಗೇಜ್‌ಗೆ 100 ರೂಪಾಯಿ ನಿಗದಿಪಡಿಸಲಾಗಿದೆ.



ಉದಯವಾಹಿನಿ ಚಿತ್ರ

### ದೊಡ್ಡ ಗಾತ್ರದ ಲಗೇಜ್‌ನಿಂದ 1.17 ಕೋಟಿ ರೂ. ದಂಡ ಸಂಗ್ರಹ

ಬಿಎಂಆರ್‌ಸಿಎಲ್ 2019-2023ರ ಅವಧಿಯಲ್ಲಿ ದೊಡ್ಡ ಗಾತ್ರದ ಲಗೇಜ್‌ನಿಂದ 1.17 ಕೋಟಿ ರೂ. ದಂಡ ಸಂಗ್ರಹಿಸಿದೆ. ಕೋವಿಡ್ ಅವಧಿ ಮತ್ತು ನಂತರದ ಅವಧಿಯಲ್ಲಿ ಲಗೇಜ್ ದಂಡ ಪ್ರಮಾಣ ತುಸು ಕಡಿಮೆಯಾಗಿದೆ. 2018ರಲ್ಲಿ 36 ಲಕ್ಷ ರೂ., 2019ರಲ್ಲಿ 29 ಲಕ್ಷ ರೂ., 2022ರಲ್ಲಿ 36.7 ಲಕ್ಷ ರೂ. ಲಗೇಜ್ ದಂಡದ ಮೂಲಕ ಸಂಗ್ರಹವಾಗಿದೆ. ಗರಿಷ್ಠ ದಂಡವನ್ನು ಸಂಗ್ರಹಿಸಲಾದ ಮೆಟ್ರೋ ನಿಲ್ದಾಣಗಳೆಲ್ಲವೂ ಬಸ್ ಮತ್ತು ರೈಲು ನಿಲ್ದಾಣಗಳ ಬಳಿ ಇರುವುದು ಗಮನಾರ್ಹ. ಯಶವಂತಪುರ ನಿಲ್ದಾಣವು ಅಗ್ರಸ್ಥಾನ ಹೊಂದಿದ್ದರೆ, ನಂತರ ಚಿಕ್ಕಪೇಟೆ, ಕೆಂಪೇಗೌಡ, ಬೈಯಪ್ಪನಹಳ್ಳಿ ಮತ್ತು ಯಲಚೇನಹಳ್ಳಿ ನಿಲ್ದಾಣಗಳಿವೆ.

# ಮೈಸೂರಿಗೆ ಹೆಚ್ಚಿನ ಪ್ರವಾಸಿಗರು, ದೇಶ-ವಿದೇಶಿಗರ ಸಂಖ್ಯೆಯಲ್ಲೂ ಹೆಚ್ಚಳ

## ಮೈಸೂರು ಪ್ರವಾಸೋದ್ಯಮಕ್ಕೆ ಬೂಸ್ಟರ್ ನೀಡಿದ ದಸರಾ, ಒಂದೇ ದಿನ ಚಾಮುಂಡಿ ಬೆಟ್ಟಕ್ಕೆ 80,000 ಜನ ಭೇಟಿ

• **ಉದಯವಾಹಿನಿ, ಮೈಸೂರು**

ನಾಡಹಬ್ಬ ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ಮೈಸೂರಿನತ್ತ ಕರ್ನಾಟಕ ಸೇರಿದಂತೆ ಅಂತಾರಾಜ್ಯ ಪ್ರವಾಸಿಗರ ದಂಡೇ ಹರಿದುಬರುತ್ತಿದ್ದು, ವಿಜಯದಶಮಿವರೆಗೂ ನಗರದ ಮಧ್ಯಭಾಗದಲ್ಲಿರುವ ಬಹುತೇಕ ಹೋಟೆಲ್‌ಗಳು ಭರ್ತಿಯಾಗಿವೆ. ಪ್ರತಿಶತ ಬುಕ್ಕಿಂಗ್ ಆಗಿವೆ. ಒಂದೇ ದಿನ ಚಾಮುಂಡಿಬೆಟ್ಟಕ್ಕೆ 80 ಸಾವಿರ ಭಕ್ತರು ಭೇಟಿ ನೀಡಿದ್ದು, ಪ್ರವಾಸೋದ್ಯಮಕ್ಕೆ ಹೊಸ ಬೂಸ್ಟರ್ ನೀಡಿದಂತಾಗಿದೆ. ದಸರಾ ಕೇವಲ ಒಂದು ಧಾರ್ಮಿಕ ಅಥವಾ ಸಾಂಸ್ಕೃತಿಕ ಉತ್ಸವವಾಗಿ ಉಳಿದಿಲ್ಲ, ಪ್ರತಿವರ್ಷ ರಾಜ್ಯ ಆರ್ಥಿಕತೆಗೆ ಕೊಡುವ ಎಕಾನಮಿ ಬೂಸ್ಟರ್ ಆಗಿ ರೂಪಾಂತರಗೊಂಡಿದೆ. ಕಳೆದ ಮೂರು-ನಾಲ್ಕು ವರ್ಷಗಳಿಂದ ಕೋವಿಡ್, ಬರಗಾಲದಿಂದ ಕಂಗೆಟ್ಟಿದ್ದ ಮೈಸೂರು ಪ್ರವಾಸೋದ್ಯಮಕ್ಕೆ ನಾಡಹಬ್ಬ ದಸರಾ ಹೊಸ ಚೈತನ್ಯ ತುಂಬಿದೆ.

ಈ ಬಾರಿ ರಾಜ್ಯದಲ್ಲಿ ಉತ್ತಮ ಮಳೆ, ಬೆಳೆಯಾಗಿರುವುದರಿಂದ ನಾಡು ಸಮೃದ್ಧವಾಗಿದೆ. ಇದಕ್ಕೆ ಇಂಬು ನೀಡುವಂತೆ ಕೇಂದ್ರ ಸರಕಾರ ಕೆಲವು ಅಗತ್ಯ ವಸ್ತುಗಳ ಮೇಲಿನ ಜಿಎಸ್‌ಟಿ ಕಡಿಮೆ ಮಾಡಿದೆ. ಇದು ಜನರಲ್ಲಿ ಖರೀದಿ ಮನೋಭಾವ ಹೆಚ್ಚು ಮಾಡಿದೆ. ಜತೆಗೆ ದೇಶ-ವಿದೇಶಗಳಿಂದ ಪ್ರವಾಸಿಗರು ಮೈಸೂರಿನತ್ತ ಹೆಚ್ಚು ಸಂಖ್ಯೆಯಲ್ಲಿ ಬರುತ್ತಿದ್ದಾರೆ.

**ಗರಿಗೆದರಿದ ವ್ಯಾಪಾರ-ವಹಿವಾಟು:** ಮೈಸೂರಿನ ಆತಿಥ್ಯ ವಲಯ, ಸಾರಿಗೆ ವಲಯ, ಟೂರ್ಸ್ ಆ್ಯಂಡ್ ಟ್ರಾವೆಲ್ಸ್, ಆಟೋ,




ಟ್ಯಾಕ್ಸಿ, ಶಾಪಿಂಗ್ ಮಾಲ್, ಟಾಂಗಾ ಗಾಡಿ, ಜವಳಿ, ಕೈಗಾರಿಕಾ ವಲಯ, ಮೈಸೂರು ಬ್ರ್ಯಾಂಡ್ ವಸ್ತುಗಳು, ಸಿಹಿತಿಂಡಿ, ಬೇಕರಿ ವಲಯ, ಸಣ್ಣಪುಟ್ಟ ವ್ಯಾಪಾರಿಗಳಿಗೂ ದಸರಾ ವರದಾನವಾಗಿ ಪರಿಣಮಿಸಿದೆ. ಇದರಿಂದ ವ್ಯಾಪಾರ-ವಹಿವಾಟು ಉತ್ತಮವಾಗಿ ನಡೆಯುತ್ತಿದ್ದು, ಪ್ರವಾಸೋದ್ಯಮಕ್ಕೆ ಶುಕ್ರದೆಸೆ ಶುರುವಾಗಿದೆ.

ಚಾಮುಂಡಿಬೆಟ್ಟ, ಅರಮನೆ, ಆಹಾರಮೇಳ, ಏರ್‌ಶೋ, ವಸ್ತುಪ್ರದರ್ಶನ ವೀಕ್ಷಣೆಗೆ ಜನಸಾಗರವೇ ಹರಿದುಬರುತ್ತಿದೆ.

**ಜನರ ದಂಡು:** ರಾಜ್ಯದ ಪ್ರಮುಖ ಧಾರ್ಮಿಕ ಕೇಂದ್ರವಾದ ಚಾಮುಂಡಿಬೆಟ್ಟಕ್ಕೆ ಪ್ರವಾಸಿಗರ ದಂಡೇ ಹರಿದುಬರುತ್ತಿದೆ.

ಶಾಲಾ ಮಕ್ಕಳಿಗೆ ದಸರೆ ರಜೆ ಇರುವುದರಿಂದ ಪಾಲಕರು ಕುಟುಂಬ ಸಮೇತರಾಗಿ ಮೈಸೂರು ಪ್ರವಾಸ ಕೈಗೊಳ್ಳುತ್ತಿದ್ದಾರೆ.

**ಚಾಮುಂಡಿಬೆಟ್ಟಕ್ಕೆ ದಾಖಲೆ ಪ್ರವಾಸಿಗರು**

**ಚಾಮುಂಡಿಬೆಟ್ಟಕ್ಕೆ ಭೇಟಿ ನೀಡುತ್ತಿರುವ ಪ್ರವಾಸಿಗರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಸೆ. 27ರಂದು ಒಂದೇ ದಿನ 80 ಸಾವಿರಕ್ಕೂ ಅಧಿಕ ಭಕ್ತರು ತಾಯಿ ಚಾಮುಂಡೇಶ್ವರಿ ದರ್ಶನ ಪಡೆದುಕೊಂಡಿದ್ದಾರೆ. ಈ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ನಿರೀಕ್ಷೆ ಇದೆ. ಲಕ್ಷಕ್ಕೂ ಹೆಚ್ಚು ಭಕ್ತರು ಬಂದರೆ ಅದಕ್ಕೆ ಬೇಕಾದ ಅಗತ್ಯ ಸಿದ್ಧತೆಗಳನ್ನು ಈಗಾಗಲೇ ಮಾಡಿಕೊಳ್ಳಲಾಗಿದೆ, ಎಂದು ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ. ರೂಪಾ ತಿಳಿಸಿದ್ದಾರೆ.**

ನಿತ್ಯವೂ ಸಾವಿರಾರು ಪ್ರವಾಸಿಗರು ಚಾಮುಂಡೇಶ್ವರಿ ದರ್ಶನ ಪಡೆಯುತ್ತಿದ್ದಾರೆ. ಇದಲ್ಲದೆ ವಸ್ತು ಪ್ರದರ್ಶನಕ್ಕೂ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದಾರೆ. ವಾರಾಂತ್ಯವಾದ ಸೆ. 27, 28ರಂದು ನಿತ್ಯ 1 ಲಕ್ಷಕ್ಕೂ ಹೆಚ್ಚು ಜನರು ವಸ್ತುಪ್ರದರ್ಶನಕ್ಕೆ ಭೇಟಿ ನೀಡಿದ್ದಾರೆ! ವಿಶ್ವ ಪ್ರವಾಸೋದ್ಯಮ ದಿನದ ಬಳಿಕ ಮೈಸೂರಿಗೆ ಸಾಕಷ್ಟು ಪ್ರವಾಸಿಗರು ಆಗಮಿಸುತ್ತಿದ್ದಾರೆ.

**ಅರಮನೆ ಅಂಗಳ ಭರ್ತಿ**

**''ದಸರೆ ಹಿನ್ನೆಲೆಯಲ್ಲಿ ಅರಮನೆಯಲ್ಲಿ ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿದೆ. ನಿತ್ಯ ಖ್ಯಾತ ಸಂಗೀತ ಕಲಾವಿದರು, ವಿದ್ವಾನ್‌ಗಳು ತಮ್ಮ ಸಂಗೀತ ಕಛೇರಿ ನೀಡುತ್ತಿದ್ದಾರೆ. 10 ಸಾವಿರ ಆಸನ ವ್ಯವಸ್ಥೆ ಮಾಡಲಾಗಿದೆ. ಪ್ರವಾಸಿಗರು ಸಂಜೆಯಿಂದ ರಾತ್ರಿವರೆಗೂ ಅಂದಾಜು 50 ಸಾವಿರಕ್ಕೂ ಹೆಚ್ಚು ಮಂದಿ ಸಾಂಸ್ಕೃತಿಕ ಕಾರ್ಯಕ್ರಮ ವೀಕ್ಷಣೆ ಮಾಡುತ್ತಿದ್ದಾರೆ. ಇದಲ್ಲದೆ ಸೆ. 27ರಂದು 13 ಸಾವಿರ ಪ್ರವಾಸಿಗರಿಗೆ ಟಿಕೆಟ್ ನೀಡಲಾಗಿದ್ದು, ಅರಮನೆ ಸೌಂದರ್ಯ ವೀಕ್ಷಿಸಿದ್ದಾರೆ, ಎಂದು ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್.ಸುಬ್ರಹ್ಮಣ್ಯ ತಿಳಿಸಿದ್ದಾರೆ.**

ವಿಜಯದಶಮಿವರೆಗೂ ಬಹುತೇಕ ನಗರ ಮಧ್ಯಭಾಗದಲ್ಲಿರುವ ಹೋಟೆಲ್‌ಗಳ ಕೊಠಡಿಗಳು ಶೇ. 100ರಷ್ಟು ಬುಕ್ಕಿಂಗ್ ಆಗಿವೆ. ರಿಂಗ್ ರಸ್ತೆ ಮತ್ತು ವಿವಿಧ ಬಡಾವಣೆಗಳಲ್ಲಿರುವ ಹೋಟೆಲ್‌ಗಳಲ್ಲಿ ಕೊಠಡಿಗಳು ಶೇ. 80ರಷ್ಟು ಬುಕ್ಕಿಂಗ್ ಆಗಿವೆ ಎಂದು ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಸಿ. ತಿಳಿಸಿದ್ದಾರೆ.

# ರೈತರನ್ನು ಎತ್ತಿ ಕಟ್ಟುವುದನ್ನು ಎಚ್‌ಡಿಕೆ ಬಿಡಲಿ: ಬಾಲಕೃಷ್ಣ ತಿರುಗೇಟು

• **ಉದಯವಾಹಿನಿ, ಬಿಡದಿ**

ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಜಿಬಿಐಟಿ ಯೋಜನೆಯು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಕನಸಿನ ಕೂಸು. ನಾವೀಗ ಅವರ ಕನಸನ್ನು ನನಸು ಮಾಡುತ್ತಿದ್ದೇವೆ.

ಹೀಗಿರುವಾಗ, ರಾಜಕೀಯಕ್ಕಾಗಿ ರೈತರನ್ನು ಎತ್ತಿ ಕಟ್ಟುವ ಕೆಲಸವನ್ನು ಮೊದಲು ಬಿಡಲಿ' ಎಂದು ಶಾಸಕ ಎಚ್.ಸಿ. ಬಾಲಕೃಷ್ಣ ತಿರುಗೇಟು ನೀಡಿದರು.ಯೋಜನೆ ವಿರೋಧಿಸಿ ಹೋಬಳಿಯ ಭೈರಮಂಗಲದಲ್ಲಿ ಭಾನುವಾರ ನಡೆದಿದ್ದ ಜೆಡಿಎಸ್ ಪ್ರತಿಭಟನೆ ಕುರಿತು ಪಟ್ಟಣದಲ್ಲಿ ಸೋಮವಾರ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಯೋಜನಾ ಪ್ರದೇಶವನ್ನು ಕೆಂಪುವಲಯಕ್ಕೆ ಸೇರಿಸಿದ್ದೇ ಎಚ್‌ಡಿಕೆ. ಬಿಜೆಪಿಯವರು ಬಂದು ಪ್ರತಿಭಟಿಸಿದರು ಎಂದು ಈಗ ಜೆಡಿಎಸ್‌ನವರು ಪ್ರತಿಷ್ಠೆಗಾಗಿ ಪ್ರತಿಭಟಿಸಿದ್ದಾರೆ. ಇದರಲ್ಲಿ ರಾಜಕೀಯ ಬಿಟ್ಟರೆ ಬೇರೇನೂ ಇಲ್ಲ' ಎಂದರು.

'ಯೋಜನೆಗೆ ಭೂಮಿ ಕೊಟ್ಟವರಿಗೆ ಶೇ 40ರಷ್ಟು ಭೂಮಿ ಕೊಡಲು ನಾನು ನಿರ್ಧರಿಸಿದ್ದೆ ಎಂದು



ಕುಮಾರಸ್ವಾಮಿ ಅವರು ವೀಡಿಯೋ ಕಾನ್ಫರೆನ್ಸ್ ಭಾಷಣದಲ್ಲಿ ತಿಳಿಸಿದ್ದಾರೆ. ಆದರೆ, ನಾವು ವಸತಿ ಉದ್ದೇಶದ ಭೂಮಿಯಲ್ಲಿ 50:50 ಅನುಪಾತದಲ್ಲಿ ಹಾಗೂ ವಾಣಿಜ್ಯ ಉದ್ದೇಶದ ಭೂಮಿಯಲ್ಲಿ 45:50 ಅನುಪಾತದಲ್ಲಿ ರೈತರಿಗೆ ಪಾಲುದಾರಿಕೆ ಕೊಡುತ್ತಿದ್ದೇವೆ. ಎಚ್‌ಡಿಕೆಗಿಂತ ಹೆಚ್ಚಿನ ಕೊಡುಗೆ ನೀಡುತ್ತಿದ್ದೇವೆ' ಎಂದು ತಿಳಿಸಿದರು.

'ನಾನು ರೈತರ ಜೊತೆ ಸಭೆ ಮಾಡಿಲ್ಲ ಎನ್ನುವ ಎಚ್‌ಡಿಕೆ. ಆಗ ರೈತರ ಜೊತೆ ಎಷ್ಟು ಸಲ ಸಭೆ ಮಾಡಿದ್ದರು ಸಭೆಗಿಂತ ಹೆಚ್ಚಾಗಿ ನಾವು ಸೂಕ್ತ ಪರಿಹಾರ ಸೇರಿದಂತೆ ರೈತರ ನಿರೀಕ್ಷೆಗಳನ್ನು ತಲುಪುವ ಕೆಲಸ ಮಾಡುತ್ತಿದ್ದೇವೆ. ಹಲವು ರೈತರನ್ನು ಮನೆಗೆ ಕರೆದು ಮಾತನಾಡಿದ್ದೇನೆ. ಶೀಘ್ರದಲ್ಲೇ ಎಲ್ಲಾ ಮಾಹಿತಿಯೊಂದಿಗೆ ಸುದ್ದಿಗೋಷ್ಠಿ ಮಾಡುವೆ' ಎಂದು ಹೇಳಿದರು.

**'ಕುಮಾರಸ್ವಾಮಿ ಅವರ ಬಳಿ ನಮ್ಮ ಬಗ್ಗೆ ಏನಾದರೂ ದಾಖಲೆಗಳಿದ್ದರೆ ಸಿಬಿಐ ಸೇರಿದಂತೆ ಯಾರಿಗಾದರೂ ದೂರು ಕೊಟ್ಟು ತನಿಖೆ ಮಾಡಿಸಲಿ. ಇತ್ತೀಚೆಗೆ ಅನಿತಾ ಕುಮಾರಸ್ವಾಮಿ ಅವರು ಜಿಬಿಡಿಎ ಆಯುಕ್ತರಿಗೆ ಪತ್ರ ಬರೆದು ಏನೆಂದು ಕೋರಿದ್ದಾರೆ ಎಂದು ಎಲ್ಲಾರಿಗೂ ಗೊತ್ತಿದೆ. ಬೇನಾಮಿ ಹೆಸರಿನಲ್ಲಿ ಆಸ್ತಿ ಹೊಂದಿದ್ದ ಅವರು, ತಮ್ಮ ಹೆಸರಿಗೆ ನೋಟಿಸ್ ಮತ್ತು ದಾಖಲೆ ಕೊಡುವಂತೆ ಕೇಳಿಲ್ಲವೇ ಎಲ್ಲಾರೂ ಗಾಜಿನ ಮನೆಯಲ್ಲಿದ್ದೇವೆ. ಹಾಗಾಗಿ, ಕಲ್ಲು ಹೊಡೆಯುವುದು ಬೇಡ' ಎಂದರು.**

# ಸಾತನೂರು ಸೊಸೈಟಿಗೆ ರೂ.28 ಲಕ್ಷ ಲಾಭಾಂಶ




• **ಉದಯವಾಹಿನಿ, ಕನಕಪುರ**

ತಾಲ್ಲೂಕಿನ ಸಾತನೂರು ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಮಹಾಸಭೆಯು ಸಂಘದ ಅಧ್ಯಕ್ಷ ಎಸ್.ಆರ್.ನಿಜಲಿಂಗಪ್ಪ ಅಧ್ಯಕ್ಷತೆಯಲ್ಲಿ ನಡೆಯಿತು.

ಕಟ್ಟಡ ನಿರ್ಮಾಣ ಮಾಡಲು ಅನುದಾನದ ಕೊರತೆ ಇದೆ. ಅದಕ್ಕೆ ಬೇಕಾಗುವ ಅನುದಾನವನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತು ಬಮುಲ್ ಅಧ್ಯಕ್ಷ ಡಿ.ಕೆ.ಸುರೇಶ್ ಅವರಲ್ಲಿ ಮನವಿ ಮಾಡಿದ್ದು ಅವರು ವಿಶೇಷ ಕಾಳಜಿಯಿಂದ ಸೊಸೈಟಿಗೆ ಅನುದಾನದ ಭರವಸೆ ನೀಡಿದ್ದಾರೆ ಎಂದು ಎಸ್.ಆರ್.ನಿಜಲಿಂಗಪ್ಪ ಹೇಳಿದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಭಿಷೇಕ್.ಪಿ, 2024-25ನೇ ಸಾಲಿನ ವಾರ್ಷಿಕ ವರದಿಯನ್ನು ಸಭೆಯಲ್ಲಿ ಮಂಡಿಸಿದರು. ಸೊಸೈಟಿಯು ವಾರ್ಷಿಕವಾಗಿ ರೂ.13.50 ಕೋಟಿ ವಹಿವಾಟು ನಡೆಸಿ ರೂ.28,39,555 ಲಾಭಗಳಿಸಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಂಘದ ಉಪಾಧ್ಯಕ್ಷೆ ಗೀತಾ.ವಿ.ಎಸ್, ನಿರ್ದೇಶಕರಾದ ಕೆ.ನಾರಾಯಣಗೌಡ, ಆರ್. ಮಧುಸೂಧನ್, ಕೆ.ಎಸ್.ಧನಂಜಯ ಕುಮಾರ್, ಎಂ.ರಾಜು, ಸಿದ್ದಪ್ಪ, ಸುರೇಶ್, ಮಹದೇವಮ್ಮ, ರಾಜಶೇಖರ ಮೂರ್ತಿ, ಬಿಡಿಸಿಸಿ ಬ್ಯಾಂಕ್ ಮೇಲ್ವಿಚಾರಕ ಆನಂದ್, ಮುಖಂಡರಾದ ಎಸ್.ಎಸ್.ಶಂಕರ್, ರಾಮಣ್ಣ, ಸಾತನೂರು ನಾಗರಾಜು, ಸೊಸೈಟಿ ಸಿಬ್ಬಂದಿ ಯೋಗೇಶ್, ಪ್ರಭುಸ್ವಾಮಿ, ಸುರೇಶ್ ಉಪಸ್ಥಿತರಿದ್ದರು.

# ಮನೆ ನಿರ್ಮಾಣಕ್ಕೆ 4 ಎಕರೆ ಭೂಮಿ ಮಂಜೂರು




• **ಉದಯವಾಹಿನಿ, ಕೆಜಿಎಫ್**

ನಗರದ ಹೊರವಲಯದ ಮಲ್ಲಂಪಲ್ಲಿ ಗ್ರಾಮದ ಬಳಿ ಮನೆ ಇಲ್ಲದವರಿಗೆ ಮನೆ ನಿರ್ಮಾಣ ಮಾಡಲು ಜಿಲ್ಲಾಡಳಿತ ನಾಲ್ಕು ಎಕರೆ ಜಮೀನನ್ನು ಮಂಜೂರು ಮಾಡಿದೆ ಎಂದು ದಲಿತ ಸಮರ ಸೇನೆ ಮುಖಂಡೆ ಪವಿತ್ರಾ ಹೇಳಿದ್ದಾರೆ. ನಗರದ ಊರಿಗಾಂ ಫೈಲೈಟ್ಸ್ ಬಳಿ ನಿವೇಶನ ರಹಿತ ಮಹಿಳೆಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲಾಡಳಿತವು ಈ ಮೊದಲು ಒಂಬತ್ತು ಎಕರೆ ಜಮೀನನ್ನು ಅಜ್ಜಂಪಲ್ಲಿ ಗ್ರಾಮದ ಬಳಿ ಸ್ಲಂ ಬೋರ್ಡ್‌ಗೆ ನೀಡಿತ್ತು. ಸ್ಥಳ ಪರಿಶೀಲನೆ ನಡೆಸಿದ್ದ ಮಂಡಳಿ ಅಧಿಕಾರಿಗಳು ನಕ್ಷೆಯನ್ನು ತಯಾರು ಮಾಡಿದ್ದರು. ಫಲಾನುಭವಿಗಳ ಪಟ್ಟಿಗೆ ಜಿಲ್ಲಾಡಳಿತ ಒಪ್ಪಿಗೆ ಸಹ ನೀಡಿತ್ತು.

ನಂತರ, ಮಂಜೂರಾದ ಜಮೀನನ್ನು ಕೈಗಾರಿಕೆ ಅಭಿವೃದ್ಧಿಗೆ ನೀಡಲಾಯಿತು. ಜಿಲ್ಲಾಡಳಿತದ ಕ್ರಮವನ್ನು ಪ್ರಶ್ನಿಸಿ ಮಹಿಳೆಯರು ಹೈಕೋರ್ಟ್ ಮೆಟ್ಟಿಲೇರಿದ್ದರು. ಸೆ. 19 ರಂದು ನ್ಯಾಯಾಧೀಶ ಬಿ.ಎಂ.ಶ್ಯಾಂ ಪ್ರಸಾದ್ ಅವರಿದ್ದ ಪೀಠದಲ್ಲಿ ನಡೆದ ವಿಚಾರಣೆಯಲ್ಲಿ ಮನೆ ಇಲ್ಲದವರ ಪರವಾಗಿ ತೀರ್ಪು ಬಂದಿದೆ.

ತೀರ್ಪು ಬರಲು ಶಾಸಕಿ ಎಂ.ರೂಪಕಲಾ ಮತ್ತು ಜಿಲ್ಲಾಧಿಕಾರಿ ಅವರು ಪೂರಕ ಮಾಹಿತಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು ಎಂದು ಹೇಳಿದರು.

ನಗರದಲ್ಲಿ ಪ್ರತಿನಿತ್ಯ ಸಾವಿರಾರು ಮಂದಿ ದಿನನಿತ್ಯ ಬೆಂಗಳೂರಿಗೆ ಉದ್ಯೋಗಕ್ಕಾಗಿ ಹೋಗುತ್ತಾರೆ.

ಅವರಿಗೆ ಒಂದು ಸೂರು ಇಲ್ಲ. ಇಂತಹ 36 ಸಾವಿರ ಕುಟುಂಬಗಳಿಗೆ ಸ್ವಂತ ಮನೆ ಇಲ್ಲ. ಅವರೆಲ್ಲರೂ ಬಿಜಿಎಂಎಲ್‌ನ ಮುರುಕು ಮನೆಯಲ್ಲಿ ವಾಸ ಮಾಡುತ್ತಿದ್ದಾರೆ. ಅಂತವರಿಗೆ ಮನೆ ನೀಡಲು ಸಂಘಟನೆ ಹೋರಾಟ ನಡೆಸಿತ್ತು. ಹೋರಾಟದ ಫಲವಾಗಿ ಶಾಸಕಿ ನಾಲ್ಕು ಎಕರೆ ಜಮೀನನ್ನು ಮಲ್ಲಂಪಲ್ಲಿ ಗ್ರಾಮದ ಬಳಿ ನೀಡಲು ಜಿಲ್ಲಾಧಿಕಾರಿಗೆ ಸಲಹೆ ನೀಡಿದ್ದರು. ಅದರಂತೆ ಜಿಲ್ಲಾಧಿಕಾರಿ ಜಮೀನು ಮಂಜೂರು ಮಾಡುವುದಾಗಿ ಹೈಕೋರ್ಟ್‌ಗೆ ಮನವರಿಕೆ ಮಾಡಿಕೊಂಡ ಫಲವಾಗಿ ಮನೆ ಇಲ್ಲದವರೆರಿಗೆ ಸ್ವಂತ ಮನೆ ಹೊಂದುವ ಅವಕಾಶ ಒದಗಿ ಬಂದಿದೆ ಎಂದರು.

**ಸ್ಲಂ ಬೋರ್ಡ್ ಮಂಜೂರಾದ ಜಾಗದಲ್ಲಿ 405 ಮನೆಗಳನ್ನು ಮೊದಲ ಹಂತದಲ್ಲಿ ನಿರ್ಮಾಣ ಮಾಡಲಿದೆ. 2 9 + 1 ರೀತಿಯ ಮನೆಗಳನ್ನು ನಿರ್ಮಾಣ ಮಾಡಲಾಗುವುದು. ಮೊದಲು ಆಯ್ಕೆಯಾಗಿದ್ದ ಫಲಾನುಭವಿಗಳೇ ಹೊಸದಾಗಿ ನಿರ್ಮಾಣವಾಗುವ ಬಡಾವಣೆಯ ಫಲಾನುಭವಿಗಳಾಗಿದ್ದಾರೆ. ನಗರದ ಟ್ಯಾಂಕ್ ಬ್ಲಾಕ್, ಕೋರಮಂಡಲ್, ಹೆನ್ರಿಸ್, ಚಾಂಪಿಯನ್, ಫಿಶ್ ಲೈನ್, ಮಿಲ್ ಬ್ಲಾಕ್, ಕೆನಡೀಸ್ ಮೊದಲಾದ ಬಡಾವಣೆಗಳ ಬಡವರಿಗೆ ಮೊದಲ ಹಂತದಲ್ಲಿ ಮನೆಗಳನ್ನು ಪಡೆಯಲಿದ್ದಾರೆ ಎಂದು ತಿಳಿಸಿದರು. ಇನ್ನೂ ಹೆಚ್ಚಿನ ಸಂಖ್ಯೆ ದಿನಗೂಲಿ ಕಾರ್ಮಿಕರು ಇದ್ದಾರೆ ಎಂದು ಕಾರ್ಮಿಕ ಇಲಾಖೆ ನೀಡಿರುವ ವರದಿ ಮೇರೆಗೆ ಹೆಚ್ಚುವರಿಯಾಗಿ ಆರು ಎಕರೆ ಜಮೀನನ್ನು ನೀಡಲು ಜಿಲ್ಲಾಡಳಿತ ಸಮ್ಮತಿ ಸೂಚಿಸಿದೆ ಎಂದು ಹೇಳಿದರು.**


# ಲೋಕಾಯುಕ್ತ ನ್ಯಾ.ಬಿ.ಎಸ್. ಪಾಟೀಲ್ ಅಭಿಮತ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಭಕ್ತರು ನೇರವಾಗಿ ದೇವರನ್ನು ಸಾಕ್ಷಾತ್ಕರಿಸಿಕೊಳ್ಳಲು ಆಗುವುದಿಲ್ಲ, ಗುರುವಿನ ಮಾಧ್ಯಮದಿಂದ ದೇವರನ್ನು ಕಾಣಲು ಸಾಧ್ಯ. ಈ ಪರಂಪರೆಯನ್ನು ನಾವು ಮುದ್ದೇನಹಳ್ಳಿಯಲ್ಲಿ ನೋಡುತ್ತಿದ್ದೇವೆ ಎಂದು ಲೋಕಾಯುಕ್ತ ನ್ಯಾ.ಬಿ.ಎಸ್.ಪಾಟೀಲ್ ತಿಳಿಸಿದರು.

ತಾಲ್ಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ನಡೆಯುತ್ತಿರುವ ನವರಾತ್ರಿ ಹೋಮ, ಅತಿರುದ್ರ ಮಹಾಯಜ್ಞ, ದುರ್ಗಾ ಪೂಜೆಯ 7ನೇ ದಿನವಾದ ಭಾನುವಾರದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಗುರು ಮತ್ತು ಭಕ್ತನ ಸಂಬಂಧ ನಮ್ಮ ದೇಶದ ಶ್ರೇಷ್ಠ ಪರಂಪರೆಯಾಗಿದೆ. ನಮ್ಮ ಶ್ರೀಮಂತ ಸಂಸ್ಕೃತಿ ಮತ್ತು ಸಂಸ್ಕಾರವನ್ನು ಉಳಿಸಿ, ಬೆಳೆಸುವುದು ಸಹ ಮೂಲಭೂತ ಕರ್ತವ್ಯ ಎಂದು ಹೇಳಿದರು. ಹಣ, ವಿದ್ಯೆ ಸಂಪತ್ತು ಏನೇ ಇದ್ದರೂ ಮನುಷ್ಯನಿಗೆ ಅಂತರಿಕ ಶಾಂತಿ, ನೆಮ್ಮದಿ ಇರುವುದಿಲ್ಲ. ಆದರೆ ಸತ್ಯಸಾಯಿ ಗ್ರಾಮಕ್ಕೆ ಬಂದಾಗ ಇದೆಲ್ಲವೂ ಸಿಗುತ್ತದೆ.

ತುಂಬಾ ವ್ಯವಸ್ಥಿತವಾಗಿ ಎಲ್ಲಾ ರೀತಿಯ ಸೇವೆಗಳನ್ನು ನೀಡುತ್ತಿದ್ದಾರೆ. ಇಲ್ಲಿಗೆ ಬಂದಾಗ




ತೃಪ್ತಿ ಮತ್ತು ಸಂತೋಷವನ್ನು ಅನುಭವಿಸುತ್ತೀರಿ. ಅಧ್ಯಾತ್ಮ ಅನುಭವಕ್ಕೆ ಒಡ್ಡಿಕೊಂಡಾಗ ತೃಪ್ತರಾಗುತ್ತೀರಿ ಎಂದು ಹೇಳಿದರು.

ಸತ್ಯ ಸಾಯಿ ಸಂಸ್ಥೆಯು ಕೋಟ್ಯಂತರ ಮಕ್ಕಳಿಗೆ ಪೌಷ್ಟಿಕ ಆಹಾರ ಮತ್ತು ಶಿಕ್ಷಣ ನೀಡಿದೆ. ಆರೋಗ್ಯ ಸೇವೆಗಳ ಮೂಲಕ ಸಮಾಜಕ್ಕೆ ಅತ್ಯುತ್ತಮ ಕೊಡುಗೆ ನೀಡುತ್ತಿದೆ. ಜಾಗತಿಕ ಮಟ್ಟದಲ್ಲಿ ಹೆಸರು ಮಾಡುತ್ತಿದ್ದು ಹೆಮ್ಮರವಾಗಿ ಬೆಳೆದಿದೆ ಎಂದು ಪ್ರಶಂಸಿಸಿದರು. ಪಂಚಾಯತಿ ಮಟ್ಟದಲ್ಲಿ ಆರೈಕೆ ಕೇಂದ್ರಗಳನ್ನು ತೆರೆಯಲಾಗುತ್ತದೆ. ತಾಲ್ಲೂಕು ಮಟ್ಟದಲ್ಲಿ ಸಾಯಿ ಆರೋಗ್ಯ ಕೇಂದ್ರವನ್ನು ತೆರೆಯುವ ಗುರಿ ಹೊಂದಿದ್ದೇವೆ. ಇದು 30 ರಿಂದ 40 ಹಾಸಿಗೆಗಳ ಸಾಮಾನ್ಯ ಆಸ್ಪತ್ರೆ ಆಗಿರುತ್ತದೆ. ನಂತರದ ಹಂತದಲ್ಲಿ ಸ್ಪೆಷಾಲಿಟಿ ಆಸ್ಪತ್ರೆ, ಮೆಡಿಕಲ್ ಕಾಲೇಜು ಇರುತ್ತವೆ ಎಂದು ವಿವರಿಸಿದರು.

ಪ್ರಾಥಮಿಕ ಆರೋಗ್ಯ ಮಾದರಿಯನ್ನು ಉತ್ತೇಜಿಸಿದರೆ ಗರ್ಭಿಣಿ ಮತ್ತು ಶಿಶುಗಳ ಅಕಾಲಿಕ ಮರಣಗಳನ್ನು ಸುಲಭವಾಗಿ ತಡೆಯಬಹುದು. ಹಲವು ಕಾಯಿಲೆಗಳನ್ನು ಮುಂಚಿತವಾಗಿ ಪತ್ತೆ ಮಾಡುವುದರಿಂದ ಸರಿಯಾದ ಸಮಯದಲ್ಲಿ ಸೂಕ್ತ ಚಿಕಿತ್ಸೆ ಕೊಡಲು ಸಾಧ್ಯವಾಗುತ್ತದೆ ಎಂದರು.

**ಸದ್ಗುರು ಮಧುಸೂದನ ಸಾಯಿ ಮಾತನಾಡಿ, ಸತ್ಯ ಸಾಯಿ ಬಾಬಾ ಅವರ 100ನೇ ಜನ್ಮದಿನದ ವೇಳೆಗೆ ದೇಶದಲ್ಲಿ 100 ಸ್ವಾಸ್ಥ್ಯ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದೇವೆ. ಒಟ್ಟಾರೆಯಾಗಿ ದೇಶದಲ್ಲಿ 6 ಸಾವಿರ ಸಾಯಿ ಸ್ವಾಸ್ಥ್ಯ ಆರೈಕೆ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶವಿದೆ ಎಂದರು.**

# ಸಮೀಕ್ಷೆ ಅನಾರೋಗ್ಯ ಪೀಡಿತ ಶಿಕ್ಷಕರ ಕೈಬಿಡಿ: ಕರ್ನಾಟಕ ಸೇನಾಪಡೆ ಪ್ರತಿಭಟನೆ

• **ಉದಯವಾಹಿನಿ, ಮೈಸೂರು**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆಗೆ ಅನಾರೋಗ್ಯ ಪೀಡಿತ ಶಿಕ್ಷಕರನ್ನು ನಿಯೋಜಿಸಲಾಗಿದೆ ಎಂದು ಆರೋಪಿಸಿ, ಸರ್ಕಾರದ ಕ್ರಮ ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ದೈಹಿಕ ನ್ಯೂನತೆಯುಳ್ಳ, ಅನಾರೋಗ್ಯ ಮತ್ತು ವಯಸ್ಸಾದ ಶಿಕ್ಷಕರಿಗೆ ದೂರದ ಊರಿಗೆ ಸಮೀಕ್ಷೆಗೆ ಹೋಗಲು ತೊಂದರೆಯಾಗುತ್ತಿದೆ. ಅನಾರೋಗ್ಯವುಳ್ಳವರು ವೈದ್ಯಕೀಯ ಪ್ರಮಾಣ ಪತ್ರ ನೀಡಿದರೂ, ಸರ್ಕಾರ ವಿನಾಯತಿ ನೀಡುತ್ತಿಲ್ಲ.

ಸಮೀಕ್ಷೆಯಲ್ಲಿ ಪಾಲ್ಗೊಳ್ಳದಿರುವ ಶಿಕ್ಷಕರ ವಿರುದ್ಧ ಕಾನೂನು ಕ್ರಮ ಜರುಗಿಸುವುದಾಗಿ




ಮುಖ್ಯಮಂತ್ರಿ ಹೇಳುತ್ತಿರುವುದು ಖಂಡನೀಯ. ಇದು ಸರ್ವಾಧಿಕಾರಿ ಧೋರಣೆಯಾಗಿದೆ ಎಂದು ದೂರಿದರು. ರಾಜ್ಯ ಸರ್ಕಾರ ಕೂಡಲೇ ಶಿಕ್ಷಕರ ಸಮಸ್ಯೆ ಆಲಿಸಿ, ಆನ್‌ಲೈನ್ ಆ್ಯಪ್ ಬದಲು, ಬುಕ್‌ಲೆಟ್ ಅಥವಾ ಮ್ಯಾನುವಲ್ ಅಪ್ಲಿಕೇಶನ್ ನಲ್ಲಿ ಗಣತಿ ಮಾಡಬೇಕು. ಅನಾರೋಗ್ಯದಿಂದ ಬಳಲುತ್ತಿರುವವರು ಸಮೀಕ್ಷೆಯಿಂದ ಕೈಬಿಡಬೇಕು ಎಂದು ಒತ್ತಾಯಿಸಿದರು. ಸಮೀಕ್ಷೆಗೆ ಸರ್ಕಾರ ಮನೆಗಳ ಪಟ್ಟಿಗಳನ್ನು ಶಿಕ್ಷಕರಿಗೆ ಸರಿಯಾಗಿ ನೀಡದೆ ತೊಂದರೆ ಉಂಟಾಗಿದೆ. ಮನೆ ಮುಂದೆ ಹಿಂದುಳಿದ ವರ್ಗಗಳ ಆಯೋಗದಿಂದ ಅಂಟಿಸಿರುವ ಯುಎಚ್‌ಐಡಿ ಐಡಿ ನಂಬರ್, ಹಳ್ಳಿಗಳಲ್ಲಿ ಬೇರೆ ಬೇರೆ ಜಾಗಗಳಲ್ಲಿ ತೋರಿಸುತ್ತಿದೆ. ಇನ್ನೂ ತಾಂತ್ರಿಕ ಸಮಸ್ಯೆಯಿಂದ ಸಮೀಕ್ಷೆ ಕಾರ್ಯ ನಡೆಸಲಾಗುತ್ತಿಲ್ಲ.

ಇದರ ಜೊತೆಗೆ ಸಮೀಕ್ಷೆಗೆ 60 ಪ್ರಶ್ನೆಗಳನ್ನು ಸರ್ಕಾರ ಕೇಳಿರುವುದು ಸರಿಯಲ್ಲ' ಎಂದರು.

# ಬದಲಾದ ಜೀವನ ಶೈಲಿಯಿಂದ ಹೆಚ್ಚಿದ ರೋಗ: ಸಂಸದ ಮಂಜುನಾಥ್

## ಗ್ಯಾಸ್ಟ್ರೊ ಸೆಂಟರ್ ಸಹಯೋಗದಲ್ಲಿ ಗ್ಯಾಸ್ಟ್ರಿಕ್ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರ

• **ಉದಯವಾಹಿನಿ, ರಾಮನಗರ**

ಬದಲಾದ ಜೀವನ ಶೈಲಿಯಿಂದಾಗಿ ರೋಗಗಳು ಹೆಚ್ಚುತ್ತಿವೆ. ಹೃದಯಾಘಾತ, ಜೀರ್ಣಾಂಗಕ್ಕೆ ಸಂಬಂಧಿಸಿದ ಕಾಯಿಲೆಗಳಿಗೂ ಶಿಸ್ತು ಇಲ್ಲದ ಜೀವನ ಶೈಲಿಯೇ ಕಾರಣ. ಆಹಾರ, ನಿದ್ರೆ, ವ್ಯಾಯಾಮ, ಉತ್ತಮ ಅಭ್ಯಾಸಗಳು ಮನುಷ್ಯನನ್ನು ರೋಗಗಳಿಂದ ದೂರು ಇಡುತ್ತವೆ ಎಂದು ಸಂಸದ ಡಾ..ಎನ್. ಮಂಜುನಾಥ್ ಹೇಳಿದರು. ನಗರದ ಶಾಂತಿನಿಕೇತನ ವಿದ್ಯಾಸಂಸ್ಥೆ ಆವರಣದಲ್ಲಿ ರಾಮನಗರ ರೋಟರಿ ಸಂಸ್ಥೆ, ಬೆಂಗಳೂರಿನ ಗ್ಯಾಸ್ಟ್ರೊ ಸೆಂಟರ್ ಸಹಯೋಗದಲ್ಲಿ ಗ್ಯಾಸ್ಟ್ರಿಕ್ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳ ಕುರಿತು ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

'ಈಗ ಔಷಧದ ಅಂಗಡಿಗಳಿಗಿಂತ ಮದ್ಯದಂಗಡಿಗಳು ಹೆಚ್ಚಾಗಿವೆ. ವರದಿಯೊಂದರ ಪ್ರಕಾರ, ಶೇ 70ರಷ್ಟು ಮಂದಿ ಮದ್ಯ ಸೇವನೆ ಮಾಡುತ್ತಿದ್ದಾರೆ. ಮಧುಮೇಹ, ರಕ್ತದೊತ್ತಡವನ್ನು ಸರಿಯಾಗಿ ನಿರ್ವಹಣೆ ಮಾಡದಿದ್ದರೆ, ಅವು ವಿವಿಧ ರೋಗಗಳಿಗೆ ಕಾರಣವಾಗುತ್ತವೆ. ಈ ಬಗ್ಗೆ ಜನ ಜಾಗೃತರಾಗಬೇಕು' ಎಂದು ಸಲಹೆ ನೀಡಿದರು. ಶಿಬಿರದಲ್ಲಿ ಆರೋಗ್ಯ ತಪಾಸಣೆ, ರಕ್ತ ತಪಾಸಣೆ ಜೊತೆಗೆ




ಔಷಧ ಮತ್ತು ಮಾತ್ರೆಗಳನ್ನು ವಿತರಿಸಲಾಯಿತು. ರಾಮನಗರ ರೋಟರಿ ಸಂಸ್ಥೆ ಅಧ್ಯಕ್ಷೆ ಸೌಮ್ಯ ಕುಮಾರಸ್ವಾಮಿ, ಶಾಂತಿನಿಕೇತನ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕುಮಾರಸ್ವಾಮಿ, ವೈದ್ಯರಾದ ಡಾ. ರೀತು, ಡಾ. ಭಾರತಿ, ಡಾ. ಅಮರನಾಥ್ ಹಾಗೂ ಇತರರು ಇದ್ದರು. ಪ್ರಧಾನಿ ನಿವಾಸದ ಎದುರು ಗುಂಡಿ ಇಲ್ಲ'

'ಉಪ ರಾಷ್ಟ್ರಪತಿ ಚುನಾವಣೆಗಾಗಿ ಇತ್ತೀಚೆಗೆ ದೆಹಲಿಗೆ ಭೇಟಿ ನೀಡಿದ್ದಾಗ ಪ್ರಧಾನಿ ಅವರ ನಿವಾಸವಿರುವ ರಸ್ತೆಯಲ್ಲೇ ಹೋಗಿದ್ದೆ. ಅತ್ಯುತ್ತಮವಾಗಿರುವ ಆ ರಸ್ತೆಯಲ್ಲಿ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೇಳುವಂತೆ ಯಾವುದೇ ಗುಂಡಿಗಳಿಲ್ಲ. ರಾಜಧಾನಿ ಬೆಂಗಳೂರಿನಲ್ಲಿ ರಸ್ತೆಗಳು ಹದಗೆಟ್ಟಿವೆ ಎಂದು ಹೇಳುವ ಮೂಲಕ ಸರ್ಕಾರವನ್ನು ಎಚ್ಚರಿಸುವ ಕೆಲಸವನ್ನು ವಿರೋಧ ಪಕ್ಷವಾದ ಬಿಜೆಪಿ ಮಾಡಿದೆ. ಇದನ್ನು ಸರ್ಕಾರ ಪರಿಗಣಿಸಿ ದುರಸ್ತಿಗೆ ಮುಂದಾಗಬೇಕು. ಬೆಂಗಳೂರಿನಲ್ಲಿ ನಿರ್ಮಿಸುವ ರಸ್ತೆಗಳು ಮುಂದಿನ ಮಳೆಗಾಲದ ಹೊತ್ತಿಗೆ ಹದಗೆಡುತ್ತವೆ. ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಂಡರೆ ಇಂತಹ ಸಮಸ್ಯೆ ಬರುವುದಿಲ್ಲ. ರಸ್ತೆ ಜೊತೆಗೆ ಚರಂಡಿಗಳು ಸಹ ಮುಖ್ಯ. ಇವೆರಡೂ ಕಾಮಗಾರಿ ಸರಿಯಾಗಿದ್ದರೆ ರಸ್ತೆಯಲ್ಲಿ ಗುಂಡಿಗಳಿರುವುದಿಲ್ಲ. ಮಳೆ ನೀರು ಸಹ ನಿಲ್ಲುವುದಿಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ 'ಪ್ರಧಾನಿ ನಿವಾಸದ ರಸ್ತೆಯಲ್ಲೂ ಗುಂಡಿ ಇದೆ' ಎಂಬ ಹೇಳಿಕೆ ಕುರಿತು ಮಾಧ್ಯಮದವರ ಪ್ರಶ್ನೆಗೆ ಡಾ. ಸಿ.ಎನ್. ಮಂಜುನಾಥ್ ಪ್ರತಿಕ್ರಿಯಿಸಿದರು.

**'ರಾಮನಗರದಲ್ಲಿ ಇಂತಹ ಉನ್ನತ ಮಟ್ಟದ ಆರೋಗ್ಯ ಶಿಬಿರ ಆಯೋಜಿಸಿರುವುದು ಮತ್ತು ಇಷ್ಟು ಸಂಖ್ಯೆಯ ತಜ್ಞ ವೈದ್ಯರು ಸುಸಜ್ಜಿತ ಸಿಬ್ಬಂದಿ ಭಾಗವಹಿಸಿರುವುದು ಶ್ಲಾಘನೀಯ. ವೈದ್ಯಕೀಯ ಕ್ಷೇತ್ರವು ವ್ಯಾಪಾರೀಕರಣದತ್ತ ವೇಗವಾಗಿ ಸಾಗುತ್ತಿದೆ. ಅದರ ನಡುವೆ ಇಂತಹ ಶಿಬಿರಗಳು ನಡೆಯುತ್ತಿರುವುದು ಆಶಾಯದಾಯಕ. ಇದಕ್ಕೆ ಕಾರಣರಾದ ಗ್ಯಾಸ್ಟ್ರಿ ಸೆಂಟರ್ ಡಾ. ಯೋಗಾನಂದ ರೆಡ್ಡಿ, ರೋಟರಿಯ ಸೌಮ್ಯ ಕುಮಾರ್ ಅಭಿನಂದನಾರ್ಹರು' ಎಂದರು.**

**ಗ್ಯಾಸ್ಟ್ರಿ ಸೆಂಟರ್‌ನ ಡಾ. ಯೋಗಾನಂದ ರೆಡ್ಡಿ ಮಾತನಾಡಿ, 'ಡಾ. ಸಿ.ಎನ್. ಮಂಜುನಾಥ್ ಅವರು ವೈದ್ಯಕೀಯ ಕ್ಷೇತ್ರದ ಮಾದರಿ ವ್ಯಕ್ತಿತ್ವ. ಅವರು ನಮ್ಮ ಶಿಬಿರಕ್ಕೆ ಬಂದು ಹರಸಿರುವುದು ನಮ್ಮ ಭಾಗ್ಯ. ಇಂದು ಸಂಚಾರಿ ಎಂಡೊಸ್ಕೋಪಿ ವಾಹನ ಉದ್ಘಾಟಿಸಲಾಗಿದೆ. ಈ ವಾಹನ ಗ್ರಾಮೀಣ ಭಾಗಗಳಿಗೆ ತೆರಳಿ ಜನರ ಜೀರ್ಣಾಂಗ ಸಮಸ್ಯೆಗಳಿಗೆ ಸಂಬಂಧಿಸಿದಂತೆ ತಪಾಸಣೆ ಮಾಡಲಿದೆ' ಎಂದರು.**

# ಮಿನಿ ನ್ಯೂಸ್

## 274 ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯು ಚಿಕ್ಕಬಳ್ಳಾಪುರದ ಅಂಗನಾವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದ್ದು, ಆಸಕ್ತ ಅಭ್ಯರ್ಥಿ ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ಪಿಯುಸಿ ಉತ್ತೀರ್ಣವಾಗಿರಬೇಕು. ಸೆ. 30ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಇಲಾಖೆಯು ತಿಳಿಸಿದೆ.

## ಎಲ್ಲೆಂದರಲ್ಲಿ ಕೆಟ್ಟು ನಿಲ್ಲುತ್ತಿದೆ '112 ಪೊಲೀಸ್ ತುರ್ತು ವಾಹನ

• **ಉದಯವಾಹಿನಿ, ಕೊರಟಗೆರೆ**

ತುರ್ತು ಸಮಯದಲ್ಲಿ ಸಹಾಯಕ್ಕೆ ಬೇಕಾದ 112 ಪೊಲೀಸ್ ತುರ್ತು ವಾಹನ ಈಗ ಸ್ವತಃ ದೊಡ್ಡ ತುರ್ತು ಸಮಸ್ಯೆಯಾಗಿ ಮಾರ್ಪಟ್ಟಿದೆ. ತಾಲ್ಲೂಕಿಗೆ ನೀಡಿರುವ 112 ಪೊಲೀಸ್ ಜೀಪ್ ಪದೇ ಪದೇ ದಾರಿಯಲ್ಲೇ ಕೆಟ್ಟು ನಿಲ್ಲುತ್ತಿದ್ದು, ಸಿಬ್ಬಂದಿ ಮತ್ತು ಸಾರ್ವಜನಿಕರಿಗೆ ತಲೆನೋವಾಗಿ ಪರಿಣಮಿಸಿದೆ. ನಿಗದಿತ ಸಮಯದಲ್ಲಿ ಘಟನಾಸ್ಥಳ ತಲುಪಲಾಗದೆ ಸಿಬ್ಬಂದಿ ಪರದಾಡುವಂತಾಗಿದೆ.

ರಾತ್ರಿ ತುರ್ತು ಕರೆ ಬಂದಾಗ, ಅಲ್ಲಲ್ಲಿ ಪೊಲೀಸ್ ಜೀಪ್ ಕೆಟ್ಟು ನಿಂತ ಉದಾಹರಣೆಗಳು ಹಲವಿದೆ. ರಾತ್ರಿ ಕರೆ ಬಂದಾಗ ಜೀಪ್ ಸ್ಟಾರ್ಟ್ ಆಗುತ್ತದೆ, ಇಲ್ಲವೂ ಎನ್ನುವ ಭಯ ಇರುತ್ತದೆ. ಒಂದು ಸಲ ಹೊರಟರೆ, ಎಲ್ಲಿ ಕೆಟ್ಟು ನಿಲ್ಲುತ್ತದೆ ಎಂದು ಕಾಯುವುದು ಮತ್ತೊಂದು ಚಿಂತೆ. ಕೆಟ್ಟು ನಿಂತಾಗ ಸಿಬ್ಬಂದಿಯೇ ಸಾರ್ವಜನಿಕರ ಸಹಾಯದಿಂದ ವಾಹನ ತಳ್ಳಿಸಿಕೊಂಡು ಹೋಗಬೇಕಾದ ಸನ್ನಿವೇಶ ಸಾಮಾನ್ಯವಾಗಿದೆ ಎನ್ನುತ್ತಾರೆ ಸಿಬ್ಬಂದಿ. ಜನರು ನಮ್ಮ ಮೇಲೆ ಆರೋಪ ಮಾಡುತ್ತಾರೆ. ನಾವು ತುರ್ತಾಗಿ ಕರೆ ಬಂದ ಸ್ಥಳಕ್ಕೆ ತಲುಪುವಾಗಲೇ ಜೀಪ್ ಒಮ್ಮೊಮ್ಮೆ ಕೈಕೊಡುತ್ತದೆ. ಇದರಿಂದ ಸಮಸ್ಯೆಯಾಗುತ್ತಲೇ ಇದೆ' ಎಂದು ಪೊಲೀಸ್ ಸಿಬ್ಬಂದಿ ಈ ವಾಹನಗಳನ್ನು ಸ್ಥಳೀಯ ವರ್ಕ್‌ಷಾಪ್‌ಗಳಲ್ಲಿ ದುರಸ್ತಿ ಮಾಡಲಾಗುತ್ತಿದೆಯೊ ತಿಳಿಯದು. ಆದರೆ ಮೆಕ್ಯಾನಿಕ್‌ಗಳು ಬಂದು ಸರಿಪಡಿಸಿದರೂ ಈ ಜೀಪ್‌ಗಳು ಸ್ಥಿರವಾಗಿ ಕೆಲಸ ಮಾಡುವುದಿಲ್ಲ ಎನ್ನುತ್ತಾರೆ ಸಿಬ್ಬಂದಿ.

## ಜೂಜಾಟ: 21 ಮಂದಿ ಬಂಧನ

• **ಉದಯವಾಹಿನಿ, ಕೊಳ್ಳೇಗಾಲ**

ಇಲ್ಲಿನ ಲಾಡ್ಜ್‌ನಲ್ಲಿ ಅಕ್ರಮವಾಗಿ ಜೂಜಾಡುತ್ತಿದ್ದ 21 ಮಂದಿಯನ್ನು ನಗರ ಪೊಲೀಸರು ಬಂಧಿಸಿದ್ದಾರೆ.ನಗರದ ನಾಗರಾಜು, ಶಿವಕುಮಾರ್, ರವಿ, ರಜಿನಿ, ರಂಗಸ್ವಾಮಿ, ಮಹೇಶ್, ದೇವರಾಜು, ನಾಗರಾಜು, ಮಹೇಶ್, ಕೆಂಪರಾಜು, ಜಗದೀಶ್, ಭಾಸ್ಕರ್, ಸಿದ್ದ, ನಿಂಗಶೆಟ್ಟಿ, ಸುರೇಶ್, ಕರಿಯಪ್ಪ ಆಚಾರ್, ರಂಗಸ್ವಾಮಿ, ನಾಗರಾಜು, ನಾಗರಾಜು, ಸುನಿಲ್ ಬಂಧಿತ ಆರೋಪಿಗಳು. ಇವರು ಜೂಜಾಡುತ್ತಿದ್ದ ಖಚಿತ ಮಾಹಿತಿ ಮೇರೆಗೆ ಪಿಎಸ್‌ಐ ವರ್ಷ ತಮ್ಮ ಸಿಬ್ಬಂದಿಯೊಂದಿಗೆ ದಾಳಿ ನಡೆಸಿ ಪಣಕ್ಕಿಟ್ಟಿದ್ದ ರೂ.12,270 ನಗದನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಆರೋಪಿಗಳನ್ನು ಜಾಮೀನು ಮೇಲೆ ಬಿಡುಗಡೆ ಮಾಡಲಾಗಿದೆ.

## ಕಾರ್ಖಾನೆಯಲ್ಲಿ ಮಹಿಳೆಯರ ಶೋಷಣೆ: ಬಂಗಾರು ಆರೋಪ

• **ಉದಯವಾಹಿನಿ, ಚಾಮರಾಜನಗರ**

ಬದನಗುಪ್ಪೆ-ಕೆಲ್ಲಂಬಳ್ಳಿ ಕೈಗಾರಿಕಾ ಪ್ರದೇಶದಲ್ಲಿರುವ ಕಾರ್ಖಾನೆಗಳಲ್ಲಿ ದುಡಿಯುತ್ತಿರುವ ಬಡ ಮಹಿಳೆಯರನ್ನು ನಿಯಮಗಳ ಹೆಸರಿನಲ್ಲಿ ಶೋಷಣೆ ಮಾಡಲಾಗುತ್ತಿದೆ. ಕಾರ್ಮಿಕ ಇಲಾಖೆ ಅಧಿಕಾರಿಗಳು ಪರಿಶೀಲಲಿಸಿ ಕ್ರಮ ಜರುಗಿಸಬೇಕು ಎಂದು ಜೈಭುವನೇಶ್ವರಿ ಸಂಘದ ಮುಖ್ಯಸ್ಥ ಜಿ.ಬಂಗಾರು ಮನವಿ ಮಾಡಿದರು. ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಎಸ್‌ಸಿ ಎಸ್‌ಟಿ ಮುಖಂಡರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದ ಅವರು, ಕೈಗಾರಿಕಾ ಪ್ರದೇಶದಲ್ಲಿರುವ ಕಾರ್ಖಾನೆಗಳಿಗೆ ದೂರದ ಗ್ರಾಮಗಳಿಂದ ಮಹಿಳೆಯರು ಕೆಲಸಕ್ಕೆ ಬರುತ್ತಿದ್ದು, ಬೆಳಗಿನ ಉಪಾಹಾರ ಸೇವಿಸಲು ಅನುಮತಿ ನೀಡುತ್ತಿಲ್ಲ, ಐದು ನಿಮಿಷ ತಡವಾದರೂ ಗೈರು ಹಾಜರಿ ಹಾಕಲಾಗುತ್ತಿದೆ. ಕೆಲಸದ ಅವಧಿಯಲ್ಲಿ ಒಮ್ಮೆ ಮಾತ್ರ ಮೂತ್ರ ವಿಸರ್ಜಿಸಲು ಅವಕಾಶ ನೀಡುವ ಮಹಿಳೆಯರ ಘನತೆಗೆ ಚ್ಯುತಿ ತರುವಂತಹ ಅಮಾನವೀಯ ನಿಯಮಗಳಿವೆ. ಕಾರ್ಮಿಕ ಇಲಾಖೆಯ ಅಧಿಕಾರಿಗಳು ಕಾರ್ಖಾನೆಗಳಿಗೆ ಭೇಟಿ ನೀಡಿ ಮಹಿಳೆಯರ ಅಹವಾಲು ಆಲಿಸಬೇಕು, ತಪ್ಪಿತಸ್ಥರ ಮುಖ್ಯಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. ನಗರದ ಬಟ್ಟೆ ಅಂಗಡಿಗಳು, ಮೊಬೈಲ್ ಮಳಿಗೆಗಳಲ್ಲಿ ನಿಯಮ ಬಾಹಿರವಾಗಿ ಯುವತಿಯರನ್ನು ಹೆಚ್ಚುವರಿ ಅವಧಿಗೆ ದುಡಿಸಿಕೊಳ್ಳಲಾಗುತ್ತಿದ್ದು ನೆರವಿಗೆ ಧಾವಿಸಬೇಕು, ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಗೆ ಒತ್ತು ನೀಡಬೇಕು ಎಂದು ಜಿ.ಬಂಗಾರು ಆಗ್ರಹಿಸಿದರು. ದಲಿತ ಮುಖಂಡ ದೊಡ್ಡಿಂದುವಾಡಿ ಸಿದ್ದರಾಜು, ತಾಲ್ಲೂಕಿನಲ್ಲಿ ಹೂಗ್ಯಂ, ಕುರಟ್ಟಿ ಹೊಸೂರು, ರಾಮಾಪುರ ಸೇರಿದಂತೆ ಹಲವು ಗ್ರಾಮಗಳಲ್ಲಿ ಇಂದಿಗೂ ದಲಿತರನ್ನು ಹೋಟೆಲ್‌ನೊಳಗೆ ಬಿಟ್ಟುಕೊಳ್ಳುತ್ತಿಲ್ಲ,

## ರಸದೌತಣ ನೀಡಿದ ನಾಡ ಕುಸ್ತಿ

• **ಉದಯವಾಹಿನಿ, ತುಮಕೂರು**

ದಸರಾ ಅಂಗವಾಗಿ ಆಯೋಜಿಸಿದ್ದ ಕುಸ್ತಿ ಪಂದ್ಯಾವಳಿ ವೀಕ್ಷಕರಿಗೆ ರಸದೌತಣ ನೀಡಿತು. ಪೈಲ್ವಾನರ ಕಾಳಗ ರೋಚಕತೆಯಿಂದ ಕೂಡಿತ್ತು. ಪ್ರತಿ ಪಂದ್ಯವೂ ನೋಡುಗರಲ್ಲಿ ಕುತೂಹಲ ಮೂಡಿಸಿತು.

ನಗರದ ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಕ್ರೀಡಾಂಗಣದಲ್ಲಿ ನಾಡ ಕುಸ್ತಿಗೆ ಅಖಾಡ ಸಿದ್ಧಪಡಿಸಲಾಗಿತ್ತು. ತಲೆ ತಗ್ಗಿಸಿ, ಎದೆ ಎತ್ತಿಕೊಂಡು ಕೆಮ್ಮಣ್ಣಲ್ಲಿ ಕಾದಾಡುವ ಕುಸ್ತಿ ಕಲೆ ಕಣ್ತುಂಬಿಕೊಳ್ಳಲು ಹೆಚ್ಚಿನ ಜನ ಸಂದಣಿ ಸೇರಿತ್ತು. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕುಸ್ತಿಪಟುಗಳು ಭಾಗವಹಿಸಿದ್ದರು. ಮಹಿಳೆಯರು ಮತ್ತು ಪುರುಷರ ವಿಭಾಗದಲ್ಲಿ ಸ್ಪರ್ಧೆಗಳು ನಡೆದವು. 86 ಜನ ಗೆಲುವಿಗಾಗಿ ಕಾದಾಡಿದರು. ತಮ್ಮದೇ ಪಟ್ಟುಗಳನ್ನು ಸಾಧಿಸಿ ಎದುರಾಳಿಯನ್ನು ಮಕಾಡೆ ಮಲಗಿಸಿದರು. ರಟ್ಟೆ ತಟ್ಟಿ ಎದುರಾಳಿಯನ್ನು ಅಖಾಡಕ್ಕೆ ಆಹ್ವಾನಿಸುತ್ತಿದ್ದ ದೃಶ್ಯಗಳು ಗಮನ ಸೆಳೆದವು. ಕುಸ್ತಿಪಟುಗಳು ತಂತ್ರ- ಪ್ರತಿ ತಂತ್ರ ಹೂಡಿ ಪ್ರತಿ ಸ್ಪರ್ಧಿಗಳಿಗೆ ಸೋಲಿನ ರುಚಿ ತೋರಿಸಿದರು. ನೆರೆದಿದ್ದವರ ಸಿಳ್ಳೆ, ಚಪ್ಪಾಳೆ ಸದ್ದು ಜೋರಾಗಿತ್ತು.

**ಫಲಿತಾಂಶ:** ಕ್ರಮವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದವರು.

ಅಂತರಾಳದಿಂದ...
EDITORIAL

## ತಮಿಳುನಾಡಿನಲ್ಲಿ ಕಾಲ್ತುಳಿತ ದುರಂತ:

## ತಪ್ಪುಗಳಿಂದ ಪಾಠ ಕಲಿಯದ ವ್ಯವಸ್ಥೆ



ತಮಿಳುನಾಡಿನ ಕರೂರು ಜಿಲ್ಲೆಯಲ್ಲಿ ಸೆ. 27ರಂದು ನಡೆದ ರಾಜಕೀಯ ರ್‍ಯಾಲಿಯಲ್ಲಿ ಕನಿಷ್ಠ 40 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಇವರಲ್ಲಿ ಮಹಿಳೆಯರು ಮತ್ತು ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ರಾಜಕೀಯ ರ್‍ಯಾಲಿಯೊಂದರಲ್ಲಿ ಏನೆಲ್ಲ ತಪ್ಪುಗಳು ಆಗಬಹುದೋ ಅವೆಲ್ಲವೂ ಅಲ್ಲಿ ನಡೆದವು. ರ್‍ಯಾಲಿಯನ್ನು ಸೂಕ್ತವಲ್ಲದ ಸಮಯದಲ್ಲಿ ಆಯೋಜಿಸಿದ್ದುದು, ಜನರು ಭಾರೀ ಸಂಖ್ಯೆಯಲ್ಲಿ ಜಮಾಯಿಸಿದ್ದುದು, ಜನಸಮೂಹವನ್ನು ನಿಯಂತ್ರಿಸುವುದಕ್ಕೆ ಸಂಬಂಧಿಸಿದ ನಿಯಮಗಳ ಉಲ್ಲಂಘನೆ, ಎಚ್ಚರಿಕೆಯ ಸಂದೇಶಗಳ ಉಪೇಕ್ಷೆ, ಜನರನ್ನು ನಿರ್ವಹಿಸುವಲ್ಲಿನ ವೈಫಲ್ಯ, ಪರಿಸ್ಥಿತಿಯನ್ನು ನಿಭಾಯಿಸಲು ಸ್ವಲ್ಪವೂ ಸಜ್ಜಾಗಿರದೆ ಇದ್ದುದು... ಇವೆಲ್ಲ ಅಲ್ಲಿ ಕಂಡುಬಂದವು. ಮೃತರ ಸಂಖ್ಯೆಯು ಇನ್ನೂ ಹೆಚ್ಚಾಗುವ ಭೀತಿ ಇದೆ. ತಮಿಳಿನ ಜನಪ್ರಿಯ ನಟ ವಿಜಯ್ ಅವರು ತಮ್ಮ ರಾಜಕೀಯ ಪಕ್ಷ 'ಟಿವಿಕೆ' (ತಮಿಳಗ ವೆಟ್ರಿ ಕಳಗಂ) ಪರವಾಗಿ ಪ್ರಚಾರ ನಡೆಸಲು ಈ ರ್‍ಯಾಲಿ ಆಯೋಜಿಸಿದ್ದರು. ಅವರ ರ್‍ಯಾಲಿಗಳಿಗೆ ಜನರು ದೊಡ್ಡ ಸಂಖ್ಯೆಯಲ್ಲಿ ಸೇರುತ್ತಿದ್ದಾರೆ. ಟಿವಿಕೆ ಪಕ್ಷದ ರ್‍ಯಾಲಿಯನ್ನು ಆಯೋಜಿಸಿದ್ದ ಸ್ಥಳವು ದೊಡ್ಡ ಪ್ರಮಾಣದಲ್ಲಿ ಜನರನ್ನು ಸೇರಿಸಲು ಸೂಕ್ತವಾಗಿರಲಿಲ್ಲ, ಅಲ್ಲಿ ಸ್ಥಳಾವಕಾಶ ಕಡಿಮೆ ಇತ್ತು. 10 ಸಾವಿರ ಜನ ಸೇರಲು ಅನುಮತಿ ಇದ್ದ ಸ್ಥಳದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಜನ ಸೇರಿದ್ದರು. ನಟ ವಿಜಯ್ ಅವರು ಅಲ್ಲಿಗೆ ತಡವಾಗಿ ಬಂದರು. ಅದು ಕಾಲ್ತುಳಿತ ಸಂಭವಿಸುವುದಕ್ಕೆ ಮುಖ್ಯ ಕಾರಣ. ಏಕೆಂದರೆ, ಅಲ್ಲಿ ಜನರ ಜಮಾವಣೆ ಆಗುತ್ತಲೇ ಇತ್ತು; ನಟನ ಬರುವಿಕೆಗಾಗಿ ಕಾಯುತ್ತಿದ್ದ ಹಲವರು ಸುಸ್ತಾಗಿ ಮೂರ್ಛೆಹೋದರು. ಸೂರ್ಯನ ಝಳ ತೀವ್ರವಾಗಿದ್ದಾಗ ಮಹಿಳೆಯರು ಮತ್ತು ಮಕ್ಕಳು ನೀರು, ಆಹಾರ ಇಲ್ಲದೆ ಬಹಳ ಹೊತ್ತು ಕಾಯುವಂತೆ ಮಾಡುವುದು ಒಂದು ಕ್ರೌರ್ಯ. ನಟನ ವಾಹನ ಸಾಗಲು ಅವಕಾಶ ಮಾಡಿಕೊಡುವ ಉದ್ದೇಶದಿಂದ, ಜನಸಮೂಹವು ದಾರಿಬಿಡುವಂತೆ ಒತ್ತಡ ತಂದಾಗ ಕಾಲ್ತುಳಿತ ಆರಂಭವಾಯಿತು ಎಂದು ವರದಿಗಳು ಹೇಳುತ್ತಿವೆ. ಕಾರ್ಯಕ್ರಮದ ಸ್ಥಳದಲ್ಲಿ ಅಗತ್ಯ ಸಂಖ್ಯೆಯಲ್ಲಿ ಪೊಲೀಸ್ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿ ಇರಲಿಲ್ಲ. ನಿರೀಕ್ಷೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬಂದಿದ್ದು ಅದಕ್ಕೆ ಕಾರಣ ಎಂದು ಹೇಳಲಾಗಿದೆ. ರಸ್ತೆಗಳು ಕಿರಿದಾಗಿದ್ದ ಪರಿಣಾಮವಾಗಿ ದುರಂತದ ಸ್ಥಳ ತಲುಪಲು ಆ್ಯಂಬುಲೆನ್ಸ್‌ಗಳಿಗೆ ಕಷ್ಟವಾಯಿತು. ಗಾಯಾಳುಗಳಿಗೆ ಚಿಕಿತ್ಸೆ ನೀಡಲು ಬೇಕಿರುವ ಎಲ್ಲಾ ಸೌಲಭ್ಯಗಳು ಸ್ಥಳೀಯ ಆಸ್ಪತ್ರೆಯಲ್ಲಿ ಇರಲಿಲ್ಲ. ದುರ್ಘಟನೆಗೆ ಕಾರಣವಾದ ಇತರ ಹಲವು ಅಂಶಗಳ ಬಗ್ಗೆ ತನಿಖೆ ನಡೆಸಿದ ನಂತರವೇ ಸಮಗ್ರ ಚಿತ್ರಣವೊಂದು ಸಿಗಬಹುದು. ಘಟನೆಯ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಈ ನಡುವೆ ತಮಿಳುನಾಡು ಸರ್ಕಾರವು ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಯೊಬ್ಬರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆ ಆರಂಭಿಸಿದೆ. ಕಾಲ್ತುಳಿತದ ಪ್ರಾಥಮಿಕ ಜವಾಬ್ದಾರಿಯನ್ನು ಸಾಮಾನ್ಯವಾಗಿ ರ್‍ಯಾಲಿಯ ಆಯೋಜಕರು ಹೊರಬೇಕಾಗುತ್ತದೆ. ನಟ ವಿಜಯ್ ಹಾಗೂ ಅವರ ಪಕ್ಷದ ಪದಾಧಿಕಾರಿಗಳು ಹೊಣೆಯಿಂದ ತಪ್ಪಿಸಿಕೊಳ್ಳಲು ಆಗದು. ವಿಜಯ್ ಅವರ ಪಕ್ಷವು ಈಚೆಗೆ ಆಯೋಜಿಸಿದ್ದ ಕೆಲವು ರ್‍ಯಾಲಿಗಳಲ್ಲಿ ಲೋಪಗಳು ಹಲವಾರು ಇದ್ದವು. ಅವುಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ಸಮಸ್ಯೆಗಳೂ ಇದ್ದವು ಎಂಬ ದೂರುಗಳು ಇದ್ದವು. ಹೆಚ್ಚಿನ ಪ್ರಮಾಣದಲ್ಲಿ ಎಚ್ಚರಿಕೆ ವಹಿಸುವಂತೆ ನ್ಯಾಯಾಲಯವು ಪಕ್ಷಕ್ಕೆ ಹಾಗೂ ಪೊಲೀಸರಿಗೆ ಸೂಚಿಸಿತ್ತು. ದುರದೃಷ್ಟಕರ ಸಂಗತಿಯೆಂದರೆ, ಈ ದುರಂತವನ್ನು ಈಗ ರಾಜಕೀಯಕ್ಕೆ ಬಳಸಿಕೊಳ್ಳಲಾಗುತ್ತಿದೆ. ಪಕ್ಷಗಳ ನಡುವೆ ಆರೋಪ ಪ್ರತ್ಯಾರೋಪ ಶುರುವಾಗಿದೆ. ವಿಧ್ವಂಸಕ ಕೃತ್ಯವೂ ಈ ದುರಂತಕ್ಕೆ ಕಾರಣ ಆಗಿರಬಹುದು ಎಂದು ಕೆಲವರು ಊಹೆ ಮಾಡಿದ್ದಾರೆ. ಕಾಲ್ತುಳಿತದಂತಹ ದುರ್ಘಟನೆ ನಡೆಯುವುದಕ್ಕೆ ಹಲವು ಸರಣಿ ಕಾರಣಗಳು ಇರುತ್ತವೆ. ಕರೂರು ಜಿಲ್ಲೆಯಲ್ಲಿ ನಡೆದ ಕಾಲ್ತುಳಿತಕ್ಕೆ ಕಾರಣ ಏನು ಎಂಬುದು ತನಿಖೆಗಳಿಂದ ಸ್ಪಷ್ಟವಾಗುತ್ತದೆ; ಅದಕ್ಕೆ ಹೊಣೆ ಯಾರು ಎಂಬುದು ಗೊತ್ತಾಗುತ್ತದೆ ಎಂಬ ಆಶಾವಾದವನ್ನು ಈಗ ಹೊಂದಬಹುದು. ದೇಶದಲ್ಲಿ ಕಾಲ್ತುಳಿತದ ಪ್ರಕರಣಗಳು ಮತ್ತೆ ಮತ್ತೆ ನಡೆಯುತ್ತಲೇ ಇವೆ. ಅದರೆ ಇಂತಹ ದುರ್ಘಟನೆಗಳಿಂದ ಸರಿಯಾದ ಪಾಠವನ್ನು ವ್ಯವಸ್ಥೆ ಕಲಿಯುತ್ತಿಲ್ಲ.

**ರಾಜಕೀಯ ಸಮಾವೇಶಗಳು, ಧಾರ್ಮಿಕ ಸಮಾರಂಭಗಳು, ಮನರಂಜನಾ ಕಾರ್ಯಕ್ರಮಗಳಿಗೆ ಜನರು ದೊಡ್ಡ ಸಂಖ್ಯೆಯಲ್ಲಿ ಸೇರಿದಾಗ, ಆಯೋಜಕರ ಮೈಮರೆವು ಹಾಗೂ ಕಾನೂನು ಮತ್ತು ಸುವ್ಯವಸ್ಥೆಯಲ್ಲಿನ ಲೋಪದಿಂದಾಗಿ ಕಾಲ್ತುಳಿತದಂತಹ ದುರ್ಘಟನೆಗಳು ಆಗುತ್ತವೆ ಎಂಬುದಕ್ಕೆ ಹಲವು ನಿದರ್ಶನಗಳಿವೆ. ಇಂತಹ ನಿದರ್ಶನಗಳಿಗೆ ಈಗ ಕರೂರು ಜಿಲ್ಲೆಯಲ್ಲಿ ನಡೆದ ದುರಂತವು ಮತ್ತೊಂದು ಸೇರ್ಪಡೆ.**

## ವಿಶ್ವ ಹೃದಯ ದಿನ ವಿಶೇಷ: ನೆಕ್ಸ್ಟಮರ್ ಲೇಸರ್ ಅಂಜಿಯೋ ಪ್ಲಾಸ್ಟಿ ಸಿಸ್ಟಮ್ ಸೇರ್ಪಡೆ

• ಉದಯವಾಹಿನಿ, ಬೆಂಗಳೂರು



ಇಂದು ವಿಶ್ವಹೃದಯ ದಿನದ ಅಂಗವಾಗಿ ಬೆಂಗಳೂರು ಹೆಬ್ಬಾಳದ ಆಸ್ಟರ್ ಸಿಎಂಐ ಆಸ್ಪತ್ರೆಯಲ್ಲಿ, ಕರ್ನಾಟಕದ ಮೊದಲ ನೆಕ್ಸ್ಟಮರ್ ಲೇಸರ್ ಸಿಸ್ಟಮ್ ಅನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಸಂಸದರಾದ ಮಾನ್ಯ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್ ರವರು ಉದ್ಘಾಟಿಸಿ ಶುಭ ಹಾರೈಸಿದರು. ವಿಶ್ವಹೃದಯ ದಿನವು ಕೇವಲ ಒಂದು ಆಚರಣೆ ಅಲ್ಲ, ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಜಾಗೃತಿಯಾಗಬೇಕಾದ ಸಂದೇಶ. ಹೃದಯದ ಆರೋಗ್ಯ ಕಾಪಾಡುವುದು ಎಂದರೆ ಸರಿಯಾದ ಜೀವನಶೈಲಿ, ಸಮತೋಲನ ಆಹಾರ, ನಿಯಮಿತ ವ್ಯಾಯಾಮ ಹಾಗೂ ಒತ್ತಡ ನಿಯಂತ್ರಣಕ್ಕೆ ಆದ್ಯತೆ ನೀಡುವುದು ಎಂದು ಮಾನ್ಯ ಸಂಸದರು ಹೇಳಿದರು. Stop smoking, Start walking, Less thinking, More working?

ಇದು ಹೃದಯವನ್ನು ಆರೋಗ್ಯಕರವಾಗಿಡುವ ಮಂತ್ರ, ಎಂದರು. ಇಂದು ಉದ್ಘಾಟಿಸಲಾದ ನೆಕ್ಸ್ಟಮರ್ ಲೇಸರ್ ಸಿಸ್ಟಮ್ ಮೂಲಕ ಸಂಕೀರ್ಣ ಆಂಜಿಯೋಪ್ಲಾಸ್ಟಿಗೆ ಅತ್ಯಾಧುನಿಕ ಹಾಗೂ ಶ್ರೇಷ್ಠ ಚಿಕಿತ್ಸಾ ವ್ಯವಸ್ಥೆ ಲಭ್ಯವಾಗಿದ್ದು, ಕರ್ನಾಟಕದಲ್ಲಿ ಹೃದಯ ಚಿಕಿತ್ಸೆಯ ಹೊಸ ಅಧ್ಯಾಯ ಆರಂಭವಾಗಿದೆ.

ಇದು ಸಾವಿರಾರು ಜೀವ ಉಳಿಸುವ ಮಹತ್ವದ ಹೆಜ್ಜೆ ಹೇಳಿದರು. ಈ ಸಂದರ್ಭದಲ್ಲಿ ಆಸ್ಟರ್ ಆಸ್ಪತ್ರೆಯ ಹೃದ್ರೋಗ ವಿಭಾಗದ ಡೈರೆಕ್ಟರ್ ಡಾ. ನಾಗಮಲ್ಲೇಶ್ ರವರು ಹಾಗೂ ಹಲವಾರು ಗಣ್ಯರು ಉಪಸ್ಥಿತರಿದ್ದರು.

**ಹೃದಯ ಚಿಕಿತ್ಸೆಯ ಹೊಸ ಅಧ್ಯಾಯ ಆರಂಭ**


## ನವರಾತ್ರಿಯ ಒಂಭತ್ತನೇ ದಿನವನ್ನು ಮಹಾನವಮಿ ಎಂದು ಕರೆಯುತ್ತಾರೆ...!




ವಿಶ್ವಾಸ್.ಡಿ.ಗೌಡ

ಆ ದಿನ ತಾಯಿ ಸಿದ್ಧಿದಾತ್ರಿಗೆ ವಿಶೇಷ ಪೂಜೆ ಪುನಸ್ಕಾರಗಳು ಸಲ್ಲುತ್ತವೆ. ಮಹಾ ನವಮಿಯನ್ನು ತಾಯಿ ಚಾಮುಂಡೇಶ್ವರಿಯನ್ನು ಮಹಿಷಾಸುರ ಮರ್ದಿನಿ ಎಂದು ಪೂಜಿಸಲಾಗುತ್ತದೆ. ಪುರಾಣದಲ್ಲಿನ ಕತೆಯ ಪ್ರಕಾರ ಪಾರ್ವತಿ ದೇವಿ ಸೌಮ್ಯ ಸ್ವಭಾವದ ಹೆಣ್ಣುಮಗಳು. ಆಕೆಗೆ ಕೋಪವೇ ಬರುವುದಿಲ್ಲ. ಮಹಿಷಾಸುರನನ್ನು ಮರ್ಧನ ಮಾಡಲು ತಾಯಿಯು ಚಾಮುಂಡೇಶ್ವರಿಯ ಅವತಾರ ಎತ್ತುತ್ತಾಳೆ.

**ತಾಯಿ ಸಿದ್ಧಿದಾತ್ರಿಯ ಮಹತ್ವ:** ಸಿದ್ಧಿ ಎಂದರೆ ಅಲೌಕಿಕ ಶಕ್ತಿ ಅಥವಾ ಸೃಷ್ಟಿ ಮತ್ತು ಅಸ್ತಿತ್ವದ ಅಂತಿಮ ಮೂಲದ ಅರ್ಥವನ್ನು ಸಾಧಿಸುವ ಸಾಮರ್ಥ್ಯ ಮತ್ತು ದಾತ್ರಿ ಎಂದರೆ ಕೊಡುವುದು. ಸಿದ್ಧಿ ದಾತ್ರಿಯ ಪೂಜೆಯಿಂದ ಸಿಗುವ ಫಲ ಏನು ಎಂಬುದರ ಬಗ್ಗೆ ನಿಮಗೆ ಸುಳಿವು ಸಿಕ್ಕಿರಬಹುದು. ತಾಯಿಯನ್ನು ಪೂಜೆ ಮಾಡಿದರೆ ನಿಜವಾದ ಅಸ್ತಿತ್ವವನ್ನು ಅರಿತುಕೊಳ್ಳುವ ಶಕ್ತಿ ಪ್ರಾಪ್ತಿಯಾಗುತ್ತದೆ. ತಾಯಿಯ ಆರಾಧನೆಯು ನಮ್ಮ ಮನಸ್ಸಿನಲ್ಲಿರುವ ಅಜ್ಞಾನವನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ ಎಂದು ಹೇಳಲಾಗುತ್ತದೆ. ಪುರಾಣ ಗ್ರಂಥಗಳ ಪ್ರಕಾರ ಜಗತ್ತಿನ ಎಂಟು ಸಿದ್ಧಿಗಳೆಂದರೆ ಅನಿಮಾ, ಮಹಿಮಾ, ಗರಿಮಾ, ಲಘಿಮಾ, ಪ್ರಾಪ್ತಿ, ಪ್ರಕ್ಯಾಮ್ಯ, ಇನ್ಶಿತ್ವ, ವಶಿತ್ವ. ನವದುರ್ಗೆಗಳಲ್ಲಿ ತಾಯಿ ಸಿದ್ಧಿದಾತ್ರಿಯು ಈ ಎಲ್ಲಾ ಅದ್ಬುತ ಅಂಶಗಳನ್ನು ಹೊಂದಿದ್ದಾಳೆ. ಪುರಾಣದ ಕತೆಗಳ ಪ್ರಕಾರ ತಾಯಿ ಸಿದ್ಧಿದಾತ್ರಿಯಿಂದ ಆಶೀರ್ವಾದ ಪಡೆದ ಶಿವನು ಆಕೆಯಿಂದ ಎಂಟು ಸಿದ್ಧಿಗಳನ್ನು ಪಡೆದ ಎಂದು ಹೇಳಲಾಗುತ್ತದೆ. ಬ್ರಹ್ಮಾಂಡದ ಸೃಷ್ಟಿಯ ವೇಳೆ ಶಿವನು ಆದಿ ಪರಾಕಾಷ್ಟೆಯನ್ನು ಆರಾಧಿಸಿದನು. ಎಷ್ಟೇ ಆರಾಧಿಸಿದರೂ ಶಕ್ತಿ ದೇವತೆಯು ಪ್ರತ್ಯಕ್ಷಳಾಗಲಿಲ್ಲ. ನಂತರ ಆಕೆಯು ಶಿವನ ಎಡ ಭಾಗದ ಅರ್ಧದಲ್ಲಿ ಕಾಣಿಸಿಕೊಂಡಳು. ಆಗಿನಿಂದ ಪರಶಿವನು ಅರ್ಧನಾರೀಶ್ವರ ಎನ್ನುವ ಇನ್ನೊಂದು ಹೆಸರಿನಿಂದ ಗುರುತಿಸಿಕೊಂಡನು ಎಂದು ಹೇಳಲಾಗುತ್ತದೆ ತಾಯಿ ಸಿದ್ಧಿದಾತ್ರಿಯು ಕೆಂಪು ಸೀರಿಯುಟ್ಟು ಸಿಂಹದ ಮೇಲೆ ಕುಳಿತಿರುತ್ತಾಳೆ. ಆಕೆಗೆ ನಾಲ್ಕು ಕೈಗಳಿವೆ. ಎಡ ಭಾಗದ ಒಂದು ಕೈನಲ್ಲಿ ಕಮಲ, ಮತ್ತೊಂದು ಕೈನಲ್ಲಿ ಶಂಕವಿದೆ. ಬಲಗೈನಲ್ಲಿ ಗಧೆ ಚಕ್ರವಿದೆ. ಆಕೆಯು ಕಮಲದ ಹೂವಿನ ಕಡೆಗೆ ನೋಡುತ್ತಿರುತ್ತಾಳೆ. ತಾಯಿ ಸಿದ್ಧಿದಾತ್ರಿ ತನ್ನ ಭಕ್ತರ ಆರಾಧನೆಯಿಂದ ಖುಷಿಯಾಗಿ ಧರ್ಮ, ಅರ್ಥ, ಕರ್ಮ ಮತ್ತು ಮೋಕ್ಷ ಸಾಧನೆ ನೆರವಾಗುತ್ತಾಳೆ. ನವರಾತ್ರಿಯ ಒಂಭತ್ತನೇ ದಿನದಂದು ಭಕ್ತರು ತಮ್ಮ ಗಮನವನ್ನು ನಿರ್ವಾಣ ಚಕ್ರದತ್ತ ಇಡಬೇಕು. ಈ ಚಕ್ರವು ನಮ್ಮ ತಲೆ ಬುರುಡೆಯ ಮಧ್ಯದಲ್ಲಿ ಇರುತ್ತದೆ. ಹಾಗೆ ಮಾಡುವುದರಿಂದ, ತಾಯಿ ಸಿದ್ಧತಾತ್ರಿಯ ಕೃಪೆಯಿಂದ ಭಕ್ತರು ತಮ್ಮ ನಿರ್ವಾಣ ಚಕ್ರದಲ್ಲಿ ಇರುವ ಶಕ್ತಿಯನ್ನು ಪಡೆಯುತ್ತಾರೆ.



## ಶ್ರೀ ಶರನ್ನವರಾತ್ರೋತ್ಸವ ಶ್ರೀನಿವಾಸ ಕಲ್ಯಾಣ ಪ್ರವಚನ ಜ್ಞಾನ ಯಜ್ಞ ಮಂಗಳ




• ಉದಯವಾಹಿನಿ, ಬೆಂಗಳೂರು

ಜಯನಗರದ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ಶರನ್ನವರಾತ್ರಿ ಉತ್ಸವದ ಅಂಗವಾಗಿ ವಿದ್ವಾನ್ ಐತರೇಯ ಭಾರದ್ವಾಜಾಚಾರ್ಯರಿಂದ ಶ್ರೀ ಶ್ರೀನಿವಾಸ ಕಲ್ಯಾಣ ಮಹೋತ್ಸವ ಪ್ರವಚನ ಜ್ಞಾನ ಯಜ್ಞದ ಮಂಗಳ ಕಾರ್ಯಕ್ರಮವು ವಿಶೇಷವಾಗಿ ಶ್ರೀ ಮಠದಲ್ಲಿ ನೆರವೇರಿತು. ಈ ಸಂದರ್ಭದಲ್ಲಿ ಶ್ರೀಮಠದ ವ್ಯವಸ್ಥಾಪಕರಾದ ಆರ್. ಕೆ. ವಾದಿಂದ್ರಾಚಾರ್ಯರು ಆಚಾರ್ಯರಿಗೆ ಶ್ರೀ ಗುರುರಾಯರ ಶೇಷವಸ್ತ್ರ, ಫಲ ಮಂತ್ರಾಕ್ಷತೆ, ಕಾಣಿಕೆ ಸಮರ್ಪಿಸುವ ಮೂಲಕ ಅಭಿನಂದನೆ ಸಲ್ಲಿಸಿದರು ಎಂದು ಪುರೋಹಿತರಾದ ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು. ಈ ಜ್ಞಾನ ಯಜ್ಞ ಪ್ರವಚನದಲ್ಲಿ ನೂರಾರು ಭಕ್ತರು ಭಾಗವಹಿಸಿ ಶ್ರೀ ಹರಿ ವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು, ವಿಶೇಷವಾಗಿ ಅಕ್ಟೋಬರ್ 2, ಗುರುವಾರದಂದು ಶ್ರೀ ವಿಜಯ ದಶಮಿಯ ಹಬ್ಬದ ಪ್ರಯುಕ್ತ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ ಫಲಪಂಚಾಮೃತ ಅಭಿಷೇಕ ಹಾಗೂ ರತ್ನ ಕವಚದ ಅಲಂಕಾರವು ನೆರವೇರಲಿದ್ದು ಸಂಜೆ ಶಮೀವೃಕ್ಷದ(ಬನ್ನಿ ಗಿಡದ) ಪೂಜೆಯು ವಿಶೇಷ ಗಜವಾಹನ ಉತ್ಸವ ಇತರ ಉತ್ಸವಗಳೊಂದಿಗೆ ನೆರವೇರಲಿದೆ. ಈ ಸೇವೆಯಲ್ಲಿ ಭಾಗವಹಿಸುವಂತಹ ಭಕ್ತರು ಶ್ರೀ ಮಠದ ಈ ನಂಬರ್ 9449133929 ವಾಟ್ಸಾಪ್ ಆನ್‌ಲೈನ್ ಮುಖಾಂತರ ಸೇವೆ ಸಲ್ಲಿಸಿ ಗುರುಗಳ ಅನುಗ್ರಹಕ್ಕೆ ಪಾತರಾಗಬಹುದು.

## ಹೃದಯ ವೈಫಲ್ಯವಾಗುವುದಕ್ಕೂ ಮುನ್ನ ಹೆಚ್ಚಿನವರನ್ನು ಕಾಡುತ್ತಂತೆ ಹೈ ಬಿಪಿ

ಪ್ರತಿ ವರ್ಷ ಸೆಪ್ಟೆಂಬರ್ 29 ರಂದು ವಿಶ್ವಹೃದಯ ದಿನವನ್ನು ಆಚರಿಸಲಾಗುತ್ತದೆ. ವಿಶ್ವಾದ್ಯಂತ ಸಾವಿಗೆ ಪ್ರಮುಖ ಕಾರಣವಾಗಿರುವ ಹೃದಯ ಸಂಬಂಧಿತ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸುವುದು ಇದರ ಉದ್ದೇಶವಾಗಿದೆ. ಇತ್ತೀಚಿನ ದಿನಗಳಲ್ಲಿ ಹೃದಯಾಘಾತ, ಹೃದಯವೈಫಲ್ಯದಿಂದಾಗಿ ಸಾಯುವವರ ಸಂಖ್ಯೆ ಹೆಚ್ಚಾಗಿದೆ. ಪ್ರತಿಯೊಬ್ಬರೂ ಹೃದಯದ ಕಾಳಜಿ ವಹಿಸುವುದು ಬಹಳ ಮುಖ್ಯ. ಹೃದಯದ ಆರೋಗ್ಯ ಸಂಬಂಧಿಸಿದಂತೆ ವೈದ್ಯರು ಬಹಳ ಮುಖ್ಯವಾದ ಅಂಶಗಳ ಬಗ್ಗೆ ಕೆಲವೊಂದು ಮಾಹಿತಿಯನ್ನು ತಿಳಿಸಿದ್ದಾರೆ. ಗುರುಗ್ರಾಮ್‌ನ ಮ್ಯಾಕ್ಸ್ ಆಸ್ಪತ್ರೆಯ ಅಸೋಸಿಯೇಟ್ ಡೈರೆಕ್ಟರ್ ಡಾ. ಸುನಿಲ್ ವಾಧ್ವಾ ಅವರು ಅಧಿಕ ರಕ್ತದೊತ್ತಡವು ನೇರವಾಗಿ ಹೃದಯ ವೈಫಲ್ಯಕ್ಕೆ ಕಾರಣವಾಗುತ್ತದೆ ಎಂದು ಹೇಳುತ್ತಾರೆ. ಹೃದಯ ವೈಫಲ್ಯದ 90% ಕ್ಕಿಂತ ಹೆಚ್ಚು ರೋಗಿಗಳು ಈಗಾಗಲೇ ಅಧಿಕ ರಕ್ತ ದೊತ್ತಡವನ್ನು ಹೊಂದಿದ್ದಾರೆ, ಆದರೆ ಇದನ್ನು ಹೆಚ್ಚಾಗಿ ಕಡೆಗಣಿಸಲಾಗುತ್ತದೆ.

**ಹೃದಯ ವೈಫಲ್ಯ ಎಷ್ಟು ಸಾಮಾನ್ಯ?:** ಅಂಕಿಅಂಶಗಳ ಪ್ರಕಾರ, 55 ವರ್ಷ ವಯಸ್ಸಿನ ನಂತರ ಪ್ರತಿ ಮೂರು ಜನರಲ್ಲಿ ಒಬ್ಬರು ಹೃದಯ ವೈಫಲ್ಯಕ್ಕೆ ಒಳಗಾಗಬಹುದು. ಬೊಜ್ಜು, ಮಧುಮೇಹ, ಮೂತ್ರಪಿಂಡ ಕಾಯಿಲೆ ಅಥವಾ ರಕ್ತಹೀನತೆಯಂತಹ ಅನೇಕ ಅಂಶಗಳು ಇದಕ್ಕೆ ಕಾರಣವಾಗಿವೆ. ಆದರೆ ಅಧಿಕ ರಕ್ತದೊತ್ತಡವನ್ನು ಅತ್ಯಂತ ಜವಾಬ್ದಾರಿಯುತವೆಂದು ಪರಿಗಣಿಸಲಾಗುತ್ತದೆ. ಪುರುಷರಲ್ಲಿ ಸುಮಾರು 39% ಪ್ರಕರಣಗಳಲ್ಲಿ, ಮಹಿಳೆಯರಲ್ಲಿ 59% ಪ್ರಕರಣಗಳಲ್ಲಿ ಅಧಿಕ ರಕ್ತದೊತ್ತಡವು ಹೃದಯ ವೈಫಲ್ಯಕ್ಕೆ ಮೂಲ ಕಾರಣವಾಗಿದೆ. ಇದಲ್ಲದೆ ಸುಮಾರು 90% ರೋಗಿಗಳು ಹೃದಯ ವೈಫಲ್ಯಕ್ಕೂ ಮೊದಲು ಅಧಿಕ ರಕ್ತದೊತ್ತಡವನ್ನು ಹೊಂದಿರುತ್ತಾರೆ.



**ರಕ್ತದೊತ್ತಡ ಎಷ್ಟು ವ್ಯತ್ಯಾಸವನ್ನುಂಟು ಮಾಡುತ್ತದೆ?** ಒಬ್ಬ ವ್ಯಕ್ತಿಯ ರಕ್ತದೊತ್ತಡ 160/90 mmHg ಗಿಂತ ಹೆಚ್ಚಿದ್ದರೆ ಹೃದಯ ವೈಫಲ್ಯದ ಅಪಾಯವು ದ್ವಿಗುಣಗೊಳ್ಳುತ್ತದೆ, ಆದರೆ 140/90 mmHg ಗಿಂತ ಕಡಿಮೆ ರಕ್ತದೊತ್ತಡ ಹೊಂದಿರುವವರಿಗೆ ಗಮನಾರ್ಹವಾಗಿ ಕಡಿಮೆ ಅಪಾಯವಿರುತ್ತದೆ. ರಾತ್ರಿಯ ರಕ್ತದೊತ್ತಡವೂ ಸಹ ನಿರ್ಣಾಯಕವಾಗಿದೆ. ರಾತ್ರಿಯಲ್ಲಿ ಅಧಿಕ ರಕ್ತದೊತ್ತಡ ಹೊಂದಿರುವ ಜನರು ಅಥವಾ ಹಗಲು-ರಾತ್ರಿಯ ಮಾದರಿಯಲ್ಲಿ ಅಡಚಣೆ ಇರುವವರು ಹೃದಯ ವೈಫಲ್ಯ ಮತ್ತು ಇತರ ಹೃದಯ ಕಾಯಿಲೆಗಳ ಅಪಾಯವನ್ನು ಹೆಚ್ಚಿಸುತ್ತಾರೆ ಎಂದು ಸಂಶೋಧನೆ ಕಂಡುಹಿಡಿದಿದೆ.

### ಸಕಾಲಿಕ ನಿಯಂತ್ರಣ ಏಕೆ ಮುಖ್ಯ

**ಒಳ್ಳೆಯ ಸುದ್ದಿ ಏನೆಂದರೆ ರಕ್ತದೊತ್ತಡವನ್ನು ಸರಿಯಾಗಿ ನಿಯಂತ್ರಿಸಿದರೆ, ಹೃದಯ ವೈಫಲ್ಯ ಸೇರಿದಂತೆ ಅನೇಕ ಹೃದಯ ಸಂಬಂಧಿತ ಕಾಯಿಲೆಗಳನ್ನು ತಡೆಗಟ್ಟಲು ಸಾಧ್ಯವಿದೆ. ವೈದ್ಯರ ಪ್ರಕಾರ, ಹೆಚ್ಚಿನ ಅಧಿಕ ರಕ್ತದೊತ್ತಡ ರೋಗಿಗಳಿಗೆ, ಎರಡು ಔಷಧಿಗಳ ಸಂಯೋಜನೆಯನ್ನು ಆರಂಭಿಕ ಹಂತದಲ್ಲಿಯೇ ನೀಡುವುದು ಉತ್ತಮ. ಹೆಚ್ಚುವರಿಯಾಗಿ, ಕೆಲವು ಹೊಸ ಮಧುಮೇಹ ಔಷಧಿಗಳು ರಕ್ತದೊತ್ತಡವನ್ನು ನಿಯಂತ್ರಿಸಲು ಮತ್ತು ಹೃದಯ ವೈಫಲ್ಯವನ್ನು ಸುಧಾರಿಸಲು ಸಹಾಯಕವಾಗಿವೆ.**

## ರಾಮಾಯಣ



### ಶ್ರೀರಾಮನಿಗೂ ಖರನಿಗೂ ಯುದ್ಧವಾದದ್ದು

• ಹಿಂದಿನ ಸಂಚಿಕೆಯಿಂದ 120 ನೆಯ ಅಧ್ಯಾಯ

ಖರನು ಅತ್ಯಂತ ಕೋಪಯುಕ್ತನಾಗಿ ನಾಲ್ಕು ಬಾಣಗಳಿಂದ ಶ್ರೀರಾಮನನ್ನು ಅಂಕುಶದ ಹೊಮ್ಮಿನಿಂದ ಮದ್ದಾನೆಯನ್ನು ಗಾಯಪಡಿಸುವಂತೆ ಗಾಯವಡಿಸಿದನು.


ಶ್ರೀರಾಮನು ಖರನಿಟ್ಟ ಬಾಣಗಳಿಂದ ಗಾಯಪಡೆದು ಶರೀರವೆಲ್ಲವೂ ರಕ್ತದಿಂದ ನೆನೆಯಲು ಅತ್ಯಂತ ಕೋಪಾಟೋಪದಿಂದ ಖರನ ಮೇಲೆ ಆರು ಬಾಣಗಳನ್ನು ಹೂಡಿ ಒಂದು ಬಾಣಕ್ಕೆ ಆತನ ಶಿರಸ್ಸನ್ನೂ ಎರಡು ಬಾಣಗಳಿಗೆ ಆತನ ಎರಡು ಭುಜಗಳನ್ನೂ ಮೂರು ಕವಲಂಬು ಗಳಿಗೆ ಆತನ ವಕ್ಷಃಸ್ಥಳವನ್ನೂ ಗುರಿಮಾಡಿ ಹೊಡೆದನು. ಖರನ ರಥಕ್ಕೆ ಕಟ್ಟಿದ್ದ ಕುದುರೆಗಳ ನೊಗವನ್ನು ಒಂದು ಬಾಣದಿಂದ ಕತ್ತರಿಸಿ ನಾಲ್ಕು ಬಾಣಗಳಿಂದ ಕುದುರೆಗಳನ್ನು ಕೆಡಹಿ ಒಂದು ಬಾಣದಿಂದ ಸಾರಥಿಯ ಶಿರಸ್ಸನ್ನು ಕತ್ತರಿಸಿ ಮೂರು ಬಾಣಗಳಿಂದ ರಥದ ಮೂಕಿಯನ್ನು ಒಡೆದನು. ಎರಡು ಬಾಣಗಳಿಂದ ರಥದ ಅಚ್ಚನ್ನು ಮುರಿದು ಹನ್ನೆರಡು ಬಾಣಗಳಿಂದ ಖರನ ಬಿಲ್ಲುಬಾಣಗಳನ್ನು ಕತ್ತರಿಸಿ ವಜ್ರಾಯುಧಕ್ಕೆ ಸಮಾನವಾದ ಹದಿಮೂರು ಬಾಣಗಳಿಂದ ಖರನನ್ನು ಹೊಡೆದನು. ಖರನು ರಥ ಕುದುರೆ ಸಾರಥಿ ಮೂಕಿ ಅಚ್ಚು ಬಿಲ್ಲು ಬಾಣ ಮೊದಲಾದವೆಲ್ಲವೂ ಹೋಗಲು ರಥದಿಂದ ಕೆಳಕ್ಕೆ ಧುಮುಕಿ ಕೈಯಲ್ಲಿ ಗದೆಯನ್ನು ತೆಗೆದುಕೊಂಡು ಭೂಮಿಯಲ್ಲಿ ಯುದ್ಧಕ್ಕಾಗಿ ನಿಂತನು. ಆ ಸಮಯದಲ್ಲಿ ಶ್ರೀರಾಮನಿಗೂ ಖರನಿಗೂ ಆಗುವ ಯುದ್ರವನ್ನು ನೋಡಬೇಕೆಂದು ಉತ್ಸಾಹದಿಂದ ಅಂತರಿಕ್ಷಮಾರ್ಗದಲ್ಲಿ ವಿಮಾನಾರೂಢರಾಗಿ ನೋಡುತ್ತಿದ್ದ ದೇವತೆಗಳು ಶ್ರೀರಾಮನ ಪರಾಕ್ರಮವನ್ನು ನೋಡಿ ಅತ್ಯಂತ ಸಂತೋಷಯುಕ್ತರಾದರು.

**ಖರನು ಶ್ರೀ ರಾಮನನ್ನು ನಿಂದಿಸಿದ್ದು:** ಆಮೇಲೆ ಅತ್ಯಂತ ತೇಜಸ್ವಿಯಾದ ಶ್ರೀರಾಮನು ಖರನನ್ನು ಕುರಿತು ಎಲೈ ಖರನೇ. ನೀನು ಬಲಿಷ್ಠನಾಗಿ ಚತುರಂಗ ಬಲಸಮೇತನಾಗಿದ್ದ ಸಮಯದಲ್ಲಿ ಲೋಕವಿರುದ್ಧವಾದ ಕ್ರೂರಕರ್ಮವನ್ನೇ ಮಾಡುತ್ತಿದ್ದೆ. ಸಮಸ್ತ ಪ್ರಾಣಿಗಳಿಗೂ ಕೋಪವನ್ನು ಹುಟ್ಟಿಸುವ ಪಾಪಕರ್ಮಿಯು ತ್ರಿಲೋಕನಾಯಕನಾದರೂ ಭೂಮಿಯಲ್ಲಿ ಚಿರಂಜೀವಿಯಾಗಿರಲಾರನು. ಲೋಕ ವಿರುದ್ಧವಾದ ಪಾಪಕರ್ಮವನ್ನು ಮಾಡುವ ದುರಾತ್ಮನನ್ನು ಸಮಸ್ತ ಜನರೂ ಸಮೀಪಿಸಿದ ದುಷ್ಟ ಸರ್ಪವನ್ನು ಕೊಲ್ಲುವಂತೆ ಕೊಲ್ಲುವರು. ಬುದ್ಧಿಪೂರ್ವಕವಾಗಿ ದ್ರವ್ಯ ಲೋಭದಿಂದಲೂ ಕಾಮಬುದ್ಧಿಯಿಂದಲೂ ಅಕೃತ್ಯವನ್ನು ಮಾಡಿದವನು ಕೆಡದಿರನು. ನೀನು ದಂಡಕಾರಣ್ಯವಾಸಿಗಳಾಗಿ ಮಹಾತ್ಮರಾದ ಋಷಿಗಳನ್ನು ಕೊಂದು ಅದರ ಫಲವನ್ನು ಪಡೆದೆ. ಲೋಕದಲ್ಲಿ ಕ್ರೂರನಾಗಿ ಪಾಪಕರ್ಮಗಳನ್ನು ಮಾಡುವವನು ಜನ್ಮಾಂತರದಲ್ಲಿ ಮಾಡಿದ ಪುಣ್ಯಫಲದಿಂದ ಐಶ್ವರ್ಯವಂತ ನಾಗಿದ್ದರೂ ಬೇರು ಹೋದ ಮರದಂತೆ ಭೂಮಿಯಲ್ಲಿ ಬಹುಕಾಲವಿರಲಾರನು.

ಮುಂದುವರಿಯುವುದು...

## ವಿಜಯದಶಮಿಯ ಮಹತ್ವ

■ ಶ್ರೀ. ವಿನೋದ ಕಾಮತ್,



ದಸರಾ ಎನ್ನುವ ಶಬ್ದದ ಒಂದು ವ್ಯುತ್ಪತ್ತಿಯು ದಶಹರಾ ಎಂದೂ ಇದೆ. ದಶ ಎಂದರೆ ಹತ್ತು, ಹರಾ ಎಂದರೆ ಸೋತಿವೆ. ದಸರಾದ ಮೊದಲ ಒಂಬತ್ತು ದಿನಗಳ ನವರಾತ್ರಿಗಳಲ್ಲಿ ಹತ್ತೂ ದಿಕ್ಕುಗಳು ದೇವಿಯ ಶಕ್ತಿಯಿಂದ ಸಂಪನ್ನವಾಗಿರುತ್ತವೆ ಮತ್ತು ನಿಯಂತ್ರಣಕ್ಕೊಳಪಟ್ಟಿರುತ್ತವೆ. ಅಂದರೆ ಹತ್ತೂ ದಿಕ್ಕುಗಳಲ್ಲಿನ ದಿಕ್ಪಾಲಕರು, ಗಣ್ಯರು ಮುಂತಾದವರ ಮೇಲೆ ನಿಯಂತ್ರಣವಿರುತ್ತದೆ. ಹತ್ತೂ ದಿಕ್ಕುಗಳ ಮೇಲೆ ವಿಜಯವು ದೊರಕಿರುತ್ತದೆ. ಇದಕ್ಕೆ ಸಂಬಂಧಪಟ್ಟಂತೆ ಈ ದಿನಕ್ಕೆ ದಶಹರಾ, ದಸರಾ, ವಿಜಯ ದಶಮಿ ಮುಂತಾದ ಹೆಸರುಗಳಿವೆ. ಇದು ಮೂರೂವರೆ ಮುಹೂರ್ತಗಳಲ್ಲಿ ಒಂದಾಗಿದೆ. ಆಶ್ವಯುಜ ಶುಕ್ಲ ದಶಮಿಗೆ ವಿಜಯದಶಮಿ ಎನ್ನುವ ಹೆಸರಿದೆ. ಇದು ನವರಾತ್ರಿ ಮುಗಿದ ನಂತರದ ದಿನವಾಗಿದೆ. ಆದುದರಿಂದ ಇದನ್ನು ನವರಾತ್ರಿಯ ಸಮಾಪ್ತಿಯ ದಿನವೆಂದೂ ಪರಿಗಣಿಸುತ್ತಾರೆ. ಕೆಲವು ಮನೆತನಗಳಲ್ಲಿ ನವರಾತ್ರಿಯ ದೇವಿಯನ್ನು ನವಮಿಯಂದು ಮತ್ತು ಕೆಲವರು ದಶಮಿಯಂದು ವಿಸರ್ಜನೆ ಮಾಡುತ್ತಾರೆ. ಈ ದಿನ ಸೀಮೋಲ್ಲಂಘನ, ಶಮೀ ಪೂಜೆ, ಅಪರಾಜಿತಾ ಪೂಜೆ ಮತ್ತು ಆಯುಧಪೂಜೆ ಈ ನಾಲ್ಕು ಕಾರ್ಯಗಳನ್ನು ಮಾಡಬೇಕಾಗಿರುತ್ತದೆ.

**ಸೀಮೋಲ್ಲಂಘನ ಅಂದರೇನು ಯಾವಾಗ ಮಾಡಬೇಕು :** ಅಪರಾಹ್ನ ಕಾಲದಲ್ಲಿ ಊರಿನ ಗಡಿಯಾಚೆ ಈಶಾನ್ಯ ದಿಕ್ಕಿನ ಕಡೆಗೆ ಸೀಮೋಲ್ಲಂಘನಕ್ಕಾಗಿ ಹೋಗುತ್ತಾರೆ ಮತ್ತು ಶಮೀವೃಕ್ಷ ಅಥವಾ ಮಂದಾರದ ವೃಕ್ಷವಿರುವಲ್ಲಿ ನಿಲ್ಲುತ್ತಾರೆ. ಮುಂದಿನ ಶ್ಲೋಕದೊಂದಿಗೆ ಶಮೀಪೂಜೆಗಾಗಿ ಪ್ರಾರ್ಥನೆಯನ್ನು ಮಾಡುತ್ತಾರೆ.

**ಶಮೀ ಶಮಯತೇ ಪಾಪಂ ಶಮೀ ಲೋಹಿತಕಂಟಕಾ ।**
**ಧಾರಿಣ್ಯರ್ಜುನಬಾಣಾನಾಂ ರಾಮಸ್ಯ ಪ್ರಿಯವಾದಿನೀ ॥**
**ಕರಿಷ್ಯಮಾಣಯಾತ್ರಾಯಾಂ ಯಥಾಕಾಲ ಸುಖಂ ಮಯಾ ।**
**ತತ್ರ ನಿರ್ವಿಘ್ನಕರ್ತ್ರೀ ತ್ವಂ ಭವ ಶ್ರೀರಾಮಪೂಜಿತೇ ॥**

**ಅರ್ಥ :** ಶಮಿಯು ಪಾಪಶಮನ ಮಾಡುತ್ತದೆ. ಶಮಿಯ ಮುಳ್ಳುಗಳು ನಸುಗೆಂಪಾಗಿರುತ್ತವೆ. ಶಮಿಯು ರಾಮನಿಗೆ ಪ್ರಿಯವಾದುದನ್ನು ನುಡಿಯುವಂತಹದ್ದು, ಅರ್ಜುನನ ಬಾಣಗಳನ್ನು ಧಾರಣೆ ಮಾಡುವಂತಹದ್ದಾಗಿದೆ. ಎಲೈ ಶಮಿಯೇ, ರಾಮನು ನಿನ್ನನ್ನು ಪೂಜಿಸಿದ್ದನು. ನಾನು ಎಂದಿನಂತೆ ವಿಜಯಯಾತ್ರೆಗೆ ಹೊರಡುವವನಿದ್ದೇನೆ. ನನ್ನ ಈ ಯಾತ್ರೆಯು ನಿರ್ವಿಘ್ನ, ಸುಖಕರವಾಗುವಂತೆ ಮಾಡು.

**ಮಂದಾರವೃಕ್ಷದ ಪೂಜೆ ಮಾಡುವುದಿದ್ದಲ್ಲಿ ಮುಂದಿನ ಮಂತ್ರವನ್ನು ಹೇಳುತ್ತಾರೆ.**

**ಅಶ್ಮಂತಕ ಮಹಾವೃಕ್ಷ ಮಹಾದೋಷ ನಿವಾರಣ ।**
**ಇಷ್ಟಾನಾಂ ದರ್ಶನಂ ದೇಹಿ ಕುರು ಶತ್ರುವಿನಾಶನಮ್ ॥**

**ಅರ್ಥ:** ಎಲೈ ಅಶ್ಮಂತಕ ಮಹಾ ವೃಕ್ಷವೇ, ನೀನು ಮಹಾದೋಷಗಳ ನಿವಾರಣಕಾರಿಯಾಗಿರುವೆ. ನನ್ನ ಮಿತ್ರರ ದರ್ಶನವನ್ನು ಮಾಡಿಸು ಮತ್ತು ನನ್ನ ಶತ್ರುಗಳನ್ನು ನಾಶ ಮಾಡು. ಅನಂತರ ಆ ವೃಕ್ಷದ ಬುಡದಲ್ಲಿ ಅಕ್ಕಿ, ಅಡಿಕೆ ಮತ್ತು ಬಂಗಾರದ ಅಥವಾ ತಾಮ್ರದ ನಾಣ್ಯಗಳನ್ನು ಇಡುತ್ತಾರೆ. ಬಳಿಕ ವೃಕ್ಷಕ್ಕೆ ಪ್ರದಕ್ಷಿಣೆ ಹಾಕಿ ಅದರ ಬುಡದಲ್ಲಿನ ಸ್ವಲ್ಪ ಮಣ್ಣು ಮತ್ತು ಮರದ ಎಲೆಗಳನ್ನು ಮನೆಗೆ ತರುತ್ತಾರೆ. ಶಮಿಯ ಎಲೆಗಳ ನ್ನಲ್ಲದೇ ಮಂದಾರದ ಎಲೆಗಳನ್ನು ಬಂಗಾರ ವೆಂದು ದೇವರಿಗೆ ಅರ್ಪಿಸುತ್ತಾರೆ ಮತ್ತು ಆಪ್ತಮಿತ್ರರಿಗೆ ಕೊಡುತ್ತಾರೆ. ಈ ಬಂಗಾರವನ್ನು ಕಿರಿಯರು ಹಿರಿಯರಿಗೆ ಕೊಡಬೇಕು ಎನ್ನುವ ಸಂಕೇತವಿದೆ.

**ಆಯುಧಪೂಜೆ ಶಸ್ತ್ರಪೂಜೆ ಅಂದರೆ ಏನು:** ಈ ದಿನ ರಾಜರು, ಸಾಮಂತರು, ಸರದಾರರು ತಮ್ಮತಮ್ಮ ಶಸ್ತ್ರಗಳನ್ನು ಸ್ವಚ್ಛಗೊಳಿಸಿ, ಸಾಲಾಗಿ ಇಟ್ಟು ಪೂಜೆ ಮಾಡುತ್ತಾರೆ. ಹಾಗೆಯೇ ರೈತರು ಮತ್ತು ಕುಶಲ ಕರ್ಮಿಗಳು ತಮ್ಮತಮ್ಮ ಶಸ್ತ್ರಗಳ ಪೂಜೆಯನ್ನು ಮಾಡುತ್ತಾರೆ. ಕೆಲವರು ಈ ಪೂಜೆಯನ್ನು ನವಮಿಯಂದೂ ಮಾಡುತ್ತಾರೆ. ದಸರಾ ವಿಜಯದ ಹಬ್ಬವಾಗಿರುವುದರಿಂದ ಈ ದಿನ ರಾಜರಿಗೆ ವಿಶೇಷ ವಿಧಿಯನ್ನು ಹೇಳಲಾಗಿದೆ. ಇದು ವಿಜಯದ, ಪರಾಕ್ರಮದ ಹಬ್ಬವಾಗಿದೆ. ಅರ್ಜುನನು ಅಜ್ಞಾತವಾಸದಲ್ಲಿ ಶಮಿಯ ಉಡಿಯಲ್ಲಿ ಇಟ್ಟ ಶಸ್ತ್ರಗಳನ್ನು ತೆಗೆದು, ವಿರಾಟನ ಗೋವುಗಳನ್ನು ಸೆರೆ ಹಿಡಿದ ಕೌರವಸೈನ್ಯದ ಮೇಲೆ ಆಕ್ರಮಣ ಮಾಡಿ ಇದೇ ದಿನ ವಿಜಯವನ್ನು ಸಂಪಾದಿ ಸಿದ್ದನು. ಈ ದಿನದಂದೇ ಶ್ರೀರಾಮಚಂದ್ರನು ರಾವಣನ ಮೇಲೆ ವಿಜಯ ಪಡೆದು ಆತನನ್ನು ವಧಿಸಿದ್ದನು ಎಂದು ನಂಬಲಾಗುತ್ತದೆ. ಈ ಘಟನೆಗಳ ಸಂಕೇತವಾಗಿ ಈ ದಿನಕ್ಕೆ ವಿಜಯದಶಮಿ ಎಂದು ಹೆಸರು ಬಂದಿದೆ. ಹಾಗೆ ನೋಡಿದರೆ ಈ ಹಬ್ಬವು ಬಹಳ ಪ್ರಾಚೀನ ಕಾಲದಿಂದ ನಡೆದು ಬಂದಂತಿದೆ. ಪ್ರಾರಂಭದ ಕಾಲದಲ್ಲಿ ಇದು ಕೃಷಿಗೆ ಸಂಬಂಧಪಟ್ಟ ಒಂದು ಲೋಕೋತ್ಸವವಾಗಿತ್ತು. ಮಳೆಗಾಲದಲ್ಲಿ ಬಿತ್ತಿದ ಪ್ರಥಮ ಪೈರು ಮನೆಗೆ ಬಂದಾಗ ರೈತರು ಈ ಉತ್ಸವ ವನ್ನು ಆಚರಿಸುತ್ತಿದ್ದರು. ಕಲಶ ಸ್ಥಾಪನೆಯ ದಿನ ಕಲಶದ ಕೆಳಗಿನ ಪೀಠದಲ್ಲಿ ಒಂಭತ್ತು ಧಾನ್ಯಗಳನ್ನು ಬಿತ್ತುತ್ತಾರೆ. ದಸರಾದಂದು ಈ ಧಾನ್ಯದ ಮೊಳಕೆಗಳನ್ನು ತೆಗೆದು ದೇವರಿಗೆ ಅರ್ಪಿಸುತ್ತಾರೆ. ಅನೇಕ ಕಡೆ ಗದ್ದೆಯಲ್ಲಿ ಬೆಳೆದ ಭತ್ತದ ತೆನೆಗಳನ್ನು ಕೊಯ್ದು ತಂದು ಅವುಗಳನ್ನು ಮನೆಯ ಪ್ರವೇಶದ್ವಾರಕ್ಕೆ ತೋರಣದಂತೆ ಕಟ್ಟುತ್ತಾರೆ. ಈ ಪದ್ಧತಿಯಿಂದ ಕೃಷಿಗೆ ಸಂಬಂಧಪಟ್ಟ ಈ ಹಬ್ಬದ ಸ್ವರೂಪ ಸ್ಪಷ್ಟವಾಗುತ್ತದೆ. ಮುಂದೆ ಈ ಹಬ್ಬಕ್ಕೆ ಧಾರ್ಮಿಕ ಸ್ವರೂಪವನ್ನು ಕೊಡಲಾಯಿತು ಮತ್ತು ಇತಿಹಾಸ ಕಾಲದಲ್ಲಿ ಇದು ರಾಜಕೀಯ ಸ್ವರೂಪದ ಹಬ್ಬವಾಯಿತು.

# ಮಹೇಶ್ ಶೆಟ್ಟಿ ತಿಮರೋಡಿಗೆ ವಿಚಾರಣೆಗೆ ಹಾಜರಾಗಲು ಡೆಡ್ ಲೈನ್

• ಉದಯವಾಹಿನಿ, ಬೆಳ್ತಂಗಡಿ

ಅಕ್ರಮ ಶಸ್ತ್ರಾಸ್ತ್ರ ಕೇಸ್‌ನಲ್ಲಿ ಮಹೇಶ್ ಶೆಟ್ಟಿ ತಿಮರೋಡಿಗೆ ಡೆಡ್ ಲೈನ್ ಎದುರಾಗಿದೆ. ಈವರೆಗೆ ಎರಡು ಬಾರಿ ವಿಚಾರಣೆಗೆ ಗೈರಾಗಿರುವ ತಿಮರೋಡಿ, ಇಂದು ಮೂರನೇ ಬಾರಿ ವಿಚಾರಣೆಗೆ ಹಾಜರಾಗಬೇಕಿದೆ. ಮೂರನೇ ನೋಟಿಸ್‌ಗಾದ್ರೂ ತಿಮರೋಡಿ ವಿಚಾರಣೆಗೆ ಹಾಜರಾಗ್ತಾರಾ ಎಂಬ ಕುತೂಹಲ ಮೂಡಿದೆ. ಬೆಳ್ತಂಗಡಿ ಪೊಲೀಸರು 21, 25 ಕ್ಕೆ ಕೊಟ್ಟಿದ್ದ ನೋಟಿಸ್ ಗೆ ತಿಮರೋಡಿ ಗೈರಾಗಿದ್ದರು.

ಈಗ ಮೂರನೇ ನೋಟಿಸ್ ಸೆಪ್ಟೆಂಬರ್ 29, ಅಂದರೆ ಇಂದು ಹಾಜರಾಗುವಂತೆ ನೋಟಿಸ್ ನೀಡಲಾಗಿದೆ. ತಿಮರೋಡಿಗೆ ಕಾನೂನು ಪ್ರಕಾರ ನೋಟಿಸ್ ನೀಡಿದ್ದು, ಇಂದು ಹಾಜರಾಗದೇ ಇದ್ದರೆ, ತನಿಖೆಗೆ ಸಹಕರಿಸುತ್ತಿಲ್ಲ ಎಂದು ಪ್ರಕರಣ ದಾಖಲಾಗುವ ಸಾಧ್ಯತೆ ಇದೆ. ದಕ್ಷಿಣ ಕನ್ನಡ ಸೆಷನ್ ಕೋರ್ಟ್ ನಲ್ಲಿ ನಿರೀಕ್ಷಣಾ ಜಾಮೀನು ಅರ್ಜಿಯೂ ವುಚಾರಣೆ ನಡೆಯಲಿದೆ. ಗಡಿಪಾರು ಸಂಕಷ್ಟವೂ ಎದುರಾಗಿದ್ದು, ತಿಮರೋಡಿ ಮೊಬೈಲ್ ಫೋನ್ ಸ್ವಿಚ್ ಆಫ್ ಮಾಡಿ ತಲೆಮರೆಸಿಕೊಂಡಿದ್ದಾರೆ. ಎರಡೆರಡು ಪ್ರಕರಣಗಳಲ್ಲಿ ತಿಮರೋಡಿಗೆ ಸಂಕಷ್ಟ ಎದುರಾಗಿದ್ದು, ಕಾನೂನು ಪ್ರಕಾರ ಬಂಧನಗೊಳಿಸುವ ಸಾಧ್ಯತೆ ಇದೆ.



**ಮಾಜಿ ಅಧ್ಯಕ್ಷರಿಗೂ ಎಸ್‌ಐಟಿ ಬುಲಾವ್**

ಸೆಪ್ಟೆಂಬರ್ 30 ರಂದು ಮಂಗಳೂರು ಸೆಷನ್ಸ್ ಕೋರ್ಟಿನಲ್ಲಿ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ನಡೆಯಲಿದ್ದು, ಜಾಮೀನು ಮಂಜೂರು ಆಗದೇ ಹೋದರೆ, ಬಂಧನಕ್ಕೆ ಕ್ರಮ ಕೈಗೊಳ್ಳುವ ಸಾಧ್ಯತೆ ದಟ್ಟವಾಗಿದೆ.

**ಎರಡು ಪೊಲೀಸರ ತಂಡಗಳಿಂದ ಹುಡುಕಾಟ:** ಸೋಮವಾರ ಮಧ್ಯಾಹ್ನವಾದರೂ ವಿಚಾರಣೆಗೆ ತಿಮರೋಡಿ ಹಾಜರಾಗಿಲ್ಲ. ಫೋನ್ ಕೂಡಾ ಸ್ವಿಚ್ ಆಫ್ ಆಗಿದೆ. ಹೀಗಾಗಿ ಹಾಜರಾಗುವ ಸಾಧ್ಯತೆಯೂ ಕಡಿಮೆ ಇರುವ ಹಿನ್ನೆಲೆ ಪೊಲೀಸರು ತಿಮರೋಡಿಗಾಗಿ ಹುಡುಕಾಟ ತೀವ್ರಗೊಳಿಸಿದ್ದಾರೆ. 2 ತಂಡ ರಚಿಸಿ ಹುಡುಕಾಟ ನಡೆಸುತ್ತಿದ್ದಾರೆ.

**ಧರ್ಮಸ್ಥಳ ಗ್ರಾಪಂ ನ 4 ಮಂದಿ ಅಧ್ಯಕ್ಷರು ವಿಚಾರಣೆಗೆ ಹಾಜರ್:** ಧರ್ಮಸ್ಥಳ ಅನಧಿಕೃತ ಶವ ಹೂತ ಪ್ರಕರಣಗಳ ಸಂಬಂಧ, ಎಸ್ ಐಟಿ ವಿಚಾರಣೆ ಮುಂದುವರಿದಿದ್ದು, ಅಧಿಕಾರಿಗಳು ನಾಲ್ಕು ಮಂದಿ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರುಗಳಿಗೆ ನೋಟಿಸ್ ನೀಡಿದ್ದು ಸೋಮವಾರ ಬೆಳಗ್ಗೆಯೇ ವಿಚಾರಣೆಗೆ ಹಾಜರಾಗಿದ್ದಾರೆ.

ಮಾಜಿ ಅಧ್ಯಕ್ಷರಾದ ಕೇಶವ್ ಬೆಳಾಲ್, ಪ್ರಭಾಕರ ಪೂಜಾರಿ, ಗೀತಾ ಹಾಗೂ ಚಂದನ್ ಕಾಮತ್ ವಿಚಾರಣೆಗೆ ಹಾಜರಾಗಿದ್ದಾರೆ.ಯುಡಿಆರ್ ಪ್ರಕರಣಗಳಲ್ಲಿ ಶವ ಹೂತ ಕೇಸ್ ಗಳಿಗೆ ಬಿಲ್ ಪಾವತಿಯಾಗಿದ್ದು, ಈ ಬಗ್ಗೆ ಮಾಹಿತಿ ಸಂಗ್ರಹಿಸಲು ಹಾಗೂ ತನಿಖೆಗಾಗಿ ಕರೆಸಲಾಗಿದೆ. ಈ ಹಿಂದೆಯೂ ಧರ್ಮಸ್ಥಳ ಗ್ರಾಮ ಪಂಚಾಯತ್ ಸಿಬ್ಬಂದಿಗಳ ವಿಚಾರಣೆ, ದಾಖಲೆಗಳ ಪರಿಶೀಲನೆಯನ್ನು ಎಸ್‌ಐಟಿ ನಡೆಸಿತ್ತು.

# ಕ್ರಿಯಾಯೋಜನೆ ಸಿದ್ದಪಡಿಸಿ ಕೊಟ್ಟಿದರೆ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ

## ಕೆಕೆಆರ್ ಡಿಬಿಯಿಂದ 89ಕೋಟಿ ಮಾತ್ರ ಬಂದಿದ್ದು ಅಕ್ಷರ ಅವಿಷ್ಕಾರಕ್ಕೆ ಶೇಕಡಾ 25ಪ್ರತಿಶತಃ ಮೀಸಲು: ಶಾಸಕ ಡಾ.ಅವಿನಾಶ ಜಾಧವ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿಗೆ ಕೆಕೆಆರ್ ಡಿಬಿ ಯಿಂದ ಕೇವಲ 89ಕೋಟಿ ಮಾತ್ರ ಬಂದಿದ್ದು,ಶೇಕಡಾ 25ರಷ್ಟು ಅಕ್ಷರ ಅವಿಷ್ಕಾರಕ್ಕೆ ಮೀಸಲಿಡಲಾಗಿದೆ,ಡಿಎಂಎಫ್ ಯೋಜನೆಯಡಿ 10ಕೋಟಿ ಅನುದಾನ ತಡೆಗೋಡೆ ನಿರ್ಮಿಸಲು ಕಲ್ಲೂರ, ಚಿಂಚೋಳಿ, ಕಾಳಗಿ ಇನ್ನೀತರ ಕ್ರಿಯಾಯೋಜನೆ ಸಿದ್ದಪಡಿಸಿ ಕೊಟ್ಟಿದರೆ ಸರ್ಕಾರ ಅನುದಾನ ಬಿಡುಗಡೆ ಮಾಡಿಲ್ಲ ಎಂದು ಶಾಸಕ ಡಾ.ಅವಿನಾಶ ಜಾಧವ ಕಾಂಗ್ರೇಸ್ ನವರಿಗೆ ತಿರುಗೇಟು ನೀಡಿದರು.

ತಾಲ್ಲೂಕಿನ ಶಾಧಿಪೂರ ರಸ್ತೆ, ಕೆರೆ, ಚಾಪ್ಲಾನಾಯಕ ತಾಂಡಾ, ಕುಂಚಾವರಂ, ಮೊಗದುಂಪೂರ ರಸ್ತೆ,ಲಿಂಗಾನಗರ,ಭೋನಸಪೂರ ಸೇರಿದಂತೆ ಹಲವೆಡೆ ಪ್ರಕೃತಿ ವಿಕೋಪದಡಿ ಹಾನಿಯಾದ ಪ್ರದೇಶ ವಿಕ್ಷಿಸಿ ಹಾಗೂ ಬೆಳೆಹಾನಿ ವಿಕ್ಷಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೇಸ್ ರಾಜ್ಯ ಉಪಾಧ್ಯಕ್ಷ ಸುಭಾಷ್ ರಾಠೋಡ್ 300-400ಕೋಟಿ ರೂ.ಕ್ಷೇತ್ರದ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಅಗಿದೆ ಎಂದು ಹೇಳಿದ್ದು ಎಲ್ಲಿ ಬಂದಿದೆ ಎಂದು ತೋರಿಸಲಿ ಕುತಂತ್ರ ಮಾಡಿ ಜನರಿಗೆ ಸುಳ್ಳು ಹೇಳುವುದು ಬಿಡಲಿ ಎಂದು ತಿರುಗೇಟು ನೀಡಿದರು. ಸುಭಾಷ್ ರಾಠೋಡ್ ಅಭಿವೃದ್ಧಿಗಾಗಿ ಕೈಜೋಡಿಸಲಿ ಸಚಿವರ ಹತ್ತಿರ ಹೋಗಿ ಅನುದಾನ ಬಿಡುಗಡೆಗೊಳಿಸಿ ಬರಲಿ ಚುನಾವಣೆ ಸಂದರ್ಭ ರಾಜಕೀಯ ಮಾಡೋಣ ಈಗ ಅದನ್ನು ಬಿಟ್ಟು ಅಭಿವೃದ್ಧಿಗೆ ಕೈಜೋಡಿಸಲಿ,ಪ್ರಚಾರಕ್ಕೆ ನಾನು





ಉದಯವಾಹಿನಿ ಚಿತ್ರ

**10ಕೋಟಿ ಅನುದಾನ ತಡೆಗೋಡೆ**

ರಾಜಕೀಯ ಮಾಡಲ್ಲ ಅಭಿವೃದ್ಧಿಗಾಗಿ ರಾಜಕೀಯ ಮಾಡುತ್ತಿದ್ದೇನೆ ಮಂಗಳವಾರ ಮುಖ್ಯಮಂತ್ರಿಗಳು ಕಲಬುರ್ಗಿಗೆ ಆಗಮಿಸುತ್ತಿದ್ದು ಕ್ಷೇತ್ರದ ಅಭಿವೃದ್ಧಿಗಾಗಿ ಅನುದಾನ ನೀಡಲು ಮನವಿ ಸಲ್ಲಿಸಲಾಗುವುದು,ಈಗಾಗಲೇ ಪ್ರಕೃತಿ ವಿಕೋಪದಿಂದ ಸುಮಾರು ಮುಖ್ಯ ರಸ್ತೆಗಳು, ಸೇತುವೆಗಳು, ಸಿಡಿಗಳು ಹಾಳಾಗಿದ್ದು ಅಂದಾಜು 50ಕೋಟಿ ರೂ.ಯಷ್ಟು ನಷ್ಟವಾಗಿದೆ,ಹಾಗೂ ರೈತರ ಬೆಳೆಗಳು ಸಾಕಷ್ಟು ನಷ್ಟವಾಗಿದೆ ಪರಿಹಾರ ನೀಡಬೇಕು ಎಂದರು.

ನಾಗಯಿದ್ಲಾಯಿ, ಶಾಧಿಪೂರ ಕೆರೆಗಳು ಮರುನಿರ್ಮಾಣಕ್ಕಾಗಿ ಅನೇಕ ಬಾರಿ ಪತ್ರ ಬರೆದಿದ್ದೇನೆ ಕಾಂಗ್ರೇಸ್ ಸರ್ಕಾರ ಅನುದಾನ ಬಿಡುಗಡೆ ಮಾಡುತ್ತಿಲ್ಲವೆಂದರು,ಕೆರೆ ನಿರ್ಮಾಣಕ್ಕೆ ಶಾಸಕರ ನಿರ್ಲಕ್ಷ್ಯ ಎಂದು ಕಾಂಗ್ರೇಸ್‌ನ ರಾಠೋಡ್ ಹೇಳಿದ್ದು ನನ್ನ ಪ್ರಯತ್ನ ನಾನು ಮಾಡಿದ್ದೇನೆ ಅವರು ಎಂದಾದರೂ ಕೆರೆ ನಿರ್ಮಾಣಕ್ಕೆ ಅನುದಾನಕ್ಕಾಗಿ ಅವರ ಸಚಿವರ ಹತ್ತಿರ ಹೋಗಿ ಹೇಳಿದ್ದಾರಾ ಅಭಿವೃದ್ಧಿಗಾಗಿ ಅವರು ಸಹ ಕೆರೆಗೆ ಅನುದಾನ ಬಿಡುಗಡೆ ಮಾಡಿಕೊಂಡು ಬರಲಿ ಅವರ ಸರ್ಕಾರವಿದೆ, ಇದರಲ್ಲಿ ಯಾಕೆ ರಾಜಕಾರಣ ಮಾಡುತ್ತಿದ್ದಾರೆ, ಶಾಧಿಪೂರ ಕೆರೆಯಿಂದ ರೈತರಿಗೆ ತೊಂದರೆಯಿಲ್ಲ, ಮೇಲ್ಗಡೆ ತೇಲಂಗಾಣದ ಕೆರೆ ಒಡೆದಿರುವುದರಿಂದ ಶಾಧಿಪೂರ ಸುತ್ತಮುತ್ತ ರೈತರ ಹೊಲಗಳಿಗೆ ನೀರು ನುಗ್ಗಿ ರೈತರ ಕಬ್ಬು ಸೇರಿದಂತೆ ಇನ್ನೀತರ ಬೆಳೆಗಳು ಸಂಪೂರ್ಣ ಹಾನಿಯಾಗಿದೆ ಮೊದಲು ವಾಸ್ತುವಂಶ ತಿಳಿದುಕೊಂಡು ಸುಭಾಷ್ ರಾಠೋಡ್ ಮಾತನಾಡಲಿ ಎಂದು ಶಾಸಕ ಡಾ.ಅವಿನಾಶ ಜಾಧವ ತಿರುಗೇಟು ನೀಡಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ತಾಪಂ. ಇಓ ಸಂತೋಷ ಚವ್ಹಾಣ, ಟಿಹೆಚ್‌ಓ ಮಹ್ಮದ್ ಗಫಾರ್, ಕೃಷಿ ವೀರಶೇಟ್ಟಿ ರಾಠೋಡ್, ಡಾ.ಬಾಲಾಜೀ, ಸೇರಿದಂತೆ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಮುಖಂಡರಾದ ಡಿ.ಅಶೋಕ ಮೋಗದಂಪೂರ, ಗೋಪಾಲ, ವಿಜಯಕುಮಾರ, ಕೆಎಂ ಬಾರಿ, ರಾಜು ಪವ್ಹಾರ, ಪ್ರೇಮಸಿಂಗ್ ಜಾಧವ, ಅಶೋಕ ಚವ್ಹಾಣ, ಭೀಮಶೇಟ್ಟಿ ಮುರುಡಾ, ಅಮರ ಲೋಡನೂರ, ಅನೇಕರಿದ್ದರು.


**ಅಧಿಕಾರಿಗಳಿಗೆ ತರಾಟೆಗೆ; ಶಾಸಕ ಜಾಧವ**

**ತಾಲ್ಲೂಕಿನಲ್ಲಿ ಪ್ರಕೃತಿ ವಿಕೋಪದಿಂದ ಹಾನಿಯಾದ ಪ್ರದೇಶಗಳಿಗೆ ಶಾಸಕ ಅವಿನಾಶ ಜಾಧವ ಕಲ್ಲೂರ ಗ್ರಾಮಕ್ಕೆ ಭೇಟಿ ನೀಡಿದಾಗ ಅಧಿಕಾರಿಗಳು ತಾವೆಲ್ಲರೂ ಬರಲ್ಲಿಲ್ಲಾ ಕಾಂಗ್ರೇಸ್ ಪರಾಜೀತ ಅಭ್ಯರ್ಥಿ ಬಂದಾಗ ತಾಲ್ಲೂಕಾ ಮಟ್ಟದ ಅಧಿಕಾರಿಗಳು ಯಾಕೆ ಹೋಗಿದ್ದೀರಿ ಅವರೇನು ಮಾಜಿ ಎಂಎಲ್ಎ, ಮಾಜಿ ಎಂಪಿನಾ, ಎಸ್ಕೇಟ್ ಹೇಗೆ ಕೊಟ್ಟೀದೀರಾ ಎಂದು ತಾಲ್ಲೂಕಾ ಮಟ್ಟದ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡು ತಾವು ಪ್ರಚಾರಕ್ಕೆ ಹೋಗುತ್ತೀರಾ ನಾನು ಸುಮ್ನೇ ಇರುತ್ತೇನೆ ಎಂದು ಏನು ಬೇಕಾಗಿದ್ದು ಮಾಡುತ್ತೀರಾ ಎಂದು ಹೇಳುತ್ತಾ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮಾತನಾಡುತ್ತೇನೆ ಅಧಿಕಾರಿಗಳ ನಡತೆ ವಿರುದ್ಧ ಪ್ರಶ್ನೇಸುತ್ತೇನೆ ಎಂದು ಶಾಸಕ ಡಾ.ಅವಿನಾಶ ಜಾಧವ ಅಧಿಕಾರಿಗಳ ಮೇಲೆ ಗರಂ ಆದರು.**

# ಪ್ರವಾಹ ಪೀಡಿತ ಪ್ರದೇಶಗಳಿಗೆ ಆರ್‌ಸಿ, ಸಿಇಒ ಭೇಟಿ

• ಉದಯವಾಹಿನಿ, ಕಲಬುರಗಿ

ಭೀಮಾನದಿಯ ಪ್ರವಾಹದಿಂದ ಸಂಕಟ ಎದುರಿಸುತ್ತಿರುವ ತಾಲ್ಲೂಕಿನ ಫರತಾಬಾದ್, ಸರಡಗಿ ಗ್ರಾಮಕ್ಕೆ ಪ್ರಾದೇಶಿಕ ಆಯುಕ್ತ ಜಹೀರಾ ನಸ್ಸಿಮ್ ಭೇಟಿ ನೀಡಿ ಪರಿಶೀಲಿಸಿದರು. ತಹಶೀಲ್ದಾರ್ ಕೆ.ಆನಂದಶೀಲ ಅವರಿಂದ ಸಂತ್ರಸ್ತರ ಸ್ಥಳಾಂತರ, ಕಾಳಜಿ ಕೇಂದ್ರ ಸೇರಿದಂತೆ ಇನ್ನಿತರ ಮಾಹಿತಿ ಪಡೆದ ಅವರು, ಯಾವುದೇ ಮಾನವ ಹಾನಿಯಾಗದಂತೆ ಅಧಿಕಾರಿಗಳು ಸ್ಥಳದಲ್ಲಿದ್ದು, ಜನರನ್ನು ಸಂರಕ್ಷಿಸಬೇಕು ಎಂದು ಸೂಚಿಸಿದರು. ಕೂಡಿ ದರ್ಗಾದಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರಕ್ಕೂ ಭೇಟಿ ನೀಡಿದ ಅವರು, ಸಂತ್ರಸ್ತರಿಗೆ ಗುಣಮಟ್ಟದ ಊಟ ಉಪಚಾರದ ವ್ಯವಸ್ಥೆ ಮಾಡಬೇಕು. ಆರೋಗ್ಯ ತಪಾಸಣೆ ಮಾಡಬೇಕು. ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಎಲ್ಲಾ ರೀತಿಯ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.



ಉದಯವಾಹಿನಿ ಚಿತ್ರ

**ಜಿಲ್ಲಾ ಪಂಚಾಯಿತಿ ಸಿಇಒ ಭೇಟಿ:** ಚಿತ್ತಾಪುರ ತಾಲ್ಲೂಕಿನ ಚಾಮನೂರ ಮತ್ತು ಕಡಬೂರ ಗ್ರಾಮಗಳ ನೆರೆ ಪೀಡಿತ ಪ್ರದೇಶಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್‌ಸಿಂಗ್ ಮೀನಾ ಅವರು ಭೇಟಿ ನೀಡಿ ಎನ್‌ಡಿಆರ್‌ಎಫ್ ತಂಡದ ಜೊತೆಯಲ್ಲಿ ಬೋಟ್‌ನಲ್ಲಿ ತೆರಳಿ ವೀಕ್ಷಣೆ ಮಾಡಿದರು. ಇದೇ ಸಂದರ್ಭದಲ್ಲಿ ಕುಂದನೂರ ಗ್ರಾಮದ ಕಾಳಜಿ ಕೇಂದ್ರ ಹಾಗೂ ವಾಡಿ ಪಟ್ಟಣದ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ಸಂತ್ರಸ್ತರೊಂದಿಗೆ ಉಪಹಾರ ಸೇವಿಸಿದರು. ಅಲ್ಲಿನ ಪರಿಸ್ಥಿತಿ ಅವಲೋಕಿಸಿ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಪ್ರವಾಹ ಪೀಡಿತರಿಗೆ ಯಾವುದೇ ತೊಂದರೆಯಾಗದಂತೆ ಸಕಲ ಸೌಕರ್ಯ ಕಲ್ಪಿಸಲು ಸೂಚಿಸಿದರು.

# ಜಾರಕಿಹೊಳಿ ವಿರುದ್ಧ ಕತ್ತಿ ಕುಟುಂಬದ ಮೇಲುಗೈ

• ಉದಯವಾಹಿನಿ, ಬೆಳಗಾವಿ

ಜಿದ್ದಾಜಿದ್ದಿನ ರಾಜಕೀಯಕ್ಕೆ ಹೆಸರಾದ ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಹುಕ್ಕೇರಿ ಸಹಕಾರ ಸಂಘದ ಚುನಾವಣೆ ಭಾರೀ ಸದ್ದನ್ನು ಮಾಡುತ್ತಿತ್ತು. ಯಾಕೆಂದರೆ, ಜಿಲ್ಲೆಯ, ರಾಜಕೀಯವಾಗಿ ಬಹಳ ಪ್ರಭಾವವಿರುವ ಎರಡು ಕುಟುಂಬಗಳ ನಡುವೆ, ಈ ಚುನಾವಣೆ ಪ್ರತಿಷ್ಠೆಯ ವಿಷಯವಾಗಿತ್ತು. ಹುಕ್ಕೇರಿ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಚುನಾವಣೆ , ಸತೀಶ್ ಜಾರಕಿಹೊಳಿ ಕುಟುಂಬ ಮತ್ತು ಕತ್ತಿ ಕುಟುಂಬದ ನಡುವೆ ಭಾರೀ ಮೇಲಾಟಕ್ಕೆ ಕಾರಣವಾಗಿತ್ತು. ಈ ಚುನಾವಣೆಯಲ್ಲಿ, ಕತ್ತಿ ಕುಟುಂಬ ಗೆಲುವು ಸಾಧಿಸುವ ಮೂಲಕ, ಮೇಲುಗೈ ಸಾಧಿಸಿದೆ. ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘ ಚುನಾವಣೆಯಲ್ಲಿ ಕತ್ತಿ ಕುಟುಂಬ ಗೆಲುವು ಸಾಧಿಸಿದೆ. ಗೆದ್ದ ಬೆನ್ನಲ್ಲೇ, ಸ್ಟ್ರ್ಯಾಟರ್ಜಿ ಮಾಡಲು ಅವರ ಹಾಗೇ ನಾಲ್ಕು ನಾಲ್ಕು ಜನ ನಾವು ಬಂದಿಲ್ಲ ಎಂದು ದಿವಂಗತ ಉಮೇಶ್ ಕತ್ತಿಯ ಪುತ್ರ, ಬಿಜೆಪಿಯ ಶಾಸಕರೂ ಆಗಿರುವ ನಿಖಿಲ್ ಕತ್ತಿ, ಸತೀಶ್ ಜಾರಕಿಹೊಳಿಗೆ ಟಾಂಗ್ ನೀಡಿದ್ದಾರೆ. ಸಹಕಾರಿ ಸಂಘದ ಚುನಾವಣೆಯಲ್ಲಿ ಒಟ್ಟು 15 ನಿರ್ದೇಶಕ ಸ್ಥಾನಕ್ಕೆ ಚುನಾವಣೆ ನಡೆದಿತ್ತು.

ಹದಿನೈದಕ್ಕೆ ಹದಿನೈದು ಸ್ಥಾನವನ್ನು ರಮೇಶ್ ಕತ್ತಿ ನೇತೃತ್ವದ ಬಣ ಗೆಲ್ಲುವ ಮೂಲಕ, ಸತೀಶ್ ಜಾರಕಿಹೊಳಿ ಬಣ ತೀವ್ರ ಮುಖಭಂಗವನ್ನು ಎದುರಿಸಿದೆ. ಬೆಳಗಾವಿ ಜಿಲ್ಲಾ ರಾಜಕೀಯದಲ್ಲಿ ಬಹಳ ಮಹತ್ವದ ಚುನಾವಣೆ ಇದಾಗಿತ್ತು. ಜಾರಕಿಹೊಳಿ ಕುಟುಂಬದ ಬೆಳಗಾವಿ ಜಿಲ್ಲಾ ಉಸ್ತುವಾರಿ ಸತೀಶ್‌ಜಾರಕಿಹೊಳಿ,





ಉದಯವಾಹಿನಿ ಚಿತ್ರ

**ವೈಯಕ್ತಿಕ ವಿಷಯ ಏನೂ ಇಲ್ಲ**

ಬಾಲಚಂದ್ರ ಜಾರಕಿಹೊಳಿ, ಲಖನ್ ಜಾರಕಿಹೊಳಿ, ಮಾಜಿ ಚಿಕ್ಕೋಡಿಯ ಸಂಸದ ಅಣ್ಣಾ ಸಾಹೇಬ ಜೊಲ್ಲೆ ನೇತೃತ್ವದಲ್ಲಿ ನಡೆದಿದ್ದ ಹುಕ್ಕೇರಿ ಸಹಕಾರ ಸಂಘದ ಚುನಾವಣಾ ಫಲಿತಾಂಶದಿಂದ, ಜಾರಳಹೊಳಿ ಕುಟುಂಬಕ್ಕೆ ಹಿನ್ನಡೆಯಾಗಿದೆ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಸಾಮಾನ್ಯವಾಗಿ ಚುನಾವಣಾ ತಂತ್ರಗಾರಿಕೆ ರೂಪಿಸುವಲ್ಲಿ ಎತ್ತಿದ ಕೈ ಎಂದೇ ಹೆಸರಾಗಿರುವ ಸತೀಶ್ ಜಾರಕಿಹೊಳಿ, ಸುಮಾರು ನಾಲ್ಕು ವಾರಗಳಿಂದ, ಹುಕ್ಕೇರಿಯಲ್ಲೇ ಬೀಡುಬಿಟ್ಟು ತಂತ್ರಗಾರಿಕೆಯನ್ನು ಹಣೆಯುತ್ತಿದ್ದರು. ಚುನಾವಣೆಗೂ ಮುನ್ನವೇ, ಜಾರಕಿಹೊಳಿ ಮತ್ತು ಕತ್ತಿ ಬಣದ ಕಾರ್ಯಕರ್ತರ ನಡುವೆ, ಮಾತಿನ ಚಕಮಕಿ ನಡೆದಿತ್ತು. ಭಾನುವಾರ ತಡರಾತ್ರಿ ಚುನಾವಣಾ ಫಲಿತಾಂಶ ಹೊರಬಿದ್ದಿತ್ತು. ರಮೇಶ್ ಕತ್ತಿ ಮಾಜಿ ಸಚಿವ ಎಬಿ ಪಾಟೀಲ್ ಬೆಂಬಲಿಗರು ಭರ್ಜರಿ ಸಂಭ್ರಮಾಚರಣೆಯಲ್ಲಿ ತೊಡಗಿಸಿಕೊಂಡಿದ್ದರು. ಒಂದು ಹಂತದಲ್ಲಿ, ಗೆದ್ದ ಖುಷಿಯಲ್ಲಿ, ಕತ್ತಿ ಅಭಿಮಾನಿಗಳು ಮತ ಎಣಿಕೆ ಕೇಂದ್ರದ ಒಳಗಡೆ ನುಗ್ಗಲು ಮುಂದಾಗಿದ್ದರು. ಆ ವೇಳೆ ಪೊಲೀಸರು, ಕತ್ತಿ ಅಭಿಮಾನಿಗಳ ಮೇಲೆ ಲಘು ಲಾಠಿಚಾರ್ಜ್ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ.

ಹುಕ್ಕೇರಿ ಜನರ ಸ್ವಾಭಿಮಾನ ಉಳಿಯಬೇಕು ಎನ್ನುವುದು ನಮ್ಮ ಗುರಿಯಾಗಿತ್ತು. ತಂದೆ ಉಮೇಶ್ ಕತ್ತಿ ಅವರು ಮಾಡಿದ ಸಹಾಯವನ್ನು, ಮುಂದಿನ ದಿನಗಳಲ್ಲಿ ನೆನಪು ಮಾಡಿ ಕೊಡುತ್ತೇವೆ. ಎಲ್ಲವೂ ದುಡ್ಡಿನಿಂದ ಆಗುತ್ತದೆ ಅಂತಾ ತಿಳಿದುಕೊಂಡವರು ಮೂರ್ಖರು ಎಂದು ಬಿಜೆಪಿ ಶಾಸಕ ನಿಖಿಲ್ ಕತ್ತಿ ಅಭಿಪ್ರಾಯ ಪಟ್ಟಿದ್ದಾರೆ. ಬೊಗಳೋ ನಾಯಿಗೆ ನಾನು ಉತ್ತರ ಕೊಡವುದಿಲ್ಲ.

ನಮ್ಮ ಕುಟುಂಬ ಆನೆ ಇದ್ದಂತೆ, ನಾವು ನಡೆದುಕೊಂಡು ಹೋದಾಗ ನಾಯಿಗಳು ಬೊಗಳುವುದು ಸಹಜ. ಅದನ್ನ ಹೇಗೆ ತಡೆಯುವುದು ಎನ್ನುವುದು ನಮಗೆ ಗೊತ್ತಿದೆ, ಮುಂದೆ ಅದನ್ನು ಮಾಡುತ್ತೇವೆ ಎಂದು ನಿಖಿಲ್ ಕತ್ತಿ, ಅಣ್ಣಾ ಸಾಹೇಬ ಜೊಲ್ಲೆಯನ್ನು ಉಲ್ಲೇಖಿಸಿ ಹೇಳಿಕೆ ನೀಡಿದ್ದಾರೆ.

**ಗೋಕಾಕ್ ತಾಲ್ಲೂಕು ಡ್ರಗ್ಸ್ ನಲ್ಲಿ ಎತ್ತಿದ ಕೈ, ಎಲ್ಲವೂ ಅಲ್ಲಿ ಮೀತಿಮೀರಿ ಹೋಗಿದೆ, ಜಮೀನು ತಗೆದುಕೊಳ್ಳುವ ಪರಿಸ್ಥಿತಿಯಲ್ಲಿ ಯಾರೂ ಇಲ್ಲ. ಏನೇ ವ್ಯವಹಾರ ಮಾಡಬೇಕಾದರೂ, ಅವರ ಮುಖಾಂತರ ಮಾಡಬೇಕು. ವಿಷ ಕುಡಿಬೇಕು ಅಂದರೂ, ಅವರನ್ನು ಕೇಳಿ ಕುಡಿಯುವ ಸ್ಥಿತಿಗೆ ಜನ ಬಂದಿದ್ದಾರೆ. ಹುಕ್ಕೇರಿ ತಾಲ್ಲೂಕು ನಮಗೊಂದು ಕುಟುಂಬ, ಸರ್ಕಾರದ ಒಬ್ಬ ಮಂತ್ರಿ ಮುಂದೆ ನಿಂತುಕೊಂಡು ಆಸೆ ಆಮಿಷ ಒಡ್ಡಿ, ನನ್ನ ಕುಟುಂಬವನ್ನು ಹಣೆಯಲು ಪ್ರಯತ್ನ ಮಾಡಿದರು.**

**-ರಮೇಶ್ ಕತ್ತಿ**

# ಜಿಟಿ ಜಿಟಿ ಮಳೆಗೆ ಹಾನಿಯಾದ ಪ್ರದೇಶಗಳಿಗೆ ಎಂಎಲ್‌ಸಿ ಭೇಟಿ

• ಉದಯವಾಹಿನಿ, ಸಿಂಧನೂರು

ಜಿಲ್ಲೆಯಾದ್ಯಂತ ಜಿಟಿ ಜಿಟಿ ಮಳೆ ಒಂದು ವಾರದಿಂದ ಪ್ರಾರಂಭವಾಗಿದ್ದು ರೈತರು ಬಿತ್ತನೆ ಮಾಡಿದ ಜೋಳ ಸೇರಿದಂತೆ ಇತರ ಬೆಳೆಗಳು ಸಮೃದ್ಧವಾಗಿ ಬೆಳೆದಿರುವ ಬೆಳೆಗಳು ಮದ್ಯ ಭಾಗದಲ್ಲಿ ನೀರು ನಿಂತು ತೇವಾಂಶ ಹೆಚ್ಚಾಗಿದ್ದರಿಂದ ಹಾನಿಯಾಗಿದ್ದು.

ಬೆಳೆಯನ್ನು ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ ವೀಕ್ಷಣೆ ಮಾಡಿದರು. ತಾಲ್ಲೂಕಿನ ವಿವಿಧ ಹೋಬಳಿಗೆ ಒಳಪಡುವ ಉದ್ಬಾಳ ಗೋಮರ್ಶಿ ಬೆಳಗುರ್ಕಿ. ಹರಟನೂರು. ಕನ್ನಾರಿ ಬಾದರ್ಲಿ. ಗಿಣಿವಾರ. ಒಳಬಳ್ಳಾರಿ ಜವಳಗೇರಾ. ಸಾಲಗುಂದ.ಹುಡಾ ಜಾಲಿಹಾಳ ಹೋಬಳಿಗಳಲ್ಲಿ ಜಾಸ್ತಿ ಜಿಟಿ ಜಿಟಿ ಮಳೆ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದ್ದು.ಹೊಲದಲ್ಲಿ ನೀರು ನಿಂತು ಹಾನಿಯಾಗಿದ್ದರಿಂದ ರೈತರು ಕಂಗಾಲಾಗಿದ್ದಾರೆ.ಎಂದರು

ನಂತರ ಮಾತನಾಡಿದ ಅವರು ಜಿಲ್ಲೆಯಾದ್ಯಂತ ಜಿಟಿ ಜಿಟಿ ಮಳೆ ಯಾಗಿದ್ದು. ಬಿತ್ತನೆ ಮಾಡಿದ ಜೋಳ ಭತ್ತ ರಾಗಿ ಸಜ್ಜೆ ಹತ್ತಿ ಬೆಳೆ ಸೇರಿದಂತೆ ಬೆಳೆಗಳು ಸಮೃದ್ಧವಾಗಿ ಬೆಳೆದು ಮಧ್ಯೆ ಭಾಗದಲ್ಲಿ ಅಧಿಕ ನೀರು ನಿಂತು. ತೇವಾಂಶ ಜಾಸ್ತಿಯಾಗಿ ಬೆಳೆಗಳು ಹಾನಿಯಾಗಿರುವ ಹೋಬಳಿಗಳಲ್ಲಿ ಕೂಡಲೇ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಕೃಷಿ ಇಲಾಖೆ ಅಧಿಕಾರಿಗಳ ಸಿಬ್ಬಂದಿ ವರ್ಗ ಸೇರಿ ತಾಲ್ಲೂಕಿನ ಯಾವ ಯಾವ ಬೆಳೆಗಳು ಎಷ್ಟು ಪ್ರಮಾಣದ ಹಾನಿಯಾಗಿರುವ. ರೈತರ ಹೊಲ ಗದ್ದೆಗಳಿಗೆ ಹೋಗಿ ಸಮೀಕ್ಷೆ ನಡೆಸಿ ಸಂಪೂರ್ಣ ಮಾಹಿತಿ ವರದಿಯನ್ನು ನೀಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರು ಜಿಲ್ಲಾಧಿಕಾರಿಗಳಿಗೆ ಹಾಗೂ ಕೃಷಿ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಉದಯವಾಹಿನಿ ಚಿತ್ರ

ಅದೆಷ್ಟು ಬೇಗ ವರದಿ ನೀಡಿ ಶೀಘ್ರದಲ್ಲಿಯೇ ಪರಿಹಾರ ವಿತರಿಸಲಾಗುವುದು ಎಂದು ಹೇಳಿ ನೊಂದ ರೈತರಿಗೆ ನಿಮ್ಮ ಜೊತೆಗೆ ನಾವು ಇದ್ದೇವೆ ರೈತರ ಸಾಲ ಸೋಲ ಮಾಡಿ ರೈತರು ನೊಂದಿದ್ದಾರೆ. ನಮ್ಮ ರಾಜ್ಯ ಸರ್ಕಾರ ರೈತರಿಗೆ ಪರಿಹಾರದ ವ್ಯವಸ್ಥೆ ಮಾಡಲಾಗುತ್ತದೆ. ಎಂದು ನೊಂದು ರೈತರಿಗೆ ಬಸನಗೌಡ ಬಾದರ್ಲಿ ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಸುತ್ತ ಮುತ್ತಲಿನ ಗ್ರಾಮದ ರೈತರು ಹಾಗೂ ಅಧಿಕಾರಿಗಳ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸೋರುತ್ತಿರುವ ಸರ್ಕಾರಿ ಕಚೇರಿಗಳು

• ಉದಯವಾಹಿನಿ, ಸಿರುಗುಪ್ಪ

ತಾಲ್ಲೂಕಿನಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ನಗರದ ವಿವಿಧ ಸರ್ಕಾರಿ ಕಚೇರಿಗಳು ಸೋರುತ್ತಿವೆ. ಹೀಗಾಗಿ, ಅಧಿಕಾರಿಗಳ, ಸಿಬ್ಬಂದಿಯ ನಿತ್ಯದ ಕಾರ್ಯನಿರ್ವಹಣೆಗೆ ತೊಂದರೆಯಾಗಿದೆ. ತೀರಾ ಈಚಿನ ವರ್ಷದಲ್ಲಿ ನಿರ್ಮಿಸಿದ ಕಟ್ಟಡಗಳಲ್ಲೇ ಸೋರಿಕೆ ಸಮಸ್ಯೆ ಹೆಚ್ಚುತ್ತಿದೆ. ಅವುಗಳಲ್ಲಿ ಅಂಗನವಾಡಿ, ಶಾಲೆಗಳು, ವಿದ್ಯಾರ್ಥಿ ವಸತಿ ನಿಲಯಗಳು, ಆಸ್ಪತ್ರೆ, ತಾಲ್ಲೂಕು ಮಟ್ಟದ ಕಚೇರಿಗಳು ಸೇರಿವೆ. ಗ್ರಾಮೀಣ ಪ್ರದೇಶದಲ್ಲಿರುವ ಸಮುದಾಯ ಭವನಗಳಲ್ಲಿಯೂ ಈ ಸಮಸ್ಯೆ ಕಾಣಿಸಿಕೊಳ್ಳುತ್ತಿದೆ. ನಗರದ ತಹಶೀಲ್ದಾರ್ ಕಚೇರಿ ಮತ್ತು ನಗರಸಭೆ ಮೊದಲ ಮಹಡಿಯಲ್ಲಿ ಮಳೆನೀರು ಸೋರಿಕೆ ಸಮಸ್ಯೆ ವಿಪರೀತವಾಗಿದೆ.

ಕೃಷಿ ಇಲಾಖೆ, ಕೃಷಿ ಸಂಶೋದನ ಕೇಂದ್ರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಶಿಶು ಅಭಿವೃದ್ಧಿ ಯೋಜನಾ ಇಲಾಖೆ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಸಿರುಗುಪ್ಪ ಹೊಬಳಿಯ ರೈತ ಸಂಪರ್ಕ ಕೇಂದ್ರ, ಸರ್ಕಾರಿ ಅಥಿತಿ ಗೃಹ ಸೇರಿದಂತೆ ಹಲವು ಕಚೇರಿಳ ಚಾವಣಿಯಲ್ಲಿ ನೀರು ಇಂಗುತ್ತಿದ್ದು ಕಡತಗಳು ಒದ್ದೆಯಾಗಿ ಹಾಳಾಗುತ್ತಿವೆ. ಕೆಲ ಇಲಾಖೆಗಳ ಕಟ್ಟಡಗಳು ಹಳೆಯದಾಗಿದ್ದು, ಪ್ರತಿ ವರ್ಷ ಅವುಗಳ ಚಾವಣಿ ದುರಸ್ತಿ ಮಾಡಿಸುತ್ತಾರೆ.

ಆದರೂ, ಮಳೆಯ ನೀರು ಒಳಗೆ ಸೋರುತ್ತಿದೆ ಎಂಬುದು ಸಾರ್ವಜನಿಕರ ಆರೋಪ. ಜೋರಾಗಿ ಮಳೆಯಾದರೆ ಬಸ್ ನಿಲ್ದಾಣದಲ್ಲಿ ಮಳೆಯ ನೀರು ಒಳಗೆ ಬರುವ ಕಾರಣ ಸಾರ್ವಜನಿಕರಿಗೆ ಕುಳಿತುಕೊಳ್ಳಲಾಗದ ಸ್ಥಿತಿ ಇದೆ. ಗ್ರಾಮೀಣ ಭಾಗದ ಬಹುತೇಕ ಶಾಲೆಯ ಕಟ್ಟಡಗಳಲ್ಲಿ ಮಳೆಯ ಸೋರಿಕೆಯಿಂದ ವಿದ್ಯಾರ್ಥಿಗಳು ಕಷ್ಟ ಅನುಭವಿಸುತ್ತಿದ್ದಾರೆ.

ಉದಯವಾಹಿನಿ ಚಿತ್ರ



## ಸಿಲಿಂಡರ್ ಸ್ಫೋಟಿಸಿ ಭಾರಿ ಅವಘಡ, ಮನೆ ಗೋಡೆ ಕುಸಿತ, ತೋರಣಗಲ್ಲು ಸಂಜೀವಿನಿ ಆಸ್ಪತ್ರೆಯಲ್ಲಿ ಚಿಕಿತ್ಸೆ

# ಸಿಲಿಂಡರ್ ಸ್ಫೋಟ, ಒಂದೇ ಕುಟುಂಬದ 8 ಜನರಿಗೆ ಗಾಯ

• ಉದಯವಾಹಿನಿ, ವಿಜಯನಗರ

ತಾಲ್ಲೂಕಿನ ಗಾದಿಗನೂರಿನಲ್ಲಿ ಅಡುಗೆ ಸಿಲಿಂಡರ್ ಸ್ಫೋಟಗೊಂಡು ಒಂದೇ ಕುಟುಂಬದ 8 ಜನರು ಗಾಯಗೊಂಡಿದ್ದು, ಇಬ್ಬರ ಸ್ಥಿತಿ ಗಂಭೀರವಾಗಿದೆ. ಮನೆಯಲ್ಲಿ ಮಲಗಿರುವಾಗ ಬೆಳಗಿನ ಜಾವ ಘಟನೆ ನಡೆದಿದ್ದು, ವಕೀಲ ಹಾಲಪ್ಪ, ಸಹೋದರ ಮೈಲಾರಪ್ಪ ಸೇರಿದಂತೆ ಒಂದೇ ಕುಟುಂಬದ 8 ಜನರು ಗಾಯಗೊಂಡಿದ್ದಾರೆ. ಬೆಳಿಗ್ಗೆ 5.15ರ ಸುಮಾರಿಗೆ ಹೊಸಪೇಟೆ-ಬಳ್ಳಾರಿ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲೇ ಇರುವ ವಕೀಲ ಹಾಲಪ್ಪ ಅವರಿಗೆ ಸೇರಿದಮನೆಯಲ್ಲಿ ಹತ್ತಕ್ಕಿಂತ ಹೆಚ್ಚು ಮಂದಿ ಇದ್ದರು. ಮುಂಜಾನೆ ಅಡುಗೆ ಮನೆಯಲ್ಲಿ ಸ್ಟವ್ ಅಂಟಿಸುವ ಮುನ್ನವೇ ಅಡುಗೆ ಅನಿಲ ವಾಸನೆ ಬರುತ್ತಿತ್ತು. ಆ ಮಧ್ಯೆ ಲೈಟರ್ ಹಚ್ಚಿದ ಹಿನ್ನೆಲೆ, ಸ್ಫೋಟಗೊಂಡಿದೆ ಎನ್ನಲಾಗಿದೆ.

ಗಾಯಾಳುಗಳನ್ನು ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ತೋರಣಗಲ್ಲು ಸಂಜೀವಿನಿ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಲಾಗಿದೆ. ಅಗ್ನಿಶಾಮಕದಳದ ಸಿಬ್ಬಂದಿ, ಹೊಸಪೇಟೆ ಗ್ರಾಮೀಣ ಪೊಲೀಸರು ಸ್ಥಳಕ್ಕೆ ಭೇಟಿ, ಪರಿಶೀಲನೆ ನಡೆಸಿದ್ದಾರೆ. ಅಡುಗೆ ಅನಿಲ ಸ್ಫೋಟಗೊಂಡ ಪರಿಣಾಮ ಮನೆ ಶೇ. 50ರಷ್ಟು ಛಿದ್ರಗೊಂಡಿದೆ. ಘಟನೆಯಿಂದಾಗಿ, ಕವಿತಾ, ಹಾಲಪ್ಪ, ಮೈಲಾರಪ್ಪ, ಗಂಗಮ್ಮ, ಮಲ್ಲಮ್ಮ, ಇಬ್ಬರು ಮಕ್ಕಳು ಗಾಯಗೊಂಡಿದ್ದಾರೆ ಎಂದು ಸ್ಥಳ ಪರಿಶೀಲನೆ ನಡೆಸಿದ ಪೊಲೀಸರು ಹೇಳಿದ್ದಾರೆ.



ಉದಯವಾಹಿನಿ ಚಿತ್ರ

ಅಪಾಯದಿಂದ ಕುಟುಂಬ ಪಾರು ಮನೆಯಲ್ಲಿದ್ದ ಅಡುಗೆ ಅನಿಲದ ಸಿಲಿಂಡರ್ ಸ್ಫೋಟಗೊಂಡು ಮನೆಯ ಚಾವಣಿ (ಸಿಮೆಂಟ್ ಶೀಟ್) ಹಾಗೂ ವಸ್ತುಗಳಿಗೆ ಹಾನಿಯಾಗಿರುವ ಘಟನೆ ಮಲ್ಲಿಗೆ ಮೆಟ್ಟಿಲು ಗ್ರಾಮದಲ್ಲಿನಡೆದಿದೆ.

ಹಾರೋಹಳ್ಳಿ ತಾಲ್ಲೂಕಿನ ಮರಳವಾಡಿ ಹೋಬಳಿಯ ಮಲ್ಲಿಗೆ ಮೆಟ್ಟಿಲು ಗ್ರಾಮದ ಮಂಜುನಾಥ್ ಎಂಬುವರ ಮನೆಯಲ್ಲಿಮಂಗಳವಾರ ಬೆಳಗ್ಗೆ 9 ಗಂಟೆ ಸಮಯದಲ್ಲಿಈ ಘಟನೆ ನಡೆದಿದೆ. ಮಲ್ಲಿಗೆ ಮೆಟ್ಟಿಲು ಗ್ರಾಮದ ಮಂಜುನಾಥ್ ಅವರು ಇಂಡೇನ್ ಗ್ಯಾಸ್ ಸಂಸ್ಥೆಯ ಅಡುಗೆ ಅನಿಲ ಸಂಪರ್ಕ ಪಡೆದಿದ್ದರು. ಮಂಗಳವಾರ ಬೆಳಗ್ಗೆ 9 ಗಂಟೆ ಸಮಯದಲ್ಲಿ ಏಕಾಏಕಿ ಸಿಲಿಂಡರ್ ಸ್ಫೋಟ ಗೊಂಡಿದೆ. ಸ್ಫೋಟದಿಂದ ಮನೆಯಲ್ಲಿದ್ದ ವಸ್ತುಗಳಿಗೆ ಹಾನಿಯಾಗಿದೆ.

ಮನೆಯ ಚಾವಣಿ ಸೀಟು ಹಾಗೂ ಮನೆಗೆ ಹಾಕಿದ್ದ ಟೈಲ್ಸ್‌ಗೆ ಹಾನಿಯಾಗಿದ್ದು ಸಾವಿರಾರು ರೂಪಾಯಿ ನಷ್ಟವಾಗಿದೆ. ಸಿಲಿಂಡರ್ ಸ್ಫೋಟಕ್ಕೆ ನಿಖರ ಕಾರಣ ಮಾತ್ರ ತಿಳಿದು ಬಂದಿಲ್ಲ. ಮಂಜುನಾಥ್ ಅವರಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದು ಮಂಗಳವಾರ ಬೆಳಗ್ಗೆ ಮನೆಯಲ್ಲಿತಿಂಡಿ ತಿಂದು ಇಬ್ಬರು ಮಕ್ಕಳು ಶಾಲೆಗೆ ತೆರಳಿದ್ದಾರೆ. ಇವರ ಪತ್ನಿ ಹಾರೋಹಳ್ಳಿ ಕೈಗಾರಿಕಾ ಪ್ರದೇಶದಲ್ಲಿಕೆಲಸಕ್ಕೆಂದು ಹೋಗಿದ್ದಾರೆ.

ಬಳಿಕ ಮಂಜುನಾಥ್ ಅವರು ಮನೆಯ ಹಿಂಭಾಗದಲ್ಲಿಕುರಿ ಶೆಡ್ಡು ನಿರ್ಮಾಣ ಮಾಡುವ ಸ್ಥಳದಲ್ಲಿದ್ದರು. ಮನೆಯಲ್ಲಿಯಾರೂ ಇಲ್ಲದಿರುವ ಸಮಯದಲ್ಲಿ ಗ್ಯಾಸ್ ಸಿಲಿಂಡರ್ ಸ್ಫೋಟಗೊಂಡಿದ್ದು, ಕುಟುಂಬ ಅಪಾಯದಿಂದ ಪಾರಾಗಿದೆ. ಮಾಹಿತಿ ತಿಳಿದು ಹಾರೋಹಳ್ಳಿ ಠಾಣಾ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಹಾರೋಹಳ್ಳಿ ಠಾಣೆಯಲ್ಲಿಪ್ರಕರಣ ದಾಖಲಾಗಿದೆ.

**ಗ್ಯಾಸ್ ಸಿಲಿಂಡರ್ ಸ್ಫೋಟ, ಮೂವರಿಗೆ ಗಾಯ**

**ಸಿಲಿಂಡರ್‌ನಿಂದ ಅಡುಗೆ ಅನಿಲ ಸೋರಿಕೆಯಾಗಿ ಅದು ಗಾಳಿಯ ಸಂಪರ್ಕಕ್ಕೆ ಬಂದು ಭಾರಿ ಸ್ಫೋಟ ಸಂಭವಿಸಿ, ಮೂವರು ಗಾಯಗೊಂಡ ಘಟನೆ ಶರಾವತಿ ನಗರದಲ್ಲಿ ಸಂಭವಿಸಿದೆ. ಮನೆಯಲ್ಲಿದ್ದ ಎಂ.ಬಿ. ಪೀರಾನ್ ಸಾಬ್(48), ಅವರ ಪತ್ನಿ ಸಾಹೇರಾ(40), ಸೊಸೆ ಜಯೇಬಾ(22) ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಮೆಗ್ಗಾನ್ ಬೋಧನಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ.**

**ವಿಜಯನಗರದಲ್ಲಿ ಸಿಲಿಂಡರ್ ಸ್ಫೋಟ ಸಂಭವಿಸಿದ ಪರಿಣಾಮ ಒಂದೇ ಕುಟುಂಬದ ಎಂಟು ಜನರಿಗೆ ಗಂಭೀರ ಗಾಯವಾಗಿರುವ ಪ್ರಕರಣ ದಾಖಲಾಗಿದೆ. ಅಡುಗೆ ಅನಿಲ ಸ್ಫೋಟದ ರಭಸಕ್ಕೆ ಮನೆಯ ಗೋಡೆಯೂ ಕುಸಿದು ಬಿದ್ದಿದೆ. ಸದ್ಯ ಗಾಯಾಳುಗಳು ಸಂಜೀವಿನಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎನ್ನಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಪರಸ್ಥಿತಿ ಅವಲೋಕಿಸಿದ್ದಾರೆ.**

## ಮಿನಿ ನ್ಯೂಸ್

### ಗಾರಂಪಳ್ಳಿ ಪಿಕೆಪಿಎಸ್ ಅಧ್ಯಕ್ಷರಾಗಿ ಚಂದ್ರಶೇಖರ ಜಮಾದಾರ ಆಯ್ಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಗಾರಂಪಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಚಂದ್ರಶೇಖರ ತಿಪ್ಪಣ್ಣ ಜಮಾದಾರ ಗೌಡನಹಳ್ಳಿ ಹಾಗೂ ಉಪಾಧ್ಯಕ್ಷರಾಗಿ ರೇವಣಸಿದ್ದಪ್ಪ ಬಕ್ಕಪ್ಪ ಕೊಂಡಾ ಹುಡದಳ್ಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಸಂಘದ ಸಿಇಓ ವೀರಶೇಟ್ಟಿ ಪೂಜಾರಿ ತಿಳಿಸಿದ್ದಾರೆ. ನಿರ್ದೇಶಕರಾದ ಸುಭದ್ರಮ್ಮ, ಪ್ರೀಯಾಂಕಾ, ಮಹಾದೇವಿ, ಇಂದ್ರಮ್ಮ, ನಾಗರಾಜ, ಫಾಳಮ್ಮ, ಜಗದೇವಿ, ಮಂಜುನಾಥ, ಆರೀಫ್, ಶಿವಶರಣಪ್ಪ ಹಾಜರಿದ್ದರು ಎಂದು ತಿಳಿಸಿದರು. ಚುನಾವಣೆ ಪ್ರಕ್ರಿಯೆ ನಂತರ ಅಭಿಮಾನಿಗಳು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಲು ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸಂಜೀವನ್ ಯಾಕಾಪೂರ ಶ್ರಮ ಬಹಳಷ್ಟಿದ್ದು ಇವರ ನೇತೃತ್ವದಲ್ಲಿಯೇ ಅಧ್ಯಕ್ಷ ಉಪಾಧ್ಯಕ್ಷ ಆಯ್ಕೆಯಾಗಲು ಅನುಕೂಲವಾಗಿದೆ ಇವರಿಗೂ ಸರ್ವ ನಿರ್ದೇಶಕರಿಗೂ ಧನ್ಯವಾದ ಸಲ್ಲಿಸುತ್ತೇನೆ ಎಂದು ನೂತನ ಅಧ್ಯಕ್ಷ ಚಂದ್ರಶೇಖರ ತಿಳಿಸಿದ್ದಾರೆ.

### ಆಯುಷ್ ಇಲಾಖೆಯಿಂದ ಸ್ವಚ್ಛತಾ ಹೀ ಸೇವಾ ಅಭಿಯಾನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ಸ್ವಚ್ಛತೆಯೇ ಸೇವಾ ಪಾಕ್ಷಿಕ 2025 ಅಭಿಯಾನದ ಅಂಗವಾಗಿ ಚಿತ್ರದುರ್ಗ ತಾಲ್ಲೂಕಿನ ಜೆ ಎನ್ ಕೋಟೆ ಗ್ರಾಮದ ಸರ್ಕಾರಿ ಆಯುಷ್ ಆರೋಗ್ಯ ಮತ್ತು ಕ್ಷೇಮ ಮಂದಿರ ವತಿಯಿಂದ ಸೆ. 29 ಸೋಮವಾರ ಗ್ರಾಮದ ಆಸ್ಪತ್ರೆ ಆವರಣ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಶ್ರಮದಾನ ನಡೆಸಲಾಯಿತು. ಆಯುಷ್ ಆಡಳಿತ ವೈದ್ಯಾಧಿಕಾರಿ ಡಾ. ವಿಜಯಲಕ್ಷ್ಮಿ ಪಿ ಚಾಲನೆ ನೀಡಿದರು. ಗ್ರಾ.ಪಂಚಾಯತ್ ಪಿಡಿಒ ಮಂಜುಳಾ ಸ್ವಚ್ಛತಾ ಪ್ರತಿಜ್ಞಾವಿಧಿ ಬೋಧಿಸಿದರು.ಎಸ್ ಡಿ ಎ ಪೂಜಾ ನಾಯಕ್, ಬಿಲ್ ಕಲೆಕ್ಟರ್ ನಿಂಗಪ್ಪ ಬಿ ಎಲ್ ಡಬ್ಲ್ಯೂ ಮಾರಕ್ಕ, ಹಿರಿಯ ಪಶು ಚಿಕಿತ್ಸಕಿ ಅನ್ನಪೂರ್ಣ, ಸಮುದಾಯ ಆರೋಗ್ಯಾಧಿಕಾರಿ ರಮೇಶ್ ಯೋಗ ತರಬೇತುದಾರ ರವಿ ಕೆ.ಅಂಬೇಕರ್ ಇನ್ನಿತರರು ಪಾಲ್ಗೊಂಡಿದ್ದರು.

### ಲೆಮನ್ ಪರಶುರಾಮ್ ಅವರಿಗೆ ಕಲಾ ರತ್ನ ಪ್ರಶಸ್ತಿ ಉತ್ಸವದಲ್ಲಿ ಗೌರವ

• ಉದಯವಾಹಿನಿ, ಕೆಂಭಾವಿ

ಸಿನಿ ರಂಗದಲ್ಲಿ ಅಪಾರ ಪರಿಶ್ರಮ, ನಿರಂತರ ನಿಷ್ಠೆಯಿಂದ ಕೆಲಸ ಮಾಡುತ್ತಾ ಬಂದಿರುವ ಲೆಮನ್ ಪರಶುರಾಮ್ ಅವರಿಗೆ ಈ ಬಾರಿಯ ದಸರಾ ಉತ್ಸವದ ಪ್ರಯುಕ್ತ ಕಲಾ ರತ್ನ ಎಂಬ ಗೌರವಾನ್ವಿತ ಪ್ರಶಸ್ತಿ ಲಭಿಸಿದೆ. ಕೆಂಭಾವಿ ಪಟ್ಟಣದಲ್ಲಿ ಜರುಗಿದ ಭವ್ಯ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ಲೆಮನ್ ಪರಶುರಾಮ್ ಅವರಿಗೆ ಪ್ರದಾನ ರಾಜಕೀಯ ಮುಖಂಡರು, ಗಣ್ಯ ವ್ಯಕ್ತಿಗಳು ಈ ಪ್ರಶಸ್ತಿ ಲೆಮನ್ ಪರಶುರಾಮ್ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗುವುದು.




ಅಭಿಮಾನಿಗಳಲ್ಲಿ ಹಾಗೂ ಸಿನಿ ಪ್ರೇಮಿಗಳಲ್ಲಿ ಈ ಸುದ್ದಿಗೆ ಸಂತಸದ ಅಲೆ ಹರಡಿದೆ. ಈ ಪ್ರಶಸ್ತಿ ಲೆಮನ್ ಪರಶುರಾಮ್ ಅವರ ಸಿನಿ ಜೀವನದಲ್ಲಿ ಒಂದು ಮಹತ್ವದ ಮೈಲಿಗಲ್ಲು ಎನಿಸಿದ್ದು, ಮುಂದಿನ ಕಲಾತ್ಮಕ ಪ್ರಯಾಣಕ್ಕೆ ಹೊಸ ಪ್ರೇರಣೆಯಾಗಲಿದೆ.

### ಸಮೀಕ್ಷಕರಿಗೆ ಮಾಹಿತಿ ನೀಡಲ್ಲ; ಪ್ರಲ್ಹಾದ ಜೋಶಿ

• ಉದಯವಾಹಿನಿ, ಹುಬ್ಬಳ್ಳಿ

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಡಿ ವಿವರಣೆ ಕೇಳಲು ಸಮೀಕ್ಷೆದಾರರು ಬಂದರೆ, ನಾನು, ಕುಟುಂಬದವರು ಮಾಹಿತಿ ನೀಡುವುದಿಲ್ಲ ಎಂದು ಕೇಂದ್ರ ಸಚಿವ ಪ್ರಲಾದ ಜೋಶಿ ತಿಳಿಸಿದರು. ಸಿದ್ದರಾಮಯ್ಯ ಅವರು ತಮ್ಮ ಆಡಳಿತ ವೈಫಲ್ಯ ಮುಚ್ಚಿಕೊಳ್ಳಲು ಮತ್ತು ಸೋನಿಯಾ ಗಾಂಧಿ ಕುಟುಂಬದವರ ಅನುಕಂಪ ಗಿಟ್ಟಿಸಲು ಸಮೀಕ್ಷೆಯ ಷಡ್ಯಂತ್ರ ನಡೆಸಿದ್ದಾರೆ ಎಂದು ಅವರು ಭಾನುವಾರ ಸುದ್ದಿಗಾರರಿಗೆ ಮಾತನಾಡುತ್ತಾ ಆರೋಪಿಸಿದರು.

'ಎಷ್ಟು ಆದಾಯವಿದೆ? ಎಷ್ಟು ಆದಾಯ ತೆರಿಗೆ ತುಂಬುತ್ತೀರಿ? ಮನೆಯಲ್ಲಿ ವಿಧವೆಯರು ಇದ್ದಾರೆಯೇ, ಜಾತಿ ತಾರತಮ್ಯ ಆಗಿದೆಯೇ ಎಂಬ ಮಾಹಿತಿ ಎಲ್ಲವನ್ನೂ ಸಮೀಕ್ಷೆಯಲ್ಲಿ ಪಡೆದು ಸರ್ಕಾರ ಏನು ಮಾಡಲಿದೆ' ಎಂದು ಪ್ರಶ್ನಿಸಿದರು. ಮಾಹಿತಿ ಗೋಪ್ಯವಾಗಿರಬೇಕು. ಹಿಂದಿನ ಸಮೀಕ್ಷೆ ಮಾಹಿತಿ ಸೋರಿಕೆಯಾಗಿದೆ. ಕೆಲ ಜಾತಿ ಕೈಬಿಡಲಾಗಿದೆ ಎಂದಿದ್ದಾರೆ. ಮುಜಾವರ್ ಬ್ರಾಹ್ಮಣ, ಲಿಂಗಾಯತ ಮುಸ್ಲಿಂ ಎಂಬ ಜಾತಿಗಳನ್ನು ಇನ್ನೂ ಕೈಬಿಟ್ಟಿಲ್ಲ. ಜನರನ್ನು ತಪ್ಪು ದಾರಿಗೆ ಎಳೆಯಲಾಗುತ್ತಿದೆ ಎಂದರು. ಬಿಜೆಪಿ ಬಿಹಾರದಲ್ಲಿ ಮಹಿಳೆಯರಿಗೆ ಗ್ಯಾರಂಟಿ ಯೋಜನೆ ಘೋಷಿಸಿದ ಕುರಿತ ಪ್ರಶ್ನೆಗೆ, ಆದಾಯದ ಮಿತಿ ಅರಿತು ಘೋಷಿಸಲಾಗಿದೆ. ಇಲ್ಲಿನಂತೆ ಬೇಕಾ ಬಿಟ್ಟಿಯಾಗಿ ಅಲ್ಲ ಎಂದರು.



# ಉಕ್ರೇನ್ ಕೈವ್ ನಗರದ ಮೇಲೆ ರಷ್ಯಾ ಭೀಕರ ಕ್ಷಿಪಣಿ-600 ಡ್ರೋನ್ ಮೂಲಕ ದಾಳಿ

**ಪೋಲೆಂಡ್:** ರಷ್ಯಾ-ಉಕ್ರೇನ್ ಸಂಘರ್ಷ ಮುಂದುವರಿದಿದ್ದ, ಭಾನುವಾರ ರಷ್ಯಾ ಉಕ್ರೇನ್ ಮೇಲೆ ದೊಡ್ಡ ಪ್ರಮಾಣದ ಡ್ರೋನ್ ಮತ್ತು ಕ್ಷಿಪಣಿ ದಾಳಿ ನಡೆಸಿದೆ. ಈ ದಾಳಿಯಲ್ಲಿ ಕೈವ್ ಸೇರಿದಂತೆ ಹಲವು ನಗರಗಳನ್ನು ಗುರಿಮಾಡಿ, ನಡೆಸಿದ ದಾಳಿಯಲ್ಲಿ ಕೈವ್‌ನಲ್ಲಿ ಕನಿಷ್ಠ ನಾಲ್ಕು ಜನರು ಸಾವನ್ನಪ್ಪಿದರು. ಡಜನ್‌ಗಟ್ಟಲೆ ಜನ ಗಾಯಗೊಂಡರು.

ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಈ ದಾಳಿಯನ್ನು ಕ್ರೂರ ದಾಳಿಗಳು, ಸಾಮಾನ್ಯ ನಗರಗಳ ವಿರುದ್ಧ ಉದ್ದೇಶಪೂರ್ವಕ, ಉದ್ದೇಶಿತ ಭಯೋತ್ಪಾದನೆ ಎಂದು ಹೇಳಿದ್ದಾರೆ. ರಷ್ಯಾ 12 ಗಂಟೆಗಳಿಗೂ ಹೆಚ್ಚು ಕಾಲ ದಾಳಿ ನಡೆಸಿದ್ದು, ಸುಮಾರು 600 ಡ್ರೋನ್‌ಗಳು ಮತ್ತು ಡಜನ್‌ಗಟ್ಟಲೆ ಕ್ಷಿಪಣಿಗಳನ್ನು ಹಾರಿಸಿದೆ. ರಷ್ಯಾ ತನ್ನ ದಾಳಿಗಳು ಮಿಲಿಟರಿ ಗುರಿಗಳ ಮೇಲೆ ಮಾತ್ರ ಎಂದು ಹೇಳಿದೆ. ಆದರೆ ಉಕ್ರೇನ್ ವಸತಿ ಕಟ್ಟಡಗಳು, ಹೃದ್ರೋಗ ಕೇಂದ್ರ ಮತ್ತು ಶಿಶುವಿಹಾರಕ್ಕೂ ಹಾನಿಯಾಗಿದೆ ಎಂದು ವರದಿ ಮಾಡಿದೆ.



ಈ ರಾತ್ರಿಯ ದಾಳಿ ಕೈವ್ ಮೇಲೆ ತೀವ್ರವಾಗಿತ್ತು. ಕಳೆದ ತಿಂಗಳು ನಡೆದ ದಾಳಿಯ ನಂತರ ಇದು ಮೊದಲ ದೊಡ್ಡ ಬಾಂಬ್ ದಾಳಿಯಾಗಿದೆ. ಕಳೆದ ತಿಂಗಳ ದಾಳಿಯಲ್ಲಿ ಕನಿಷ್ಠ 21 ಜನರು ಸಾವನ್ನಪ್ಪಿದ್ದರು. ನ್ಯಾಟೊ ಒಕ್ಕೂಟ, ರಷ್ಯಾವು ವಾಯುಪ್ರದೇಶ ಉಲ್ಲಂಘನೆ ಮಾಡುತ್ತಿದೆ ಎಂದು ಆರೋಪಿಸಿದೆ. ಇದರ ನಂತರ ಪೋಲೆಂಡ್ ತನ್ನ ವಾಯುಪ್ರದೇಶವನ್ನು ಸುರಕ್ಷಿತಗೊಳಿಸಲು ಜೆಟ್‌ಗಳನ್ನು ಹಾರಿಸಿತು.

ಯುದ್ಧವನ್ನು ಕೊನೆಗೊಳಿಸಲು ರಾಜತಾಂತ್ರಿಕ ಪ್ರಯತ್ನಗಳು ಸದ್ಯಕ್ಕೆ ಸ್ಥಗಿತಗೊಂಡಿವೆ. ರಷ್ಯಾ 2022ರ ಫೆಬ್ರವರಿಯಲ್ಲಿ ಪ್ರಾರಂಭಿಸಿದ ಆಕ್ರಮಣವನ್ನು ಮುಂದುವರಿಸುವುದಾಗಿ ಘೋಷಿಸಿದೆ. ಅಲ್ಲದೆ ದಾಳಿಗಳ ನಂತರ ಝೆಲೆನ್ಸ್ಕಿ, ಮಾಸ್ಕೋ ಹೋರಾಟ ಮತ್ತು ಕೊಲ್ಲುವುದನ್ನು ಮುಂದುವರಿಸಲು ಬಯಸುತ್ತದೆ. ಇದು ಪ್ರಪಂಚದಿಂದ ಕಠಿಣ ಒತ್ತಡಕ್ಕೆ ಅರ್ಹವಾಗಿದೆ ಎಂದು ಹೇಳಿದ್ದಾರೆ.

ರಷ್ಯಾ ತನ್ನ ದಾಳಿಗಳು ಮಿಲಿಟರಿ ಗುರಿಗಳ ಮೇಲೆ ಮಾತ್ರ ಎಂದು ಹೇಳಿಕೊಂಡಿದೆ. ಆದರೆ ಉಕ್ರೇನ್‌ನ ವಿದೇಶಾಂಗ ಸಚಿವಾಲಯವು ವಸತಿ ಕಟ್ಟಡಗಳ ಜೊತೆಗೆ ಹೃದ್ರೋಗ ಕೇಂದ್ರ ಮತ್ತು ಶಿಶುವಿಹಾರವೂ ಹಾನಿಗೊಳಗಾಗಿವೆ ಎಂದು ವರದಿ ಮಾಡಿದೆ. ಕೈವ್‌ನಲ್ಲಿ ನಾಲ್ಕು ಜನರು ಸಾವನ್ನಪ್ಪಿದ್ದಲ್ಲದೆ, ಝುಪೊರಿಝಿಯಾ, ಒಡೆಸ್ಸಾ, ಸುಮಿ, ಚೆರ್ಕಾಸಿ ಮತ್ತು ಮೈಕೋಲೈವ್ ಪ್ರದೇಶಗಳಲ್ಲಿಯೂ ಸಾವುನೋವುಗಳು ವರದಿಯಾಗಿವೆ ಎಂದು ಉಕ್ರೇನ್ ಅಧಿಕಾರಿಗಳು ತಿಳಿಸಿದ್ದಾರೆ.


ಝುಪೊರಿಝಿಯಾ ಗವರ್ನರ್ ಇವಾನ್ ಫೆಡೋರೊವ್, ನಗರವು ಕನಿಷ್ಠ ನಾಲ್ಕು ಬಾರಿ ದಾಳಿಗೊಳಗಾಗಿದೆ ಎಂದು ಹೇಳಿದ್ದಾರೆ. ಅಲ್ಲದೆ ಘಟನೆಯಲ್ಲಿ 42 ಜನರು ಗಾಯಗೊಂಡಿದ್ದಾರೆ ಎಂದು ತಿಳಿಸಿದರು. ಈ ಪ್ರದೇಶದಲ್ಲಿ ರಷ್ಯಾದ ನಿಯಂತ್ರಣದಲ್ಲಿರುವ ಪ್ರಮುಖ ಪರಮಾಣು ವಿದ್ಯುತ್ ಸ್ಥಾವರವಿದೆ.

ಪೋಲೆಂಡ್‌ನ ಸಶಸ್ತ್ರ ಪಡೆಗಳು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಕಟಿಸಿದ್ದು, ಫೈಟರ್ ಜೆಟ್‌ಗಳನ್ನು ಹಾರಿಸಲಾಗಿದೆ, ನೆಲ ಆಧಾರಿತ ವಾಯು ರಕ್ಷಣಾ ವ್ಯವಸ್ಥೆಗಳನ್ನು ಹೆಚ್ಚಿನ ಎಚ್ಚರಿಕೆಯಲ್ಲಿ ಇರಿಸಲಾಗಿದೆ ಎಂದು ಹೇಳಿದೆ. ಇತ್ತೀಚಿನ ವಾರಗಳಲ್ಲಿ, ಹಲವಾರು ಯುರೋಪಿಯನ್ ದೇಶಗಳು ರಷ್ಯಾದ ಡ್ರೋನ್, ಜೆಟ್ ಒಳನುಗ್ಗುವಿಕೆಗಳನ್ನು ಆರೋಪಿಸಿವೆ. ನ್ಯಾಟೊ ಇದನ್ನು ತನ್ನ ಸಿದ್ಧತೆಯ ಪರೀಕ್ಷೆ ಎಂದು ವಿವರಿಸಿದೆ. ರಷ್ಯಾ ಅಂತಹ ವಾಯುಪ್ರದೇಶ ಉಲ್ಲಂಘನೆಗಳನ್ನು ಅಥವಾ ನ್ಯಾಟೊ ಸದಸ್ಯರ ಮೇಲೆ ಯಾವುದೇ ದಾಳಿಯನ್ನು ನಿರಾಕರಿಸಿದೆ.

## ಎಸ್‌ಐಆರ್‌ಗೆ ವಿರೋಧ: ವಿಧಾನಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯ ಅಂಗೀಕಾರ

**ತಿರುವನಂತಪುರ:** ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಕೈಗೊಳ್ಳುವ ಕೇಂದ್ರ ಚುನಾವಣಾ ಆಯೋಗದ ಕ್ರಮವನ್ನು ವಿರೋಧಿಸುವ ನಿರ್ಣಯವನ್ನು ಕೇರಳ ವಿಧಾನಸಭೆಯಲ್ಲಿ ಸೋಮವಾರ ಸರ್ವಾನುಮತದಿಂದ ಅಂಗೀಕರಿಸಲಾಗಿದೆ. ಎಸ್‌ಐಆರ್ ವಿರುದ್ಧ ಈಗಾಗಲೇ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಕೂಟವು, ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರು ಸದನದಲ್ಲಿ ಮಂಡಿಸಿದ ನಿರ್ಣಯವನ್ನು ಬೆಂಬಲಿಸಿತು. ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಶೀಘ್ರದಲ್ಲೇ ನಡೆಯಲಿದೆ.

ಇದರ ಬೆನ್ನಲ್ಲೇ ವಿಧಾನಸಭಾ ಚುನಾವಣೆ ನಡೆಯಲಿದೆ. ಇಂತಹ ಪರಿಸ್ಥಿತಿಯಲ್ಲಿ ಎಸ್‌ಐಆರ್ ಪ್ರಕ್ರಿಯೆಯನ್ನು ತರಾತುರಿಯಲ್ಲಿ ನಡೆಸುವುದು ದುರುದ್ದೇಶಪೂರಿತವಾಗಿದೆ' ಎಂದು ವಿಜಯನ್ ತಿಳಿಸಿದ್ದಾರೆ. ಚುನಾವಣಾ ಆಯೋಗವು ಎಸ್‌ಐಆರ್ ನಡೆಸಲು ಹೊರಟಿರುವುದು ರಾಷ್ಟ್ರೀಯ ನಾಗರಿಕರ ನೋಂದಣಿ ಪ್ರಕ್ರಿಯೆಯನ್ನು ಜಾರಿಗೆ ತರಲು ನಡೆಸುತ್ತಿರುವ ಹಿಂಬಾಗಿಲಿನ ಪ್ರಯತ್ನವಾಗಿದ್ದು, ಬಿಹಾರದಲ್ಲಿ ಇತ್ತೀಚೆಗೆ ನಡೆದ ಎಸ್‌ಐಆರ್ ಪ್ರಕ್ರಿಯೆಯು ಅಂತಹ ಕಳವಳಗಳನ್ನು ದೃಢಪಡಿಸುತ್ತದೆ ಎಂದು ವಿಜಯನ್ ದೂರಿದ್ದಾರೆ. ಬಿಹಾರದಲ್ಲಿ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಸಾಂವಿಧಾನಿಕ ಸಿಂಧುತ್ವವು ಸುಪ್ರೀಂ ಕೋರ್ಟ್ ಪರಿಗಣನೆಯಲ್ಲಿರುವಾಗ, ವಿಧಾನಸಭೆ ಚುನಾವಣೆ ನಡೆಯಲಿರುವ ಕೇರಳ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಲ್ಲಿ ತರಾತುರಿಯಲ್ಲಿ ಎಸ್‌ಐಆರ್ ಪ್ರಕ್ರಿಯೆ ನಡೆಸುವ ಅಗತ್ಯತೆ ಏನಿದೆ ಎಂದು ಅವರು ಪ್ರಶ್ನಿಸಿದ್ದಾರೆ.



ಎಸ್‌ಐಆರ್ ಪ್ರಕ್ರಿಯೆಯನ್ನು ಜಾರಿಗೆ ತರಲು ಮಾಡುತ್ತಿರುವ ಪ್ರಯತ್ನಗಳನ್ನು ಚುನಾವಣಾ ಆಯೋಗದ ಸಹಜ ಪ್ರಕ್ರಿಯೆ ಎಂದು ಪರಿಗಣಿಸಲು ಆಗುವುದಿಲ್ಲ ಎಂದು ಅವರು ಕಿಡಿಕಾರಿದ್ದಾರೆ.

ದೀರ್ಘಕಾಲದ ಸಿದ್ಧತೆ, ಸಮಾಲೋಚನೆಯ ಅಗತ್ಯವಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ತರಾತುರಿಯಲ್ಲಿ ಜಾರಿಗೆ ತರುವ ಮೂಲಕ ಚುನಾವಣಾ ಆಯೋಗವು ಪ್ರಜಾಪ್ರಭುತ್ವದ ಬುಡಮೇಲು, ಬಡವರು ಮತ್ತು ವಲಸೆ ಕಾರ್ಮಿಕರ ಹಕ್ಕುಗಳನ್ನು ಕಸಿದುಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಅವರು ಟೀಕಿಸಿದ್ದಾರೆ.


# ಅಮೆರಿಕದ ಚರ್ಚ್ ಮೇಲೆ ಭೀಕರ ದಾಳಿ

## ಮಿಷಿಗನ್‌ನಲ್ಲಿ ಮಾಜಿ ಸೈನಿಕನಿಂದ ಗುಂಡಿನ ಮಳೆ, ನಾಲ್ವರು ಸಾವು

**ವಾಷಿಂಗ್ಟನ್:** ಅಮೆರಿಕದ ಮಿಷಿಗನ್‌ನ ಮಾರ್ಮನ್ ಚರ್ಚ್‌ವೊಂದಕ್ಕೆ ಕಾರು ನುಗ್ಗಿಸಿದ ದುಷ್ಕರ್ಮಿಯೊಬ್ಬ, ಅಸಾಲ್ಟ್ ರೈಫಲ್‌ನಿಂದ ಮನಬಂದಂತೆ ಗುಂಡು ಹಾರಿಸಿ, ಬಳಿಕ ಚರ್ಚ್‌ಗೆ ಬೆಂಕಿ ಹಚ್ಚಿದ್ದಾನೆ. ಈ ಭೀಕರ ಘಟನೆಯಲ್ಲಿ ಕನಿಷ್ಠ ನಾಲ್ಕು ಜನರು ಸಾವನ್ನಪ್ಪಿದ್ದು, ಎಂಟು ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ದಾಳಿ ನಡೆಸಿದ ವ್ಯಕ್ತಿಯನ್ನು 40 ವರ್ಷದ ಥಾಮಸ್ ಜೇಕಬ್ ಸ್ಯಾನ್‌ಫೋರ್ಡ್ ಎಂದು ಪೊಲೀಸರು ಗುರುತಿಸಿದ್ದಾರೆ. ಈತ ಅಮೆರಿಕದ ಮಾಜಿ ಸೈನಿಕನಾಗಿದ್ದು, 2004 ರಿಂದ 2008 ರವರೆಗೆ ಇರಾಕ್ ಯುದ್ಧದಲ್ಲಿ ಸೇವೆಯನ್ನು ಸಲ್ಲಿಸಿದ್ದ. ಘಟನೆಯ ನಂತರ ಪೊಲೀಸರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಈತ ಹತನಾಗಿದ್ದಾನೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಮಿಷಿಗನ್‌ನ ಗ್ರ್ಯಾಂಡ್ ಬ್ಲ್ಯಾಂಕ್ ಟೌನ್‌ಶಿಪ್‌ನಲ್ಲಿರುವ ಚರ್ಚ್‌ಗೆ ದುಷ್ಕರ್ಮಿ ತನ್ನ ವಾಹನವನ್ನು ರಭಸದಿಂದ ನುಗ್ಗಿಸಿದ್ದಾನೆ. ಈ ಘಟನೆ ನಡೆದಾಗ ಚರ್ಚ್‌ನಲ್ಲಿ ನೂರಾರು ಭಕ್ತರು ಪ್ರಾರ್ಥನೆಯಲ್ಲಿ ತೊಡಗಿದ್ದರು. ಕಾರಿನಿಂದ ಇಳಿದ ಕೂಡಲೇ, ತಪ್ಪಿಸಿಕೊಳ್ಳಲು ಯತ್ನಿಸುತ್ತಿದ್ದ ಜನರ ಮೇಲೆ ತನ್ನ ಗನ್‌ನಿಂದ ಮನಬಂದಂತೆ ಗುಂಡು ಹಾರಿಸಿದ್ದಾನೆ. ಮಾಹಿತಿ ತಿಳಿದ 30 ಸೆಕೆಂಡ್‌ಗಳಲ್ಲಿ ಸ್ಥಳಕ್ಕೆ ಧಾವಿಸಿದ ಪೊಲೀಸರು, ಸುಮಾರು ಎಂಟು ನಿಮಿಷಗಳ ಕಾರ್ಯಾಚರಣೆಯ ನಂತರ ದಾಳಿಕೋರ ಮಾಜಿ ಸೈನಿಕನನ್ನು ಹತ್ಯೆ ಮಾಡಿದ್ದಾರೆ. ದಾಳಿಯ ನಂತರ ದುಷ್ಕರ್ಮಿಯು ಚರ್ಚ್‌ಗೆ ಬೆಂಕಿ ಹಚ್ಚಿದ್ದು, ಇದರಿಂದ ಕಟ್ಟಡ





- ಮಿಷಿಗನ್‌ನ ಮಾರ್ಮನ್ ಚರ್ಚ್‌ವೊಂದಕ್ಕೆ ಕಾರು ನುಗ್ಗಿಸಿದ ದುಷ್ಕರ್ಮಿಯಿಂದ ಗುಂಡಿನ ಮಳೆ, ಕನಿಷ್ಠ ನಾಲ್ಕು ಜನರು ಸಾವು
- ಈ ಘಟನೆ ಅಮೆರಿಕದಲ್ಲಿ 2025ರಲ್ಲಿ ನಡೆದ 324ನೇ ಸಾಮೂಹಿಕ ಗುಂಡಿನ ದಾಳಿ, ಕಳೆದ 24 ಗಂಟೆಗಳಲ್ಲಿ ಮೂರನೇ ಘಟನೆ
- ಪ್ರಾರ್ಥನಾ ಸ್ಥಳದಲ್ಲಿ ನಡೆದ ಈ ಹಿಂಸಾಚಾರ ಅಸಹನೀಯ ಎಂದ ಮಿಷಿಗನ್ ಗವರ್ನರ್ ಗ್ರೆಚೆನ್ ವಿಟ್ಮರ್
- ಇದು ಅಮೆರಿಕದಲ್ಲಿ ಕ್ರಿಶ್ಚಿಯನ್ನರ ಮೇಲಿನ ಮತ್ತೊಂದು ಉದ್ದೇಶಿತ ದಾಳಿಯಂತೆ ಕಾಣುತ್ತಿದೆ ಎಂದ ಅಧ್ಯಕ್ಷ ಡೊನಾಲ್ಡ್ ಟ್ರಂಪ್

ಸಂಪೂರ್ಣವಾಗಿ ಸುಟ್ಟು ಕರಕಲಾಗಿದೆ. ಘಟನೆಯಲ್ಲಿ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಸುಟ್ಟ ಕಟ್ಟಡದ ಅವಶೇಷಗಳಲ್ಲಿ ಇನ್ನೂ ಎರಡು ಮೃತದೇಹಗಳು ಪತ್ತೆಯಾಗಿವೆ ಎಂದು ಪೊಲೀಸರು ಹೇಳಿದ್ದಾರೆ. ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಸ್ಥಳೀಯ ಪೊಲೀಸ್ ಮುಖ್ಯಸ್ಥ ವಿಲಿಯಂ ರೇನಿ ತಿಳಿಸಿದ್ದಾರೆ.

**ಅಮೆರಿಕ ಮಿಷಿಗನ್‌ನ ಚರ್ಚ್‌ಗೆ ಕಾರು ನುಗ್ಗಿಸಿ, ಗುಂಡು ಹಾರಿಸಿ, ಬೆಂಕಿ ಹಚ್ಚಿದ ಮಾಜಿ ಸೈನಿಕ ಥಾಮಸ್ ಜೇಕಬ್ ಸ್ಯಾನ್‌ಫೋರ್ಡ್. ಈ ಭೀಕರ ದಾಳಿಯಲ್ಲಿ ಕನಿಷ್ಠ ನಾಲ್ವರು ಸಾವನ್ನಪ್ಪಿದ್ದು, ಎಂಟು ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಪೊಲೀಸರ ಗುಂಡಿಗೆ ದುಷ್ಕರ್ಮಿ ಸ್ಯಾನ್‌ಫೋರ್ಡ್ ಬಲಿಯಾಗಿದ್ದಾನೆ. ಇದು 2025ರಲ್ಲಿ ಅಮೆರಿಕದಲ್ಲಿ ನಡೆದ 324ನೇ ಸಾಮೂಹಿಕ ಗುಂಡಿನ ದಾಳಿಯಾಗಿದ್ದು, ಘಟನೆಯನ್ನು ಅಧ್ಯಕ್ಷ ಟ್ರಂಪ್ ಖಂಡಿಸಿದ್ದಾರೆ.**

**ಮುಂದುವರಿದ ತನಿಖೆ:** ಮಾಜಿ ಸೈನಿಕ ಥಾಮಸ್ ಜೇಕಬ್ ಸ್ಯಾನ್‌ಫೋರ್ಡ್ ದಾಳಿ ನಡೆಸಿದ್ದು ಯಾಕೆ, ಈತನ ದಾಳಿಯ ಹಿಂದಿನ ಉದ್ದೇಶವನ್ನು ಪತ್ತೆಹಚ್ಚಲು ಪೊಲೀಸರು ಸ್ಯಾನ್‌ಫೋರ್ಡ್‌ನ ಮನೆ, ಫೋನ್ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಇದು 2025ರಲ್ಲಿ ಅಮೆರಿಕದಲ್ಲಿ ನಡೆದ 324ನೇ ಸಾಮೂಹಿಕ ಗುಂಡಿನ ದಾಳಿಯಾಗಿದೆ. ಕಳೆದ 24 ಗಂಟೆಗಳಲ್ಲಿ ನಡೆದ ಮೂರನೇ ದಾಳಿ ಇದಾಗಿದ್ದು, ಗುಂಡಿನ ದಾಳಿ ಎನ್ನುವುದು ಅಮೆರಿಕದಲ್ಲಿ ಮನೆಮಾತು ಎಂಬಂತಾಗಿದೆ. ಕಾಕತಾಳೀಯವೆಂದರೆ, ಇದಕ್ಕೂ 14 ಗಂಟೆಗಳ ಮೊದಲು ನಾರ್ತ್ ಕ್ಯಾರೊಲಿನಾದಲ್ಲಿ ನಡೆದ ಮತ್ತೊಂದು ದಾಳಿಯ ಆರೋಪಿ ಕೂಡ 40 ವರ್ಷದ ಇರಾಕ್ ಯುದ್ಧದಲ್ಲಿ ಭಾಗಿಯಾಗಿದ್ದ ಮಾಜಿ ಸೈನಿಕನೇ ಆಗಿದ್ದಾನೆ. ಘಟನೆ ಬಗ್ಗೆ ಪ್ರತಿಕ್ರಿಯೆ ನೀಡಿರುವ ಮಿಷಿಗನ್ ಗವರ್ನರ್ ಗ್ರೆಚೆನ್ ವಿಟ್ಮರ್, ಪೂಜಾ ಸ್ಥಳದಲ್ಲಿ ಹಿಂಸಾಚಾರ ನಡೆದಿರುವುದು ಅಸಹನೀಯ. ನನ್ನ ಹೃದಯ ಒಡೆದು ಹೋಗಿದೆ, ಎಂದು ಹೇಳಿದ್ದಾರೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇದು ಅಮೆರಿಕದಲ್ಲಿ ಕ್ರಿಶ್ಚಿಯನ್ನರ ಮೇಲಿನ ಮತ್ತೊಂದು ಉದ್ದೇಶಿತ ದಾಳಿಯಂತೆ ಕಾಣುತ್ತಿದೆ, ಎಂದು ಹೇಳಿದ್ದು, ಈ ಹಿಂಸಾಚಾರದ ಸಾಂಕ್ರಾಮಿಕ ತಕ್ಷಣವೇ ಕೊನೆಗೊಳ್ಳಬೇಕು, ಎಂದು ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ವೋಟ್ ಚೋರಿ ಮೂಲಕ ಚುನಾವಣೆ ಗೆಲ್ಲಲು ಬಿಜೆಪಿ ಪ್ಲಾನ್

**ನವದೆಹಲಿ:** ಬಿಹಾರದಲ್ಲಿ 160ಕ್ಕೂ ಹೆಚ್ಚು ಸ್ಥಾನಗಳಲ್ಲಿ ಎನ್‌ಡಿಎ ಗೆಲುವು ಸಾಧಿಸುವಂತೆ ಗೃಹ ಸಚಿವ ಅಮಿತ್ ಶಾ ಜನರನ್ನು ಒತ್ತಾಯಿಸುತ್ತಿರುವುದರಿಂದ, ವಿಸಿ ಜೊತೆಗೆ ವಿಆರ್ ಈ ಫಲಿತಾಂಶವನ್ನು ತರುತ್ತದೆ ಎಂದು ಕಾಂಗ್ರೆಸ್ ಹೇಳಿದೆ. ಬಿಹಾರದ ರಾಜಕೀಯ ಪ್ರಜ್ಞೆಯುಳ್ಳ ಜನರು ಈ ತಂತ್ರಗಳನ್ನು ಸೋಲಿಸುತ್ತಾರೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಅವರು ಎಕ್ಸ್ ಮಾಡಿದ್ದಾರೆ. ಶಿಕ್ಷಣದಲ್ಲಿ, ವಿಸಿ ಎಂದರೆ ಉಪಕುಲಪತಿ; ಸ್ಟಾರ್ಟ್- ಅಪ್‌ಗಳ ಜಗತ್ತಿನಲ್ಲಿ, ವಿಸಿ ಎಂದರೆ ವೆಂಚರ್ ಕ್ಯಾಪಿಟಲ್ ಮತ್ತು ಮಿಲಿಟರಿಯಲ್ಲಿ, ವಿಸಿ ಎಂದರೆ ವೀರ ಚಕ್ರ ಎಂದು ಹೇಳಿದ್ದಾರೆ. ಆದರೆ ಈಗ ನಮ್ಮ ರಾಜಕೀಯವನ್ನು ವ್ಯಾಖ್ಯಾನಿಸುತ್ತಿರುವ ಹೊಸ ರೀತಿಯ ವಿಸಿ ಇದೆ ಅದೇ ವೋಟ್ ಚೋರಿ, ಎಂದು ಅವರು ಬರೆದಿದ್ದಾರೆ. ಮತ್ತು ಇದರ ಸೂತ್ರಧಾರ ಬಿಹಾರದಲ್ಲಿ ವಿಸಿಗಾಗಿ ಗುರಿಯನ್ನು ಈಗಾಗಲೇ ಬಹಿರಂಗಪಡಿಸಿದ್ದಾರೆ. ಕೇಂದ್ರ ಗೃಹ ಸಚಿವರು ಎನ್‌ಡಿಎ 24 ರಲ್ಲಿ 160 ಕ್ಕೂ ಹೆಚ್ಚು ಸ್ಥಾನಗಳನ್ನು



ಪಡೆಯುತ್ತದೆ ಎಂದು ವಿಶ್ವಾಸದಿಂದ ಘೋಷಿಸಿದ್ದಾರೆ ಎಂದು ರಮೇಶ್ ಎಕ್ಸ್‌ನಲ್ಲಿ ತಿಳಿಸಿದ್ದಾರೆ. ವಿಸಿ ಪ್ಲಸ್ ವಿಆರ್ ಈ ಫಲಿತಾಂಶವನ್ನು ತರುತ್ತದೆ ಎಂದು ಅವರು ಆಶಿಸುತ್ತಿದ್ದಾರೆ. ಬಿಹಾರದ ರಾಜಕೀಯವಾಗಿ ಅತ್ಯಂತ ಜಾಗೃತ ಜನರು ಈ ಕುತಂತ್ರಗಳನ್ನು ಸೋಲಿಸುತ್ತಾರೆ ಎಂದು ಅವರು ಹೇಳಿದರು.

ಇದು ಬಿಹಾರದಲ್ಲಿ ಮಹಾಘಟಬಂಧನ್ ಆಗಿರುತ್ತದೆ. ಮತ್ತು ಮೊದಲು ನಡುಕ ಅನುಭವಿಸುವುದು ನವದೆಹಲಿಯಲ್ಲಿ ಎಂದು ರಮೇಶ್ ಹೇಳಿದರು. ಅಮಿತ್ ಶಾ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಆರ್‌ಜೆಡಿ ಅಧ್ಯಕ್ಷ ಲಾಲು ಪ್ರಸಾದ್ ಅವರಂತಹ ಅವರ ಮಿತ್ರರು ಒಳನುಸುಳುಕೋರರಿಗೆ ಮತದಾನದ ಹಕ್ಕುಗಳನ್ನು ಪಡೆಯಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ ನಂತರ ಅವರ ಹೇಳಿಕೆಗಳು ಬಂದವು.

ಎನ್‌ಡಿಎ 160ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಮೂರನೇ ಎರಡರಷ್ಟು ಬಹುಮತದೊಂದಿಗೆ ಗೆದ್ದರೆ ಪ್ರತಿಯೊಬ್ಬ ಒಳನುಸುಳುವವರನ್ನು ಬಿಹಾರದಿಂದ ಹೊರಹಾಕಲಾಗುವುದು ಎಂದು ನಾನು ನಿಮಗೆ ಭರವಸೆ ನೀಡುತ್ತೇನೆ ಎಂದು ಕೇಂದ್ರ ಗೃಹ ಸಚಿವರು ಬಿಹಾರದ ಅರಾರಿಯಾದಲ್ಲಿ ಹೇಳಿದರು. 243 ಸ್ಥಾನಗಳನ್ನು ಹೊಂದಿರುವ ಬಿಹಾರ ವಿಧಾನಸಭೆಗೆ ಚುನಾವಣಾ ದಿನಾಂಕಗಳನ್ನು ಚುನಾವಣಾ ಆಯೋಗ ಶೀಘ್ರದಲ್ಲೇ ಪ್ರಕಟಿಸುವ ಸಾಧ್ಯತೆಯಿದೆ.ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಈ ಪ್ರದೇಶದಲ್ಲಿ ಉತ್ತಮ ಪ್ರದರ್ಶನ ನೀಡಿದೆ ಎಂದು ಶಾ ಗಮನಿಸಿದರು, ಆದರೆ ಈ ಬಾರಿ ನೀವು ಉತ್ತಮವಾಗಿ ಕಾರ್ಯನಿರ್ವಹಿಸಲು ಶ್ರಮಿಸಬೇಕು. ಆಗ ಮಾತ್ರ 160 ಕ್ಕೂ ಹೆಚ್ಚು ಸ್ಥಾನಗಳ ಗುರಿಯನ್ನು ಸಾಧಿಸಬಹುದು ಎಂದು ಹೇಳಿದ್ದರು.

## ರಾಹುಲ್ ಎದೆಗೆ ಗುಂಡಿಕ್ಕಲಾಗುತ್ತದೆ ಎಂದ ಬಿಜೆಪಿ ನಾಯಕನ ವಿರುದ್ಧ ಕಿಡಿ

**ಜೈಪುರ:** ರಾಹುಲ್ ಗಾಂಧಿಗೆ ಗುಂಡಿಕ್ಕಲಾಗುವುದು ಎಂಬ ಬಿಜೆಪಿ ವಕ್ತಾರರೊಬ್ಬರ ಬೆದರಿಕೆಯನ್ನು ರಾಜಸ್ಥಾನದ ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹಲೋತ್ ಸೋಮವಾರ ಖಂಡಿಸಿದ್ದಾರೆ.




ಇದು ಆಡಳಿತ ಪಕ್ಷದ ಮನಸ್ಥಿತಿಯ ಅಪಾಯಕಾರಿ ಪ್ರತಿಬಿಂಬವಾಗಿದೆ ಎಂದಿದ್ದಾರೆ. ಮಹಾತ್ಮಗಾಂಧಿ ಮತ್ತು ಮಾಜಿ ಪ್ರಧಾನಿ ಇಂದಿರಾ ಗಾಂಧಿಯನ್ನು ಗುಂಡಿಕ್ಕಿ ಕೊಂದಿರುವುದನ್ನು ದೇಶ ಕಂಡಿದೆ.

ಅವರು ರಾಷ್ಟ್ರವನ್ನು ಒಗ್ಗಟ್ಟಿನಲ್ಲಿಡಲು ಬದ್ಧರಾಗಿದ್ದರು. ಈಗ ಬಿಜೆಪಿ ವಕ್ತಾರರು ರಾಹುಲ್ ಗಾಂಧಿಯವರ ಎದೆಗೆ ಗುಂಡು ಹಾರಿಸಲಾಗುವುದು ಎಂದು ಹೇಳಿಕೆ ನೀಡಿದ್ದಾರೆ' ಎಂದು ಗೆಹಲೋತ್ ವಿಡಿಯೊ ಸಂದೇಶದಲ್ಲಿ ಖಂಡಿಸಿದ್ದಾರೆ. ಈ ವಿಷಯದ ಬಗ್ಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರ ಮೌನದ ಬಗ್ಗೆ ಗೆಹಲೋತ್ ಕಳವಳ ವ್ಯಕ್ತಪಡಿಸಿದ್ದಾರೆ. ಟಿವಿ ಕಾರ್ಯಕ್ರಮವೊಂದರ ಚರ್ಚೆಯಲ್ಲಿ ವಕ್ತಾರರು ಬಹಿರಂಗವಾಗಿ ಇಂತಹ ಹೇಳಿಕೆ ನೀಡಿದ್ದು, ಪಕ್ಷದ ಅಧ್ಯಕ್ಷರು ಈ ಬಗ್ಗೆ ಪ್ರತಿಕ್ರಿಯಿಸದಿದ್ದರೆ, ಅದು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ.

ದೇಶವು ಈ ಬಗ್ಗೆ ಚಿಂತಿಸಬೇಕಾಗಿದೆ' ಎಂದು ಅವರು ಹೇಳಿದ್ದಾರೆ.ಕೇರಳದ ಎಬಿವಿಪಿ ರಾಜ್ಯ ಘಟಕದ ಮಾಜಿ ಅಧ್ಯಕ್ಷ ಪ್ರಿಂಟು ಮಹಾದೇವ್ ಅವರು, ಮಲಯಾಳಂ ವಾಹಿನಿಯ ಚರ್ಚಾ ಕಾರ್ಯಕ್ರಮದಲ್ಲಿ, ರಾಹುಲ್ ಗಾಂಧಿ ಅವರ ಎದೆಗೆ ಗುಂಡಿಕ್ಕಲಾಗುತ್ತದೆ ಎಂದಿದ್ದರು.

ಇದೇ ವೇಳೆ, ರಾಹುಲ್ ಗಾಂಧಿಯವರ ಸಾರ್ವಜನಿಕ ಪ್ರವಾಸದ ಕುರಿತಾದ ಮಾಹಿತಿಯನ್ನು ಮಾಧ್ಯಮದಲ್ಲಿ ಹಂಚಿಕೊಳ್ಳುತ್ತಿರುವ ಬಗ್ಗೆಯೂ ಪ್ರಶ್ನಿಸಿದ್ದಾರೆ. ರಾಹುಲ್ ಗಾಂಧಿ ದೇಶದಾದ್ಯಂತ ಕೈಗೊಳ್ಳುವ ಪ್ರವಾಸ, ವಿದೇಶಿ ಭೇಟಿಗಳ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ಹಂಚಿಕೊಳ್ಳಲಾಗುತ್ತಿದೆ. ಇದು ಭದ್ರತಾಲೋಪವಲ್ಲವೇ? ಎಂದೂ ಪ್ರಶ್ನಿಸಿದ್ದಾರೆ. ಈ ಸಂಬಂಧ ಬಿಜೆಪಿ ದೇಶದ ಜನರ ಕ್ಷಮೆಯಾಚನೆ ಮಾಡಬೇಕು ಎಂದು ಕಾಂಗ್ರೆಸ್ ನಾಯಕ ಒತ್ತಾಯಿಸಿದ್ದಾರೆ.

## ಆರನೇ ದಿನವೂ ಲಡಾಖ್‌ನಲ್ಲಿ ಕರ್ಫ್ಯೂ ಮುಂದುವರಿಕೆ



**ಲೇಹ್:** ಹಿಂಸಾಚಾರ ಪೀಡಿತ ಲಡಾಖ್‌ನ ಲೇಹ್ ಪಟ್ಟಣದಲಿ ಆರನೇ ದಿನವಾದ ಇಂದು ಕೂಡ ಕರ್ಫ್ಯೂ ಜಾರಿಯಲ್ಲಿದೆ.ಕರ್ಫ್ಯೂ ಪೀಡಿತ ಪ್ರದೇಶಗಳಲ್ಲಿ ಪರಿಸ್ಥಿತಿ ಬಹುತೇಕ ಶಾಂತಿಯುತವಾಗಿತ್ತು ಎಲ್ಲಿಂದಲೂ ಯಾವುದೇ ಅಹಿತಕರ ಘಟನೆಗಳು ವರದಿಯಾಗಿಲ್ಲ. ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಮತ್ತು ಅರೆಸೈನಿಕ ಪಡೆಗಳನ್ನು ನಿಯೋಜಿಸಲಾಗಿದೆ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಕಟ್ಟುನಿಟ್ಟಿನ ಜಾಗರೂಕತೆಯನ್ನು ಕಾಯ್ದುಕೊಳ್ಳಲಾಗುತ್ತಿದೆ. ಸ್ವತಃ ಲೆಫ್ಟಿನೆಂಟ್ ಗವರ್ನರ್ ಕವಿಂದರ್ ಗುಪ್ತಾ ಅವರು ಒಟ್ಟಾರೆ ಭದ್ರತಾ ಪರಿಸ್ಥಿತಿಯನ್ನು ಪರಿಶೀಲನೆ ನಡೆಸುತ್ತಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಸ್ಕುರ್ಬುಚಾನ್‌ನ ಮಾಜಿ ಸೈನಿಕ ತ್ಸೆವಾಂಗ್ ಥಾರ್ಚಿನ್ ಮತ್ತು ಹನುವಿನ ರಿಂಚೆನ್ ದಾದುಲ್ (21) ಅವರ ಅಂತ್ಯಕ್ರಿಯೆಯ ಹಿನ್ನೆಲೆಯಲ್ಲಿ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲು ಲೆಫ್ಟಿನೆಂಟ್ ಗವರ್ನರ್ ರಾಜಭವನದಲ್ಲಿ ಉನ್ನತ ಮಟ್ಟದ ಸಭೆ ಕರೆದಿದ್ದಾರೆ ಎಂದು ಅವರು ಹೇಳಿದರು. ಸ್ಟಾನ್ಜಿನ್ ನಮ್ಗ್ಯಾಲ್ (24) ಮತ್ತು ಜಿಗ್ಮೆಟ್ ದೋರ್ಜಯ್ (25) ಎಂಬ ಇಬ್ಬರು ಯುವಕರ ಅಂತ್ಯಕ್ರಿಯೆಯನ್ನು ಭಾನುವಾರ ನಡೆಸಲಾಯಿತು. ಪಟ್ಟಣದಲ್ಲಿ ವ್ಯಾಪಕ ಹಿಂಸಾಚಾರದ ನಡುವೆ ನಾಲ್ವರು ಸೆ. 24 ರಂದು ಸಾವನ್ನಪ್ಪಿದ್ದರು. ಲೇಹ್ ಪಟ್ಟಣದಲ್ಲಿ ಮೊಬೈಲ್ ಇಂಟರ್ನೆಟ್ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಆದರೆ ಕಾರ್ಗಿಲ್ ಸೇರಿದಂತೆ ಕೇಂದ್ರಾಡಳಿತ ಪ್ರದೇಶದ ಇತರ ಪ್ರಮುಖ ಭಾಗಗಳಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಸೇರುವುದನ್ನು ನಿಷೇಧಿಸುವ ನಿಷೇಧಾಜ್ಞೆಗಳು ಜಾರಿಯಲ್ಲಿವೆ.

**60 ಕ್ಕೂ ಹೆಚ್ಚು ಜನರು ವಶ**

ರಾಜ್ಯ ಸ್ಥಾನಮಾನ ಮತ್ತು ಲಡಾಖ್‌ಗೆ ಆರನೇ ವೇಳಾಪಟ್ಟಿಯನ್ನು ವಿಸ್ತರಿಸುವ ಬೇಡಿಕೆಗಳ ಕುರಿತು ಕೇಂದ್ರದೊಂದಿಗೆ ಮಾತುಕತೆ ನಡೆಸಲು ಲೇಹ್ ಅಪೆಕ್ಸ್ ಬಾಡಿ ಕರೆ ನೀಡಿದ್ದ ಬಂದ್ ಸಂದರ್ಭದಲ್ಲಿ ವ್ಯಾಪಕ ಹಿಂಸಾತ್ಮಕ ಪ್ರತಿಭಟನೆಗಳ ನಂತರ ಬುಧವಾರ ಸಂಜೆ ಲೇಹ್ ಪಟ್ಟಣದಲ್ಲಿ ಕರ್ಫ್ಯೂ ವಿಧಿಸಲಾಯಿತು. ಘರ್ಷಣೆಯಲ್ಲಿ ಸುಮಾರು 80 ಪೊಲೀಸರು ಸೇರಿದಂತೆ 150 ಕ್ಕೂ ಹೆಚ್ಚು ಜನರು ಗಾಯಗೊಂಡರು.

ಇಬ್ಬರು ಕೌನ್ಸಿಲರ್‌ಗಳು ಸೇರಿದಂತೆ 60ಕ್ಕೂ ಹೆಚ್ಚು ಜನರನ್ನು ವಶಕ್ಕೆ ಪಡೆಯಲಾಯಿತು. ಅವರಲ್ಲಿ ಹವಾಮಾನ ಕಾರ್ಯಕರ್ತೆ ಸೋನಮ್ ವಾಂಗ್‌ಚುಕ್ ಸೇರಿದ್ದಾರೆ, ಅವರನ್ನು ರಾಷ್ಟ್ರೀಯ ಭದ್ರತಾ ಕಾಯ್ದೆಯಡಿ ಬಂಧಿಸಲಾಗಿದೆ, ನಂತರ ರಾಜಸ್ಥಾನದ ಜೋಧ್‌ಪುರ ಜೈಲಿನಲಿಡಲಾಗಿದೆ.

## ಮಿನಿ ನ್ಯೂಸ್

### ನಕಲಿ ಗುರುತಿನ ಚೀಟಿ ಬಳಕೆ ಆರೋಪ ಶಾಸಕನ ವಿರುದ್ಧ ತನಿಖೆ

**ರಾಂಚಿ:** ಚುನಾವಣೆಯ ಸಮಯದಲ್ಲಿ ಜೆಎಂಎಂ ಶಾಸಕ ದಶರಥ್ ಗಗ್ರೈ ನಕಲಿ ಗುರುತಿನ ಚೀಟಿ ಬಳಸಿದ್ದಾರೆ ಎಂಬ ಆರೋಪದ ಬಗ್ಗೆ ತನಿಖೆಗೆ ಜಾರ್ಖಂಡ್ ಮುಖ್ಯ ಚುನಾವಣಾ ಅಧಿಕಾರಿ ಕೆ.ರವಿಕುಮಾರ್ ಆದೇಶಿಸಿದ್ದಾರೆ. ಖರ್ಸವಾನ್‌ಕ್ಷೇತ್ರದಿಂದ ಮೂರು ಬಾರಿ ಶಾಸಕ ಆಗಿರುವ ಗಗ್ರೈ ಅವರ ಗುರುತಿನ ಚೀಟಿ ಅಸಲಿಯತ್ತು ಪ್ರಶ್ನಿಸಿ ಲಾಲ್ಜಿ ರಾಮ್ ಟಿಯು ಎಂಬವರು ಚುನಾವಣಾ ಆಯೋಗಕ್ಕೆ ದೂರು ನೀಡಿದ್ದರು. ಇದರಿಂದಾಗಿ ಪ್ರಕರಣ ಬಗ್ಗೆ ಸೆರೈಕೆಲಾ-ಖರ್ಸವಾನ್ ಪ್ರದೇಶದ ಉಪ ಆಯುಕ್ತರಿಗೆ ತನಿಖೆ ನಡೆಸಿ ವರದಿ ನೀಡಲು ಸಿಇಒ ಸೂಚಿಸಿದ್ದಾರೆ. ದೂರುದಾರರು ಧಿಕಾರದಲ್ಲಿರುವವರ ವಿರುದ್ಧ ಇಂತಹ ಆರೋಪಗಳನ್ನು ಮಾಡುವ ಅಭ್ಯಾಸವನ್ನು ಹೊಂದಿದ್ದಾರೆ ಎಂದು ಶಾಸಕರು ಟರ್ಕಿ ಆರೋಪವನ್ನು ತಳ್ಳಿಹಾಕಿದರು.

ದೂರುದಾರರ ಅಫಿಡವಿಟ್ ದೂರನ್ನು ನಾನು ಸೆರೈಕೆಲಾ-ಖರ್ಸವಾನ್ ಉಪ ಆಯುಕ್ತ ನಿತೀಶ್ ಕುಮಾರ್ ಸಿಂಗ್ ಅವರಿಗೆ ಪರಿಶೀಲಿಸಲು ಕಳುಹಿಸಿದ್ದೇನೆ ಎಂದು ಸಿಇಒ ಹೇಳಿದರು. ಚುನಾವಣೆಗಳು ಮುಗಿದು ಫಲಿತಾಂಶಗಳು ಘೋಷಣೆಯಾದ ನಂತರ ಶಾಸಕರನ್ನು ಒಳಗೊಂಡ ವಿವಾದಗಳನ್ನು ಸಂಬಂಧಪಟ್ಟ ರಾಜ್ಯಪಾಲರು ಪರಿಹರಿಸಬೇಕಾಗುತ್ತದೆ, ಆದರೆ ಸಂಸದರನ್ನು ಒಳಗೊಂಡ ವಿವಾದಗಳನ್ನು ರಾಷ್ಟ್ರಪತಿಗಳು ನಿಭಾಯಿಸಬೇಕಾಗುತ್ತದೆ ಎಂದು ಅವರು ಹೇಳಿದರು.

ಮಾಜಿ ಸೈನಿಕ ಎಂದು ಹೇಳಿಕೊಳ್ಳುವ ಲಾಲ್ಜಿ ರಾಮ್ ಟಿಯು, ದಶರಥ್ ಗಗ್ರೈ ಹೆಸರಿನಲ್ಲಿ ಪ್ರಸ್ತುತ ಶಾಸಕರಾಗಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ, ವಾಸ್ತವವಾಗಿ, ನಿಜವಾದ ದಶರಥ್ ಗಗ್ರೈ ಅವರ ಹಿರಿಯ ಸಹೋದರ ರಾಮಕೃಷ್ಣ ಗಗ್ರೈ ಎಂದು ಆರೋಪಿಸಿದ್ದಾರೆ.

### ಮಗುವನ್ನು ರಸ್ತೆ ಬದಿಯಲ್ಲಿ ಬಿಟ್ಟು ಅಣೆಕಟ್ಟೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ದಂಪತಿ

**ಭೂಪಾಲ್:** ಎರಡು ವರ್ಷದ ಮಗನನ್ನು ರಸ್ತೆಬದಿಯಲ್ಲಿ ಬಿಟ್ಟು ದಂಪತಿ ಅಣೆಕಟ್ಟೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮುಲ್ತೈ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಶುಭಮ್ ಕರ್ದಾತೆ (25), ಅವರ ಪತ್ನಿ ರೋಶ್ನಿ (24) ಆತ್ಮಹತ್ಯೆ ಮಾಡಿಕೊಂಡಿರುವ ದಂಪತಿ. ಜಿಲ್ಲಾ ಕೇಂದ್ರದಿಂದ ಸುಮಾರು 70 ಕಿ.ಮೀ ದೂರದಲ್ಲಿರುವ ಬುಕಾಖೇಡಿ ಅಣೆಕಟ್ಟೆಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಾಲ್ಕು ವರ್ಷಗಳ ಹಿಂದೆ ಇವರಿಬ್ಬರು ಪ್ರೇಮ ವಿವಾಹವಾಗಿದ್ದು, ಕೌಟುಂಬಿಕ ಕಲಹಗಳಿಂದ ಜಿಗುಪ್ಸೆಗೊಂಡಿದ್ದರು. ಬೆಳಗ್ಗೆ ಕೂಡ ಜಗಳವಾಡಿ ರೋಶ್ನಿ ಮಗುವಿನೊಂದಿಗೆ ಮನೆಯಿಂದ ಹೊರಹೋಗಿದ್ದಾರೆ. ಶುಭಮ್ ಆಕೆಯನ್ನೇ ಹಿಂಬಾಲಿಸಿ ಇಬ್ಬರೂ ಬುಕಾಖೇಡಿ ಅಣೆಕಟ್ಟೆ ಬಳಿ ಬಂದಿದ್ದಾರೆ.

ನಂತರ ಶುಭಮ್ ತನ್ನ ಮಾವ, ಹತನಾಪುರದ ಮುನ್ನಾ ಪರಿಹಾರ್‌ಗೆ ಕರೆ ಮಾಡಿ ಮಗುವನ್ನು ಕರೆದುಕೊಂಡು ಹೋಗಲು ಅಣೆಕಟ್ಟೆಗೆ ಬರುವಂತೆ ಹೇಳಿದ್ದಾರೆ.ಮೋಟಾರ್ ಸೈಕಲ್‌ನಲ್ಲಿ ಬಂದ ಮಾವ ಕೂಡಲೇ ದಂಪತಿಗಳು ಒಟ್ಟಿಗೆ ಅಣೆಕಟ್ಟೆಗೆ ಹಾರಿದ್ದಾರೆ. ಕೂಡಲೇ ಮಗುವನ್ನು ತನ್ನ ಆರೈಕೆಯಲ್ಲಿ ತೆಗೆದುಕೊಂಡು ಹೋಗಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ರಾಜ್ಯ ವಿಪತ್ತು ತುರ್ತು ಪ್ರತಿಕ್ರಿಯೆ ಪಡೆ ತಂಡವು ಎರಡು ಗಂಟೆಗಳ ಕಾರ್ಯಾಚರಣೆ ನಡೆಸಿ ಶವಗಳನ್ನು ಹೊರತೆಗೆದಿದ್ದಾರೆ. ಘಟನೆ ಸಂಬಂಧ ಪ್ರಕರಣ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಮುಲ್ತೈ ಪೊಲೀಸ್ ಠಾಣೆಯ ಉಸ್ತುವಾರಿ ದೇವಕರನ್ ಡೆಹೆರಿಯಾ ತಿಳಿಸಿದ್ದಾರೆ.

### ಉತ್ತರ ಪ್ರದೇಶದಲ್ಲೊಂದು ಮರ್ಯಾದಾ ಹತ್ಯೆ

**ಮುಜಫರ್‌ನಗರ:** ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯಲ್ಲೊಂದು ಮರ್ಯಾದಾ ಹತ್ಯಾ ಪ್ರಕರಣ ನಡೆದಿದೆ.ಕುಟುಂಬದ ಹೆಸರಿಗೆ ಕಳಂಕ ತಂದ ಆರೋಪದ ಮೇಲೆ ಅಪ್ರಾಪ್ತ 17 ವರ್ಷದ ಬಾಲಕಿಯನ್ನು ಆಕೆಯ ತಂದೆ ಮತ್ತು ಸಹೋದರ ಗುಂಡಿಕ್ಕಿ ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯ ಕಂಧ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ ಅಂಬೆಹ್ತಾ ಗ್ರಾಮದಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಎನ್‌ಪಿ ಸಿಂಗ್ ಸುದ್ದಿಗಾರರಿಗೆ ತಿಳಿಸಿದ್ದಾರೆ. 12 ನೇ ತರಗತಿಯ ವಿದ್ಯಾರ್ಥಿನಿ ಮುಸ್ಕಾನ್ ಎಂದು ಗುರುತಿಸಲಾದ ಸಂತ್ರಸ್ತೆಯನ್ನು ಆಕೆಯ ತಂದೆ ಜುಲ್ಫಾಮ್ ಮತ್ತು 15 ವರ್ಷದ ಸಹೋದರ ತಮ್ಮ ಮನೆಯ ಮೇಲಿನ ಮಹಡಿಗೆ ಕರೆದೊಯ್ದು, ಅಲ್ಲಿ ಆಕೆಯನ್ನು ಪಿಸ್ತೂಲಿನಿಂದ ಗುಂಡು ಹಾರಿಸಿ ಕೊಂದಿದ್ದಾರೆ ಎಂದು ಸಿಂಗ್ ತಿಳಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತಾದ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಜುಲ್ಫಾಮ್, ಅವರ ಅಪ್ರಾಪ್ತ ಮಗನ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು.

ಇಬ್ಬರನ್ನೂ ಬಂಧಿಸಲಾಗಿದೆ, ಅಪರಾಧದಲ್ಲಿ ಬಳಸಲಾದ ಆಯುಧವನ್ನು ವಶಪಡಿಸಿಕೊಳ್ಳಲಾಗಿದೆ.ಕುಟುಂಬದ ಹೆಸರಿಗೆ ಕಳಂಕ ತಂದಿದ್ದಕ್ಕಾಗಿ ತನ್ನ ಮಗಳನ್ನು ಕೊಂದಿದ್ದಾಗಿ ಆರೋಪಿ ತಂದೆ ಒಪ್ಪಿಕೊಂಡಿದ್ದಾನೆ ಎಂದು ಸಿಂಗ್ ಹೇಳಿದರು. ಸ್ಥಳೀಯರ ಪ್ರಕಾರ, ಮುಸ್ಕಾನ್ ಆ ಪ್ರದೇಶದ ಹುಡುಗನೊಂದಿಗೆ ಸಂಬಂಧ ಹೊಂದಿದ್ದಳು, ಅದನ್ನು ಅವಳ ಕುಟುಂಬ ವಿರೋಧಿಸಿತು. ನಿನ್ನೆ ಸಂಜೆ, ಆಕೆಯ ತಂದೆ ಆಕೆ ಫೋನ್‌ನಲ್ಲಿ ಚಾಟ್ ಮಾಡುವುದನ್ನುನೋಡಿದಾಗ ಕೋಪಗೊಂಡು ಆಕೆಯ ಕೊಲೆ ಮಾಡಲಾಗಿದೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಎಸ್ಪಿ ಹೇಳಿದರು.


# ಸೈದ್ಧಾಂತಿಕವಾಗಿ ಸೋತವರಿಂದ ರಾಹುಲ್ ಗಾಂಧಿ ಬಾಯಿ ಮುಚ್ಚಿಸಲು ಪಿತೂರಿ

## ಸಂಚು ರೂಪಿಸುತ್ತಿರುವುದು ಯಾರು ಎಂಬುದು ದೇಶಕ್ಕೇ ಗೊತ್ತಿದೆ, ಹಿಂಸಾಚಾರದಲ್ಲಿ ಯಶಸ್ವಿಯಾಗಲು ಕಾಂಗ್ರೆಸ್ ಬಿಡುವುದಿಲ್ಲ

**ನವದೆಹಲಿ:** ಎಬಿವಿಪಿ ಸಂಘಟನೆಯ ಮಾಜಿ ನಾಯಕ ರಾಹುಲ್ ಗಾಂಧಿ ಅವರನ್ನು ಗುರಿಯಾಗಿಸಿ ನೀಡಿರುವ ವಿವಾದಾತ್ಮಕ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ ಕಾಂಗ್ರೆಸ್ ವಾಗ್ದಾಳಿ ನಡೆಸಿದೆ. ಯಾರ ಮತಗಳ್ಳತನಗಳು ಬಹಿರಂಗವಾಗಿಯೋ ಅವರು, ಸೈದ್ಧಾಂತಿಕವಾಗಿ ಸೋತಿರುವವರು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಮೌನವಾಗಿಸಲು ಸಂಚು ರೂಪಿಸುತ್ತಿದ್ದಾರೆ ಎಂದು ಆರೋಪಿಸಿದೆ. ಆರ್‌ಎಸ್‌ಎಸ್‌ನ ವಿದ್ಯಾರ್ಥಿ ಸಂಘಟನೆ ಎಬಿವಿಪಿಯ ಕೇರಳ ಘಟಕದ ಮಾಜಿ ಅಧ್ಯಕ್ಷ ಪ್ರಿಂಟು ಮಹದೇವ್ ಅವರು ರಾಹುಲ್ ಗಾಂಧಿಗೆ ಭಯಾನಕ ಹಾಗೂ ಘೋರ ಕೊಲೆ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದೆ. ಇದಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಮಾಧ್ಯಮ ಹಾಗೂ ಪ್ರಸಾರ ವಿಭಾಗದ ಮುಖ್ಯಸ್ಥ ಪವನ್ ಖೇರಾ ಅವರು ವಿಡಿಯೊ ಹೇಳಿಕೆ ಹಂಚಿಕೊಂಡಿದ್ದಾರೆ. ಅದರೊಂದಿಗೆ, 'ದೇಶದ ಸಿದ್ಧಾಂತಗಳನ್ನು ಸೋಲಿಸಲು ಆರ್‌ಎಸ್‌ಎಸ್ ವಿಫಲವಾದಾಗಲೆಲ್ಲ, ಅದರ ಕಾರ್ಯಕರ್ತರು ಹಿಂಸಾಚಾರದ ಹಾದಿ ಹಿಡಿಯುತ್ತಾರೆ. ಮಹಾತ್ಮ ಗಾಂಧಿ ಅವರನ್ನು ನಾಥುರಾಮ್ ಗೊಡ್ಸೆ ಕೊಂದರು.

ಈಗ ಬಿಜೆಪಿ ಸೈದ್ಧಾಂತಿಕವಾಗಿ ಸೋಲುತ್ತಿದೆ. ಅದರ ವಕ್ತಾರರು, ನಾಯಕರು ರಾಹುಲ್ ಗಾಂಧಿಯವರನ್ನು ಕೊಲ್ಲುವ ಬೆದರಿಕೆಯೊಡ್ಡುತ್ತಿದ್ದಾರೆ. ಕೋಟ್ಯಂತರ ಬಡವರು, ದುರ್ಬಲ ವರ್ಗದ ಜನರ ಧ್ವನಿ ಅಡಗಿಸಲು ಪಿತೂರಿ ನಡೆಯುತ್ತಿದೆ. ರಾಹುಲ್ ಗಾಂಧಿಯವರ ಬಾಯಿ ಮುಚ್ಚಿಸಲು ಸಂಚು ನಡೆಯುತ್ತಿದೆ ಎಂದು ಬರೆದುಕೊಂಡಿದ್ದಾರೆ. ವಿಡಿಯೊದಲ್ಲಿ ಖೇರಾ ಅವರು, ಬಿಜೆಪಿಯ ವಕ್ತಾರರೊಬ್ಬರು, ರಾಹುಲ್ ಗಾಂಧಿ ಎದೆಗೆ ಗುಂಡು ಹಾರಿಸಲಾಗುವುದು ಎಂದು ಟಿವಿ ಕಾರ್ಯಕ್ರಮದಲ್ಲೇ ಹೇಳಿದ್ದಾರೆ ಎಂದಿದ್ದಾರೆ. ಇದಕ್ಕೂ ಮೊದಲು, ರಾಹುಲ್ ಸುರಕ್ಷತೆಗೆ ಸಂಬಂಧಿಸಿದಂತೆ ಮಲ್ಲಿಕಾರ್ಜುನ ಖರ್ಗೆ (ಕಾಂಗ್ರೆಸ್ ಅಧ್ಯಕ್ಷ) ಅವರಿಗೆ ಪತ್ರ ಬರೆದಿದ್ದ ಸಿಆರ್‌ಪಿಎಫ್, ಅದನ್ನು ಸೋರಿಕೆ ಮಾಡಿತ್ತು. ರಾಹುಲ್ ಅವರ ಭದ್ರತೆಯ ವಿಚಾರವನ್ನು ರಾಜಕೀಯಗೊಳಿಸುತ್ತಿರುವುದು ಏಕೆ?, ಅಂತಹ ವಾತಾವವರಣವನ್ನೇಕೆ ಸೃಷ್ಟಿಸಲಾಗುತ್ತಿದೆ. ಇದೆಲ್ಲದರ ಜೊತೆಗೆ ಪಿತೂರಿಯ ವಾಸನೆ ಬರುತ್ತಿದೆ ಎಂದಿದ್ದಾರೆ. ಯಾರೆಲ್ಲ ಸೈದ್ಧಾಂತಿಕವಾಗಿ ಸೋತಿದ್ದಾರೋ, ಆಲೋಚನೆಗಳನ್ನು ಸೋಲಿಸಲು ಯಾರ ಬಳಿ ಹೊಸ ಚಿಂತನೆಗಳಿಲ್ಲವೋ ಅವರು ಈ ಸಂಚಿನ ಹಿಂದೆ ಇದ್ದಾರೆ. ಈ ಪಿತೂರಿ ಬಹಿರಂಗವಾಗಬೇಕು. ರಾಹುಲ್ ಗಾಂಧಿ ಅವರ ಬಾಯಿ ಮುಚ್ಚಿಸಲು ಮೊದಲು ಅವಹೇಳನ ಮಾಡುತ್ತಿದ್ದಿರಿ. ಇದೀಗ, ಗುಂಡಿನ ದಾಳಿಯ ಬೆದರಿಕೆ ಒಡುತ್ತಿದ್ದೀರಿ ಎಂದು ಕಿಡಿಕಾರಿದ್ದಾರೆ. ರಾಹುಲ್ ಅವರು ಬಿಜೆಪಿ, ಚುನಾವಣಾ ಆಯೋಗದ ವಿರುದ್ಧ ಮಾಡುತ್ತಿರುವ ಮತಗಳ್ಳತನದ ಆರೋಪಗಳನ್ನು ಉಲ್ಲೇಖಿಸಿರುವ ಖೇರಾ, ಕಾಶ್ಮೀರದಿಂದ ಕನ್ಯಾ ಕುಮಾರಿವರೆಗೂ ಜನರು, ರಾಹುಲ್ ಗಾಂಧಿ ಅವರು ಎತ್ತುತ್ತಿರುವ ವಿಚಾರಗಳತ್ತ ಆಕರ್ಷಿತರಾಗುತ್ತಿದ್ದಾರೆ ಎಂಬ ಸತ್ಯವನ್ನು ಅವರಿಗೆ ಅರಗಿಸಿಕೊಳ್ಳಲಾಗುತ್ತಿಲ್ಲ. ನೀವು ಮತಗಳ್ಳತನ ಮಾಡಿರುವುದು ಬಯಲಾಗಿದೆ. ನಿಮ್ಮ ಸಮಯ ಮುಗಿದಿದೆ ಎಂಬುದು ನಿಮಗೂ ಗೊತ್ತಾಗಿದೆ ಎಂದು ತಿವಿದಿದ್ದಾರೆ. ಸಂಚು ರೂಪಿಸುತ್ತಿರುವುದು ಯಾರು ಎಂಬುದು ದೇಶಕ್ಕೇ ಗೊತ್ತಿದೆ. ಅವರು ಹಿಂಸಾಚಾರದಲ್ಲಿ ಯಶಸ್ವಿ ಆಗಲು ಕಾಂಗ್ರೆಸ್ ಬಿಡುವುದಿಲ್ಲ ಎಂದು ಪ್ರತಿಪಾದಿಸಿದ್ದಾರೆ.

**ತೀವ್ರ ಕೋಲಾಹಲ ಸೃಷ್ಟಿ**



**ಮೋದಿ ವಿರುದ್ಧ ಹೇಳಿಕೆ ನೀಡುವ ರಾಹುಲ್ ಮೇಲೆ ಗುಂಡಿನ ದಾಳಿಯಾದೀತು: ಬಿಜೆಪಿ ವಕ್ತಾರ:** ಅಪಾರ ಜನಪ್ರಿಯತೆ ಹೊಂದಿರುವ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಹೇಳಿಕೆಗಳನ್ನು ನೀಡುತ್ತಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮೇಲೆ ಗುಂಡಿನ ದಾಳಿಯೂ ನಡೆಯಬಹುದು ಎಂಬ ಎಬಿವಿಪಿ ಮಾಜಿ ನಾಯಕ, ಬಿಜೆಪಿ ವಕ್ತಾರ ಪ್ರಿಂಟು ಮಹದೇವನ್ ಹೇಳಿದ್ದಾರೆ. ಇದು ತೀವ್ರ ಕೋಲಾಹಲ ಸೃಷ್ಟಿಸಿದೆ. ಇತ್ತೀಚೆಗೆ ಖಾಸಗಿ ವಾಹಿನಿಯೊಂದರ ನೇರ ಪ್ರಸಾರ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಹದೇವನ್, ಚರ್ಚೆ ವೇಳೆಯೇ ಈ ಹೇಳಿಕೆ ನೀಡಿದ್ದಾರೆ. ನರೇಂದ್ರ ಮೋದಿ ಅವರ ಸರ್ಕಾರಕ್ಕೆ ಜನರ ಬೆಂಬಲ ಹೇಗಿದೆ ಎಂದರೆ, ರಾಹುಲ್ ಗಾಂಧಿ ನೀಡುತ್ತಿರುವ ಹೇಳಿಕೆಗಳಿಗಾಗಿ ಅವರ ಮೇಲೆ ಗುಂಡಿನ ದಾಳಿಯೂ ನಡೆಯುಬಹುದು' ಎಂದು ಪ್ರಿಂಟು ಹೇಳಿದ್ದಾರೆ.

**ಇದು ಬಾಯಿತಪ್ಪಿ ಹೇಳಿರುವ ಮಾತಲ್ಲ**

ಈ ವಿಡಿಯೊ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿದೆ. ಆರ್‌ಎಸ್‌ಎಸ್‌ನ ವಿದ್ಯಾರ್ಥಿ ಸಂಘಟನೆ ಎಬಿವಿಪಿಯ ಕೇರಳ ಘಟಕದ ಮಾಜಿ ಅಧ್ಯಕ್ಷ ಮಹದೇವನ್ ಹೇಳಿಕೆಯನ್ನು, ಕಾಂಗ್ರೆಸ್ ಹಾಗೂ ಕೇರಳ ವಿರೋಧ ಪಕ್ಷಗಳ ನಾಯಕರು ತೀವ್ರವಾಗಿ ಖಂಡಿಸಿದ್ದಾರೆ. ನೆಟ್ಟಿಗರೂ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಇದು ಬಾಯಿತಪ್ಪಿ ಹೇಳಿರುವ ಮಾತಲ್ಲ. ಯೋಜಿತ, ಭಯಾನಕ ಬೆದರಿಕೆಯಾಗಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಕಿಡಿಕಾರಿದ್ದಾರೆ. ಹಾಗೆಯೇ, ರಾಜಕೀಯ ಭಿನ್ನಾಭಿಪ್ರಾಯಗಳನ್ನು ಸಾಂವಿಧಾನಿಕ ಚೌಕಟ್ಟಿನಲ್ಲಿ ಬಗೆಹರಿಸಿಕೊಳ್ಳಬೇಕು. ಆದರೆ, ಬಿಜೆಪಿ ನಾಯಕರು ವಿರೋಧ ಪಕ್ಷಗಳ ನಾಯಕರಿಗೆ ಟಿವಿ ನೇರಪ್ರಸಾರ ಕಾರ್ಯಕ್ರಮಗಳಲ್ಲೇ ಬೆದರಿಕೆಯೊಡ್ಡುತ್ತಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ. ಈ ವಿಚಾರವಾಗಿ, ಬಿಜೆಪಿ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿರುವ ವೇಣುಗೋಪಾಲ್, ಕಠಿಣ ಕ್ರಮಕ್ಕೆ ಒತ್ತಾಯಿಸಿದ್ದಾರೆ.

# ತೆಲುಗು ವೇದಿಕೆ ಮೇಲೆ ಕನ್ನಡದಲ್ಲೇ ಮಾತನಾಡಿದ ರಿಷಬ್

## ಎಲ್ಲಾ ಕಡೆಗಳಿಂದ ಮೆಚ್ಚುಗೆ



ಕಾಂತಾರ: ಚಾಪ್ಟರ್ 1 ಪ್ರಚಾರಕ್ಕಾಗಿ ಹೈದರಾಬಾದ್‌ಗೆ ತೆರಳಿದ ರಿಷಬ್ ಶೆಟ್ಟಿ, ತೆಲುಗು ವೇದಿಕೆ ಮೇಲೆ ಕನ್ನಡದಲ್ಲೇ ಮಾತನಾಡಿ ಎಲ್ಲರ ಗಮನ ಸೆಳೆದಿದ್ದಾರೆ. ಸಾಮಾನ್ಯವಾಗಿ ಸ್ಥಳೀಯ ಭಾಷೆ ಅಥವಾ ಇಂಗ್ಲಿಷ್‌ನಲ್ಲಿ ಮಾತನಾಡುವ ವಾಡಿಕೆ ಇರುವಾಗ, ರಿಷಬ್ ತಮ್ಮ ಮಾತೃಭಾಷೆ ಕನ್ನಡದಲ್ಲೇ ಭಾಷಣ ಮಾಡಿ ಮೆಚ್ಚುಗೆ ಗಳಿಸಿದ್ದಾರೆ.


ರಿಷಬ್ ಶೆಟ್ಟಿ ನಟನೆಯ 'ಕಾಂತಾರ: ಚಾಪ್ಟರ್ 1' ಸಿನಿಮಾ ರಿಲೀಸ್‌ಗೆ ರೆಡಿ ಇದೆ. ದೇಶಾದ್ಯಂತ 6 ಸಾವಿರಕ್ಕೂ ಚಿತ್ರಮಂದಿರಗಳಲ್ಲಿ ಸಿನಿಮಾ ಬಿಡುಗಡೆ ಕಾಣಲಿದೆ. ಈ ಚಿತ್ರಕ್ಕೆ ರಿಷಬ್ ಅವರದ್ದೇ ನಿರ್ದೇಶನ ಕೂಡ ಇದೆ. ಈ ಸಿನಿಮಾದ ಬಜೆಟ್ 150 ಕೋಟಿ ರೂಪಾಯಿ ಮೀರಿದೆ ಎಂದು ಹೇಳಲಾಗುತ್ತಿದೆ. ಈ ಚಿತ್ರದ ಪ್ರಚಾರ ಕಾರ್ಯ ಭರದಿಂದ ಸಾಗುತ್ತಿದೆ. ರಿಷಬ್ ಶೆಟ್ಟಿ ಹಾಗೂ ತಂಡ ಹೈದರಾಬಾದ್‌ಗೆ ತೆರಳಿ ಸಿನಿಮಾ ಪ್ರಚಾರ ಮಾಡಿದೆ. ಈ ವೇಳೆ ವೇದಿಕೆ ಮೇಲೆ ರಿಷಬ್ ಅವರು ಕನ್ನಡದಲ್ಲೇ ಮಾತನಾಡಿದರು ಅನ್ನೋದು ವಿಶೇಷ. ಸಾಮಾನ್ಯವಾಗಿ ಬೇರೆ ರಾಜ್ಯದಲ್ಲಿ ಸಿನಿಮಾ ಪ್ರಚಾರಕ್ಕೆ ವೇದಿಕೆ ಏರಿದಾಗ ಕಲಾವಿದರು ಅಲ್ಲಿನ ಭಾಷೆಯಲ್ಲಿ ಮಾತನಾಡಲು ಪ್ರಯತ್ನಿಸುತ್ತಾರೆ. ಇಲ್ಲವೇ ಇಂಗ್ಲಿಷ್ ಅಥವಾ ಹಿಂದಿ ಭಾಷೆಯಲ್ಲಿ ಭಾಷಣ ಇರುತ್ತದೆ.

ಆದರೆ, ರಿಷಬ್ ಶೆಟ್ಟಿ ಅವರು ಹೈದರಾಬಾದ್‌ನಲ್ಲಿ ನಡೆದ 'ಕಾಂತಾರ: ಚಾಪ್ಟರ್ 1' ಪ್ರೀ-ರಿಲೀಸ್ ಈವೆಂಟ್ ಅಲ್ಲಿ ಕನ್ನಡದಲ್ಲೇ ಮಾತನಾಡಿ ಗಮನ ಸೆಳೆದಿದ್ದಾರೆ. ಅವರಿಗೆ ಎಲ್ಲಾ ಕಡೆಗಳಿಂದ ಮೆಚ್ಚುಗೆ ವ್ಯಕ್ತವಾಗುತ್ತಿದೆ.

'ಮನಸ್ಸಿನಿಂದ ಮಾತನಾಡಬೇಕು, ಹೀಗಾಗಿ ನಾನು ಕನ್ನಡದಲ್ಲೇ ಮಾತನಾಡುತ್ತೇನೆ. ಅರ್ಥ ಆಗಿಲ್ಲ ಎಂದರೆ ಸಹೋದರ (ಜೂನಿಯರ್ ಎನ್‌ಟಿಆರ್) ಟ್ರಾನ್ಸ್‌ಲೇಷನ್ ಮಾಡುತ್ತಾರೆ. ಅವರನ್ನು ಫ್ರೆಂಡ್ ಎನ್ನಬೇಕಾ, ಸಹೋದರ ಎನ್ನಬೇಕಾ ಎಂಬುದೇ ಗೊತ್ತಾಗೋದಿಲ್ಲ, ಅವರು ನನ್ನೂರವರಂತೆ ಭಾಸವಾಗುತ್ತದೆ' ಎಂದು ಮಾತು ಆರಂಭಿಸಿದರು ರಿಷಬ್.

'ಹೈದರಾಬಾದ್‌ಗೆ ಬರ್ತೀನಿ ಎಂದಾಗ ನನ್ನ ಆಡಿಯನ್ಸ್‌ಗೆ ನಿಮ್ಮನ್ನು ಪರಿಚಯಿಸ್ತೀನಿ ಎಂದು ಅವರೇ ಕರೆದುಕೊಂಡು ಬಂದು ನಿಲ್ಲಿಸಿದರು.

# ಮಳೆಯಲ್ಲಿ ರೋಷನ್ ಜೊತೆಯಲಿ



ನಟಿ ಹಾಗೂ ನಿರೂಪಕಿ ಅನುಶ್ರೀ ಕಳೆದ ತಿಂಗಳು ರೋಷನ್ ಜೊತೆ ಹಸೆಮಣೆ ಏರಿದ್ದರು. ಮದುವೆಯಾದ ಬಳಿಕ ನಿರಂತರವಾಗಿ ಕಾರ್ಯಕ್ರಮಗಳಲ್ಲಿ ಬ್ಯುಸಿಯಾಗಿದ್ದ ಅನುಶ್ರೀ ಈ ವೀಕೆಂಡ್ ನಲ್ಲಿ ಮಸ್ತ್ ಮಜಾ ಮಾಡಿದ್ದಾರೆ. ರೋಷನ್ ಜೊತೆ ಜಾಲಿ ಟ್ರಿಪ್ ಮಾಡಿರುವ ಕ್ಷಣಗಳನ್ನ ಕ್ಯಾಮೆರಾದಲ್ಲಿ ಸೆರೆಹಿಡಿದು ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.

ರೋಷನ್ ಜೊತೆ ಮಳೆಯಲಿ ಜೊತೆಯಲಿ ಅಂತಾ ಸಖತ್ ಎಂಜಾಯ್ ಮಾಡಿದ್ದಾರೆ. ಜೊತೆಗೆ ಕೆದರಿದ ಕೂದಲು, ಕೆಸರಿನಲ್ಲಿ ಪ್ರಯೋಗಳು ಪ್ರೀತಿಯ ಕ್ಷಣಗಳಲ್ಲಿ ಸೆರೆಯಾಗಿದೆ ಎಂದು ಬರೆದುಕೊಂಡಿದ್ದಾರೆ. ಅನುಶ್ರೀ ಹಾಕಿರುವ ಪೋಸ್ಟ್ ಗೆ ಜಾಲತಾಣದಲ್ಲಿ ಸಖತ್ ಮೆಚ್ಚುಗೆ ಬರುತ್ತಿದೆ. ಮಾತಿನ ಮಲ್ಲಿ ಅನುಶ್ರೀ ಕೊಂಚ ಬ್ರೇಕ್ ತೆಗೆದುಕೊಂಡು ಸುತ್ತಾಟ ನಡೆಸಿದ್ದಾರೆ.

ಅನುಶ್ರೀ-ರೋಷನ್ ಜೋಡಿ ಪ್ರೀತಿಸಿ ಮದುವೆಯಾಗಿದ್ದಾರೆ. ಐಟಿ ಉದ್ಯೋಗಿಯಾಗಿರುವ ರೋಷನ್ ಹಾಗೂ ಅನುಶ್ರೀ ಇಬ್ಬರೂ ಅಪ್ಪು ಅಭಿಮಾನಿಗಳು. ಸರಳವಾಗಿ ಮದುವೆಯಾದ ಅನುಶ್ರೀ ಇದೀಗ ಜಾಲಿ ಟ್ರಿಪ್ ನಡೆಸಿದ್ದಾರೆ. ಈ ಫೋಟೋ ಈಗ ಜಾಲತಾಣದಲ್ಲಿ ವೈರಲ್ ಆಗ್ತಿವೆ.

# ಗತವೈಭವದ ಟೀಸರ್ ರಿಲೀಸ್



ಸಿಂಪಲ್ ಸುನಿ ನಿರ್ದೇಶನದ ಬಹು ನಿರೀಕ್ಷಿತ ಸಿನಿಮಾ ಗತವೈಭವ ತೆರೆಗೆ ಬರಲು ಸಜ್ಜಾಗಿದೆ. ಯುವ ಪ್ರತಿಭೆ ದುಶ್ಯಂತ್ ನಾಯಕನಾಗಿ, ಆಶಿಕಾ ರಂಗನಾಥ್ ನಾಯಕಿಯಾಗಿ ಅಭಿನಯಿಸಿದ್ದಾರೆ.

ಗತವೈಭವ ಟೀಸರ್ ಅನಾವರಣ ಮಾಡುವ ಮೂಲಕ ಚಿತ್ರತಂಡ ಪ್ರಚಾರ ಕಾರ್ಯ ನಡೆಸಿದೆ. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಗತವೈಭವ ಸಿನಿಮಾದ ಸುದ್ದಿಗೋಷ್ಠಿ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ನಿರ್ದೇಶಕ ಸಿಂಪಲ್ ಸುನಿ ಮಾತನಾಡಿ, ಗತವೈಭವ ತುಂಬಾ ಸೀರಿಯಸ್ ಆಗಿ ತೆಗೆದುಕೊಂಡ ಪ್ರಾಜೆಕ್ಟ್. ನನ್ನ ಬ್ಯಾನರ್‌ನಡಿ ಮಾಡಬೇಕು ಎಂದುಕೊಂಡ ಸಿನಿಮಾ ಇದು. ದುಶ್ಯಂತ್ ಈ ಪ್ರಾಜೆಕ್ಟ್ ಮಾಡಬೇಕು ಎಂದು ಬರೆದಿತ್ತು. ಅದಕ್ಕೆ ಇದು ಆಗಿದೆ. ನಾಲ್ಕು ಸಿನಿಮಾ ಮಾಡಿದಷ್ಟು ಈ ಜರ್ನಿ ಆಗಿದೆ. ಅಂದುಕೊಂಡ ರೀತಿ ಗತವೈಭವ ಮೂಡಿ ಬಂದಿದೆ. ಕೆಲವು ಸಿನಿಮಾ ಪ್ರಚಾರ ಮಾಡಿ ತೆರೆಗೆ ಬರುತ್ತವೆ. ಈ ಚಿತ್ರ ರಿಲೀಸ್ ಆದರೆ ಪ್ರಚಾರವಾಗುತ್ತವೆ. ನಾನು ಆಡಿಯನ್ಸ್ ರೀತಿ ಈ ಸಿನಿಮಾಗಾಗಿ ಕಾಯುತ್ತಿದ್ದೇವೆ. ಪ್ರತಿ ಶಾಟ್ ತುಂಬಾ ಚೆನ್ನಾಗಿ ಬಂದಿದೆ. ಪ್ರೊಡ್ಯೂಸರ್ ದೀಪಕ್ ಸರ್ ಚಿತ್ರಕ್ಕೆ ಎಲ್ಲವನ್ನೂ ಒದಗಿಸಿದ್ದಾರೆ. ದುಶ್ಯಂತ್ ನ್ಯಾಚುರಲ್ ಆರ್ಟಿಸ್ಟ್. ಆಶಿಕಾ ಫ್ಯಾಮಿಲಿ ತರ ಆಗಿದ್ದಾರೆ. ಚಿತ್ರದಲ್ಲಿ ಎಂಟರ್ಟೈನ್ಮೆಂಟ್, ಎಮೋಷನ್ ಎಲ್ಲವೂ ಇದೆ ಎಂದರು.

ನಟ ದುಶ್ಯಂತ್ ಮಾತನಾಡಿ, ನೂರು ದಿನಕ್ಕೂ ಹೆಚ್ಚು ಕಾಲ ಶೂಟಿಂಗ್ ಮಾಡಿದ್ದೇವೆ. ಪೋರ್ಚುಗಲ್ ಚಿತ್ರೀಕರಣ ಮಾಡಿದ್ದೇವೆ. ಗ್ರಾಫಿಕ್ ಕಾರಣದಿಂದ ಸಿನಿಮಾ ತಡವಾಯ್ತು. ನಿರೀಕ್ಷೆಗೂ ಮೀರಿದಷ್ಟು ಚಿತ್ರ ಅದ್ಭುತವಾಗಿ ಮೂಡಿ ಬಂದಿದೆ. ಗತವೈಭವ ಅದಕ್ಕೆ ಏನೂ ಬೇಕು ಅದು ತೆಗೆದುಕೊಳ್ತು.

# ಶ್ರೀಮುರಳಿ ಪರಾಕ್‌ಗೆ ಮುಹೂರ್ತ

ಬಘೀರ ಸಿನಿಮಾದ ಸಕ್ಸಸ್ ಬಳಿಕ ರೋರಿಂಗ್ ಸ್ಟಾರ್ ಶ್ರೀಮುರಳಿ ಪರಾಕ್ ಎಂಬ ಚಿತ್ರ ಒಪ್ಪಿಕೊಂಡಿದ್ದಾರೆ. ಇಂದು ಬೆಂಗಳೂರಿನ ಬಂಡಿ ಮಹಾಕಾಳಿ ದೇಗುಲದಲ್ಲಿ ಪರಾಕ್ ಚಿತ್ರದ ಮುಹೂರ್ತ ನೆರವೇರಿದೆ. ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್ ಕ್ಲ್ಯಾಪ್ ಮಾಡಿ ಇಡೀ ತಂಡಕ್ಕೆ ಶುಭ ಹಾರೈಸಿದರು.

ಬಳಿಕ ಸುದ್ದಿಗಾರರೊಂದಿಗೆ ಶ್ರೀಮುರಳಿ ಮಾತನಾಡಿ, ''ಪರಾಕ್ ವಿಂಟೇಜ್ ಸೆಟ್‌ನಲ್ಲಿ ನಡೆಯುವ ಸಿನಿಮಾ. ಮುಂದಿನ ಚಿತ್ರ ಯಾವ ರೀತಿ ಕಥೆ ಆಯ್ಕೆ ಮಾಡಬೇಕು ಎಂಬ ಟೆನ್ಷನ್ ಇತ್ತು. ಸುಮಾರು 200 ಕಥೆ ಕೇಳಿದ್ದೆ. ಪರಾಕ್ ಸಿನಿಮಾ ತಂಡದ ಜೊತೆ ಎರಡು ವರ್ಷ ಈಗಾಗಲೇ ಟ್ರಾವೆಲ್ ಮಾಡಿದ್ದೆ. ಈ ತಿಂಗಳಿಂದ ಚಿತ್ರದ ಶೂಟಿಂಗ್ ಶುರುವಾಗಲಿದೆ. ಚರಣ್ ರಾಜ್ ಅವರು ಸಂಗೀತ ನಿರ್ದೇಶನ ಮಾಡಲಿದ್ದಾರೆ'' ಎಂದು ಮಾಹಿತಿ ನೀಡಿದರು.



ಯುವ ಪ್ರತಿಭೆ ಹಾಲೇಶ್ ಕೋಗುಂಡಿ ಈ ಚಿತ್ರವನ್ನ ಡೈರೆಕ್ಷನ್ ಮಾಡುತ್ತಿದ್ದಾರೆ. ಇವರಿಗೆ ಇದು ಮೊದಲ ಚಿತ್ರವಾಗಿದೆ. ಈ ಮೊದಲು ಕೆಲವು ಕಿರು ಚಿತ್ರ ಮಾಡಿರೋ ಅನುಭವ ಇದೆ. ಇದೀಗ ಪರಾಕ್ ಮೂಲಕ ಡೈರೆಕ್ಟರ್ ಆಗುತ್ತಿದ್ದಾರೆ.

ಬ್ಯಾಂಡ್ ಸ್ಟುಡಿಯೋಸ್ ಬ್ಯಾನರ್ ಅಡಿ ಈ ಪರಾಕ್ ಸಿನಿಮಾ ನಿರ್ಮಾಣವಾಗುತ್ತಿದೆ. ಚರಣ್ ರಾಜ್ ಸಂಗೀತ, ಸಂದೀಪ್ ವಲ್ಲೂರಿ ಕ್ಯಾಮೆರಾ, ಉಲ್ಲಾಸ್ ಹೈದೂರ್ ಕಲಾ ನಿರ್ದೇಶನ, ಇಂಚರಾ ಸುರೇಶ್ ಕಾಸ್ಟ್ಯೂಮ್ ಡಿಸೈನ್ ಮಾಡುತ್ತಿದ್ದಾರೆ. ಶೀಘ್ರದಲ್ಲೇ ಉಳಿದ ಅಪ್ ಡೇಟ್ ನ್ನು ಚಿತ್ರತಂಡ ರಿವೀಲ್ ಮಾಡಲಿದೆ.

# ಯಶವಂತ್ ಸರದೇಶಪಾಂಡೆ ಹೃದಯಾಘಾತದಿಂದ ನಿಧನ

## ಸಂತಾಪ ಸೂಚಿಸಿದ ಸಚಿವ ತಂಗಡಗಿ

ನಟ, ರಂಗ ನಿರ್ದೇಶಕ ಯಶವಂತ್ ಸರದೇಶಪಾಂಡೆ (55) ನಿಧನ ಹೊಂದಿದ್ದಾರೆ. ಹೃದಯಾಘಾತದಿಂದ ಬೆಂಗಳೂರಿನ ಫೋರ್ಟಿಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ಯಶವಂತ ಸರದೇಶಪಾಂಡೆ ಕನ್ನಡ ರಂಗಭೂಮಿ ನಟರಾಗಿ ಹೆಚ್ಚು ಜನಪ್ರಿಯವಾದವರು. ರಾಜ್ಯಾದಂತ್ಯ ಇವರು ನಟಿಸಿ-ನಿರ್ದೇಶಿಸಿರುವ ಆಲ್ ದಿ ಬೆಸ್ಟ್ ನಾಟಕ ಅಭೂತಪೂರ್ವ ಯಶಸ್ಸು ಕಂಡಿತ್ತು. ಈಗ ಕಿರುತೆರೆ ಮತ್ತು ಚಲನಚಿತ್ರಗಳಲ್ಲಿ ಪಾತ್ರವಹಿಸುತ್ತಿದ್ದಾರೆ. ಇವರ ಪತ್ನಿ ಮಾಲತಿ ಸಹ ರಂಗಭೂಮಿ ಮತ್ತು ಕಿರುತೆರೆಯಲ್ಲಿ ಜನಪ್ರಿಯ ಕಲಾವಿದೆಯಾಗಿದ್ದಾರೆ.

ನಟ, ನಿರ್ದೇಶಕ, ನಾಟಕಕಾರ, ಹಾಸ್ಯ ನಾಟಕಗಳ ಮುಖಾಂತರ ಕರ್ನಾಟಕದಾದ್ಯಂತ ಮನೆಮಾತಾಗಿರುವ ಯಶವಂತ ಸರದೇಶಪಾಂಡೆಯವರು 1965ರ ಜೂ.13ರಲ್ಲಿ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲ್ಲೂಕಿನ ಉಕ್ಕಲಿ ಎಂಬ ಹಳ್ಳಿಯಲ್ಲಿ ಜನಿಸಿದರು. ತಂದೆ ಶ್ರೀಧರರಾವ್ ಗೋಪಾಲರಾವ್ ಸರದೇಶಪಾಂಡೆ, ತಾಯಿ ಕಲ್ಪನಾದೇವಿ.



**ಶಿವರಾಜ ತಂಗಡಗಿ ಶೋಕ**

ಹಿರಿಯ ರಂಗಕರ್ಮಿ ಯಶವಂತ ಸರದಶಪಾಂಡೆ ಅವರ ನಿಧನಕ್ಕೆ ಸಚಿವ ಶಿವರಾಜ ತಂಗಡಗಿ ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ. ರಂಗಭೂಮಿಯ ಜೊತೆ ಸಿನಿಮಾ ಮತ್ತು ಟಿವಿ ಧಾರವಾಹಿಗಳಲ್ಲಿಯ ನಟನೆಯಿಂದ ಅಪಾರ ಹೆಸರು ಮಾಡಿರುವ ಯಶವಂತ ಸರದೇಶಪಾಂಡೆ ಸಮಕಾಲೀನ ಹಾಸ್ಯ ಕಲಾವಿದರ ಪಾಲಿನಲ್ಲಿ ತಮ್ಮ ವಿಶಿಷ್ಟ ಭಾಷೆ, ಆಂಗಿಕ ಅಭಿನಯದಿಂದ ಅಪಾರ ಜನಪ್ರಿಯತೆ ಪಡೆದಿದ್ದರು. ರಂಗ ವರ್ತುಲ ತಂಡವನ್ನು ಕಟ್ಟಿ, ಆ ಮೂಲಕ ಅಸಂಖ್ಯಾತ ನಾಟಕಗಳನ್ನ ಪ್ರದರ್ಶಿಸಿದ ಯಶವಂತ ಸರದೇಶಪಾಂಡೆ ಅವರ ಆಲ್ ದಿ ಬೆಸ್ಟ್ ನಾಟಕ ದಾಖಲೆಯ ಪ್ರದರ್ಶನಗಳನ್ನ ಕಂಡಿದೆ. ಕಮಲ ಹಾಸನ್ ಅಭಿನಯದ ರಾಮ ಶಾಮ ಭಾಮ ಜನಪ್ರಿಯ ಚಲನಚಿತ್ರದ ಸಂಭಾಷಣಕಾರರಾಗಿ, ಜೊತೆಗೆ ನಟಿಸಿ, ಅಪಾರ ಜನಪ್ರೀತಿ ಗಳಿಸಿದ್ದರು. ದಾವಣಗೆರೆಯ ವೃತ್ತಿರಂಗಭೂಮಿ ರಂಗಾಯಣದ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದ ಯಶವಂತ ಸರದೇಶಪಾಂಡೆ ಅವರ ಸಾಂಸ್ಕೃತಿಕ ಕೊಡುಗೆಗಾಗಿ ಅವರಿಗೆ ನನ್ನ ಗೌರವ ಪೂರ್ವಕ ನಮನಗಳನ್ನು ಸಲ್ಲಿಸುತ್ತೇನೆ ಎಂದು ಸಚಿವ ಶಿವರಾಜ ತಂಗಡಗಿ ತಮ್ಮ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.

# ಭಾರತವನ್ನು ಎದುರಾಕಿದ ನಖ್ವಿಗೆ ಮುಖಭಂಗ

ಏಷ್ಯಾಕಪ್ ಫೈನಲ್ ಪಂದ್ಯದಲ್ಲಿ ಗೆದ್ದು ಬೀಗಿದ ಟೀಮ್ ಇಂಡಿಯಾ ಎಸಿಸಿ ಮುಖ್ಯಸ್ಥ ಮೊಹ್ಸಿನ್ ನಖ್ವಿಯಿಂದ ಟ್ರೋಫಿ ಸ್ವೀಕರಿಸಲು ನಿರಾಕರಿಸಿದ್ದಾರೆ. ಇದಕ್ಕೆ ಮುಖ್ಯ ಕಾರಣ ನಖ್ವಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯ ಅಧ್ಯಕ್ಷರಾಗಿರುವುದು. ಏಷ್ಯಾಕಪ್ ಟೂರ್ನಿಯಲ್ಲಿ ಪಾಕ್ ಆಟಗಾರರೊಂದಿಗೆ ಹ್ಯಾಂಡ್‌ಶೇಕ್ ಮಾಡದಿದ್ದ ಟೀಮ್ ಇಂಡಿಯಾ ಆಟಗಾರರು, ಅಂತಿಮವಾಗಿ ಪಿಸಿಬಿ ಅಧ್ಯಕ್ಷರಿಂದ ಪ್ರಶಸ್ತಿ ಸ್ವೀಕರಿಸಲು ಹಿಂದೇಟು ಹಾಕಿದ್ದಾರೆ. ಏಷ್ಯಾಕಪ್ ಫೈನಲ್ ಪಂದ್ಯವು ರಣರೋಚಕ ಹೋರಾಟಕ್ಕೆ ಸಾಕ್ಷಿಯಾಗಿತ್ತು.

ಈ ಹೋರಾಟದಲ್ಲಿ ಪಾಕಿಸ್ತಾನ್ ತಂಡವನ್ನು ಬಗ್ಗು ಬಡಿದು ಭಾರತ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಚಾಂಪಿಯನ್ ಪಟ್ಟದ ಬೆನ್ನಲ್ಲೇ ಮೈದಾನದಲ್ಲಿ ಹೈಡ್ರಾಮಾ ನಡೆಯಿತು. ಪಂದ್ಯ ಮುಗಿಯುತ್ತಿದ್ದಂತೆ ಟೀಮ್ ಇಂಡಿಯಾ ಆಟಗಾರರು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಮುಖ್ಯಸ್ಥ ಮೊಹ್ಸಿನ್ ನಖ್ವಿ ಅವರಿಂದ ಪ್ರಶಸ್ತಿ ಸ್ವೀಕರಿಸಲು ನಿರಾಕರಿಸಿದರು. ಇದಾಗ್ಯೂ ಭಾರತ ತಂಡ ಟ್ರೋಫಿ ಪಡೆಯುವುದಿಲ್ಲ ಎಂದೂ ಹೇಳಿರಲಿಲ್ಲ. ಮೊಹ್ಸಿನ್ ನಖ್ವಿ ಬದಲಿಗೆ ಎಮಿರೇಟ್ಸ್ ಕ್ರಿಕೆಟ್ ಮಂಡಳಿಯ ಉಪಾಧ್ಯಕ್ಷ ಖಾಲಿದ್ ಅಲ್ ಜರೂನಿ ಅವರಿಂದ ಟ್ರೋಫಿಯನ್ನು ಹಸ್ತಾಂತರಿಸುವಂತೆ ವಿನಂತಿಸಿತ್ತು, ಆದರೆ ಮೊಹ್ಸಿನ್ ನಖ್ವಿ ಇದಕ್ಕೆ ಒಪ್ಪಿರಲಿಲ್ಲ. ನಾನು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಅಧ್ಯಕ್ಷ. ಇಲ್ಲಿ ನನ್ನ ತೀರ್ಮಾನವೇ ಮುಖ್ಯ. ನನ್ನ ಟ್ರೋಫಿ, ನನ್ನ ಇಷ್ಟ ಎಂಬ ವಾದವನ್ನು ಮುಂದಿಟ್ಟರು. ಅಲ್ಲದೆ ಕೆಲ ಕಾಲ ಯಾರೊಂದಿಗೊ ಫೋನ್‌ನಲ್ಲಿ ಮಾತನಾಡಿದರು. ಇದಾಗ್ಯೂ ಟೀಮ್ ಇಂಡಿಯಾ ಆಟಗಾರರು ತಮ್ಮ ನಿರ್ಧಾರವನ್ನು ಬದಲಿಸಿರಲಿಲ್ಲ. ಇದರಿಂದ ಮತ್ತಷ್ಟು ಮುಖಭಂಗಕ್ಕೆ ಒಳಗಾದ ಮೊಹ್ಸಿನ್ ನಖ್ವಿ ಕೆಲ ಕಾಲ ವೇದಿಕೆಯಲ್ಲಿದ್ದರು. ಇದಾಗ್ಯೂ ಭಾರತೀಯ ಆಟಗಾರರು ತನ್ನಿಂದ ಟ್ರೋಫಿ ಸ್ವೀಕರಿಸಲ್ಲ ಎಂಬುದು ದೃಢವಾಗುತ್ತಿದ್ದಂತೆ, ಏಷ್ಯಾಕಪ್ ಅನ್ನು ಹೊಟೇಲ್‌ಗೆ ಕೊಂಡೊಯ್ಯುವಂತೆ ನಖ್ವಿ ಸೂಚಿಸಿದ್ದಾರೆ. ಅಲ್ಲದೆ ಫೋಟೋಶೂಟ್‌ಗಾಗಿ ಚಾಂಪಿಯನ್ಸ್ ತಂಡದ ಮುಂದೆ ಇಡಲಾಗುವ ಚಾಂಪಿಯನ್ಸ್ ಬೋರ್ಡ್ ಅನ್ನು ಹಿಂದಕ್ಕೆ ಕೊಂಡೊಯ್ಯುವಂತೆ ಆಜ್ಞಾಪಿಸಿದ್ದಾರೆ.

ಆದರೆ ಇದ್ಯಾವುದಕ್ಕೂ ತಲೆ ಕೆಡಿಸಿಕೊಳ್ಳದ ಟೀಮ್ ಇಂಡಿಯಾ ಆಟಗಾರರು ಇತರೆ ಪ್ರಶಸ್ತಿಗಳನ್ನು ಸ್ವೀಕರಿಸಿದ ಬಳಿಕ, ಚಾಂಪಿಯನ್ಸ್ ಸಂಭ್ರಮವನ್ನು ಆಚರಿಸಿದ್ದಾರೆ.

ಈ ಮೂಲಕ ಟ್ರೋಫಿ ಇಲ್ಲದಿದ್ದರೂ ನಮ್ಮ ಸಂಭ್ರಮಕ್ಕೆ ಅಡ್ಡಿಯಿಲ್ಲ ಎಂಬುದನ್ನು ಭಾರತೀಯ ಆಟಗಾರರು ಸಾರಿ ಹೇಳಿದ್ದಾರೆ. ಇದೀಗ ಟೀಮ್ ಇಂಡಿಯಾವನ್ನು ಎದುರಾಕಿಕೊಂಡು ಟ್ರೋಫಿ ಎತ್ತಿಕೊಂಡು ಹೋದ ಮೊಹ್ಸಿನ್ ನಖ್ವಿ ವಿರುದ್ಧ ಬಿಸಿಸಿಐ, ಇಂಟರ್ ನ್ಯಾಷನಲ್ ಕ್ರಿಕೆಟ್ ಕೌನ್ಸಿಲ್‌ಗೆ (ಐಸಿಸಿ) ದೂರು ನೀಡಲು ನಿರ್ಧರಿಸಿದೆ. ಅಷ್ಟೇ ಅಲ್ಲದೆ ಮುಂಬರುವ ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಸಭೆಯಲ್ಲೂ ಈ ವಿಚಾರ ಚರ್ಚೆಯಾಗಲಿದೆ. ಅಲ್ಲದೆ ಭಾರತ ಸೇರಿದಂತೆ ಕೆಲ ಕ್ರಿಕೆಟ್ ಮಂಡಳಿ ಮೊಹ್ಸಿನ್ ನಖ್ವಿ ಅವರನ್ನು ಮುಖ್ಯಸ್ಥ ಸ್ಥಾನದಿಂದ ವಜಾಗೊಳಿಸಲು ಆಗ್ರಹಿಸುವುದು ಖಚಿತ.



ಒಟ್ಟಿನಲ್ಲಿ ಭಾರತವನ್ನು ಎದುರಾಕಿಕೊಂಡ ಮೊಹ್ಸಿನ್ ನಖ್ವಿಗೆ ಇದೀಗ ಏಷ್ಯನ್ ಕ್ರಿಕೆಟ್ ಕೌನ್ಸಿಲ್‌ನ ಮುಖ್ಯಸ್ಥ ಹುದ್ದೆಯನ್ನು ಕಳೆದುಕೊಳ್ಳುವ ಭೀತಿ ಎದುರಾಗಿದೆ. ಅತ್ತ ಐಸಿಸಿ ಕೂಡ ಅವರ ವಿರುದ್ಧ ಕಠಿಣ ಕ್ರಮ ಕೈಗೊಂಡರೆ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಹುದ್ದೆಯನ್ನು ಸಹ ತ್ಯಜಿಸಬೇಕಾಗಿ ಬರಬಹುದು.

**ಎಕ್ಸ್ ಖಾತೆ ಬ್ಯಾನ್:** ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಅಧ್ಯಕ್ಷ ಮೊಹ್ಸಿನ್ ನಖ್ವಿ ಅವರ ಎಕ್ಸ್ ಖಾತೆಯನ್ನು ಭಾರತದಲ್ಲಿ ತಡೆ ಹಿಡಿಯಲಾಗಿದೆ. ಏಷ್ಯಾಕಪ್ ಮುಕ್ತಾಯದ ಬೆನ್ನಲ್ಲೇ ನಖ್ವಿ ಖಾತೆಯನ್ನು ಭಾರತದಲ್ಲಿ ತಡೆ ಹಿಡಿಯಲಾಗಿರುವುದು ವಿಶೇಷ. ಹೀಗಾಗಿ ಮುಂಬರುವ ದಿನಗಳಲ್ಲಿ ಎಸಿಸಿ ಮುಖ್ಯಸ್ಥ ಸ್ಥಾನದಲ್ಲಿ ನಖ್ವಿ ಅವರು ಮುಂದುವರೆಯುವುದನ್ನು ಬಿಸಿಸಿಐ ವಿರೋಧಿಸುವುದು ಖಚಿತ ಎಂದೇ ಹೇಳಬಹುದು.

# ಏಷ್ಯಾಕಪ್‌ನಲ್ಲಿ ಕಾರ್ ಸಿಕ್ಕಿದ್ದು ಯಾರಿಗೆ

## ತಿಲಕ್ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿ




ದುಬೈ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಏಷ್ಯಾಕಪ್ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡವು 19.1 ಓವರ್‌ಗಳಲ್ಲಿ 146 ರನ್ ಗಳಿಸಿ ಆಲೌಟ್ ಆಗಿತ್ತು. ಈ ಗುರಿಯನ್ನು ಟೀಮ್ ಇಂಡಿಯಾ 19.4 ಓವರ್‌ಗಳಲ್ಲಿ ಚೇಸ್ ಮಾಡಿ 5 ವಿಕೆಟ್‌ಗಳ ಜಯ ಸಾಧಿಸಿದೆ. ಏಷ್ಯಾಕಪ್ ಟೂರ್ನಿಗೆ 17ನೇ ಆವೃತ್ತಿಗೆ ತೆರೆಬಿದ್ದಿದೆ. ಈ ಬಾರಿ ನಡೆದ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನ್ ತಂಡವನ್ನು ಬಗ್ಗು ಬಡಿದು ಭಾರತ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದೆ.

ಈ ಚಾಂಪಿಯನ್ ಪಟ್ಟದೊಂದಿಗೆ ಟೀಮ್ ಇಂಡಿಯಾ ಪ್ರಶಸ್ತಿ ಮೊತ್ತವಾಗಿ 2.6 ಕೋಟಿ ರೂ. ಪಡೆದುಕೊಂಡಿದೆ. ಇನ್ನು ರನ್ನರ್ ಅಪ್ ಪಾಕ್ ತಂಡಕ್ಕೆ ಸಿಕ್ಕಿರುವುದು 1.3 ಕೋಟಿ ರೂ.

ಇನ್ನು ಫೈನಲ್ ಪಂದ್ಯದಲ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ ತಿಲಕ್ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಯೊಂದಿಗೆ 4.43 ಲಕ್ಷ ರೂ. ಬಹುಮಾನ ಮೊತ್ತ ಪಡೆದಿದ್ದಾರೆ. ಇದರ ಜೊತೆಗೆ ಸೂಪರ್ ಸಿಕ್ಸ್ ಆಫ್ ದಿ ಮ್ಯಾಚ್ ಪ್ರಶಸ್ತಿಯಾಗಿ ತಿಲಕ್ ವರ್ಮಾಗೆ 2.66 ಲಕ್ಷ ರೂ. ಸಿಕ್ಕಿದೆ.




ಹಾಗೆಯೇ ಫೈನಲ್ ಪಂದ್ಯದ ಗೇಮ್ ಚೇಂಜರ್ ಆಫ್ ದಿ ಮ್ಯಾಚ್ ಪ್ರಶಸ್ತಿಯು ಶಿವಂ ದುಬೆ ಪಾಲಾಗಿದೆ. ಅಂತಿಮ ಪಂದ್ಯದಲ್ಲಿ ಅಲ್‌ರೌಂಡರ್ ಪ್ರದರ್ಶನ ನೀಡಿದ ದುಬೆ 3.10 ಲಕ್ಷ ರೂ. ಬಹುಮಾನ ಮೊತ್ತ ಪಡೆದಿದ್ದಾರೆ.

ಇದರೊಂದಿಗೆ ಕುಲ್ದೀಪ್ ಯಾದವ್‌ಗೂ ಪ್ರಶಸ್ತಿ ಲಭಿಸಿದೆ. ಏಷ್ಯಾಕಪ್ 2025 ಟೂರ್ನಿಯ ಮೋಸ್ಟ್ ವಾಲ್ಯುಎಬಲ್ ಪ್ಲೇಯರ್ ಆಗಿ ಕುಲ್ದೀದ್ ಯಾದವ್ ಆಯ್ಕೆಯಾಗಿದ್ದು, ಈ ಪ್ರಶಸ್ತಿಯೊಂದಿಗೆ ಟೀಮ್ ಇಂಡಿಯಾ ಕುಲ್ದೀಪ್ ಯಾದವ್ 13.30 ಲಕ್ಷ ರೂ. ತಮ್ಮದಾಗಿಸಿಕೊಂಡಿದ್ದಾರೆ. ಇನ್ನು ಪ್ಲೇಯರ್ ಆಫ್ ದಿ ಟೂರ್ನಮೆಂಟ್ ಪ್ರಶಸ್ತಿ ಒಲಿದದ್ದು ಅಭಿಷೇಕ್ ಶರ್ಮಾಗೆ.

ಟೀಮ್ ಇಂಡಿಯಾ ಪರ ಅದ್ಭುತ ಪ್ರದರ್ಶನ ನೀಡಿದ ಅಭಿಷೇಕ್ ಶರ್ಮಾ ಪ್ಲೇಯರ್ ಆಫ್ ದಿ ಟೂರ್ನಮೆಂಟ್ ಪ್ರಶಸ್ತಿಯೊಂದಿಗೆ 13.30 ಲಕ್ಷ ರೂ. ನಗದು ಬಹುಮಾನ ಪಡೆದಿದ್ದಾರೆ. ಇದರೊಂದಿಗೆ ಪ್ಲೇಯರ್ ಆಫ್ ದಿ ಟೂರ್ನಮೆಂಟ್ ಆಟಗಾರನಿಗೆ ನೀಡಲಾಗುವ ಸುಮಾರು 25 ಲಕ್ಷ ರೂ. ಮೌಲ್ಯದ ಹವಾಲ್ H9 SUV ಕಾರು ಕೂಡ ಅಭಿಷೇಕ್ ಶರ್ಮಾಗೆ ದಕ್ಕಿದೆ.

# ಏಷ್ಯಾಕಪ್‌ನ ಸಂಪೂರ್ಣ ದುಡ್ಡು ನೀಡುತ್ತೇನೆ

ಏಷ್ಯಾಕಪ್ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡವು 19.1 ಓವರ್‌ಗಳಲ್ಲಿ 146 ರನ್‌ಗಳಿಸಿ ಆಲೌಟ್ ಆಗಿತ್ತು. ಈ ಗುರಿಯನ್ನು ಟೀಮ್ ಇಂಡಿಯಾ 19.4 ಓವರ್‌ಗಳಲ್ಲಿ ಚೇಸ್ ಮಾಡಿ 5 ವಿಕೆಟ್‌ಗಳ ಜಯ ಸಾಧಿಸಿದೆ. ಈ ಗೆಲುವಿನ ಬೆನ್ನಲ್ಲೇ ಬಿಸಿಸಿಐ ಭಾರತ ತಂಡಕ್ಕೆ ವಿಶೇಷ ಉಡುಗೊರೆ ನೀಡಿದ್ದಾರೆ. ಏಷ್ಯಾಕಪ್ ಟೂರ್ನಿಯಲ್ಲಿ ಭಾರತ ತಂಡವನ್ನು ಯಶಸ್ವಿಯಾಗಿ ಮುನ್ನಡೆಸಿರುವ ಸೂರ್ಯಕುಮಾರ್ ಯಾದವ್ ಇದೀಗ ಮಹತ್ವ ಘೋಷಣೆ ಮಾಡಿದ್ದಾರೆ. ಅದು ಸಹ ತನ್ನ ಏಷ್ಯಾಕಪ್ ಟೂರ್ನಿಯ ಸಂಪೂರ್ಣ ಶುಲ್ಕವನ್ನು ಭಾರತೀಯ ಸೇನೆಗೆ ಹಾಗೂ ಪೆಹಲ್ಗಾಮ್ ದಾಳಿಯ ಸಂತ್ರಸ್ತರ ಕುಟುಂಬಗಳಿಗೆ ದೇಣಿಗೆ ನೀಡುವುದಾಗಿ ತಿಳಿಸುವ ಮೂಲಕ ಎಂಬುದು ವಿಶೇಷ.

ಟೀಮ್ ಇಂಡಿಯಾ ಏಷ್ಯಾಕಪ್ ಟ್ರೋಫಿ ಗೆದ್ದ ಬಳಿಕ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಂಚಿಕೊಂಡಿರುವ ಸೂರ್ಯಕುಮಾರ್ ಯಾದವ್, ಏಷ್ಯಾಕಪ್ ಟೂರ್ನಿಯ ತನ್ನೆಲ್ಲಾ ಪಂದ್ಯದ ಶುಲ್ಕಗಳನ್ನು ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಬಲಿಯಾದವರ ಕುಟುಂಬಗಳಿಗೆ ಮತ್ತು ನಮ್ಮ ಸಶಸ್ತ್ರ ಪಡೆಗಳಿಗೆ ನೀಡಲು ನಿರ್ಧರಿಸಿದ್ದೇನೆ. ಈ ಮೂಲಕ ಅವರ ಬೆಂಬಲಕ್ಕೆ ನಿಲ್ಲುವುದಾಗಿ ತಿಳಿಸಿದ್ದಾರೆ.

ಅದರಂತೆ ಏಷ್ಯಾಕಪ್ ಮೂಲಕ ಗಳಿಸಿರುವ 28 ಲಕ್ಷ ರೂ. ಅನ್ನು ಸೂರ್ಯಕುಮಾರ್ ಯಾದವ್ ಭಾರತೀಯ ಸಶಸ್ತ್ರ ಪಡೆಗೆ ಹಾಗೂ ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಹಂಚಲಿದ್ದಾರೆ. ಇದೀಗ ಟೀಮ್ ಇಂಡಿಯಾ ನಾಯಕನ ಈ ನಿರ್ಧಾರಕ್ಕೆ ಭಾರತೀಯ ಕ್ರಿಕೆಟ್ ಪ್ರೇಮಿಗಳಿಂದ ಭಾರೀ ಮೆಚ್ಚುಗೆಗಳು ವ್ಯಕ್ತವಾಗುತ್ತಿದೆ.

**ಟೀಮ್ ಇಂಡಿಯಾಗೆ 21 ಕೋಟಿ ರೂ.:** ಪಾಕಿಸ್ತಾನ್ ತಂಡವನ್ನು ಬಗ್ಗು ಬಡಿದು ಏಷ್ಯಾಕಪ್ ಗೆದ್ದಿರುವ ಭಾರತ ತಂಡಕ್ಕೆ ಬಿಸಿಸಿಐ 21 ಕೋಟಿ ರೂ. ಬಹುಮಾನ ಮೊತ್ತ ಘೋಷಿಸಿದೆ. ಈ ಮೊತ್ತವನ್ನು ಭಾರತ ತಂಡದ ಆಟಗಾರರು ಹಾಗೂ ಸಿಬ್ಬಂದಿ ವರ್ಗದವರು ಹಂಚಿಕೊಳ್ಳಲಿದ್ದಾರೆ.




# ಹಾರಿಸ್ ರೌಫ್ ರನ್ ಮೆಷಿನ್

## ವಾಸಿಂ ಅಕ್ರಮ್ ವ್ಯಾಪಕ ಟೀಕೆ

ದುಬೈ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಏಷ್ಯಾಕಪ್ ಫೈನಲ್ ಪಂದ್ಯದಲ್ಲಿ 3.4 ಓವರ್‌ಗಳನ್ನು ಎಸೆದ ಹಾರಿಸ್ ರೌಫ್ ಒಂದೇ ಒಂದು ವಿಕೆಟ್ ಪಡೆಯದೇ 50 ರನ್‌ಗಳನ್ನು ನೀಡಿದ್ದರು.

ಹೀಗಾಗಿಯೇ ಇದೀಗ ಪಾಕ್ ತಂಡದ ಮಾಜಿ ನಾಯಕ ಹಾರಿಸ್ ರೌಫ್ ಅವರನ್ನು ಭಾರತದ ರನ್ ಮಷಿನ್ ಎಂದು ಟೀಕಿಸಿದ್ದಾರೆ.

ಹಾರಿಸ್ ರೌಫ್ ಪಾಕಿಸ್ತಾನ್ ತಂಡದ ರನ್ ಮಷಿನ್... ಹೀಗಂದಿದ್ದು ಮತ್ಯಾರೂ ಅಲ್ಲ, ಪಾಕಿಸ್ತಾನ್ ತಂಡದ ಮಾಜಿ ನಾಯಕ ವಾಸಿಂ ಅಕ್ರಮ್. ಭಾರತದ ವಿರುದ್ಧದ ಫೈನಲ್ ಪಂದ್ಯದಲ್ಲಿ ಪಾಕ್ ತಂಡ ಸೋಲುತ್ತಿದ್ದಂತೆ ಆಕ್ರೋಶ ಹೊರಹಾಕಿರುವ ವಾಸಿಂ ಅಕ್ರಮ್, ಈ ಪರಾಜಯಕ್ಕೆ ಹಾರಿಸ್ ರೌಫ್ ಪ್ರಮುಖ ಕಾರಣ ಎಂದಿದ್ದಾರೆ.



ಚಾನೆಲ್ ಚರ್ಚೆಯಲ್ಲಿ ಕಾಣಿಸಿಕೊಂಡ ವಾಸಿಂ ಅಕ್ರಮ್ ಪಾಕಿಸ್ತಾನ್ ತಂಡದ ಪ್ರದರ್ಶನವನ್ನು ವಿಶ್ಲೇಷಿಸಿದ್ದರು. ಅದರಲ್ಲೂ ಒಂದು ಹಂತದಲ್ಲಿ ಜಿದ್ದಾಜಿದ್ದಿನ ಪೈಪೋಟಿಗೆ ಕಾರಣವಾಗಿದ್ದ ಈ ಪಂದ್ಯವು ಪಾಕ್ ತಂಡದ ಕೈ ತಪ್ಪಿ ಹೋಗಲು ಮುಖ್ಯ ಕಾರಣ ಹಾರಿಸ್ ರೌಫ್ ಎಂದು ಅಭಿಪ್ರಾಯಪಟ್ಟಿದ್ದಾರೆ. ಏಕೆಂದರೆ ಈ ಪಂದ್ಯದ 15ನೇ ಓವರ್‌ನಲ್ಲಿ ರೌಫ್ 17 ರನ್ ನೀಡಿದ್ದರು. ಇನ್ನು 18ನೇ ಓವರ್‌ನಲ್ಲಿ 13 ರನ್ ಬಿಟ್ಟು ಕೊಟ್ಟರು. ಅಲ್ಲದೆ ಅಂತಿಮವಾಗಿ ಓವರ್‌ನ 4 ಎಸೆತಗಳಲ್ಲೇ 10 ರನ್ ಚಚ್ಚಿಸಿಕೊಳ್ಳುವ ಮೂಲಕ ಪಂದ್ಯವನ್ನು ಬೇಗನೆ ಮುಗಿಸಿದರು. ಈ ಕಳಪೆ ಪ್ರದರ್ಶನದಿಂದಾಗಿ ಪಾಕ್ ತಂಡ ಸೋಲನುಭವಿಸಿದೆ ಎಂದು ವಾಸಿಂ ಅಕ್ರಮ್ ಟೀಕಿಸಿದರು. ನನ್ನ ಪ್ರಕಾರ, ಹಾರಿಸ್ ರೌಫ್ ಭಾರತದ ವಿರುದ್ಧದ ರನ್ ಮಷಿನ್. ಈ ಹಿಂದೆ ಕೂಡ ಟಿ20 ವಿಶ್ವಕಪ್‌ನಲ್ಲಿ ಪಾಕ್ ತಂಡದ ಸೋಲಿಗೆ ಕಾರಣರಾಗಿದ್ದರು. ಇದೀಗ ಮತ್ತೊಮ್ಮೆ ಪಾಕಿಸ್ತಾನ್ ಪಾಲಿಗೆ ದುಬಾರಿಯಾಗಿದ್ದಾರೆ. ಈ ಮೂಲಕ ಹಾರಿಸ್ ರೌಫ್ ಟೀಮ್ ಇಂಡಿಯಾ ಪಾಲಿನ ರನ್ ಮಷಿನ್ ಎಂಬುದನ್ನು ಮತ್ತೊಮ್ಮೆ ನಿರೂಪಿಸಿದ್ದಾರೆ ಎಂದು ವಾಸಿಂ ಅಕ್ರಮ್ ಪಾಕ್ ವೇಗಿ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ.

ಇನ್ನು ಫೈನಲ್ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಪಾಕಿಸ್ತಾನ್ ತಂಡವು 19.1 ಓವರ್‌ಗಳಲ್ಲಿ 146 ರನ್ ಗಳಿಸಿ ಆಲೌಟ್ ಆಗಿದ್ದರು. ಈ ಗುರಿಯನ್ನು ಬೆನ್ನತ್ತಿದ ಟೀಮ್ ಇಂಡಿಯಾ 19.4 ಓವರ್‌ಗಳಲ್ಲಿ 150 ರನ್‌ಗಳಿಸಿ 5 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಭಾರತ ತಂಡ 9ನೇ ಬಾರಿ ಏಷ್ಯಾಕಪ್ ಕಿರೀಟ ಮುಡಿಗೇರಿಸಿಕೊಂಡಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**